ಸಂಪುಟ: 21, ಸಂಚಿಕೆ: 81, ಪುಟಗಳು: 8, ಭಾನುವಾರ, 31 ಡಿಸೆಂಬರ್ 2023 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಭಾನುವಾರ 31, ಡಿಸೆಂಬರ್ -2023)

- ಶ್ರೀ ಶೋಭಕೃತನಾಮ ಸಂವತ್ಸರ,
- ದಕ್ಷಿಣಾಯಣ, ಹಿಮಂತ ಋತು,
- ಮಾರ್ಗಶಿರ ಮಾಸ, ಕೃಷ್ಣ ಪಕ್ಷ,
- ಚತುರ್ಥಿ / ಪಂಚಮಿ,
- ಆಶ್ಲೇಷ ನಕ್ಷತ್ರ
- ರಾಹುಕಾಲ: 04:59 PM 06 : 30 PM
- ಗುಳಿಕಕಾಲ: 03:28 PM04 : 59 PM
- ಯಮಗಂಡಕಾಲ: 12:27 PM 01 : 58 PM

ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines

## ಲೋಕಸಭೆ ಚುನಾವಣೆ: 11 ಸಚಿವರನ್ನು ಕಣಕ್ಕಿಳಿಸಲು ಕಾಂಗ್ರೆಸ್ ಚಿಂತನೆ

**ಬೆಂಗಳೂರು:** ಲೋಕಸಭೆ ಚುನಾವಣೆಗೆ ಕೆಲವೇ ತಿಂಗಳು ಬಾಕಿ ಇದೆ. ಕಾಂಗ್ರೆಸ್ ಈಗಿನಿಂದಲೇ ಗೆಲ್ಲಬಲ್ಲ ಅಭ್ಯರ್ಥಿಗಳ ಹುಡುಕಾಟ ಶುರು ಮಾಡಿದೆ. ಬಿಜೆಪಿ ಹಾಕಿದ ಮಂತ್ರವನ್ನೇ ತಿರುಮಂತ್ರ ಮಾಡಿ ಕರ್ನಾಟಕದಲ್ಲಿ ಲೋಕಸಭೆಯಲ್ಲಿ ಹೆಚ್ಚು ಸ್ಥಾನ ಗೆಲ್ಲಲು ಕಾಂಗ್ರೆಸ್ ಸಜ್ಜಾಗಿದೆ. ಲೋಕಸಭೆ ಚುನಾವಣೆಯಲ್ಲಿ ಅತಿ ಹೆಚ್ಚು ಸ್ಥಾನ ಗೆದ್ದು ಕರ್ನಾಟಕದಲ್ಲಿ ಬಿಜೆಪಿಗೆ ಹೊಡೆತ ಕೊಡಬೇಕು ಎಂಬ ತಂತ್ರ ಹಾಕಿಕೊಂಡಿರುವ ಕಾಂಗ್ರೆಸ್, ಈಗಿನಿಂದಲೇ ಸಿದ್ಧತೆ ಆರಂಭಿಸಿದೆ. ಅದರ ಭಾಗವಾಗಿ ರಾಜ್ಯದ ಬರೋಬ್ಬರಿ 11 ಸಚಿವರನ್ನು ಲೋಕಸಭೆ ಚುನಾವಣಾ ಅಖಾಡಕ್ಕೆ ಇಳಿಸಲು ಯೋಜನೆ ರೂಪಿಸಿದೆ ಎಂಬ ಮಾಹಿತಿ ಉನ್ನತ ಮೂಲಗಳಿಂದ ತಿಳಿದುಬಂದಿದೆ.

**ಬಿಜೆಪಿ ತಂತ್ರವನ್ನೇ ಅಸ್ತ್ರವಾಗಿ ಬಳಸಿಕೊಳ್ಳಲು ಕಾಂಗ್ರೆಸ್ ಪ್ಲ್ಯಾನ್!**

ಕಾಂಗ್ರೆಸ್ ಪಕ್ಷವು ಸಚಿವರನ್ನು ಲೋಕಸಭೆ ಅಖಾಡಕ್ಕೆ



ಇಳಿಸುವ ಯೋಜನೆ ಮಾಡಿದ್ದೇ ಬಿಜೆಪಿಯ ತಂತ್ರಗಾರಿಕೆಯನ್ನ ನೋಡಿ. ಇತ್ತೀಚೆಗೆ ನಡೆದ ಪಂಚರಾಜ್ಯ ಚುನಾವಣೆಯಲ್ಲಿ ಬಿಜೆಪಿ ಕೇಂದ್ರ ಸಚಿವರನ್ನೇ ಸ್ಪರ್ಧೆಗೆ ಇಳಿಸಿತ್ತು. ರಾಜಸ್ಥಾನ, ಮಧ್ಯಪ್ರದೇಶ, ಛತ್ತೀಸ್‌ಗಢದಲ್ಲಿ ಬಿಜೆಪಿಯ ಕೇಂದ್ರ ಸಚಿವರು ಸ್ಪರ್ಧೆ ಮಾಡಿದ್ದರು. ಪರಿಣಾಮವಾಗಿ ಬಿಜೆಪಿ ಮೂರು ರಾಜ್ಯಗಳಲ್ಲಿ ಹೆಚ್ಚಿನ ಸ್ಥಾನ ಗಳಿಸಿ, ಅಧಿಕಾರಕ್ಕೆ ಏರಲು

ನೆರವಾಗಿತ್ತು. ಇದೀಗ ಬಿಜೆಪಿಯ ಇದೇ ತಂತ್ರವನ್ನು ಕಾಂಗ್ರೆಸ್ ರಾಜ್ಯದಲ್ಲಿ ಬಳಸಲು ಮುಂದಾಗಿದೆ. ಹೀಗಾಗೇ ಕಠಿಣ ಎಂದು ಭಾವಿಸಲಾಗಿರುವ ಕ್ಷೇತ್ರಗಳಲ್ಲಿ ಪ್ರಭಾವಿ ಸಚಿವರನ್ನೇ ಇಳಿಸಲು ಮುಂದಾಗಿದೆ.

**ಯಾವ ಕ್ಷೇತ್ರದಿಂದ ಯಾರು ಕಣಕ್ಕೆ?:** ಅದರಂತೆ ಬೆಳಗಾವಿ ಲೋಕಸಭಾ ಕ್ಷೇತ್ರದಿಂದ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ, ತುಮಕೂರು ಲೋಕಸಭಾ ಕ್ಷೇತ್ರದಿಂದ ಕೆ.ಎನ್. ರಾಜಣ್ಣ. ಹಾಗೂ ಚಾಮರಾಜನಗರ ಎಸ್‌ಸಿ ಮೀಸಲು ಕ್ಷೇತ್ರಕ್ಕೆ ಹೆಚ್.ಸಿ.ಮಹದೇವಪ್ಪ ಸ್ಪರ್ಧೆ ಮಾಡಬಹುದು ಎಂದು ಹೇಳಲಾಗುತ್ತಿದೆ.

ಇನ್ನು ತೀವ್ರ ಜಿದ್ದಿನಿಂದ ಕೂಡಿರುವ ಮಂಡ್ಯ ಲೋಕಸಭಾ ಕ್ಷೇತ್ರದಿಂದ ನಾಗಮಂಗಲ ಶಾಸಕ ಕಂ ಕೃಷಿ ಸಚಿವ ಎನ್. ಚೆಲುವರಾಯಸ್ವಾಮಿ ಸ್ಪರ್ಧೆ ಮಾಡೋ ಸಾಧ್ಯತೆ ಇದೆ ಎನ್ನಲಾಗಿದ್ರೆ, ಬಳ್ಳಾರಿಯಿಂದ ಸಚಿವ ಬಿ.ನಾಗೇಂದ್ರ, ಧಾರವಾಡ ಲೋಕಸಭಾ ಕ್ಷೇತ್ರದಿಂದ ಕಾರ್ಮಿಕ ಸಚಿವ ಸಂತೋಷ್ ಲಾಡ್ ಸ್ಪರ್ಧೆ ಮಾಡುವಂತೆ ಹೈಕಮಾಂಡ್ ಸೂಚಿಸುವ ಸಾಧ್ಯತೆ ಇದೆ ಎನ್ನಲಾಗಿದೆ.

ಕೋಲಾರ ಮತ್ತು ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಯಾರು ಸ್ಪರ್ಧಿಸಬೇಕು ಅನ್ನೋ ಚರ್ಚೆ ನಡೀತಿದ್ದು. ಹಿರಿಯ ಸಚಿವ ಕೆ.ಹೆಚ್.ಮುನಿಯಪ್ಪ ಮತ್ತು ಗೃಹ ಸಚಿವ ಡಾಕ್ಟರ್ ಜಿ.ಪರಮೇಶ್ವರ್ ಇಬ್ಬರಲ್ಲಿ ಯಾರು ಯಾವ ಕಡೆ ಸ್ಪರ್ಧಿಸಬೇಕು ಅನ್ನೋ ಚರ್ಚೆ ನಡೀತಿದೆ ಎಂದು ಮೂಲಗಳು ತಿಳಿಸಿವೆ.

ಸಚಿವರನ್ನು ಲೋಕಸಭಾ ಚುನಾವಣಾ ಅಖಾಡಕ್ಕೆ ಇಳಿಸುವ ಹಿಂದೆ ಕಾಂಗ್ರೆಸ್ ಹೈಕಮಾಂಡ್‌ನ ಮಂತ್ರೊಂದು ಪುಟ 2

## ಸಂಕ್ಷಿಪ್ತ ಸುದ್ದಿ

### ಶಿಕ್ಷಕಿ ಸಾವು ಪ್ರಕರಣಕ್ಕೆ ಟ್ವಿಸ್ಟ



**ಧಾರವಾಡ:** ಇಲ್ಲಿನ ಓಂನಗರದಲ್ಲಿ ಇತ್ತೀಚೆಗಷ್ಟೇ ನಿವೃತ್ತ ಶಿಕ್ಷಕಿಯೊಬ್ಬರು ಅನುಮಾನಾಸ್ಪದವಾಗಿ ಸಾವನ್ನಪ್ಪಿದ ಪ್ರಕರಣವನ್ನು ಪೊಲೀಸರು ಭೇದಿಸಿದ್ದಾರೆ. ಗಿರಿಜಾ ನಡೂರಮಠ (63) ಎಂಬ ನಿವೃತ್ತ ಶಿಕ್ಷಕಿಯ ಶವ ಕೊಳೆತ ಸ್ಥಿತಿಯಲ್ಲಿ ಡಿ.15 ರಂದು ಅವರ ಮನೆಯಲ್ಲಿ ಪತ್ತೆಯಾಗಿತ್ತು. ಆರಂಭದಲ್ಲಿ ಇದು ಸಹಜ ಪುಟ 2

### ಪತ್ನಿ ಕತ್ತು ಸೀಳಿ ಕೊಲೆ ಎಸ್ಕೇಪ್



**ಹಾಸನ:** ತುಂಡುಡುಗೆ ಧರಿಸುತ್ತಾಳೆಂದು ಕತ್ತು ಸೀಳಿ ಪತ್ನಿಯನ್ನೇ ಪತಿ ಹತ್ಯೆಗೈದ ಘಟನೆ ಹಾಸನ ಜಿಲ್ಲೆ ಅರಸೀಕೆರೆ ತಾಲೂಕಿನ ರಾಂಪುರ ಗ್ರಾಮದಲ್ಲಿ ನಡೆದಿದೆ. ಜ್ಯೋತಿ(22) ಕೊಲೆಯಾದ ಗೃಹಿಣಿ. ಜೀವನ್, ಕೊಲೆ ಮಾಡಿದ ಆರೋಪಿ. ತನ್ನ ಹೆಂಡತಿ ತುಂಡು ಬಟ್ಟೆ ಧರಿಸುತ್ತಾಳೆಂದು ಸಿಟ್ಟು ಮಾಡಿಕೊಂಡಿದ್ದ ಪತಿ ಆಕೆಯ ಜೊತೆ ಜಗಳವಾಡಿ ಜಗಳ ಕೊಲೆಯಲ್ಲಿ ಅಂತ್ಯವಾಗಿದೆ. ವರ್ಷದ ಹಿಂದಷ್ಟೇ ಮದುವೆಯಾಗಿದ್ದ ಪತ್ನಿಯನ್ನೇ ಕತ್ತು ಸೀಳಿ ಕೊಲೆ ಮಾಡಿದ್ದಾನೆ. ಪುಟ 2

### ರೈಲಿನಲ್ಲಿ ಸಾಗಿಸುತ್ತಿದ್ದ 60 ಕೆಜಿ ಗಾಂಜಾ ವಶ ಬಂಧನ

**ಬೆಂಗಳೂರು:** ರೈಲಿನಲ್ಲಿ ಬೆಂಗಳೂರಿಗೆ ಗಾಂಜಾ ಸಾಗಿಸಲು ಯತ್ನಿಸುತ್ತಿದ್ದ ಏಳು ಮಂದಿಯನ್ನು ರೈಲ್ವೇ ಪೊಲೀಸರು ಬಂಧಿಸಿದ್ದು, ಐದು ಪ್ರತ್ಯೇಕ ಪ್ರಕರಣ ದಾಖಲಾಗಿವೆ. ನಿತ್ಯಾನಂದ ದಾಸ್, ನಿಕೇಶ್ ರಾಣಾ, ಜಲಂಧರ್ ಕನ್ವರ್, ಸಾಗರ್ ಕನ್ವರ್, ರಾಜೇಶ್ ದಾಸ್ ಮತ್ತು ಅಮರ್ಜಿತ್ ಬಂಧಿತ ಆರೋಪಿಗಳು. ಪುಟ 2

# ಹೊಸ ವರ್ಷಾಚರಣೆ

## ಮಧ್ಯರಾತ್ರಿ 2 ಗಂಟೆವರೆಗೂ ಓಡಲಿವೆ ಬಿಎಂಟಿಸಿ ಬಸ್‌ಗಳು

**ಬೆಂಗಳೂರು:** ಹೊಸ ಭರವಸೆಗಳೊಂದಿಗೆ ಹೊಸ ವರ್ಷವನ್ನು ಆರಂಭಿಸಲು ಸಿಲಿಕಾನ್ ಸಿಟಿ ಮಂದಿ ಸಜ್ಜಾಗಿದ್ದಾರೆ. ಹೊಸವರ್ಷಾಚರಣೆ ಹಿನ್ನೆಲೆ ನಗರದ ಹಲವೆಡೆ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗಿದ್ದು ಡಿಜೆ ಪಾರ್ಟಿ ಸೇರಿದಂತೆ ಭರ್ಜರಿಯಾಗಿ ಕುಣಿದು ಕುಪ್ಪಳಿಸಲು ಎಲ್ಲಾ ರೀತಿಯ ತಯಾರಿ ನಡೆದಿದೆ. ಇನ್ನು ಜನರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ನೋಡಿಕೊಳ್ಳಲು ಪೊಲೀಸ್ ಇಲಾಖೆ ಮುಂದಾಗಿದೆ. ಮತ್ತೊಂದೆಡೆ ತಡರಾತ್ರಿ 2 ಗಂಟೆವರೆಗೆ ನಮ್ಮ ಮೆಟ್ರೋ ಸಂಚರಿಸಲಿದೆ. ಸದ್ಯ ಈಗ ಪ್ರಯಾಣಿಕರ ಅನುಕೂಲಕ್ಕೆಂದು ಡಿ.31ರ ಮಧ್ಯರಾತ್ರಿ 2 ಗಂಟೆವರೆಗೂ ಬಿಎಂಟಿಸಿ ಬಸ್‌ಗಳ ಸಂಚಾರ ಸೇವೆ ಇರಲಿದೆ.

ಹೊಸ ವರ್ಷಾಚರಣೆ ಹಿನ್ನಲೆ ಬಿಎಂಟಿಸಿ ಬಸ್ ಸಂಚಾರದ ಅವಧಿ ವಿಸ್ತರಣೆ ಮಾಡಲಾಗಿದೆ. ಇಂದು ಮಧ್ಯರಾತ್ರಿ 2 ಗಂಟೆಯವರೆಗೆ ಬಿಎಂಟಿಸಿ ಬಸ್‌ಗಳ ಸಂಚಾರವಿರಲಿದೆ. ಜೊತೆಗೆ ಹೊಸ ವರ್ಷಾಚರಣೆಗೆ ಬರುವ ಸಾರ್ವಜನಿಕರಿಗಾಗಿ ಹೆಚ್ಚುವರಿ ಬಸ್ ಗಳ ನಿಯೋಜನೆ ಮಾಡಲಾಗಿದೆ. ಎಂ.ಜಿ.ರಸ್ತೆ ಹಾಗೂ ಬ್ರಿಗೇಡ್ ರಸ್ತೆಗೆ ಹೊಸ ವರ್ಷಾಚರಣೆಗೆ ಸಾವಿರಾರು ಸಂಖ್ಯೆಯಲ್ಲಿ ಜನರು ಆಗಮಿಸುತ್ತಾರೆ. ಹೀಗಾಗಿ ಆ ಮಾರ್ಗದಲ್ಲಿ ಹೆಚ್ಚುವರಿ ಬಸ್ ಗಳನ್ನು ನಿಯೋಜಿಸಲಾಗಿದೆ. ಬೇಡಿಕೆಗೆ ಅನುಗುಣವಾಗಿ ಬಿಎಂಟಿಸಿ ಬಸ್ ಸಂಚಾರಕ್ಕೆ ನಿಗಮದಿಂದ ಸಿದ್ಧತೆ ನಡೆದಿದೆ. ಪುಟ 2



## ರಾಮಮಂದಿರ ಉದ್ಘಾಟನೆಗೆ ಕೈ ನಾಯಕರು ಬರುತ್ತಾರೆ

**ಉಡುಪಿ:** ಅಯೋಧ್ಯೆಯಲ್ಲಿ ಜನವರಿ 22ರಂದು ನಡೆಯುವ ರಾಮಮಂದಿರ ಉದ್ಘಾಟನಾ ಕಾರ್ಯಕ್ರಮಕ್ಕೆ ಕಾಂಗ್ರೆಸ್‌ನವರು ಬರುತ್ತಾರೆ ಎಂಬ ವಿಶ್ವಾಸ ನಮಗಿದೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಹೇಳಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್‌ನವರು ಒಂದು ವೇಳೆ ಕಾರ್ಯಕ್ರಮಕ್ಕೆ ಗೈರಾದರೆ ದೇಶಕ್ಕೆ ಮತ್ತು ನಮ್ಮ ಶ್ರದ್ದೆಗೆ ಅವರು ಮಾಡಿವ ಅವಮಾನವಾಗುತ್ತದೆ. ಹೀಗಾಗಿ



ಕಾಂಗ್ರೆಸ್ ನಾಯಕರು ಬರುತ್ತಾರೆ ಎಂಬ ವಿಶ್ವಾಸ ನಮಗಿದೆ ಎಂದು ತಿಳಿಸಿದರು.

ರಾಮಮಂದಿರದ ಪ್ರತಿಷ್ಠಾಪನೆಯಲ್ಲಿ ದೇಶದ ಎಲ್ಲರೂ ಭಾಗವಹಿಸಬೇಕು. ಎಲ್ಲರೂ ರಾಮನ ದರ್ಶನ ಮಾಡಬೇಕು, ಇದು ನಮ್ಮ ಅಸ್ಮಿತೆಯ ಪ್ರಶ್ನೆಯಾಗಿದೆ. ಗುಲಾಮಗಿರಿಯನ್ನು ಹೋಗಲಾಡಿಸಬೇಕು. ಪಕ್ಷ ರಾಜಕಾರಣ ಬಿಟ್ಟು ಧರ್ಮವನ್ನು ಬಿಟ್ಟು ಎಲ್ಲರೂ ಇದರಲ್ಲಿ ಭಾಗವಹಿಸಬೇಕು ಎಂದು ಅವರು ಕೇಳಿಕೊಂಡರು. ಪುಟ 2

## ಬೆಂಗಳೂರಿನಲ್ಲಿ ಇನ್ನೂ ಉಳಿದಿವೆ 7878 ರಸ್ತೆ ಗುಂಡಿ

**ಬೆಂಗಳೂರು:** ಬೆಂಗಳೂರಿನ ರಸ್ತೆ ಗುಂಡಿಗಳು ಜನರ ಜೀವಕ್ಕಾಗಿ ಕಾದು ಕುಳಿತಂತಿದೆ. ಕೋಟ್ಯಾಂತರ ರೂಪಾಯಿ ವೆಚ್ಚ ಮಾಡಿದರೂ ರಸ್ತೆಗುಂಡಿಗಳನ್ನು ಮುಚ್ಚಲು ಪಾಲಿಕೆ ವಿಫಲವಾಗುತ್ತಿದೆ. ನಗರದ ಪ್ರಮುಖ ರಸ್ತೆಗಳಲ್ಲಿ ಎಲ್ಲೆಂದರಲ್ಲಿ ಗುಂಡಿಗಳು ಬಿದ್ದಿವೆ. ಈ ಯಮ ಗುಂಡಿಗಳಿಂದಾಗಿ ವಾಹನ ಸವಾರರು ಸರ್ಕಸ್ ಮಾಡುತ್ತಲೇ ಓಡಾಡುವಂತಾಗಿದೆ. ಸ್ವಲ್ಪ ಯಾಮಾರಿದ್ರು ಕೂಡ ಅನಾಹುತ ಆಗೊದಂತು ತಪ್ಪಿದ್ದಲ್ಲ, ಇನ್ನೂ ಬನ್ನೇರುಘಟ್ಟ ಮುಖ್ಯರಸ್ತೆಯ ಮಧ್ಯದಲ್ಲೆ ಗುಂಡಿಗಳು ಬಿದ್ದಿದ್ದು ವಾಹನ ಸವಾರರು ಓಡಾಡಲು ಕೂಡ ಭಯ ಪಡುವಂತಾಗಿದೆ. ಈ ಬಗ್ಗೆ ಸ್ಥಳೀಯರು ಮಾತನಾಡಿ ಇಲ್ಲಿ ಗುಂಡಿಗಳು ಇವೆ ಇದರಿಂದ ಓಡಾಡಲು ತೊಂದರೆ ಆಗುತ್ತದೆ. ಈ ಬಗ್ಗೆ ಸ್ಥಳೀಯ ಜನಪ್ರತಿನಿಧಿಗಳು ಹಾಗೂ ಬಿಬಿಎಂಪಿ ಅಧಿಕಾರಿಗಳ ಗಮನಕ್ಕೆ ತಂದರು ಯಾರೊಬ್ಬರು ಇತ್ತ ಗಮನ ಹರಿಸುತ್ತಿಲ್ಲ ಎಂದು ಆಕ್ರೋಶ ಹೊರ ಹಾಕಿದ್ದಾರೆ. ಪುಟ 2



## 40 ಸಾವಿರ ಕೋಟಿ ರೂ. ಅಕ್ರಮವೆಂದ್ರೆ ನಂಬಲು ಸಾಧ್ಯವೇ?



**ಬೆಂಗಳೂರು:** ನಾವು ಈಗ ಬಿಜೆಪಿ ಜೊತೆ ಹೊಂದಾಣಿಕೆ ಮಾಡಿಕೊಂಡಿದ್ದೇವೆ. 40 ಸಾವಿರ ಕೋಟಿ ರೂ. ಅವ್ಯವಹಾರ ಅಂತಾ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಆರೋಪಿಸಿದ್ದರು. ಇದನ್ನು ಯಾರಾದರೂ ನಂಬುವುದಕ್ಕೆ ಆಗುತ್ತಾ ಎಂದು ಜೆಡಿಎಸ್ ರಾಜ್ಯಾಧ್ಯಕ್ಷ ಹೆಚ್‌ಡಿ ಕುಮಾರಸ್ವಾಮಿ ಪ್ರಶ್ನೆ ಮಾಡಿದ್ದಾರೆ. ಪುಟ 2

## ಮಲ್ಲಿಕಾರ್ಜುನ ಖರ್ಗೆ ಪ್ರಧಾನಿಯಾಗೋದಾದ್ರೆ ಬೆಂಬಲಿಸುತ್ತೇವೆ

**ಬಳ್ಳಾರಿ:** ಮಲ್ಲಿಕಾರ್ಜುನ ಖರ್ಗೆ ಪ್ರಧಾನಿಯಾಗೋದಾದ್ರೆ ನೂರಕ್ಕೆ ನೂರರಷ್ಟು ಬೆಂಬಲಿಸುತ್ತೇವೆ ಎನ್ನುವ ಮೂಲಕ ಖರ್ಗೆ ಪರ ಸಚಿವ ಬಿ. ನಾಗೇಂದ್ರ ಬ್ಯಾಟಿಂಗ್ ಮಾಡಿದ್ದಾರೆ.

ಬಳ್ಳಾರಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ದಲಿತ ಮುಖ್ಯಮಂತ್ರಿ ಮಾಡೋದು, ದಲಿತ ಪ್ರಧಾನಿ ಮಾಡೋದು ಇಂಡಿಯಾ ಒಕ್ಕೂಟದ ಉದ್ದೇಶ. ಹೀಗಾಗಿ ಒಕ್ಕೂಟದಿಂದ ಖರ್ಗೆ ಅವರ ಹೆಸರನ್ನು ಮಮತಾ ಬ್ಯಾನರ್ಜಿ ಪ್ರಸ್ತಾಪ ಮಾಡಿದ್ದಾರೆ. ಆದರೆ ಸಿದ್ದರಾಮಯ್ಯ ಅವರು ರಾಹುಲ್ ಗಾಂಧಿ ಪ್ರಧಾನಿ ಅಭ್ಯರ್ಥಿ ಎಂದು ಹೇಳಿದ್ದಾರೆ. ಅದು ಅವರ ಅಭಿಪ್ರಾಯ.



ಸ್ವಇಚ್ಛೆಯಿಂದ ಸಿದ್ದರಾಮಯ್ಯ ಅವರು ಹಾಗೆ ಹೇಳಿರಬಹುದು. ಅದು ಅವರ ಇಚ್ಛೆ ಎಂದರು.

ನನಗೂ ಖರ್ಗೆ ಪ್ರಧಾನಿ ಆಗಬೇಕೆಂದಿದೆ. ಅದರ ಜೊತೆಗೆ ಯುವಕರ ಕಣ್ಮಣಿಯಾಗಿರೋ ರಾಹುಲ್ ಗಾಂಧಿ ಕೂಡಾ ಪ್ರಧಾನಿಯಾಗಬೇಕು ಎನ್ನುವುದು ಇದೆ. ಪುಟ 2

### ಹಿಂದೂ ಸಂಘಟನೆ ಅಧ್ಯಕ್ಷನ ಮೇಲೆ ರೌಡಿಶೀಟ್ ಕೇಸ್ ಓಪನ್!

## ಮಠಾಧೀಶರ ವ್ಯಾಪಕ ಆಕ್ರೋಶ

**ಕಲಬುರಗಿ:** ಜಿಲ್ಲಾ ಹಿಂದೂ ಜಾಗೃತಿ ಸೇನಾ ಅಧ್ಯಕ್ಷ ಲಕ್ಷ್ಮಿಕಾಂತ್ ಸ್ವಾದಿ ಎಂಬುವವರ ಮೇಲೆ ಕೇವಲ ಒಂದು ಕೇಸ್ ದಾಖಲಾಗಿರುವುದಕ್ಕೆ ಕಲಬುರಗಿ ನಗರದ ಆರ್.ಜೆ ನಗರ ಠಾಣೆಯಲ್ಲಿ ರೌಡಿಶೀಟರ್ ಕೇಸ್ ದಾಖಲಿಸಲಾಗಿದೆ. ಇದು ಮಠಾಧೀಶರ ಕೆಂಗಣ್ಣಿಗೆ ಗುರಿಯಾಗಿದ್ದು, ಕಾಂಗ್ರೆಸ್ ಸರ್ಕಾರದಲ್ಲಿ ಹಿಂದೂ ಕಾರ್ಯಕರ್ತರನ್ನ ಟಾರ್ಗೆಟ್ ಮಾಡಲಾಗುತ್ತಿದೆ ಎಂದು ವಿವಿಧ ಮಠಾಧೀಶರು ಆಕ್ರೋಶ ಹೊರಹಾಕುತ್ತಿದ್ದಾರೆ.

ಅಷ್ಟಕ್ಕೂ ಕ್ರಿಸ್ಮಸ್ ಹಬ್ಬದ ಸಂದರ್ಭದಲ್ಲಿ ಕ್ರಿಶ್ಚಿಯನ್ ಸಮುದಾಯದ ಬಗ್ಗೆ ಜನರಲ್ಲಿ ಕೆಟ್ಟ ಅಭಿಪ್ರಾಯ ಮೂಡಿಸಿ ಸಮಾಜದಲ್ಲಿ ಶಾಂತಿ ಕದಡಲು ಲಕ್ಷ್ಮಿಕಾಂತ್ ಯತ್ನಿಸಿದ್ದಾರೆಂದು ಪೊಲೀಸರು ಎಫ್‌ಐಆರ್ ದಾಖಲಿಸಿದ್ದರು. ಇನ್ನೂ ಯಾವುದೇ ಒಬ್ಬ ವ್ಯಕ್ತಿಯ ಮೇಲೆ ರೌಡಿಶೀಟರ್ ಫೈಲ್ ಓಪನ್ ಮಾಡಬೇಕು ಅಂದ್ರೆ ಆತನ ಮೇಲೆ ಮೂರಕ್ಕಿಂತ ಅಧಿಕ ಕೇಸ್‌ಗಳು ದಾಖಲು ಆಗಿರಬೇಕು. ಆದರೆ, ಹಿಂದೂ ಜಾಗೃತಿ ಸೇನೆ ಜಿಲ್ಲಾಧ್ಯಕ್ಷ





ಲಕ್ಷ್ಮಿಕಾಂತ್ ಸ್ವಾದಿ ಮೇಲೆ ಪಠಾಣ್ ಸಿನಿಮಾ ರಿಲೀಸ್ ಸಂದರ್ಭದಲ್ಲಿ ಪ್ರತಿಭಟನೆ ಮಾಡಿದ ಹಿನ್ನಲೆಯಲ್ಲಿ ಆರ್ ಜೆ ನಗರ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ಈ ಒಂದು ಕೇಸ್ ಹೊರೆತುಪಡಿಸಿದ್ರೆ, ಲಕ್ಷ್ಮಿಕಾಂತ್ ಸ್ವಾದಿ ಮೇಲೆ ಯಾವುದೇ ಠಾಣೆಯಲ್ಲಿ ಯಾವುದೇ ರೀತಿಯ ಕೇಸ್‌ಗಳು ದಾಖಲಾಗಿಲ್ಲ. ಇಷ್ಟಿದ್ದರೂ ಸಹ ಲಕ್ಷ್ಮಿಕಾಂತ್ ಸ್ವಾದಿ ಮೇಲೆ ನಗರ ಪೊಲೀಸರು ಉದ್ದೇಶಪೂರ್ವಕವಾಗಿ ರೌಡಿಶೀಟ ಓಪನ್ ಮಾಡಿರುವುದಕ್ಕೆ ಆಕ್ರೋಶ ವ್ಯಕ್ತವಾಗುತ್ತಿದೆ.

**ಎಫ್‌ಐಆರ್‌ನಲ್ಲಿ ಏನಿದೆ?:** ಇನ್ನು ಹಿಂದೂ ಜಾಗೃತಿ ಸೇನೆ ಜಿಲ್ಲಾಧ್ಯಕ್ಷ ಲಕ್ಷ್ಮಿಕಾಂತ್ ಸ್ವಾದಿ ಕಳೆದ ಕೆಲ ವರ್ಷಗಳಿಂದ ಹಿಂದೂ ಪರ ಹೋರಾಟಗಳನ್ನ ಮಾಡುತ್ತ ಬಂದಿದ್ದು, ಪುಟ 2

### ಒಂದೇ ಕುಟುಂಬದ 4 ಕೊಲೆ ಕೇಸ್

## ಪ್ರವೀಣ್ ಜಾಮೀನು ಅರ್ಜಿ ವಜಾ

**ಉಡುಪಿ:** ನಗರದಲ್ಲಿ ಒಂದೇ ಕುಟುಂಬದ ನಾಲ್ವರ ಬರ್ಬರ ಕೊಲೆ ಪ್ರಕರಣ ಆರೋಪಿ ಪ್ರವೀಣ್ ಚೌಗುಲೆ ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಉಡುಪಿಯ 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ತಿರಸ್ಕರಿಸಿ ಆದೇಶ ಹೊರಡಿಸಿದೆ. ಆರೋಪಿ ಪ್ರವೀಣ್ ಚೌಗುಲೆ ಸದ್ಯ ನ್ಯಾಯಾಂಗ ಬಂಧನದಲ್ಲಿದ್ದು, ಜಾಮೀನು ಕೋರಿ ಡಿಸೆಂಬರ್ 14ರಂದು ವಕೀಲ ಕೆ.ಎಸ್.ಎನ್.ರಾಜೇಶ್ ಮೂಲಕ ಅರ್ಜಿ ಸಲ್ಲಿಸಿದ್ದ.

ಜಾಮೀನಿಗೆ ಸರ್ಕಾರಿ ಅಭಿಯೋಜಕ ಪ್ರಕಾಶ್‌ಚಂದ್ರ ಶೆಟ್ಟಿ ಆಕ್ಷೇಪಣೆ ವ್ಯಕ್ತಪಡಿಸಿದ್ದರು. ಜಾಮೀನು ಅರ್ಜಿ ವಜಾಗೊಳಿಸಿ ನ್ಯಾಯಾಧೀಶ ದಿನೇಶ್ ಹೆಗ್ಡೆ ಆದೇಶ ಹೊರಡಿಸಿದೆ.

ಒಂದೇ ಕಂಪನಿಯಲ್ಲಿ ಜೊತೆ ಜೊತೆಗೆ ಕೆಲಸ ಮಾಡ್ತಿದ್ದವನೇ ಇರಿದು ಇರಿದು ಕೊಂದಿದ್ದ. ಹಲವಾರು ಬಾರಿ ಸಹಾಯ ಮಾಡಿದ್ದವನೇ ಮಾಡ ಬಾರದ ಕೆಲಸ ಮಾಡಿದ್ದ. ರಾಜ್ಯವನ್ನೇ



ಬೆಚ್ಚಿ ಬೀಳಿಸಿದ ಉಡುಪಿಯ ನಾಲ್ವರ ಹತ್ಯೆ ಪ್ರಕರಣದಲ್ಲಿ ಮತ್ತಷ್ಟು ಸಂಗತಿಗಳು ಬಯಲಾಗಿವೆ. ಪೊಲೀಸರು ಒಂದು ಹಂತದ ತನಿಖೆ ಮುಗಿಸಿದ್ದಾರೆ.

ಒಂದೇ ಕುಟುಂಬದ ನಾಲ್ವರ ಬರ್ಬರ ಹತ್ಯೆ ಮಾಡಿದ್ದ ಆರೋಪಿ ಪೊಸೆಸಿವ್ನೆಸ್ನಿಂದ ಕೊಲೆ ಮಾಡಬೇಕೆಂದು ಪೂರ್ವಸಿದ್ಧತೆ ಮಾಡಿಕೊಂಡಿದ್ನಂತೆ. ಆರೋಪಿ ಪ್ರವೀಣ್ ಜತೆ ಅಯ್ನಾಝ್ ಒಂದು ತಿಂಗಳಿಂದ ಸರಿಯಾಗಿ ಮಾತನಾಡ್ತಿರಲಿಲ್ವಂತೆ. ಹೀಗಾಗಿ ಕೊಲೆ ಮಾಡಬೇಕೆಂದು ಸ್ಕೆಚ್ ಹಾಕಿದ್ನಂತೆ. ಕೊಲೆ ಮಾಡುವ ದಿನ ಟೋಲ್ ಗೇಟ್ ಬಳಿ ಕಾರು ಬಿಟ್ಟು ಬೇರೆ ವಾಹನದಲ್ಲಿ ಡ್ರಾಪ್ ಪಡೆದುಕೊಂಡು ತೃಪ್ತಿನಗರಕ್ಕೆ ಬಂದಿದ್ನಂತೆ. ಹತ್ಯೆ ಬಳಿಕ ಚಾಕು ಮನೆಯಲ್ಲೇ ಇಟ್ಟು ಹೆಂಡತಿಯ ಸಂಬಂಧಿಕರ ಮನೆಗೆ ಹೋಗಿದ್ನಂತೆ.

ಪ್ರಕರಣ ಸಂಬಂಧ ಕುಟುಂಬಸ್ಥರು ಮಾತನಾಡಿ, ಹಂತಕನ ವಿರುದ್ಧ ಕಠಿಣ ಕ್ರಮಕ್ಕೆ ಪಟ್ಟು ಹಾಕಿದ್ದರು. ಇನ್ನು, ಕೆಲಸ ಮಾಡೋ ಸ್ಥಳದಲ್ಲಿ ಮಹಿಳೆಯರಿಗೆ ಅಭದ್ರತೆ ಕಾಡುತ್ತಿದೆ. ಇದು ಕೊನೆ ಆಗ್ಬೇಕೆಂದು ಆಗ್ರಹಿಸಿದ್ದರು.

# ಪರೋಕ್ಷವಾಗಿ ಯತ್ನಾಳ್ ವಿರುದ್ಧ ಗುಡುಗಿದ ವಿಜಯೇಂದ್ರ

**ವಿಜಯಪುರ:** ಕೆಲವರು ಸಮಾಜ ಒಡೆದು ರಾಜಕೀಯ ಬೇಳೆ ಬೇಯಿಸಿಕೊಳ್ಳುವ ಕೆಲಸ ಮಾಡಿದ್ದಾರೆ ಎಂದು ವಿಜಯಪುರ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿವೈ ವಿಜಯೇಂದ್ರ ಪರೋಕ್ಷವಾಗಿ ವಾಗ್ದಾಳಿ ನಡೆಸಿದರು.



ವಿಜಯಪುರ ಭೇಟಿ ವೇಳೆ ಶನಿವಾರ ಜಿಲ್ಲೆಯ ಬಬಲೇಶ್ವರ ತಾಲೂಕಿನ ಚಿಕ್ಕಗಲಗಲಿಯಲ್ಲಿ ಬಣಜಿಗ ಸಂಘಟನಾ ಸಮಾವೇಶದಲ್ಲಿ ಮಾತನಾಡಿದ ಅವರು, ಕೆಲವರು ವೀರಶೈವ ಲಿಂಗಾಯತ ಸಮಾಜವನ್ನು ಒಡೆಯಲು ಪ್ರಯತ್ನಿಸಿದರು. ಸಮಾಜ ಒಡೆದು ರಾಜಕೀಯ ಬೇಳೆ ಬೇಯಿಸಿಕೊಳ್ಳುವ ಕೆಲಸ ಮಾಡಿದ್ದಾರೆ. ನಾನು ಕಾರ್ಯಕ್ರಮಕ್ಕೆ ಬರದಂತೆ ತಡೆಯಲು ಕೆಲವರು ಬಹಳ ಪ್ರಯತ್ನಿಸಿದರು. ಸಮಾಜವನ್ನು ಒಡೆಯುವ ಕೆಲಸ ಮಾಡಬಾರದು, ಕಟ್ಟುವ ಕೆಲಸ ಮಾಡಬೇಕು ಎಂದು ಪರೋಕ್ಷವಾಗಿ ಬಸನಗೌಡ ಯತ್ನಾಳ್ ವಿರುದ್ಧ ಗುಡುಗಿದರು. ರಾಜಕೀಯ ಕ್ಷೇತ್ರದಲ್ಲಿ ನಿಜಲಿಂಗಪ್ಪ, ವೀರೇಂದ್ರ ಪಾಟೀಲ್, ಜೆ.ಹೆಚ್.ಪಟೇಲ್, ಯಡಿಯೂರಪ್ಪ ಇವರೆಲ್ಲಾ ರಾಜ್ಯ ರಾಜಕಾರಣದ ದಿಕ್ಕು ಬದಲಿಸಿದವರು. ಆದರೆ ಯಾರೂ ಕೂಡ ಸಮಾಜವನ್ನು ಒಡೆಯುವ ಕೆಲಸಕ್ಕೆ ಕೈಹಾಕಲಿಲ್ಲ. ಇದು ವೀರಶೈವ ಲಿಂಗಾಯತ ಸಮಾಜದ ವಿಶೇಷತೆ ಎಂದು ವಿಜಯೇಂದ್ರ ಹೇಳಿದರು.

ಬಣಜಿಗ ಸಮಾಜ ಸರ್ವ ಜನಾಂಗದ ಹಿತ ಬಯಸುತ್ತದೆ. ಐತಿಹಾಸಿಕ ಹಿನ್ನೆಲೆ ಬಸವಣ್ಣನ ಕಾಯಕ ತತ್ವಕ್ಕೆ ನೆರಳಾಗಿ ಸಮಾಜ ನಿಂತಿದೆ. ಬಸವಾದಿಶರಣರ ರಾಯಭಾರಿಯಂತೆ ನಡೆದುಕೊಳ್ಳುವ ಸಮಾಜ ಇದು. ರಾಜ್ಯ ಬಿಜೆಪಿ ಘಟಕದ ಅಧ್ಯಕ್ಷನಾಗಿ ಬರ್ತೇನೆ ಅಂತಾ ಅಂದುಕೊಂಡಿರಲಿಲ್ಲ. ಮನೆ ಮಗನಂತೆ ರಾಜ್ಯದ ತಾಯಂದಿಯರು ಆಶೀರ್ವಾದ ಮಾಡಿದರು. ಶಿಕಾರಿಪುರ ಶಾಸಕನಾಗಿ, ರಾಜ್ಯಾಧ್ಯಕ್ಷನಾಗಿ ಇಲ್ಲಿ ಬರಲು ನೀವೆಲ್ಲಾ ಕಾರಣ ಎಂದು ಬಣಜಿಗ ಸಂಘಟನಾ ಸಮಾವೇಶದಲ್ಲಿ ವಿಜಯೇಂದ್ರ ಹೇಳಿದರು.

# ಅನ್ಯ ಭಾಷೆ ಸಿನಿಮಾ ಪ್ರದರ್ಶನ ಬಂದ್ ಮಾಡ್ತೀವಿ

**ಬೆಂಗಳೂರು:** ಕನ್ನಡದ ನಾಮಫಲಕ ಹಾಗೂ ಕನ್ನಡ ಹೋರಾಟಗಾರರನ್ನು ಬಂಧಿಸಿರುವ ವಿಚಾರವಾಗಿ ಕನ್ನಡ ಪರ ಹೋರಾಟಗಾರ ವಾಟಾಳ್ ನಾಗರಾಜ್, ತೀವ್ರ ವಾಗ್ದಾಳಿ ನಡೆಸಿದ್ದಾರೆ. ಕರ್ನಾಟಕದಲ್ಲಿ ಕನ್ನಡ ನಾಮಫಲಕ ಕಡ್ಡಾಯ ವಿಚಾರವಾಗಿ ಹೋರಾಟ ನಡೆಸಿದ್ದ ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ನಾರಾಯಣ ಗೌಡ ಅವರನ್ನು ಬಂಧಿಸಿರುವುದನ್ನು ವಾಟಾಳ್ ಖಂಡಿಸಿದ್ದಾರೆ.

ಮಾಧ್ಯಮಗಳ ಜೊತೆ ಮಾತನಾಡಿದ ವಾಟಾಳ್ ನಾಗರಾಜ್, 'ಕನ್ನಡ ನಾಮಫಲಕ ಕಡ್ಡಾಯ ಮಾಡಬೇಕು. ಕನ್ನಡ ಹೋರಾಟಗಾರರನ್ನು ಬಂಧನದಿಂದ ಬಿಡುಗಡೆ ಮಾಡ್ಬೇಕು. ನಮ್ಮ ಬೇಡಿಕೆಯ ಮನವಿಯನ್ನು ಸಿಎಂಗೆ ನೀಡ್ತೀವಿ. ಸಿಎಂ ನಮ್ಮಬೇಡಿಕೆಗಳನ್ನ ಈಡೇರಿಸದಿದ್ದರೆ ಬಂದ್ ಮಾಡ್ತೀವಿ. ಫೆಬ್ರವರಿ ಎರಡನೇ ವಾರ ಬಂದ್ ಮಾಡ್ತೀವಿ. ಅನ್ಯ ಭಾಷೆ ಸಿನಿಮಾ ಪ್ರದರ್ಶನ ಬಂದ್ ಮಾಡ್ತೀವಿ' ಎಂದಿದ್ದಾರೆ.

# ಚುನಾವಣೆ ಗೆಲ್ಲಲು ಜಾತಿಗೊಂದು ಡಿಸಿಎಂ ಗುಂಗಿನಲ್ಲಿದ್ದಾರೆ

**ಬೆಂಗಳೂರು:** ಕಾಂಗ್ರೆಸ್‌ನವರು ಮಾತು ಎತ್ತಿದರೆ ಚುನಾವಣೆ ಗೆಲ್ಲಲು ಜಾತಿಗೊಂದು ಡಿಸಿಎಂ ಗುಂಗಿನಲ್ಲೇ ಇದ್ದಾರೆ ಎಂದು ಜೆಡಿಎಸ್ ನಾಯಕ ಹೆಚ್‌ಡಿ ಕುಮಾರಸ್ವಾಮಿ ವಾಗ್ದಾಳಿ ನಡೆಸಿದರು. ಬೆಂಗಳೂರಿನಲ್ಲಿ ಶನಿವಾರ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ನಿನ್ನೆ ಮೂರು ಶಾಸಕರಿಗೆ ಹುದ್ದೆಯ ಅದ್ಭುತವಾದ ತೀರ್ಮಾನ ಮಾಡಿದ್ದಾರೆ. ದಾಖಲೆಯ ಬಜೆಟ್ ಮಂಡಿಸಿದ ಸಿಎಂಗೆ ಆರ್ಥಿಕ ಸಲಹೆಗಾರರ ನೇಮಕ ಮಾಡಿದ್ದಾರೆ. ವಿಶ್ವದ ದೊಡ್ಡ ಆರ್ಥಿಕ ತಜ್ಞರು ಅವರು. ಸರ್ಕಾರದ ಈ ರೀತಿಯ ತೀರ್ಮಾನಗಳು ಏನು ಸೂಚಿಸುತ್ತವೆ? ಅದೇನು ಗಂಜಿ ಕೇಂದ್ರಗಳಾ ಎಂದು ಟೀಕಿಸಿದ್ದಾರೆ.

25 ವರ್ಷ ಮಂತ್ರಿಯಾಗಿಯೇ ಇದ್ದ ದೇಶಪಾಂಡೆ ಅವರನ್ನು ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷರನ್ನಾಗಿ ಮಾಡಿದ್ದಾರೆ. ವಿಜಯ ಭಾಸ್ಕರ್ ವರದಿ ಎಲ್ಲಿ ಹಾಕಿದ್ದೀರಿ ಎಂಬುದನ್ನು ಸ್ವಲ್ಪ ಜನರ ಮುಂದಿಡಿ. ಪಾಪ ಈಗ ತೆಗೆದುಕೊಂಡು ಹೋಗಿ ಅವರನ್ನು ಅಲ್ಲಿ ಕೂರಿಸಿ ಯಾವ ವರದಿ ತಯಾರು ಮಾಡ್ತೀರಿ? ವಿಧಾನಸೌಧದಲ್ಲಿ ಮಾಡಬಾರದ್ದು ಮಾಡಿ ಲೂಟಿ ಹೊಡೆದು ಈಗ ದೇಶಪಾಂಡೆ ಕೈಯಲ್ಲಿ ಏನು ವರದಿ ತಯಾರು ಮಾಡಿಸ್ತೀರಿ ಎಂದು ಕುಮಾರಸ್ವಾಮಿ ಪ್ರಶ್ನಿಸಿದರು.

ಬಿಆರ್ ಪಾಟೀಲ್ ಅವರನ್ನು ರಾಜಕೀಯ ಸಲಹೆಗಾರರಾಗಿ ಮಾಡಿದ್ದಾರೆ. ಸಿದ್ದರಾಮಯ್ಯಗಿಂತ ಹೆಚ್ಚಿನ ರಾಜಕೀಯ ಅನುಭವ ಪಾಟೀಲ್‌ಗೆ ಇದ್ಯಾ?



ಮಲ್ಲಿಕಾರ್ಜುನ ಖರ್ಗೆ ಅವರನ್ನು ರಾಜ್ಯದಿಂದ ಎತ್ತಂಗಡಿ ಮಾಡಿಸುವ ರಾಜಕೀಯ ಸ್ಟ್ರಾಟಜಿಯನ್ನು ಬಿಆರ್ ಪಾಟೀಲ್ ಬಂದು ಹೇಳಿಕೊಟ್ಟಿದ್ರಾ? ಅಹಿಂದ ರಾಜಕಾರಣದ ಐಕಾನ್ ಸಿದ್ದರಾಮಯ್ಯ. ಸಿದ್ದರಾಮಯ್ಯಗಿಂತ ರಾಜಕೀಯ ಅನುಭವದವರು ಬೇರೆ ಇದ್ದಾರಾ ಎಂದು ಅವರು ಪ್ರಶ್ನಿಸಿದ್ದಾರೆ.

ಸಿದ್ದರಾಮಣ್ಣ ಅವರೇ ಬಿ.ಆರ್. ಪಾಟೀಲ್ ಅವರನ್ನು ಈಗ ಸಲಹೆಗಾರರನ್ನು ಮಾಡಿಕೊಂಡಿದ್ದಕ್ಕೆ ನಿಮಗೆ ಹ್ಯಾಟ್ಸಾಫ್. ಎಲ್ಲಾ ಗುಡಿಸಿ ತೊಳೆದು ಈಗ ಆಡಳಿತ ಸುಧಾರಣೆ ಮಾಡುತ್ತಾರಂತೆ ಎಂದು ಕುಮಾರಸ್ವಾಮಿ ವ್ಯಂಗ್ಯವಾಡಿದರು.

ಕಾಂಗ್ರೆಸ್ ಸರ್ಕಾರ ತೆಗೆದುಕೊಂಡ ತೀರ್ಮಾನಗಳಿಗೆ ನಾವೇನೂ ಅಸೂಯೆ ಪಡುವ ಅಗತ್ಯವಿಲ್ಲ. ಜನರಿಗೆ 'ನುಡಿದಂತೆ ನಡೆದಿದ್ದೇವೆ' ಎಂದು ನೆನಪು ಮಾಡಲು ಪಡುತ್ತಿರುವ ಸಾಹಸ ನೋಡಿದಾಗ ಅನುಕಂಪ ಮೂಡುತ್ತದೆ. ಪ್ರತಿನಿತ್ಯ ಇಷ್ಟೊಂದು ಸಲ 'ನುಡಿದಂತೆ ನಡೆದಿದ್ದೇವೆ' ಎಂದು ಹೇಳಿಕೊಳ್ಳುವ ಅಗತ್ಯವಿರಲಿಲ್ಲ. ನಾನು ಸಿಎಂ ಆಗಿದ್ದಾಗ ಸಾಲ ಮನ್ನಾ ಮಾಡಿದ್ದನ್ನು ಪ್ರಚಾರ ಮಾಡಲು ಹೋಗಿರಲಿಲ್ಲ. ನಾನು ಪ್ರಚಾರಕ್ಕೆ ಸರ್ಕಾರದ ಹಣ ದುಂದುವೆಚ್ಚ ಮಾಡಿರಲಿಲ್ಲ. ಈ ಸರ್ಕಾರ 5 ಗ್ಯಾರಂಟಿ ಭಜನೆ ಬಿಟ್ಟರೆ ಇನ್ನೇನು ಮಾಡಿಲ್ಲ ಎಂದು ಕುಮಾರಸ್ವಾಮಿ ವಾಗ್ದಾಳಿ ನಡೆಸಿದರು.

ಫೆಬ್ರವರಿಯಲ್ಲಿ ನಡೆಯುವ ಅಧಿವೇಶನದಲ್ಲಿ ನಾಡಿನ ಜನತೆಯ ಪರ ನಿಲ್ಲುತ್ತೇನೆ. ನಾನೇನೂ ಪಲಾಯನವಾದ ಮಾಡಲ್ಲ. ಕಾಂಗ್ರೆಸ್ ಸರ್ಕಾರ ಗ್ಯಾರಂಟಿಗೆ ತೋರಿಸಿದ್ದ ಮುತುವರ್ಜಿ ನಾಡಿನ ಅಭಿವೃದ್ಧಿಗೆ ತೋರಿಸಿದೆಯಾ? ಸಚಿವರು ಬರಗಾಲದ ಹೇಳಿಕೆಗೆ ಸೀಮಿತವಾಗಿದ್ದಾರೆ ಹೊರತು ಕಾರ್ಯಕ್ರಮ ಕಾಣುತ್ತಿಲ್ಲ. ಪದೇ ಪದೇ ಕೇಂದ್ರ ಸರ್ಕಾರದ ಮೇಲೆ ದೂರು ಹೇಳುವುದು ಅಷ್ಟೇ ನೋಡಿದ್ದೇನೆ ಎಂದು ಕುಮಾರಸ್ವಾಮಿ ಟೀಕಿಸಿದರು.

2 ಇಲಾಖೆಗಳ ನಡುವೆ ಜಟಾಪಟಿ ಬೇರೆ ಶುರು ಮಾಡಿಕೊಂಡಿದ್ದಾರೆ. ಇನ್ನು ಬೆಂಗಳೂರಿನಲ್ಲಿ ಟನಲ್ ರೋಡ್ ಮಾಡೋಕೆ ಇವರಿಗೆ ಸಮಯ ಇದ್ಯಾ? ಪ್ರತಿ ನಿತ್ಯ ಗೃಹ ಲಕ್ಷ್ಮೀ ಸರ್ವರ್ ಕೆಟ್ಟೋಯ್ತು ಅಂತಾರೆ. ಕಂದಾಯ ಇಲಾಖೆ ಸರ್ವರ್ ಹೇಗಿದೆಯೋ ಗೊತ್ತಿಲ್ಲ. ರಾಜ್ಯದಲ್ಲಿ ರೈತರ ಆತ್ಮಹತ್ಯೆಗಳು ಪ್ರಾರಂಭವಾಗಿವೆ ಎಂದು ಕುಮಾರಸ್ವಾಮಿ ಹೇಳಿದ್ದಾರೆ.

# ಕಲ್ಲಡ್ಕ ಪ್ರಭಾಕರ್ ಭಟ್ ವಿರುದ್ಧ ಮತ್ತೆರಡು ಎಫ್‌ಐಆರ್ ದಾಖಲು

**ಬೆಂಗಳೂರು:** ಮಂಡ್ಯದಲ್ಲಿ ಆರ್‌ಎಸ್‌ಎಸ್ ಮುಖಂಡ ಕಲ್ಲಡ್ಕ ಪ್ರಭಾಕರ್ ವಿವಾದಾತ್ಮಕ ಹೇಳಿಕೆ ವಿಚಾರಕ್ಕೆ ಸಂಬಂಧಿಸಿ ಕಲ್ಲಡ್ಕ ಪ್ರಭಾಕರ್ ಭಟ್ ವಿರುದ್ಧ ಮತ್ತೆ ಎರಡು ಕಡೆ ಎಫ್‌ಐಆರ್ ದಾಖಲಾಗಿದೆ. ರಹೀಬ್ ವುಲ್ಲಾ ಹಾಗೂ ಉಸ್ಮಾನ್ ಎಂಬುವವರು ಬೆಂಗಳೂರಿನ ಡಿ.ಜೆ. ಹಳ್ಳಿ ಮತ್ತು ಶೇಷಾದ್ರಿಪುರಂ ಠಾಣೆ ಸೇರಿ 2 ಠಾಣೆಗಳಲ್ಲಿ ಪ್ರತ್ಯೇಕ ದೂರು ದಾಖಲಿಸಿದ್ದು ದೂರಿನ ಮೇರೆಗೆ ಎನ್‌ಸಿಆರ್ ದಾಖಲಿಸಲಾಗಿದೆ.



ಡಿಸೆಂಬರ್ 24ರಂದು ಹನುಮ ಜಯಂತಿ ಕಾರ್ಯಕ್ರಮದ ಅಂಗವಾಗಿ ಮಂಡ್ಯ ಜಿಲ್ಲೆಯ ಶ್ರೀಗಂಗಪಟ್ಟಣದಲ್ಲಿ ಹಿಂದೂ ಜಾಗರಣಾ ವೇದಿಕೆಯು ಆಯೋಜಿಸಿದ್ದ ಸಂಕೀರ್ತನಾ ಯಾತ್ರೆಯಲ್ಲಿ ಮಾತನಾಡಿದ್ದ ಪ್ರಭಾಕರ್ ಭಟ್, ಮುಸ್ಲಿಂ ಮಹಿಳೆಯರಿಗೆ ದಿನಕ್ಕೊಂದು ಗಂಡ, ಪರ್ಮನೆಂಟ್ ಗಂಡನೇ ಇರಲಿಲ್ಲ, ಆದರೆ ತ್ರಿವಳಿ ತಲಾಕ್ ನಿಷೇಧದ ಮೂಲಕ ಪರ್ಮನೆಂಟ್ ಗಂಡನನ್ನು ಕೊಟ್ಟಿದ್ದು ಪ್ರಧಾನಿ ನರೇಂದ್ರ ಮೋದಿ ಸರ್ಕಾರ ಎಂದು ಹೇಳಿದ್ದರು. ಈ ಹಿನ್ನೆಲೆಯಲ್ಲಿ ಅವರ ವಿರುದ್ಧ ಶ್ರೀರಂಗ ಪಟ್ಟಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ಕಲ್ಲಡ್ಕ ಪ್ರಭಾಕರ್ ಭಟ್, ಈಗಾಗಲೇ ಹೈ ಕೋರ್ಟ್ ನಿಂದ ತಡೆಯಾಜ್ಞೆ ಪಡೆದಿದ್ದಾರೆ.

ಆರ್‌ಎಸ್‌ಎಸ್ ಮುಖಂಡ ಕಲ್ಲಡ್ಕ್ ಪ್ರಭಾಕರ್ ಭಟ್ ವಿವಾದಾತ್ಮಕ ಹೇಳಿಕೆ ಬಳಿಕ ಕಲ್ಲಡ್ಕ್ ಪ್ರಭಾಕರ್ ಭಟ್ ಬಂಧಿಸುವಂತೆ ಆಗ್ರಹಿಸಿ ವಿವಿಧ ಮಹಿಳಾ ಸಂಘಟನೆ ಕಾರ್ಯಕರ್ತರು ಪ್ರತಿಭಟನೆಗಳನ್ನು ನಡೆಸಿದ್ದಾರೆ. ಇನ್ನು ವುಮೆನ್ ಇಂಡಿಯಾ ಮೂಮೆಂಟ್ ಸಂಘಟನೆಯ ರಾಜ್ಯಾಧ್ಯಕ್ಷೆ ಫಾತಿಮಾ ನಸೀಮ ಅವರು ಈ ರೀತಿಯ ವಿಷ ಜಂತುಗಳು ಹೇಳಿಕೆ ನೀಡುವುದು ಹೊಸದಲ್ಲ, ಅವರ ಮೇಲೆ ಎಫ್.ಐ.ಆರ್ ಆದ್ರೂ ಇನ್ನು ಸಹ ಬಂಧನ ಆಗಿಲ್ಲ. ಈ ವಿಚಾರದಲ್ಲಿ ಕಾಂಗ್ರೆಸ್ ಸರ್ಕಾರ ಸಹ ನಿಷ್ಕ್ರಿಯತೆ ತೋರಿಸುತ್ತಿದೆ ಎಂದು ಆಕ್ರೋಶ ಹೊರ ಹಾಕಿದ್ದರು. ಮುಸ್ಲಿಂ ಓಟು ಪಡೆದು ಬಂದ ಕಾಂಗ್ರೆಸ್ ಸರ್ಕಾರ ಮೌನವಾಗಿದೆ. ಸರ್ಕಾರ ಮಹಿಳೆಯರಿಗೆ ಬಿಟ್ಟಿ ಭಾಗ್ಯ ನೀಡಿ ಮಂಗ ಮಾಡಿದೆ. ಇಲ್ಲಿ ಮಹಿಳೆಯರಿಗೆ ಯಾವುದೇ ಸುರಕ್ಷತೆ ಇಲ್ಲ. ತಕ್ಷಣ ಕಲ್ಲಡ್ಕ ಭಟ್‌ನನ್ನು ಬಂಧಿಸಬೇಕು. ಮುಂದೆ ಈ ರೀತಿಯ ವಿಷ ಜಂತುಗಳು ಬಾಯಿ ತೆರೆಯದಂತೆ ಕ್ರಮ ವಹಿಸಬೇಕು ಎಂದು ಒತ್ತಾಯಿಸಿದ್ದರು.

# ಅಯೋಧ್ಯೆ ರಾಮಮಂದಿರ ಬಳಿ ವಾಲ್ಮೀಕಿ ಮಂದಿರ ನಿರ್ಮಾಣವಾಗಲಿ

**ಹಾವೇರಿ:** ಅಯೋಧ್ಯೆ ರಾಮಮಂದಿರ ಬಳಿ ಮಹರ್ಷಿ ವಾಲ್ಮೀಕಿ ಮಂದಿರ ನಿರ್ಮಾಣವಾಗಬೇಕು. ಮಹರ್ಷಿ ವಾಲ್ಮೀಕಿ ರಾಮಾಯಣ ಗ್ರಂಥ ರಚಿಸಿದ್ದಾರೆ. ಅಯೋಧ್ಯೆ ಏರ್‌ಪೋರ್ಟ್‌ಗೆ ಮಹರ್ಷಿ ವಾಲ್ಮೀಕಿ ಹೆಸರಿಟ್ಟದ್ದನ್ನು ಸ್ವಾಗತಿಸುವೆ. ಅಯೋಧ್ಯೆಯಲ್ಲಿ ರಾಮಮಂದಿರ ನಿರ್ಮಾಣ ಖುಷಿ ತಂದಿದೆ. ಇದು ಭಾರತೀಯರ ಬಹುದಿನದ ಕನಸಾಗಿತ್ತು ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಹಾವೇರಿಯಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣ ಖುಷಿ ತಂದಿದೆ. ದೇಶದಲ್ಲಿ ಬಹಳಷ್ಟು ಮಂದಿರಗಳು ಇವೆ ಈಗ ರಾಮ ಮಂದಿರ ಸೇರ್ಪಡೆಯಾಗುತ್ತಿದೆ. ಇನ್ನು ಬಿಜೆಪಿ ರಾಜಕೀಯವಾಗಿ ಲಾಭ ಪಡೆಯುತ್ತಿರುವ ವಿಚಾರವಾಗಿ ಮಾತನಾಡಿದ ಅವರು ರಾಜಕೀಯ ಎಲ್ಲಿ ಇಲ್ಲಾ ಹೇಳಿ? ಎಲ್ಲ ಕಡೆ ಇದೆ. ಅದು ಲಾಭ ಆಗುತ್ತೋ ನಷ್ಟವಾಗುತ್ತೋ ಚುನಾವಣೆ ನಂತರ ತಿಳಿಯುತ್ತೆ ಎಂದರು.



ರಾಜ್ಯದಲ್ಲಿ ಮತ್ತೆ ಮುನ್ನೆಲೆಗೆ ಬಂದ ಹಿಜಾಬ್ ವಿಚಾರವಾಗಿ ಮಾತನಾಡಿದ ಅವರು ಹಿಜಾಬ್ ವಿಚಾರದಲ್ಲಿ ಸರ್ಕಾರ ಯಾವುದೇ ಆದೇಶ ಮಾಡಿಲ್ಲ, ಮಾಡುತ್ತೇನೆ ಅಂಥಾ ಹೇಳಿದರು ಆದರೆ ಅದು ಕಾನೂನಿನಲ್ಲಿ ಇಲ್ಲ. ಹಿಜಾಬ್ ಧರಿಸುವುದು, ಬಿಡುವುದು ಅವರಿಗೆ ಬಿಟ್ಟ ವಿಷಯ. ನಡೆದುಕೊಂಡು ಬಂದಿದೆ ನಡೆದುಕೊಂಡು ಹೋಗಲಿ ಎಂದು ಜಾರಿಕೊಂಡರು.

ಮೂರು ಜನರಿಗೆ ಉಪಮುಖ್ಯಮಂತ್ರಿ ಹಂಚಿಕೆ ವಿಚಾರವಾಗಿ ಮಾತನಾಡಿದ ಅವರು ಇದು ಹೈಕಮಾಂಡ್‌ಗೆ ಬಿಟ್ಟ ವಿಚಾರ. ಅವರು ಏನು ಮಾಡುತ್ತಾರೇ ನೋಡೋಣ. ಆರ್‌ಎಸ್‌ಎಸ್ ಮುಖಂಡ ಕಲ್ಲಡ್ಕ ಪ್ರಭಾಕರ್ ಮುಸ್ಲಿಂ ಹೆಣ್ಣುಮಕ್ಕಳ ಬಗ್ಗೆ ವಿವಾದಾತ್ಮಕ ಹೇಳಿಕೆ ನೀಡಿರುವ ವಿಚಾರವಾಗಿ ಮಾತನಾಡಿದ ಅವರು ಈ ಬಗ್ಗೆ ಪ್ರಕರಣ ದಾಖಲಾಗಿದೆ. ನ್ಯಾಯಾಲಯ ಏನು ತೀರ್ಮಾನ ತೆಗೆದುಕೊಳ್ಳುತ್ತೆ ನೋಡೋಣ. ನ್ಯಾಯಾಲಯದ ತೀರ್ಮಾನ ಅಂತಿಮ. ನಾವು ಏನು ಹೇಳಲಿಕ್ಕೆ ಆಗಲ್ಲ ಎಂದರು.

ಸಚಿವ ಮಧು ಬಂಗಾರಪ್ಪ ಚಕ್ ಬೋನ್ಸ್ ಪ್ರಕರಣ ವಿಚಾರವಾಗಿ ಮಾತನಾಡಿದ ಅವರು ಇದು ಅವರ ಖಾಸಗಿ ವಿಚಾರ ಉದ್ಯಮದಲ್ಲಿ ಇವೆಲ್ಲಾ ಕಾಮನ್. ರಾಜಕೀಯವಾಗಿ ಏನಾದರು ತಪ್ಪು ಮಾಡಿದರೇ ನೋಡೋಣ ಎಂದರು.

# ಜೋಶಿ ಮನೆಗೆ ಈಶ್ವರಪ್ಪ ಭೇಟಿ

**ಹುಬ್ಬಳ್ಳಿ:** ಇತ್ತೀಚಿಗೆ ನಡೆದ 2023ರ ವಿಧಾನಸಭೆ ಚುನಾವಣೆಯಲ್ಲಿ ಟಿಕೆಟ್ ಘೋಷಣೆ ಆಗುವಕ್ಕಿಂತಲೂ ಮೊದಲೇ ಬಿಜೆಪಿ ಹಿರಿಯ ನಾಯಕ, ಮಾಜಿ ಸಚಿವ ಕೆಎಸ್ ಈಶ್ವರಪ್ಪ ಅವರು ಚುನಾವಣಾ ರಾಜಕೀಯದಿಂದ ನಿವೃತ್ತಿ ಘೋಷಿಸಿದ್ದರು. ಇದಾದ ಬಳಿಕ ಕೆಎಸ್ ಈಶ್ವರಪ್ಪ ಅವರು ಹಾವೇರಿ ಲೋಕಸಭಾ ಕ್ಷೇತ್ರದ ಪುತ್ರ ಕಾಂತೇಶ್ ಅವರಿಗೆ ಟಿಕೆಟ್ ನೀಡಬೇಕು ಎಂದು ಬಹಿರಂಗವಾಗಿಯೇ ಹೇಳಿದ್ದರು. ಈ ಮೂಲಕ ಮಾಜಿ ಸಚಿವ ಕೆಎಸ್ ಈಶ್ವರಪ್ಪ ಅವರು ಪುತ್ರನ ರಾಜಕೀಯ ಭವಿಷ್ಯಕ್ಕಾಗಿ ಪಣ ತೊಟ್ಟಿದ್ದಾರೆ.



ಹೀಗಾಗಿ ಕೆಎಸ್ ಈಶ್ವರಪ್ಪ ಕೇಂದ್ರ ನಾಯಕರೊಂದಿಗೆ ನಿರಂತರ ಸಂಪರ್ಕದಲ್ಲಿದ್ದಾರೆ. ಇದೀಗ ಧಿಡೀರನೆ ಹುಬ್ಬಳ್ಳಿಯ ಮಯೂರಾ ಎಸ್ಟೇಟ್‌ನಲ್ಲಿರುವ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ನಿವಾಸಕ್ಕೆ ಕೆ ಎಸ್ ಈಶ್ವರಪ್ಪ ಭೇಟಿ ನೀಡಿದ್ದಾರೆ. ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಕೆಎಸ್ ಈಶ್ವರಪ್ಪ ಭೇಟಿ ಕುತೂಹಲ ಕೆರಳಿಸಿದೆ.

ಈ ವೇಳೆ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಪ್ರಹ್ಲಾದ್ ಜೋಶಿ ನಾವಿಬ್ಬರೂ ಒಂದೇ ಪಕ್ಷದವರು ಏನಿಲ್ಲ ಬಿಡಿ. ಈಶ್ವರಪ್ಪ ಬಂದರೇ ಸುದ್ದಿ ಸಿಗುತ್ತೆ ಎಂದು ಹಾಸ್ಯ ಚಟಾಕಿ ಹಾರಿಸಿದರು. ಭೇಟಿ ವೇಳೆ ಕೆಎಸ್ ಈಶ್ವರಪ್ಪ ಪ್ರಹ್ಲಾದ್ ಜೋಶಿ ಕಾಲಿಗೆ ನಮಸ್ಕರಿಸಲು ಮುಂದಾದರು. ಆಗ ಪ್ರಹ್ಲಾದ್ ಜೋಶಿ ನಯವಾಗಿ ತಿರಸ್ಕರಿದರು.

ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಪ್ರಧಾನಿ ಮೋದಿ ಮತ್ತು ಚುನಾವಣಾ ಚಾಣಕ್ಯ ಅಮಿತ್ ಶಾ ಆಪ್ತ ವಲಯದಲ್ಲಿ ಗುರುತಿಸಿಕೊಂಡಿದ್ದಾರೆ. ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಪ್ರಹ್ಲಾದ್ ಜೋಶಿ ಕಳೆದ ಕೆಲ ದಿನಗಳಿಂದ ರಾಜ್ಯದ ವಿವಿಧ ಭಾಗದಲ್ಲಿ ಪ್ರವಾಸ ಮಾಡುತ್ತಿದ್ದಾರೆ. ಶುಕ್ರವಾರ ದಾವಣಗೆರೆ ಪ್ರವಾಸ ಮುಗಿಸಿ ಪ್ರಹ್ಲಾದ್ ಜೋಶಿ ಹುಬ್ಬಳ್ಳಿಗೆ ಬಂದಿದ್ದಾರೆ.

## ಕಾಂಗ್ರೆಸ್ ಚಿಂತನೆ

ತಂತ್ರ ಅಡದಿದೆ ಎನ್ನಲಾಗಿದೆ.

**ಹೈಕಮಾಂಡ್ ಲೆಕ್ಕಾಚಾರವೇನು?:** ಲೋಕಸಭೆಯಲ್ಲಿ ಹೆಚ್ಚು ಸ್ಥಾನ ಗೆಲ್ಲಲು ಸಚಿವರ ವರ್ಚಸ್ಸು ಬಳಸಿಕೊಳ್ಳುವುದು ಹೈಕಮಾಂಡ್ ಲೆಕ್ಕಾಚಾರ ಎನ್ನಲಾಗುತ್ತಿದೆ. ಸಚಿವರು ಗೆದ್ದು ಲೋಕಸಭೆ ಪ್ರವೇಶ ಮಾಡಿದರೆ ಇಲ್ಲಿ ಸಚಿವ ಸ್ಥಾನ ಖಾಲಿ ಆಗುತ್ತದೆ. ಆಗ ಖಾಲಿ ಇರುವ ಸಚಿವ ಸ್ಥಾನವನ್ನು ಇನ್ನಿತರ ಆಕಾಂಕ್ಷಿಗಳಿಗೆ ಹಂಚಬಹುದು ಎಂಬ ಲೆಕ್ಕಾಚಾರವನ್ನೂ ಕಾಂಗ್ರೆಸ್ ಹೈಕಮಾಂಡ್ ಹಾಕಿಕೊಂಡಿದೆ. ಈ ಮಧ್ಯೆ, ಲೋಕಸಭೆ ಚುನಾವಣೆಗೆ ಸ್ಪರ್ಧಿಸುವ ಕನಿಷ್ಠ 10 ಸಚಿವರನ್ನು ಪಟ್ಟಿ ಮಾಡುವಂತೆ ಸೂಚನೆ ನೀಡಿದೆ. ರಾಜ್ಯ ಕಾಂಗ್ರೆಸ್ ನಾಯಕರಿಗೆ ಸಚಿವರ ಪಟ್ಟಿ ತಯಾರಿಸುವಂತೆ ಸೂಚನೆ ನೀಡಲಾಗಿದೆ.

ಕೆ.ಎನ್.ರಾಜಣ್ಣ, ಬಿ.ನಾಗೇಂದ್ರ ಸ್ಪರ್ಧೆಗೆ ಈಗಾಗಲೇ ಉತ್ಸುಕತೆ ತೋರಿಸಿದ್ದಾರೆ. ಚೆಲುವರಾಯಸ್ವಾಮಿ, ಕೃಷ್ಣಭೈರೇಗೌಡ ಹೈಕಮಾಂಡ್ ಹೇಳಿದರೆ ಒಪ್ಪಿಕೊಳ್ಳುತ್ತಾರೆ. ಸತೀಶ್ ಜಾರಕಿಹೊಳಿ 2021 ಲೋಕಸಭೆ ಉಪಚುನಾವಣೆಯಲ್ಲಿ ಸ್ಪರ್ಧಿಸಿ ಸೋಲನುಭವಿಸಿದ್ದರು. ಹೀಗಾಗಿ ಈ ಬಾರಿ ಸತೀಶ್ ಜಾರಕಿಹೊಳಿ ಪುತ್ರನಿಗೆ ಲೋಕಸಭೆ ಟಿಕೆಟ್ ಕೇಳೋ ಸಾಧ್ಯತೆ ಇದೆ. ಸಚಿವ ಮಹದೇವಪ್ಪ, ಮುನಿಯಪ್ಪ ಸಹ ತಮ್ಮ ಪುತ್ರನಿಗೆ ಟಿಕೆಟ್ ಕೇಳ್ತಿದ್ದಾರೆ. ರಾಮಲಿಂಗಾರೆಡ್ಡಿ ಸಹ ಪುತ್ರಿ ಸೌಮ್ಯರೆಡ್ಡಿ ಅವರಿಗೆ ಟಿಕೆಟ್ ಕೇಳೋ ಸಾಧ್ಯತೆ ಇದೆ.

ಈ ಮಧ್ಯೆ, ಕಾಂಗ್ರೆಸ್‌ನ ಆಂತರಿಕ ಸಮೀಕ್ಷೆ ಮಾಡಿಸಿದ್ದು, ಲೋಕಸಭೆ ವಿಚಾರವಾಗಿ ಇನ್ನೂ ಪಾಸಿಟಿವ್ ರಿಸಲ್ಟ್ ಬಂದಿಲ್ಲ, ಸಮೀಕ್ಷೆಯಲ್ಲಿ ನಿರೀಕ್ಷಿತ ಗುರಿ ಮುಟ್ಟದ ಕಾರಣಕ್ಕಾಗಿ, ಸಚಿವರು ಸ್ಪರ್ಧೆ ಮಾಡಿದ್ರೆ ಕನಿಷ್ಠ 10-13 ಕ್ಷೇತ್ರಗಳಲ್ಲಿ ಪೈಪೋಟಿ ನೀಡಬಹುದು ಎಂಬ ಚರ್ಚೆ ನಡೆಯುತ್ತಿದೆ ಎನ್ನಲಾಗಿದೆ.

## ಹೊಸ ವರ್ಷಾಚರಣೆ

ಎಂ.ಜಿ.ರಸ್ತೆ ಹಾಗೂ ಬ್ರಿಗೇಡ್ ರಸ್ತೆಯಿಂದ ನಗರದ ಹಲವೆಡೆ ಬಸ್ ವ್ಯವಸ್ಥೆ ಮಾಡಲಾಗಿದೆ. ಎಂ.ಜಿ.ರಸ್ತೆ ಹಾಗೂ ಬ್ರಿಗೇಡ್ ರಸ್ತೆಯಿಂದ ಕಾಡುಗೋಡಿ, ಎಲೆಕ್ಟ್ರಾನಿಕ್ ಸಿಟಿ, ಸರ್ಜಾಪುರ, ಬನ್ನೇರುಘಟ್ಟ, ಕೆಂಗೇರಿ, ನೆಲಮಂಗಲ, ಮಾಗಡಿ ರಸ್ತೆ, ಹೆಣ್ಣೂರು ಸೇರಿದಂತೆ ಹಲವು ಏರಿಯಾಗಳಿಗೆ ಬಿಎಂಟಿಸಿ ಬಸ್ ವ್ಯವಸ್ಥೆ ಇರಲಿದೆ. ಜನದಟ್ಟಣೆ ಹೆಚ್ಚಾಗಿರುವ ಯಲಹಂಕ, ಇಂದಿರಾನಗರ, ಕೋರಮಂಗಲ, ಬನಶಂಕರಿ, ಶಾಂತಿನಗರ, ಗೊರಗುಂಟೆ ಪಾಳ್ಯ ಸುತ್ತಮುತ್ತ ಬಸ್ ವ್ಯವಸ್ಥೆ ಮಾಡಲಾಗಿದೆ. ಪ್ರಯಾಣಿಕರ ಸಂಖ್ಯೆಗೆ ಅನುಗುಣವಾಗಿ ಬಸ್ ಕಾರ್ಯಾಚರಣೆ ನಡೆಸಲಿದೆ ಎಂದು ಬಿಎಂಟಿಸಿ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ನಿತ್ಯ ಮಧ್ಯರಾತ್ರಿ 11 ಗಂಟೆಯವರೆಗೂ ಮಾತ್ರ ಬಿಎಂಟಿಸಿ ಬಸ್ ಸಂಚಾರ ಇತ್ತು. ಆದರೆ ಇಂದು ಹೊಸ ವರ್ಷಾಚರಣೆ ಹಿನ್ನೆಲೆ ಪ್ರಯಾಣಿಕರನ್ನು ಗಮನದಲ್ಲಿಟ್ಟುಕೊಂಡು ಬಸ್ ಸೇವೆ ವಿಸ್ತರಿಸಲಾಗಿದೆ. ಮಧ್ಯರಾತ್ರಿ 2 ಗಂಟೆಯ ವರೆಗೂ ಬಸ್ ಸೇವೆ ಇರಲಿದೆ.

ತಡರಾತ್ರಿ 2 ಗಂಟೆವರೆಗೆ ಸಂಚರಿಸಲಿದೆ ನಮ್ಮ ಮೆಟ್ರೋ

ಹೊಸ ವರ್ಷಾಚರಣೆಗೆ ಅನುಕೂಲವಾಗುವಂತೆ ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ ಡಿಸೆಂಬರ್ 31ರಂದು ರಾತ್ರಿಯಿಂದ ಬೆಳಗಿನ ಜಾವ 2 ಗಂಟೆಯವರೆಗೆ ನಮ್ಮ ಮೆಟ್ರೋ ರೈಲು ಸೇವೆಯನ್ನು ವಿಸ್ತರಿಸಿದೆ. ಆದರೆ, ಪ್ರವಾಸಿಗರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಎಂಜಿ ರಸ್ತೆ ಮೆಟ್ರೋ ನಿಲ್ದಾಣಕ್ಕೆ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಪೊಲೀಸ್ ಇಲಾಖೆ ಸೂಚನೆ ಮೇರೆಗೆ ಎಂಜಿ ರಸ್ತೆಗೆ ಪ್ರವೇಶ ನಿರ್ಬಂಧಿಸಲಾಗಿದೆ. ಹೀಗಾಗಿ ವಿಸ್ತೃತ ರೈಲು ಸೇವೆಯನ್ನು ಬಳಸಲು ಮೆಟ್ರೋ ಪ್ರಯಾಣಿಕರು ಟ್ರಿನಿಟಿ ಅಥವಾ ಕಬ್ಬನ್ ಪಾರ್ಕ್ ಮೆಟ್ರೋ ನಿಲ್ದಾಣಗಳಿಗೆ ತೆರಳಲು ಸೂಚಿಸಲಾಗಿದೆ.

## ಕೈ ನಾಯಕರು ಬರುತ್ತಾರೆ

ಕಾಂಗ್ರೆಸ್ 70 ವರ್ಷದಿಂದ ಅಯೋಧ್ಯೆಯ ವಿರುದ್ಧ ಹೋರಾಟ ಮಾಡಿತ್ತು. ಕಾಂಗ್ರೆಸ್ ನ ಕಪಿಲ್ ಸಿಬಲ್ ಅಯೋಧ್ಯೆಯ ವಿರುದ್ಧ ಕೋರ್ಟ್ ನಲ್ಲಿ ವಾದ ಮಾಡುತ್ತಿದ್ದರು. ಅಯೋಧ್ಯೆಯಲ್ಲಿ ರಾಮಮಂದಿರ ಆಗಬಾರದು ಎಂದು ಕಾಂಗ್ರೆಸ್ ಉದ್ದೇಶವಾಗಿತ್ತು. ಅಲ್ಪಸಂಖ್ಯಾತರಿಗೆ ನೋವಾಗುತ್ತದೆ ಎಂದು ಕಾಂಗ್ರೆಸ್ ರಾಮ ಮಂದಿರ ವಿರುದ್ಧ ಇತ್ತು ಎಂದರು.

## ಮೊದಲನೆ ಪುಟದಿಂದ...

2014 ರ ನಂತರ ಕೋರ್ಟಿಗೆ ಸಂಬಂಧಿಸಿದ ಎಲ್ಲಾ ಮಾಹಿತಿ ಒದಗಿಸಲಾಯಿತು. ಕೋರ್ಟಿನಲ್ಲಿ ಜಯ ಸಿಕ್ಕಿದ್ದು, ಇದೀಗ ಅಯೋಧ್ಯೆಯಲ್ಲಿ ಭವ್ಯವಾದ ಮಂದಿರ ನಿರ್ಮಾಣವಾಗಿದೆ. ಬಿಜೆಪಿ, ವಿಶ್ವಹಿಂದೂ ಪರಿಷತ್ ಯಾವುದೇ ರಾಜಕೀಯವನ್ನು ಮನಸ್ಸಲ್ಲಿ ಇಟ್ಟುಕೊಂಡಿಲ್ಲ ಎಂದರು.

## ಬೆಂಬಲಿಸುತ್ತೇವೆ

ಭಾರತ ಜೋಡೋ ಯಾತ್ರೆಯಲ್ಲಿ ಏಳು ಸಾವಿರ ಕಿ.ಮೀ ಪಾದಯಾತ್ರೆ ಮಾಡಿ ಜನಮನ ಗೆದ್ದಿದ್ದಾರೆ. ಇಂಡಿಯಾ ಒಕ್ಕೂಟದ ವ್ಯವಸ್ಥೆಯಲ್ಲಿ ಬೇರೆ ಬೇರೆ ಅಂಗಪಕ್ಷದ ನಿರ್ಧಾರಕ್ಕೆ ಎಲ್ಲರೂ ಬದ್ಧರಾಗಬೇಕು. ಮಮತಾ ಬ್ಯಾನರ್ಜಿ, ಕೇಜ್ರಿವಾಲ್ ಕೂಡ ಖರ್ಗೆಯನ್ನು ಬೆಂಬಲಿಸಿದ್ದಾರೆ ಎಂದು ಹೇಳಿದರು.

ಕಾಂಗ್ರೆಸ್‌ನವರು ಬೆಂಬಲಿಸುತ್ತಿಲ್ಲ ಎನ್ನುವ ಪ್ರಶ್ನೆಗೆ ನಗುನಗುತ್ತಲೇ ಉತ್ತರಿಸಿದ ಅವರು, ನಮ್ಮವರ ಹೆಸರು ನಾವೇ ಹೇಳಬಾರದಲ್ವಾ? ಹೀಗಾಗಿ ಕಾಂಗ್ರೆಸ್‌ನವರು ಅಭ್ಯರ್ಥಿ ಹೆಸರು ಹೇಳಿಲ್ಲ. ಅದಕ್ಕೆ ಬೇರೆ ಅರ್ಥ ಕಲ್ಪಿಸುವುದು ಬೇಡ. ಇನ್ನು ಒಕ್ಕೂಟದ ವ್ಯವಸ್ಥೆಯಲ್ಲಿ ಬೇರೆಯವರು ನಮ್ಮ ಪಕ್ಷದ ಹೆಸರು ಹೇಳಬಹುದು. ನಾವು ಹೇಳಲು ಆಗಲ್ಲ, ಕಾಂಗ್ರೆಸ್‌ನಲ್ಲಿ ಒಂದು ವ್ಯವಸ್ಥೆ ಇದೆ. ಪಾರ್ಲಿಮೆಂಟ್ ಚುನಾವಣೆ ಬಳಿಕ ಪಾರ್ಟಿ ಚೌಕಟ್ಟಿನಲ್ಲಿ ನಡೆಯುತ್ತದೆ ಎಂದು ತಿಳಿಸಿದರು.

## ಸಾಧ್ಯವೇ?

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿ ಅವಧಿಯಲ್ಲಿ ಅಕ್ರಮ ನಡೆದೇ ಇಲ್ಲ ಅಂತಾ ಹೇಳುವುದಿಲ್ಲ. 40 ಸಾವಿರ ಕೋಟಿ ರೂ. ಅಕ್ರಮ ಅಂದರೆ ನಂಬಲು ಸಾಧ್ಯವೇ ಎಂದಿದ್ದಾರೆ.

ಎಷ್ಟು ಅಕ್ರಮ ಆಗಿದೆ ಅಂತಾ ನನಗೆ ಗೊತ್ತಿಲ್ಲ. ಯತ್ನಾಳ್ ಆರೋಪದ ಬಗ್ಗೆ ವಾಸ್ತವಾಂಶ ಪರಿಶೀಲನೆ ಮಾಡಬೇಕಲ್ವಾ? ಶಾಸಕ ಯತ್ನಾಳ್ ವಿರುದ್ಧದ ಕ್ರಮದ ಬಗ್ಗೆ ನಾನೇನು ಹೇಳುವುದಿಲ್ಲ. ಯತ್ನಾಳ್ ಹೇಳಿಕೆ ನಿಜಾಂಶವಲ್ಲ ಅದಕ್ಕೆ ಉತ್ತರಿಸಬೇಕಿಲ್ಲ ಅಂತಾ ಬಿಜೆಪಿ ನಾಯಕರು ಸುಮ್ಮನಾಗಿರಬಹುದು ಎಂದು ಹೇಳಿದ್ದಾರೆ.

ನಾನು ಯಾರನ್ನೂ ರಕ್ಷಣೆ ಮಾಡಲು ಹೇಳಿಕೆ ನೀಡುತ್ತಿಲ್ಲ, ಜಯಚಂದ್ರ ನೇತೃತ್ವದಲ್ಲಿ ವರದಿಯನ್ನು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಪ್ರತಿದಿನ ಗಂಧದ ಕಡ್ಡಿ ಹಚ್ಚಿ ಪೂಜೆ ಮಾಡುತ್ತಿದ್ದಾರಾ ಎಂದು ವಾಗ್ದಾಳಿ ಮಾಡಿದ್ದಾರೆ.

ಬಿಜೆಪಿಯಲ್ಲಿರುವ ಕೆಲವು ಭಿನ್ನಾಭಿಪ್ರಾಯ ಕಾರಣಕ್ಕೆ ಯತ್ನಾಳ್ ಹೇಳಿಕೆಗೆ ಮಹತ್ವ ಕೊಡಬೇಕಾಗಿಲ್ಲ.ಬಿಜೆಪಿ ಹಾಗೂ ಎನ್‌ಡಿಎ ಪರವಾಗಿ ಈಗ ನಾನೇ ಹೇಳುತ್ತಿದ್ದೇನೆ ಎಂದರು.

ಸಂಕ್ರಾಂತಿ ಹಬ್ಬದ ಬಳಿಕ ಸಂತೋಷವಾಗುವ ಸುದ್ದಿಯನ್ನೇ ಕೊಡುತ್ತೇನೆ. ಸೀಟು ಹಂಚಿಕೆ ಸೇರಿ ಎಲ್ಲದರ ಬಗ್ಗೆ ನಿಮಗೆಲ್ಲರಿಗೂ ಸಂತೋಷವಾಗುವ ಸುದ್ದಿಯನ್ನೇ ಕೊಡುತ್ತೇನೆ ಎಂದು ಹೇಳಿದ್ದಾರೆ.

ಅಲ್ಪಸಂಖ್ಯಾತ ಸಮುದಾಯದ ಅಭಿವೃದ್ಧಿಗೆ ಕ್ರಿಯಾ ಯೋಜನೆ ರೂಪಿಸಲು ಆದೇಶ ವಿಚಾರವಾಗಿ ಮಾತನಾಡಿದ ಅವರು, ಅವರನ್ನು ಸಂತುಷ್ಟಗೊಳಿಸಲು ಹೇಳಿದ್ದಾರೆಯೇ ಹೊರತು ಅವರ ಅಭಿವೃದ್ಧಿಗೋಸ್ಕರ ಅಲ್ಲ. ಯಾವಾಗ ಹಿಜಾಬ್ ವಾಪಸ್ ಹೇಳಿಕೆಗೆ ಟೀಕೆ ಶುರುವಾಯ್ತೋ 24 ಗಂಟೆಯಲ್ಲಿ ಮಾತು ವಾಪಸ್ ಪಡೆದರು. ಮತಕ್ಕೋಸ್ಕರ, ಕೆಲವರನ್ನು ಖುಷಿಪಡಿಸಲು ತಾತ್ಕಾಲಿಕ ಘೋಷಣೆ ಮಾಡುತ್ತಾರೆ. ಇದು ಯಾವುದೂ ಅನುಷ್ಠಾನಕ್ಕೆ ಬರಲ್ಲ ಎಂದು ಕಿಡಿಕಾರಿದ್ದಾರೆ.

ಎಲ್ಲಿದೆ ಇವರ ಹತ್ತಿರ ದುಡ್ಡು? ಮುಸ್ಲಿಂ ಸಮುದಾಯಕ್ಕೆ ಹತ್ತು ಸಾವಿರ ಕೋಟಿ ರೂ. ಕೊಟ್ಟಾಯ್ತಾ ಇವರು? ಹಿಜಾಬ್ ವಿಷಯದಲ್ಲಿ ಆ ರೀತಿ ನಡೆದುಕೊಂಡವರು ನಮಗೆ ರಕ್ಷಣೆ ಕೊಡ್ತಾರಾ ಅಂತಾ ಮುಸ್ಲಿಂ ಸಮುದಾಯ ಅರ್ಥ ಮಾಡಿಕೊಳ್ಳಬೇಕು. 10 ಸಾವಿರ ಕೋಟಿ ರೂ. ಕೊಡ್ತೀನಿ ಅಂತಾ ಹೇಳಿರುವುದು ಅವರ ಹಿಂದೆ ಇರುವವರ ಉದ್ಧಾರಕ್ಕೆ ಎಂದಿದ್ದಾರೆ.

## 7878 ರಸ್ತೆ ಗುಂಡಿ

ಪ್ರತಿ ಬಾರಿ ಎಲ್ಲಾ ಗುಂಡಿ ಮುಚ್ಚಲಾಗಿದೆ ಎನ್ನುವ ಪಾಲಿಕೆಯೇ ಕೊಟ್ಟಿರುವ ವರದಿಯಲ್ಲಿ ಇನ್ನೂ ಕೂಡ ನಗರದಲ್ಲಿ 5961 ರಸ್ತೆಗುಂಡಿಗಳು ಮುಚ್ಚುವುದು ಬಾಕಿ ಇದೆ. ಡಿಸೆಂಬರ್ ನಲ್ಲಿ ಪಾಲಿಕೆ ಮುಚ್ಚಿದ್ದು ಕೇವಲ 1917 ಗುಂಡಿಗಳು ಮಾತ್ರ. ಆದರೆ ನಗರದಲ್ಲಿ 5961 ಗುಂಡಿಗಳು ಮುಚ್ಚಲು ಬಾಕಿ ಇದ್ದು ಒಟ್ಟು ಈ ತಿಂಗಳು 7878 ಗುಂಡಿಗಳು ಬಿದ್ದಿವೆ.

ಬೊಮ್ಮನಹಳ್ಳಿಯಲ್ಲಿ 643 ರಸ್ತೆ ಗುಂಡಿ, ದಾಸರಹಳ್ಳಿಯಲ್ಲಿ 645 ರಸ್ತೆ ಗುಂಡಿ, ಪೂರತಣ ವಲಯದಲ್ಲಿ 1988 ರಸ್ತೆ ಗುಂಡಿ, ಮಹಾದೇವಪುರದಲ್ಲಿ 1145 ರಸ್ತೆ ಗುಂಡಿ, ಆರ್ ಆರ್ ನಗರದಲ್ಲಿ 589 ರಸ್ತೆ ಗುಂಡಿ, ದಕ್ಷಿಣ ವಲಯದಲ್ಲಿ 706 ರಸ್ತೆ ಗುಂಡಿ, ಪಶ್ಚಿಮ ವಲಯದಲ್ಲಿ 739 ರಸ್ತೆ ಗುಂಡಿ, ಯಲಹಂಕದಲ್ಲಿ 1423 ರಸ್ತೆ ಗುಂಡಿ ಸೇರಿ ಒಟ್ಟು 7878 ರಸ್ತೆಗುಂಡಿಗಳು ಬಿದ್ದಿವೆ.

ಇನ್ನೂ ಈ ಬಗ್ಗೆ ಬಿಬಿಎಂಪಿ ಚೀಫ್ ಇಂಜಿನಿಯರ್ ರನ್ನ ಕೇಳಿದರೆ ತ್ವರಿತಗತಿಯಲ್ಲಿ ಗುಂಡಿ ಮುಚ್ಚಲು ಬಿಬಿಎಂಪಿ ಹೊಸ ಟೆಂಡರ್ ಕರೆಯಲು ಮುಂದಾಗಿದೆ. ಇದಕ್ಕಂತಲೇ ಪ್ರತಿ ವಾರ್ಡ್ 15 ಲಕ್ಷ ಅನುದಾನವನ್ನೂ ಪಾಲಿಕೆ ನಿಗದಿ ಮಾಡಿದೆ. ವಾರ್ಡ್ ಮಟ್ಟದಲ್ಲಿ ರಸ್ತೆಗುಂಡಿಗಳನ್ನು ಮುಚ್ಚಲು ವಿಶೇಷ ನಿಗಾವಹಿಸಲಿದ್ದು, ಶೀಘ್ರವೇ ರಸ್ತೆಗುಂಡಿ ಮುಚ್ಚಲಿದ್ದಾರೆ ಎಂದು ತಿಳಿಸಿದ್ದಾರೆ.

ಒಟ್ಟಾರೆ ರಸ್ತೆಗುಂಡಿಗಳಿಂದ ಬೆಂಗಳೂರಿಗೆ ಮುಕ್ತಿ ಇಲ್ಲ ಎಂಬಂತಾಗಿದೆ. ಇದಕ್ಕಂತಲೇ ಪ್ರತಿ ವರ್ಷ ಬಜೆಟ್ ನಲ್ಲಿ ನೂರಾರು ಕೋಟಿ ಪಾಲಿಕೆ ಮೀಸಲಿಡುತ್ತೆ. ಆದರೂ ಇದಕ್ಕೊಂದು ಶಾಶ್ವತ ಪರಿಹಾರ ನೀಡಲು ಬಿಬಿಎಂಪಿ ಎಡವುತ್ತಿರುವುದು ವಿಪರ್ಯಾಸ.

## ವ್ಯಾಪಕ ಆಕ್ರೋಶ

ಮೊನ್ನೆಯಷ್ಟೆ ಕ್ರಿಸ್ಮಸ್ ಹಬ್ಬದ ಸಂದರ್ಭದಲ್ಲಿ ಕ್ರಿಶ್ಚಿಯನ್ ಸಮುದಾಯದ ಬಗ್ಗೆ ಜನರಲ್ಲಿ ಇಲ್ಲಸಲ್ಲದ ಅಪಪ್ರಚಾರ ಮಾಡುತ್ತಿದ್ದಾರೆಂದು ಆರ್‌ಜೆ ನಗರ ಠಾಣೆ ಪೊಲೀಸರು ಸ್ವಾದಿಯನ್ನ ವಶಕ್ಕೆ ಪಡೆಯಲು ಯತ್ನಿಸಿದ್ದಾರೆ. ಈ ವೇಳೆ ಪೊಲೀಸರನ್ನ ಕಂಡ ತಕ್ಷಣ ಸ್ವಾದಿ ಪರಾರಿಯಾಗಿದ್ದಾರೆ ಎಂದು ಆರ್‌ಜೆ ನಗರ ಠಾಣೆ ಪೊಲೀಸರು ಎಫ್‌ಐಆರ್‌ನಲ್ಲಿ ಉಲ್ಲೇಖಿಸಿದ್ದಾರೆ.

ಘಟನೆ ಕುರಿತು ಕಿಡಿಕಾರಿದ ಕೇದಾರ ಶ್ರೀಗಳು

ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ಮಾಶಾಳ ಗ್ರಾಮದ ಕೇದಾರ ಶ್ರೀಗಳು, 'ನಾವು ಕೂಡ ಧರ್ಮದ ಬಗ್ಗೆ ಅನೇಕ ಹೋರಾಟಗಳನ್ನ ಮಾಡಿದ್ದೇವೆ. ನಮ್ಮ ಮೇಲೂ ರೌಡಿಶೀಟರ್ ಕೇಸ್ ಹಾಕುತ್ತೀರಾ ಎಂದು ಕಿಡಿಕಾರಿದ್ದಾರೆ. ಧರ್ಮದ ಹೆಸರಲ್ಲಿ ಹೋರಾಟ ಮಾಡುತ್ತಿರುವ ಹಿಂದೂ ಜಾಗೃತಿ ಸೇನೆ ಅಧ್ಯಕ್ಷ ಲಕ್ಷ್ಮಿಕಾಂತ್ ಸ್ವಾದಿ ಮೇಲೆ ವಿನಾಕಾರಣ ರೌಡಿಶೀಟರ್ ಕೇಸ್ ಹಾಕಿ ಹಿಂದೂ ಧರ್ಮದ ಹೋರಾಟಗಳನ್ನ ಹತ್ತಿಕ್ಕುವ ಕೆಲಸ ನಡಿತಿದ್ದು, ಈ ಬಗ್ಗೆ ನಾವು ಉಗ್ರ ಹೋರಾಟ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಅದೇನೇ ಇರಲಿ ಕಾಂಗ್ರೆಸ್ ಸರ್ಕಾರ ಬಂದಮೇಲೆ ಹಿಂದೂ ಸಂಘಟನೆಗಳ ಹೆಸರಿನ ಮೇಲೆ ಹೋರಾಟ ಮಾಡುವರನ್ನ ಕಟ್ಟಿಹಾಕುವ ಕೆಲಸ ನಡಿತ್ತಿರೋದು ಮೇಲ್ನೊಟಕ್ಕೆ ಕಂಡು ಬಂದಿದ್ದು, ಈ ಬಗ್ಗೆ ಮಠಾಧೀಶರು ಸಹ ಸರ್ಕಾರ ಹಾಗೂ ಪೊಲೀಸ್ ಇಲಾಖೆ ವಿರುದ್ಧ ಅಖಾಡಕ್ಕೆ ಧುಮುಕ್ಕಿದ್ದಾರೆ. ಒಟ್ಟಿನಲ್ಲಿ ಲಕ್ಷ್ಮಿಕಾಂತ್ ಸ್ವಾದಿ ಮೇಲೆ ಯಾವುದೇ ಗಟ್ಟಿಯಾದ ಕಾರಣವಿಲ್ಲದೇ ರೌಡಿಶೀಟರ್ ದಾಖಲಿಸಿದ್ದು ಕಾಂಗ್ರೆಸ್ ಸರ್ಕಾರ ನಿಜಕ್ಕೂ ಹಿಂದೂ ಸಂಘಟನೆಗಳ ಮೇಲೆ ಸವಾರಿ ಮಾಡುತ್ತಿರುವುದಕ್ಕೆ ಪುಷ್ಟಿ ನೀಡಿದಂತಿದೆ.

## ಟ್ವಿಸ್ಟ್

ಸಾವು ಅಥವಾ ಆತ್ಮಹತ್ಯೆ ಇರಬಹುದು ಎಂದು ಎಲ್ಲರೂ ಊಹಿಸಿದ್ದರು. ಇದೀಗ ವಿದ್ಯಾಗಿರಿ ಠಾಣೆಯ ಪೊಲೀಸರು ಇದು ಕೊಲೆ ಎಂದು ಸಾಬೀತುಪಡಿಸಿದ್ದಾರೆ.

ಗಿರಿಜಾ ಅವರೊಂದಿಗೆ ಅಮರಗೋಳದ ಮಂಜುನಾಥ ದಂಡಿನ ಎಂಬಾತ ಹಣದ ವ್ಯವಹಾರ ಇಟ್ಟುಕೊಂಡಿದ್ದ. ಅವರಿಗೆ ಸುಮಾರು 10 ಲಕ್ಷ ರೂ. ಹಣ ಕೊಡಬೇಕಾಗಿತ್ತು. ಇದೇ ಕಾರಣಕ್ಕೆ ಗಿರಿಜಾ ಅವರನ್ನು ಆತ ಹತ್ಯೆ ಮಾಡಿ ಅಲ್ಲಿಂದ ಪರಾರಿಯಾಗಿದ್ದ ಎಂದು ಪೊಲೀಸರ ತನಿಖೆ ವೇಳೆ ತಿಳಿದುಬಂದಿದೆ.

ಆರೋಪಿ ಮಂಜುನಾಥ್ ವೇಲ್‌ನಿಂದ ಶಿಕ್ಷಕಿಯ ಕತ್ತು ಬಿಗಿದು ಕೊಲೆಗೈದಿದ್ದಾನೆ. ಆದರೆ ಕೊಲೆ ಎಂದು ಯಾವುದೇ ಗುರುತು ಆರಂಭದಲ್ಲಿ ಗೊತ್ತಾಗಿರಲಿಲ್ಲ. ದೇಹವನ್ನು ಪರೀಕ್ಷಿಸಿದಾಗ ಕುತ್ತಿಗೆಯ ಭಾಗದಲ್ಲಿ ಸಣ್ಣ ಕಲೆ ಕಂಡಿದ್ದು ಇದನ್ನೇ ಇಟ್ಟುಕೊಂಡು ತನಿಖೆ ನಡೆಸಿದಾಗ ಪ್ರಕರಣ ಬೆಳಕಿಗೆ ಬಂದಿದೆ. ಈ ಸಂಬಂಧ ಆರೋಪಿಯನ್ನು ಬಂಧಿಸಲಾಗಿದ್ದು, ಹೆಚ್ಚಿನ ವಿಚಾರಣೆ ನಡೆಸಲಾಗುತ್ತಿದೆ.

## ಎಸ್ಕೇಪ್

ಧಾರವಾಡ ಮೂಲದ ಜ್ಯೋತಿ ಹಾಗೂ ಜೀವನ್ ಇಬ್ಬರೂ ಪರಸ್ಪರ ಪ್ರೀತಿಸಿ ವರ್ಷದ ಹಿಂದಷ್ಟೇ ಮದುವೆಯಾಗಿದ್ದರು. ಹಾಸನ ಜಿಲ್ಲೆ ಅರಸೀಕೆರೆ ತಾಲೂಕಿನ ರಾಂಪುರ ಗ್ರಾಮದಲ್ಲಿ ಮನೆಯೊಂದರಲ್ಲಿ ವಾಸವಾಗಿದ್ದರು. ಜ್ಯೋತಿಗೆ ತುಂಡು ಬಟ್ಟೆ ಧರಿಸುವುದು, ಮಾಡರ್ನ್ ಉಡುಪು ಧರಿಸುವುದು ಅಂದ್ರೆ ಇಷ್ಟ. ಆದರೆ ಜೀವನ್ ಗೆ ಅದು ಇಷ್ಟ ಆಗುತ್ತಿರಲಿಲ್ಲ, ಹೀಗಾಗಿ ಬಟ್ಟೆ ವಿಚಾರಕ್ಕೆ ಇವರಿಬ್ಬರ ನಡುವೆ ಆಗಾಗ ಜಗಳವಾಗುತ್ತಿತ್ತು. ಆದರೆ ನಿನ್ನೆ ನಡೆದ ಜಗಳ ಕೊಲೆಯಲ್ಲಿ ಅಂತ್ಯ ಕಂಡಿದೆ.

ನಿನ್ನೆ ಕೂಡ ಜ್ಯೋತಿ ಮಾಡರ್ನ್ ಉಡುಪು ಧರಿಸಿ ಆಚೆ ಹೊರಟಿದ್ದಳು. ಆಗ ಜೀವನ್, ನಾನೇ ಡ್ರಾಪ್ ಮಾಡುತ್ತೇನೆಂದು ನಿರ್ಜನ ಪ್ರದೇಶಕ್ಕೆ ಕರೆದೊಯ್ದು ಚಾಕುವಿನಿಂದ ಕುತ್ತಿಗೆ ಸೀಳಿ ಪತ್ನಿಯನ್ನು ಬರ್ಬರವಾಗಿ ಕೊಲೆ ಮಾಡಿ ಎಸ್ಕೇಪ್ ಆಗಿದ್ದಾನೆ. ಅರಸೀಕೆರೆ ಗ್ರಾಮಾಂತರ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಬಂಧನ

ಐವರು ಆರೋಪಿಗಳು ಒಡಿಶಾದವರು, ಓರ್ವ ತ್ರಿಪುರದವ ಮತ್ತು ಇನ್ನೊಬ್ಬ ಬಿಹಾರ ಮೂಲದವ ಎಂದು ತಿಳಿದುಬಂದಿದೆ.

ಕಳೆದ ಹತ್ತು ದಿನಗಳಿಂದ ಬೆಂಗಳೂರಿಗೆ ಆಗಮಿಸುತ್ತಿದ್ದ ರೈಲುಗಳಲ್ಲಿ ರೈಲ್ವೆ ಪೊಲೀಸರು ಶೋಧ ನಡೆಸುತ್ತಿದ್ದಾರೆ. ಪ್ರಶಾಂತಿ ಎಕ್ಸ್‌ಪ್ರೆಸ್, ಶೇಷಾದ್ರಿ ಎಕ್ಸ್‌ಪ್ರೆಸ್ ಮತ್ತು ಶಾಲಿಮಾರ್ -ವಾಸ್ಕೋ-ಡ-ಗಾಮಾ ಅಮರಾವತಿ ಎಕ್ಸ್‌ಪ್ರೆಸ್ ರೈಲುಗಳಲ್ಲಿ ಗಾಂಜಾ ಪತ್ತೆಯಾಗಿದೆ. 60 ಲಕ್ಷ ರೂಪಾಯಿ ಮೌಲ್ಯದ 60 ಕೆಜಿ ಗಾಂಜಾವನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಬೈಯಪ್ಪನಹಳ್ಳಿ, ಬೆಂಗಳೂರು ಗ್ರಾಮಾಂತರ ಮತ್ತು ಹುಬ್ಬಳ್ಳಿ ರೈಲ್ವೆ ಪೊಲೀಸ್ ಠಾಣೆಗಳಲ್ಲಿ ಐದು ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ. ಪೊಲೀಸರ ಪ್ರಕಾರ, ಆರೋಪಿ ನಿತ್ಯಾನಂದ ದಾಸ್ ಮತ್ತು ರಾಜೇಶ್ ಬೆಂಗಳೂರಿನಲ್ಲಿ ಫುಡ್? ಡೆಲಿವರಿ ಬಾಯ್?? ಏಜೆಂಟ್‌ಗಳಂತೆ ಮಾದಕ ವಸ್ತುಗಳನ್ನು ಸರಬರಾಜು ಮಾಡುತ್ತಿದ್ದರು.

**ಕೈದಿಗಳಿಗೆ ಗಾಂಜಾ ಸರಬರಾಜು ಮಾಡಲು ಯತ್ನಿಸಿದ ಇಬ್ಬರ ಬಂಧನ:** ಕೇಂದ್ರ ಕಾರಾಗೃಹದ ಕೈದಿಗಳಿಗೆ ಗಾಂಜಾ ಮತ್ತು ಮೊಬೈಲ್ ಸರಬರಾಜು ಮಾಡಲು ಯತ್ನಿಸುತ್ತಿದ್ದ ಇಬ್ಬರು ಆರೋಪಿಗಳನ್ನು ಜೈಲಿನ ಭದ್ರತಾ ಸಿಬ್ಬಂದಿ ಬಂಧಿಸಿದ್ದಾರೆ. ಆರೋಪಿಯಿಂದ ಪ್ಲಾಸ್ಟಿಕ್ ಚೀಲಗಳಲ್ಲಿ ತುಂಬಿದ್ದ ಗಾಂಜಾ, ಕೀಪ್ಯಾಡ್ ಮೊಬೈಲ್ ಫೋನ್ ಮತ್ತು ಎರಡು ಮೊಬೈಲ್ ಚಾರ್ಜ್ ಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಇಬ್ಬರನ್ನು ವಶಕ್ಕೆ ಪಡೆದ ನಂತರ ಜೈಲಿನ ಭದ್ರತಾ ಸಿಬ್ಬಂದಿ ತುಂಗಾನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

ಆರೋಪಿಗಳು ಚೀಲಗಳಲ್ಲಿ ಗಾಂಜಾ ಇರಿಸಿ ಕಾರಾಗೃಹದ ಆವರಣದ ಒಳಗೆ ಎಸೆಯುತ್ತಿದ್ದ ದೃಶ್ಯ ಜೈಲಿನ ಸಿಸಿಟಿವಿ ಕ್ಯಾಮರಾದಲ್ಲಿ ಸೆರೆಯಾಗಿದೆ. ಈ ದೃಶ್ಯಾವಳಿಗಳನ್ನು ಕಂಡ ಪೊಲೀಸರು ಬಂಧಿಸಲು ಹೋದಾಗ ಆರೋಪಿಗಳು ಪರಾರಿಯಾಗಲು ಯತ್ನಿಸಿದ್ದಾರೆ. ಸುಮಾರು 2 ಕಿ.ಮೀ ವರೆಗೆ ಬೆನ್ನಟ್ಟಿದ ಪೊಲೀಸರು ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

**ಮಾಜಿ ರೌಡಿಶೀಟರ್ ಕೊಲೆ:** ಮಾಜಿ ರೌಡಿಶೀಟರ್ ನನ್ನು ಬರ್ಬರವಾಗಿ ಕೊಲೆ ಮಾಡಲಾಗಿದೆ. ತುಮಕೂರು ಜಿಲ್ಲೆಯ ಕುಣಿಗಲ್ ತಾಲೂಕಿನ ಹುಲಿಯೂರುದುರ್ಗ ಬಳಿ ಘಟನೆ ನಡೆದಿದ್ದು, ಸುರೇಶ್ ಅಲಿಯಾಸ್ ಕ್ಯಾಪ್ಟನ್ ಕೊಲೆಯಾದ ದುರ್ದೈವಿ. ಬೆಂಗಳೂರಿನ ಹನುಮಂತಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ರೌಡಿಶೀಟರ್ ಆಗಿದ್ದ, ಸುರೇಶ್ ಕಳೆದ ನಾಲ್ಕೈದು ತಿಂಗಳ ಹಿಂದೆ ಜೈಲಿನಿಂದ ಬಿಡುಗಡೆಯಾಗಿದ್ದ. ನಿನ್ನೆ ಹುಲಿಯೂರುದುರ್ಗ ಬಳಿ ತೆರಳಿದಾಗ ದುಷ್ಕರ್ಮಿಗಳು ಕೊಲೆ ಮಾಡಿದ್ದಾರೆ.

**ಗಾಂಜಾ ಮಾರುತ್ತಿದ್ದ ಆರೋಪಿ ಬಂಧನ:** ಗಾಂಜಾ ಮಾರಾಟ ಮಾಡುತ್ತಿದ್ದ ಆರೋಪಿಯನ್ನ ಬಂಧಿಸಲಾಗಿದೆ. ಆರೋಪಿ ಪೃಥ್ವಿಯನ್ನ ಬೆಂಗಳೂರು ಹೊರ ವಲಯ ಆನೇಕಲ್ ನಲ್ಲಿ ಬಂಧಿಸಲಾಗಿದೆ. ಬಂಧಿತನಿಂದ 550 ಗ್ರಾಂ ಗಾಂಜಾವನ್ನ ವಶಕ್ಕೆ ಪಡೆಯಲಾಗಿದೆ. ಆನೇಕಲ್ ತಾಲ್ಲೂಕಿನ ಹಾಲ್ದೇನಹಳ್ಳಿ ನಿವಾಸಿಯಾಗಿರೋ ಆರೋಪಿ, ನಿನ್ನೆ ಕರ್ಪೂರು ಗೇಟ್ ಬಳಿಯ ರೈಲ್ವೆ ಬ್ರಿಡ್ಜ್ ಬಳಿ ಕಾಲೇಜು ವಿದ್ಯಾರ್ಥಿಗಳಿಗೆ ಗಾಂಜಾ ಮಾರಾಟ ಮಾಡ್ತಿದ್ದಾಗ ಪೊಲೀಸರು ಲಾಕ್ ಮಾಡಿದ್ದಾರೆ.

# ರೆಸಾರ್ಟ್‌ಗಳಲ್ಲಿ ವಿದೇಶಿಗರ ದೇಶಿ ಹಾಡು



**ಕೊಪ್ಪಳ:** ಹಂಪಿ ಸೇರಿದಂತೆ ಅಂಜನಾದ್ರಿ, ಪಂಪಾ ಸರೋವರವನ್ನು ನೋಡಲು ರಾಜ್ಯ, ಹೊರ ರಾಜ್ಯದಿಂದ ಮಾತ್ರವಲ್ಲದೆ, ವಿದೇಶದಿಂದ ಕೂಡ ಸಾವಿರಾರು ಪ್ರವಾಸಿಗರು ಇಲ್ಲಿಗೆ ಬರುತ್ತಾರೆ. ಅತಿ ಹೆಚ್ಚು ವಿದೇಶಿಗರು ರಾಜ್ಯಕ್ಕೆ ಬರುವುದು, ಕೊಪ್ಪಳ ಜಿಲ್ಲೆಗೆ ಎಂಬವುದು ವಿಶೇಷ. ವಿದೇಶಿ ಪ್ರವಾಸಿಗರು ಹೊಸ ವರ್ಷವನ್ನು ಕೊಪ್ಪಳ ಜಿಲ್ಲೆಯಲ್ಲೇ ಆಚರಿಸಲು ಮುಂದಾಗಿದ್ದು, ಹೊಸ ವರ್ಷ ಸಂಭ್ರಮಾಚರಣೆಯ ತಯಾರಿ ಜೋರಾಗಿ ನಡೆದಿದೆ. ವಿದೇಶದಿಂದ ಪ್ರವಾಸಿಗರು ಬರುವುದರಿಂದ ಕೊರೊನಾ ಸೂಚನೆಗಳನ್ನು ಕೂಡಾ ಕಟ್ಟುನಿಟ್ಟಾಗಿ ಪಾಲಿಸಲು ರೆಸಾರ್ಟ್, ಹೋಟೇಲ್ ಮಾಲಿಕರು ಮುಂದಾಗಿದ್ದಾರೆ.

**ಪ್ರವಾಸಿಗರನ್ನು ಕೈಬಿಸಿ ಕರೆಯುತ್ತಿವೆ ರೆಸಾರ್ಟ್ ಗಳು:** ಕೊಪ್ಪಳ ಜಿಲ್ಲೆಯ ಬಸ್ಸಾಪುರ, ಸಾಣಾಪುರ ಸೇರಿದಂತೆ ಸುತ್ತಮುತ್ತಲಿನ ಏರಿಯಾದಲ್ಲಿ ಅನೇರ ರೆಸಾರ್ಟ್ ಗಳಿವೆ. ಇಲ್ಲಿನ ರೆಸಾರ್ಟ್ ಗಳಿಗೆ ಹೆಚ್ಚಾಗಿ ಬರುವದು ವಿದೇಶಿಗರು. ಹೌದು ರಾಜ್ಯದಲ್ಲಿ ಅತಿ ಹೆಚ್ಚು ವಿದೇಶಿಗರು ಬರುವುದು, ಕೊಪ್ಪಳ ಮತ್ತು ವಿಜಯನಗರ ಜಿಲ್ಲೆಗಳಿಗೆ. ವಿಶ್ವಪಾರಂಪರಿಕ ಸ್ಥಳ ಹಂಪಿ ಮತ್ತು ಹನುಮ ಹುಟ್ಟಿದ ಸ್ಥಳ ಅಂಜನಾದ್ರಿ ಸೇರಿದಂತೆ ಸುತ್ತಮುತ್ತಲು ಅನೇಕ ಪ್ರವಾಸಿ ಸ್ಥಳಗಳು ವಿದೇಶಿಗರನ್ನು ಕೈ ಬೀಸಿ ಕರೆಯುತ್ತವೆ. ಇಲ್ಲಿನ ಪ್ರಕೃತಿ ಸೌಂದರ್ಯ, ಕಲ್ಲಿನ ಬೆಟ್ಟಗಳನ್ನು ನೋಡಲು ಫ್ರಾನ್ಸ್, ಬ್ರೆಜಿಲ್, ಅಮೆರಿಕಾ, ಇಂಗ್ಲೆಂಡ್ ಸೇರಿದಂತೆ ಅನೇಕ ದೇಶಗಳಿಂದ ಪ್ರತಿನಿತ್ಯ ಸಾವಿರಾರು ಪ್ರವಾಸಿಗರು ಬರುತ್ತಾರೆ. ಇನ್ನು ಹೊಸ ವರ್ಷದ ಸಮಯದಲ್ಲಿ ಕೂಡಾ ಅನೇಕ ಪ್ರವಾಸಿಗರು ಇಲ್ಲೇ ಇರುವುದರಿಂದ, ಸ್ಥಳೀಯವಾಗಿ ಇದ್ದುಕೊಂಡೇ ಹೊಸ ವರ್ಷವನ್ನು ಆಚರಿಸಲಿದ್ದಾರೆ.

ದೇಶದ ವಿವಿಧ ರಾಜ್ಯಗಳಿಂದ ಕೂಡಾ ಸಾವಿರಾರು ಪ್ರವಾಸಿಗರು, ಹೊಸ ವರ್ಷವನ್ನು ಆಚರಿಸಲು ಮತ್ತು ಐತಿಹಾಸಿಕ ಸ್ಥಳಗಳನ್ನು ನೋಡಲು ಬರುತ್ತಿರುವುದರಿಂದ, ರೆಸಾರ್ಟ್ ಗಳು ಈಗಾಗಲೇ ಫುಲ್ ಆಗಿವೆ. ಹೌದು ಕೊಪ್ಪಳ ತಾಲೂಕು, ಗಂಗಾವತಿ ತಾಲೂಕಿನಲ್ಲಿ ಹೆಚ್ಚಿನ ರೆಸಾರ್ಟ್ ಗಳಿದ್ದು, ಹೊಸ ವರ್ಷವನ್ನು ಆಚರಿಸಲು ಅನೇಕರು ಈಗಾಗಲೇ ರೂಮ್ ಬುಕ್ ಮಾಡಿದ್ದಾರೆ.

ಇನ್ನು ರೆಸಾರ್ಟ್ ಗಳಲ್ಲಿ ಮದ್ಯ ಮಾರಾಟಕ್ಕೆ ಯಾವುದೇ ಅವಕಾಶ ಇರುವುದಿಲ್ಲ. ಆದರೆ ದೇಶಿಯ ಆಹಾರ, ದೇಶಿಯ ನೃತ್ಯ, ಮತ್ತು ಸ್ಥಳೀಯ ವಾದ್ಯಗಳನ್ನು ಬಳಸಿಕೊಂಡು, ಪ್ರವಾಸಿಗರಿಗೆ ಸಾಂಸ್ಕೃತಿಕ ಚಟುವಟಿಕೆಗಳನ್ನು ನಡೆಸಲು ಮಾತ್ರ ಅವಕಾಶವಿದೆ. ಇರುವ ಅವಕಾಶದಲ್ಲಿಯೇ ವಿದೇಶಗರಿಗೆ ಮನರಂಜನೆ ಮೂಲಕ, ಹೊಸ ವರ್ಷವನ್ನು ಅದ್ದೂರಿಯಾಗಿ ಸ್ವಾಗತಿಸಲು ರೆಸಾರ್ಟ್ ಗಳಲ್ಲಿ ಸಿದ್ದತೆ ಆರಂಭವಾಗಿದೆ. ಸ್ಥಳೀಯ ಕಲಾವಿದರು ಹುಟ್ಟಿದರೇ ಕನ್ನಡ ನಾಡಿನಲ್ಲಿ ಹುಟ್ಟಬೇಕು ಸೇರಿದಂತೆ ಅನೇಕ ಕನ್ನಡ ಹಾಡುಗಳನ್ನು ಹಾಡಲು ಸಿದ್ದತೆ ಮಾಡಿಕೊಂಡಿದ್ದಾರೆ.

ದೇಶದಲ್ಲಿ ಮತ್ತೆ ಕೊರೊನಾ ಜೆಎನ್ 1 ತಳಿಯ ಉಪಟಳ ಆರಂಭವಾಗಿರುವುದರಿಂದ, ಮಾಲೀಕರು, ಕೊರೊನಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಮುಂದಾಗಿದ್ದಾರೆ. ವಿದೇಶಿಯರು ಬರುತ್ತಿರುವುದರಿಂದ ಕೊರೊನಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುತ್ತಿದ್ದೇವೆ. ಕೇವಲ ಹಾಡು ನೃತ್ಯದ ಮೂಲಕ ಹೊಸ ವರ್ಷದ ಸಂಭ್ರಮಾಚರಣೆಗೆ ಸಿದ್ದತೆ ಮಾಡಿಕೊಂಡಿದ್ದೇವೆ ಎಂದು ರೆಸಾರ್ಟ್ ಮಾಲೀಕ ದೀಪಕ್ ಹೇಳಿದ್ದಾರೆ.

# ಮೂಲ ಸಂಸ್ಕೃತಿ ಉಳಿಸುವಲ್ಲಿ ಗಿರಿಜನರ ಪಾತ್ರ ಮಹತ್ವದ್ದು

**ಮೈಸೂರು:** ಹಿಂದಿನಿಂದಲೂ ತಮ್ಮ ಕಲೆ, ಆಚರಣೆಯನ್ನು ಉಳಿಸಿಕೊಂಡು ಬಂದಿರುವರ ಗಿರಿಜನರು ಮೂಲ ಸಂಸ್ಕೃತಿಯನ್ನು ಇಂದಿಗೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕರಾದ ವಿ.ಎನ್ ಮಲ್ಲಿಕಾರ್ಜುನಸ್ವಾಮಿ ಅವರು ತಿಳಿಸಿದರು.

ನಗರ ಕರ್ನಾಟಕ ಕಲಾ ಮಂದಿರ ಅವರದಲ್ಲಿನ ಕಿರುರಂಗಮಂದಿರದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಗಿರಿಜನ ಉಪಯೋಜನೆಯಡಿ ಹಮ್ಮಿಕೊಂಡಿದ್ದ, ಗಿರಿಜನ ಉತ್ಸವ-2023 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ಸಾಂಸ್ಕೃತಿಕ ಕಲೆಗಳನ್ನು, ಮೂಲ ಸಂಸ್ಕೃತಿಯನ್ನು ನಾವು ಕಾಪಾಡಿಕೊಂಡು ಹೋಗಬೇಕು. ಕರ್ನಾಟಕದ ವಿವಿಧ ಭಾಗಗಳಲ್ಲಿ ವಿವಿಧ ರೀತಿಯ ಸಂಸ್ಕೃತಿ ಆಚರಣೆಗಳು ಇದ್ದವು. ಅಂದಿನ ಕಲೆಗಳು ನಶಿಸಿ ಹೋಗಿದೆ. ಅದರಲ್ಲಿ ಅಪರೂಪವಾಗಿ ಕಂಡುಬರುವ ಕಲೆಗಳಲ್ಲಿ ಗಿರಿಜನರ ಕಲೆಗಳು ಅತ್ಯಂತ ಹಳೆಯ ಕಲೆಗಳಾಗಿವೆ ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ವಿವಿಧ ರೀತಿಯ ಕಾರ್ಯಕ್ರಮಗಳನ್ನು ಆಯೋಜಿಸುತ್ತಾ ಬಂದಿದೆ. ಇಲಾಖೆಯ ವತಿಯಿಂದ ಸಂಸ್ಕೃತಿಯನ್ನು ಸಾರುವ ವಿವಿಧ ಕಾರ್ಯಕ್ರಮಗಳನ್ನು ವರ್ಷವಿಡೀ ಆಯೋಜಿಸಿ ಜನರಿಗೆ ಸಂಸ್ಕೃತಿ, ಸಾಹಿತ್ಯ, ಪರಂಪರೆಯ ಬಗ್ಗೆ ಅರಿವು ಮೂಡಿಸಲಾಗುವುದು ಎಂದರು.




ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಕಳೆದ 60 ವರ್ಷಗಳಿಂದ ಈ ನಾಡಿನ ಕಲೆ, ಸಾಹಿತ್ಯ, ಸಂಸ್ಕೃತಿ, ಕನ್ನಡ ನಾಡು ನುಡಿಯನ್ನು ಸದಾ ಜಾಗೃತವಾಗಿಸುವ ಹಾಗೂ ಎಲ್ಲಾ ಕಲೆಗಳನ್ನು ಸಂರಕ್ಷಿಸುವ, ಪ್ರೋತ್ಸಾಹಿಸಿ ಬೆಳೆಸುವ ದಿಕ್ಕಿನಲ್ಲಿ ಅನೇಕ ಕಾರ್ಯಕ್ರಮಗಳನ್ನು ರೂಪಿಸುತ್ತಾ ಬಂದಿದೆ. ಮೈಸೂರು ದಸರಾ, ಹಂಪಿ ಉತ್ಸವ, ಚಾಲುಕ್ಯ ಉತ್ಸವ, ಲಕ್ಕುಂಡಿ ಉತ್ಸವ, ನವರಸಪುರ ಉತ್ಸವ, ಆನೆಗುಂದಿ ಉತ್ಸವ, ಬನವಾಸಿ ಉತ್ಸವ ಹಾಗೂ ವಿವಿಧ ಜಲೋತ್ಸವ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದರು.

ಸಣ್ಣ ಸಣ್ಣ ಸಮುದಾಯಗಳಲ್ಲಿ ಇವರು ಮೂಲ ಕಲೆಯನ್ನು ಗುರುತಿಸಿ, ನಾಶವಾಗದಂತೆ ಅವುಗಳನ್ನು ಸಮಾಜದ ಮುಖ್ಯವಾಹಿನಿಗೆ ತರುವ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ, ಈ ನಿಟ್ಟಿನಲ್ಲಿ ಮೂಡಿ ಬಂದಿರುವ ಉತ್ಸವಗಳೇ ಜನಪರ, ಬುಡಕಟ್ಟು ಉತ್ಸವ ಹಾಗೂ ಗಿರಿಜನ ಉತ್ಸವಗಳಾಗಿವೆ. ಗಿರಿಜನರು ತಮ್ಮ ಮೂಲವಾಸದಿಂದಲೂ ಆಚರಿಸಿಕೊಂಡು ಬಂದಿರುವ ವಿವಿಧ ಕಲಾಶೈಲಿಗಳನ್ನು ತಲೆಮಾರಿನಿಂದ ತಲೆಮಾರಿನವರೆಗೂ ಮುಂದುವರೆಸಿಕೊಂಡು ಬಂದಿದ್ದಾರೆ, ಆ ರೀತಿಯ ಕಲೆಗಳನ್ನು ಗುರುತಿಸಿ ಅವುಗಳಿಗೆ ಹೆಚ್ಚಿನ ಪ್ರೋತ್ಸಾಹವನ್ನು ನೀಡಿ ಮುಖ್ಯ ವಾಹಿನಿಗೆ ತರುವ ಕಾರ್ಯಕ್ರಮಗಳನ್ನು ಸರ್ಕಾರ ಮತ್ತು ಇಲಾಖೆಯಿಂದ ನಡೆಸಲಾಗುತ್ತಿದೆ ಎಂದರು.

ಕಾರ್ಯಕ್ರಮ ಆರಂಭಕ್ಕೂ ಮುನ್ನ ಜಾನಪದ ಕಲಾ ತಂಡಗಳಿಗೆ ಶಾಸಕರಾದ ಹರೀಶ್ ಗೌಡ ಅವರು ಚಾಲನೆಯನ್ನು ನೀಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಕರಾದ ಎಂ.ಡಿ ಸುದರ್ಶನ್ ಅವರು ಮಾತನಾಡಿ ಪ್ರಮುಖವಾಗಿ ಈ ಕಾರ್ಯಕ್ರಮವು ಗಿರಿಜನರ ಕಲೆಗಳ ಪ್ರದರ್ಶನಕ್ಕೆ ನಡೆಸಲಾದ ಕಾರ್ಯಕ್ರಮವಾಗಿದ್ದು ಸಂಪೂರ್ಣ ಕಲಾವಿದರು ಪರಿಶಿಷ್ಟ ಪಂಡಗಕ್ಕೆ ಸೇರಿದ ಕಲಾವಿದರು, ಹಾಗೂ ಈ ಕಾರ್ಯಕ್ರಮದಡಿ ಗಿರಿಜನರ ಕಲೆಗಳಿಗೆ ಹೆಚ್ಚಿನ ಪ್ರೋತ್ಸವವನ್ನು ನೀಡಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ದೊಡ್ಡ ಮಾರನಹಳ್ಳಿಯ ಡಿ.ಕೆ ಲೋಕೇಶ್ ಮತ್ತು ತಂಡದಿಂದ ಸುಗಮ ಸಂಗೀತ, ಎಚ್.ಡಿ.ಕೋಟೆಯ ಜವರ ನಾಯಕ ತಂಡದಿಂದ ಜಾನಪದ ಗೀತೆ, ರಾಜೇಶ್ವರಿ ಮತ್ತು ತಂಡದಿಂದ ಭಕ್ತಿ ಸಂಗೀತ, ನಂಜನಗೂಡು ಕಳಲೆ ಗ್ರಾಮದ ದೇವಣ್ಣ.ಪಿ ಮತ್ತು ತಂಡದಿಂದ ತತ್ವಪದ, ರಮ್ಯ ಮತ್ತು ತಂಡದವರಿಂದ ಡೊಳ್ಳು ಕುಣಿತ, ಎಚ್.ಡಿ.ಕೋಟೆಯ ಚಲ್ಲನ್ ಮತ್ತು ತಂಡದಿಂದ ಬೆಟ್ಟ ಕುರುಬ ಸಾಂಪ್ರದಾಯಿಕ ನೃತ್ಯ, ನಾಣಚ್ಚಿಗದ್ದೆ ಹಾಡಿಯ ರಮೇಶ್ ಮತ್ತು ತಂಡದಿಂದ ಅಡಲೇಮರ ನೃತ್ಯ, ತಲಕಾಡಿನ ರಾಜಶೇಖರ್ ಮತ್ತು ತಂಡದಿಂದ ಚಿಲಿಪಿಲಿ ಗೊಂಬೆ ನೃತ್ಯ, ನಂಜನಗೂಡು ಕಳಲೆ ಗ್ರಾಮದ ಪ್ರತಾಪ್.ಆರ್ ಮತ್ತು ತಂಡದಿಂದ ಕೊಂಬು ಕಹಳೆ, ಹೆಚ್.ಡಿ. ಕೋಟೆಯ ಪೆಂಜಳ್ಳಿ ಕಾಲೋನಿಯ ರಮೇಶ್ ಮತ್ತು ತಂಡದಿಂದ ಕರಡಿ ಕುಣಿತ, ಯಲ್ಲಾಪುರದ ಲಿಲ್ಲಿ ಮತ್ತು ತಂಡದ ವತಿಯಿಂದ ಡಮಾಮಿ ನೃತ್ಯವನ್ನು ಆಯೋಜಿಸಲಾಗಿತ್ತು.

# ಜ.22ಕ್ಕೆ ಆರೋಗ್ಯ ಶಿಬಿರ

**ಚಾಮರಾಜನಗರ:** ಕೊಳ್ಳೇಗಾಲ ಪಟ್ಟಣದಲ್ಲಿ ಜನವರಿ 22ರಂದು ಆಯೋಜನೆಯಾಗಿರುವ ಬೃಹತ್ ಆರೋಗ್ಯ ಶಿಬಿರಕ್ಕೆ ಅಗತ್ಯವಿರುವ ಎಲ್ಲಾ ಸಿದ್ದತಾ ಕಾರ್ಯಗಳನ್ನು ತ್ವರಿತವಾಗಿ ಆರಂಭಿಸುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಬೃಹತ್ ಆರೋಗ್ಯ ಶಿಬಿರ ಆಯೋಜನೆ ಸಂಬಂಧ ನಡೆದ ಅಧಿಕಾರಿಗಳ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೊಳ್ಳೇಗಾಲ ಪಟ್ಟಣದ ಎಂ.ಜಿ.ಎಸ್.ವಿ ಕಾಲೇಜು ಆವರಣದಲ್ಲಿ ಜನವರಿ 22ರಂದು ಬೃಹತ್ ಆರೋಗ್ಯ ಶಿಬಿರ ಏರ್ಪಡಾಗಿದೆ. ಜಿಲ್ಲೆಗೆ ಆರೋಗ್ಯ ಶಿಬಿರ ಆಯೋಜಿಸುವ ಅವಕಾಶ ದೊರೆತಿದ್ದು ಹೆಚ್ಚಿನ ಜನರಿಗೆ ಈ ಕಾರ್ಯಕ್ರಮ ತಲುಪಬೇಕಿದೆ. ಈ ನಿಟಿನಲ್ಲಿ ಪೂರ್ವ ಸಿದ್ದತೆಗಳೊಂದಿಗೆ ಎಲ್ಲಾ ಕಾರ್ಯಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿಯವರು ತಿಳಿಸಿದರು.

ಆರೋಗ್ಯ ತಪಾಸಣಾ ಶಿಬಿರಕ್ಕೆ ಜಿಲ್ಲೆಯ ಎಲ್ಲ ಕಡೆಯಿಂದ ಜನರು ಬರಬೇಕು. ಕಾಡಂಚಿನ, ಹಾಡಿಗಳು, ಪೋಡು, ಮತ್ತಿತ್ತರ ಪ್ರದೇಶಗಳಿಂದ ಬಂದು ಆರೋಗ್ಯ ಶಿಬಿರದ ಪ್ರಯೋಜನ ಪಡೆಯಬೇಕು. ಇದಕ್ಕಾಗಿ ಸೂಕ್ತ ವಾಹನಗಳ ವ್ಯವಸ್ಥೆ ಮಾಡಬೇಕಿದೆ. ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ವಿಶೇಷ ಮುತುವರ್ಜಿ ವಹಿಸಿ ಕರೆತರಬೇಕು ಎಂದರು.

ಆರೋಗ್ಯ ಶಿಬಿರಕ್ಕೆ ಬರುವವರು ನೊಂದಾಯಿಸಿಕೊಳ್ಳಲು ಆಯಾ ಗ್ರಾಮ ವ್ಯಾಪ್ತಿಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಸೇರಿದಂತೆ ಅನುಕೂಲ ಸ್ಥಳಗಳಲ್ಲಿ ವ್ಯವಸ್ಥೆ ಮಾಡಬೇಕು. ನೇರವಾಗಿಯು ಶಿಬಿರಕ್ಕೆ ಬಂದು ನೊಂದಾಯಿಸಲು ಸಹ ಅನುಕೂಲ ಮಾಡಿಕೊಡಬೇಕು. ಆಯಾ ತಾಲೂಕು ಆರೋಗ್ಯ ಅಧಿಕಾರಿಗಳು ಈ ಬಗ್ಗೆ ಜವಾಬ್ದಾರಿ ವಹಿಸಬೇಕಿದೆ. ಎಲ್ಲ ವರ್ಗದ ಜನರು ಆರೋಗ್ಯ ಶಿಬಿರದಲ್ಲಿ ಭಾಗವಹಿಸಲು ವ್ಯವಸ್ಥೆಗಳನ್ನು ಯಾವುದೇ ಕೊರತೆಯಾಗದಂತೆ ಕಲ್ಪಿಸಬೇಕು ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಆರೋಗ್ಯ ತಪಾಸಣೆ, ಚಿಕಿತ್ಸೆ, ಸಲಹೆ, ಔಷಧ ವಿತರಣೆಗೆ ಹೆಚ್ಚು ಕೌಂಟರ್‌ಗಳನ್ನು ಶಿಬಿರದಲ್ಲಿ ತೆರೆಯಬೇಕು. ತಜ್ಞರ ನಿಯೋಜನೆ, ವಿದ್ಯುತ್ ಪೂರೈಕೆ, ತಾಂತ್ರಿಕ ಉಪಕರಣಗಳ ಅಳವಡಿಕೆ, ಕಂಪ್ಯೂಟರ್, ಇನ್ನಿತರ ಅಗತ್ಯ ಪರಿಕರಗಳನ್ನು ಸಿದ್ದವಾಗಿಟ್ಟುಕೊಳ್ಳಬೇಕು. ಶಿಬಿರದಲ್ಲಿಯೇ ಎ.ಬಿ.ಆರ್.ಕೆ ಕಾರ್ಡ್‌ಗಳನ್ನು ನೀಡುವ ವ್ಯವಸ್ಥೆಯು ಇರಬೇಕು. ಜನರ ಮಾಹಿತಿಗೆ ಸೂಚನ ಫಲಕಗಳು ಅಳವಡಿಕೆಯಾಗಬೇಕು ಎಂದರು.

ಆರೋಗ್ಯ ಶಿಬಿರದಲ್ಲಿ ಊಟ, ಉಪಹಾರ, ಕುಡಿಯುವ ನೀರು, ವಾಹನಗಳ ನಿಲುಗಡೆಗೆ ಅವಕಾಶ ಕಲ್ಪಿಸಬೇಕು. ದೊಡ್ಡ ಪ್ರಮಾಣದಲ್ಲಿ ಶಿಬಿರ ಆಯೋಜನೆಯಾಗುತ್ತಿರುವುದರಿಂದ ಪರಿಪೂರ್ಣವಾಗಿ ವ್ಯವಸ್ಥೆಗಳು ಇರಬೇಕು. ಬೃಹತ್ ಆರೋಗ್ಯ ಶಿಬಿರ ಯಶಸ್ವಿಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಚಿದಂಬರ, ಜಿಲ್ಲಾ ಸರ್ಜನ್ ಡಾ. ಕೃಷ್ಣಪ್ರಸಾದ್, ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷರಾದ ಚಂದ್ರಶೇಖರ್, ತಹಶೀಲ್ದಾರರು, ತಾಲೂಕು ಆರೋಗ್ಯ ಅಧಿಕಾರಿಗಳು, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕಾಧಿಕಾರಿಗಳು, ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.



## ಮೈಸೂರಿನಲ್ಲಿ ಏಕಲವ್ಯ ಮಾದರಿ ವಸತಿ ಶಾಲೆಗಳ

# ರಾಷ್ಟ್ರೀಯ ಕ್ರೀಡಾಕೂಟ

**ಮೈಸೂರು:** ಏಕಲವ್ಯ ಮಾದರಿ ವಸತಿ ಶಾಲೆಗಳ ರಾಷ್ಟ್ರೀಯ ಕ್ರೀಡಾಕೂಟವನ್ನು ಮೈಸೂರಿನಲ್ಲಿ ಜನವರಿ 8 ರಿಂದ 12 ರವರೆಗೆ ಆಯೋಜಿಸಲಾಗುವುದು ಎಂದು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕ್ರೀಡಾ ಹಾಗೂ ಯುವಸಬಲೀಕರಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ಡಾ. ಮಂಜುನಾಥ್ ಪ್ರಸಾದ್ ಅವರು ತಿಳಿಸಿದರು.

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜನವರಿ 7 ರಂದು ಮಾನ್ಯ ಕೇಂದ್ರ ಸಚಿವರಾದ ಅರ್ಜುನ್ ಮುಂಡಾ ಸೇರಿದಂತೆ ರಾಜ್ಯದ ವಿವಿಧ ಸಚಿವರು, ಗಣ್ಯ ವ್ಯಕ್ತಿಗಳು ಕ್ರೀಡಾಕೂಟವನ್ನು ಉದ್ಘಾಟಿಸಲಿದ್ದಾರೆ. ದೇಶದ ವಿವಿಧ ರಾಜ್ಯಗಳಿಂದ 4,500 ಕ್ರೀಡಾಪಟುಗಳು, 1500 ಶಾಲಾ ಶಿಕ್ಷಕರು ಸಿಬ್ಬಂದಿಗಳು ಸೇರಿದಂತೆ ಸುಮಾರು 6,000 ಜನ ಕ್ರೀಡಾಕೂಟದಲ್ಲಿ ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಏಕಲವ್ಯ ಮಾದರಿ ವಸತಿ ಶಾಲೆಯು ಕೇಂದ್ರ ಸರ್ಕಾರ ನಡೆಸುತ್ತಿರುವ ಶಾಲೆಗಳಾಗಿದ್ದು, 20 ಕೋಟಿ ವೆಚ್ಚ ಅನುದಾನದಲ್ಲಿ ಸದರಿ ಕಾರ್ಯಕ್ರಮವನ್ನು ಮೈಸೂರಿನಲ್ಲಿ ಈ ಬಾರಿ ಆಯೋಜಿಸಲಾಗುತ್ತಿದ್ದು, ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಸೂಚಿಸಿದರು.

ಅಂದಾಜು 5 ಕ್ರೀಡಾಂಗಣಗಳಲ್ಲಿ, ಏಕಕಾಲದಲ್ಲಿ ಕ್ರೀಡಾಸ್ಪರ್ಧೆಗಳು ಜರುಗಲಿದ್ದು, ಕ್ರೀಡಾಪಟುಗಳ ಸಂಚಾರಕ್ಕೆ ವಾಹನಗಳನ್ನು ಒದಗಿಸುವ ಕುರಿತು, ಕ್ರೀಡಾಂಗಣಗಳ ಸ್ವಚ್ಛತೆ, ಊಟದ ವ್ಯವಸ್ಥೆ, ಶೌಚಾಲಯದ ವ್ಯವಸ್ಥೆ, ವೈದ್ಯಕೀಯ ವ್ಯವಸ್ಥೆ, ಆಂಬುಲೆನ್ಸ್ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ, ಪೊಲೀಸ್ ಬಂದೋಬಸ್ತ್ ಸೇರಿದಂತೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳಿಗೆ ಮಾರ್ಗದರ್ಶನ ನೀಡಿದರು.

ಮೈಸೂರಿಗೆ ಅರಮನೆಗೆ ಆಗಮಿಸುವ ಕ್ರೀಡಾಪಟುಗಳಿಗೆ ಮೈಸೂರಿನ ಸಂಸ್ಕೃತಿ ಪರಂಪರೆಯನ್ನು ಪರಿಚಯಿಸುವ ವ್ಯವಸ್ಥೆ ಆಗಬೇಕು. ದೀಪಾಲಂಕಾರ ಹಾಗೂ ಚಾಮುಂಡಿ ಬೆಟ್ಟ ವೀಕ್ಷಣೆಗೆ ವ್ಯವಸ್ಥೆ ಮಾಡುವಂತೆ ಸೂಚಿಸಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪನಿರ್ದೇಶಕರಾದ ಡಾ. ಜಿತೇಂದ್ರ ಶೆಟ್ಟಿ ಅವರು ಮಾತನಾಡಿ ಕ್ರೀಡಾಕೂಟದಲ್ಲಿ 10 ಗುಂಪು ಕ್ರೀಡಾಸ್ಪರ್ಧೆಗಳನ್ನು ಹಾಗೂ 18 ಅಥ್ಲೆಟಿಕ್ಸ್ ಸ್ಪರ್ಧೆಗಳನ್ನು ಆಯೋಜಿಸಲಾಗುವುದು. ಕ್ರೀಡೆ ನಡೆಯುವ ಸ್ಥಳ, ಸಮಯ, ಕೆಲಸಗಳಿಗೆ ನಿಯೋಜಿಸಲ್ಪಟ್ಟ ನೋಡಲ್ ಅಧಿಕಾರಿಗಳ ವಿವರ ಎಲ್ಲವನ್ನು ಮುಂಚಿತವಾಗಿಯೇ ತಲುಪಿಸುವ ವ್ಯವಸ್ಥೆ ಆಗುತ್ತದೆ. ಈಗಾಗಲೇ 3500 ಕ್ರೀಡಾಪಟುಗಳಿಗೆ ಇನ್ಸೂರೆನ್ಸ್ ಮಾಡಿಸಲಾಗಿದೆ. ಕ್ರೀಡಾಕೂಟದಲ್ಲಿ ಕೋವಿಡ್ ಸೂಚನೆಗಳನ್ನು ಪಾಲಿಸಲಾಗುವುದು. ಪ್ರತಿಯೊಂದು ರಾಜ್ಯಕ್ಕೂ ನೋಡಲ್ ಅಧಿಕಾರಿಗಳನ್ನು ನಿಯೋಜಿಸಲಾಗುವುದು ಎಂದು ಮಾಹಿತಿ ನೀಡಿದರು.

ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಕೆ ಎಂ ಗಾಯತ್ರಿ, ಪರಿಶಿಷ್ಟ ವರ್ಗಗಳ ಇಲಾಖೆಯ ನಿರ್ದೇಶಕರಾದ ಕಲ್ಲೇಶ್, ಅಪರ ಜಿಲ್ಲಾಧಿಕಾರಿಗಳಾದ ಆರ್ ಲೋಕನಾಥ್, ಉಪ ಪೊಲೀಸ್ ಆಯುಕ್ತರಾದ ಜಹ್ನಾವಿ, ಮೈಸೂರು ಮಹಾನಗರ ಪಾಲಿಕೆ ಆಯುಕ್ತರಾದ ಆಶಾದ್ ಉರ್ ರೆಹ್ಮಾನ್ ಶರೀಫ್, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ರಂಗೇಗೌಡ, ಯೋಜನಾ ನಿರ್ದೇಶಕರಾದ ಮುನಿರಾಜು ಹಾಗೂ ವಾರ್ತಾ ಹಾಗೂ ಸಾರ್ವಜನಿಕ ಸಂಪರ್ಕ ಇಲಾಖೆಯ ಉಪನಿರ್ದೇಶಕರಾದ ಅಶೋಕ್ ಕುಮಾರ್. ಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.



## ಪ್ರಧಾನ ಮಂತ್ರಿಗಳ ವಿಡಿಯೋ ಸಂವಾದ

**ಜನವರಿ 15 ರಂದು ನೈಜ ದುರ್ಬಲ ಬುಡಕಟ್ಟು ಜನಾಂಗದವರ ಜೊತೆ ಪ್ರಧಾನಮಂತ್ರಿಗಳ ವಿಡಿಯೋ ಸಂವಾದ ಕಾರ್ಯಕ್ರಮ ಮೈಸೂರಿನಲ್ಲಿ ನಡೆಯಲಿದ್ದು, ವೀಡಿಯೋ ಸಂವಾದ ಕಾರ್ಯಕ್ರಮದಲ್ಲಿ ಮಾನ್ಯ ಪ್ರಧಾನ ಮಂತ್ರಿಗಳು ನೈಜ ದುರ್ಬಲ ಬುಡಕಟ್ಟು ಜನಾಂಗದ (ಜೇನು ಕುರುಬ ಮತ್ತು ಕೊರಗ) ಜನರ ಜೊತೆ ನೇರ ಸಂಭಾಷಣೆ ನಡೆಸುವರು ಎಂದು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ಡಾ. ಮಂಜುನಾಥ್ ಪ್ರಸಾದ್ ಅವರು ತಿಳಿಸಿದರು. ದೇಶದಲ್ಲಿ ನೈಜ ದುರ್ಬಲ ಬುಡಕಟ್ಟು ಜನಾಂಗದ ಸಂಖ್ಯೆ 20 ಲಕ್ಷವಿದ್ದು, ರಾಜ್ಯದಲ್ಲಿ 70 ಸಾವಿರ ಜನಸಂಖ್ಯೆ ಇದೆ. ಆದಿವಾಸಿ ದುರ್ಬಲ ಬುಡಕಟ್ಟು ಜನಾಂಗದ ಅಭಿವೃದ್ಧಿ ಯೋಜನೆ ಅಡಿ 24 ಸಾವಿರ ಕೋಟಿ ರೂ ಅನುದಾನವನ್ನು ಕೇಂದ್ರ ಸರ್ಕಾರ ಬಿಡುಗಡೆ ಮಾಡಲಿದ್ದು, ಸದರಿ ಯೋಜನೆಯು ಆದಿವಾಸಿಗಳ ಮನೆ ನಿರ್ಮಾಣ, ರಸ್ತೆ ನಿರ್ಮಾಣ, ಕುಡಿಯುವ ನೀರು, ವಿದ್ಯುತ್ ವ್ಯವಸ್ಥೆ, ಶಾಲೆ, ವಿದ್ಯಾರ್ಥಿ ನಿಲಯ, ಆಸ್ಪತ್ರೆ ನಿರ್ಮಾಣ, ಅಂಗನವಾಡಿ ನಿರ್ಮಾಣ, ಸಮುದಾಯ ಭವನ ನಿರ್ಮಾಣ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸುವುದಾಗಿದೆ ಎಂದರು. ಈ ಕುರಿತು ಮಾನ್ಯ ಪ್ರಧಾನ ಮಂತ್ರಿಗಳು ನಡೆಸಲಿರುವ ವಿಡಿಯೋ ಸಂವಾದ ಕಾರ್ಯಕ್ರಮದಲ್ಲಿ 50 ರಿಂದ 75 ಆದಿವಾಸಿ ಜನರು ಭಾಗವಹಿಸಲಿದ್ದು, ಸಕಲ ಸಿದ್ಧತೆಗಳನ್ನು ಮಾಡುವಂತೆ ಸಂಬಂಧಿತ ಅಧಿಕಾರಿಗಳಿಗೆ ಸೂಚಿಸಿದರು.**

# ಕುವೆಂಪು ಜನ್ಮದಿನೋತ್ಸವ ಸಂಭ್ರಮಾಚರಣೆ

**ಮೈಸೂರು:** ವಿಶ್ವ ಮಾನವ ಕುವೆಂಪು ಲಯನ್ಸ್ ಸಂಸ್ಥೆಯ ವತಿಯಿಂದ ವಿದ್ಯಾವರ್ಧಕ ಸಂಸ್ಥೆಯ ಜಂಟಿ ಆಶ್ರಯದಲ್ಲಿ ರಾಷ್ಟ್ರ ಕವಿ ಕುವೆಂಪು ಜನ್ಮದಿನೊತ್ಸವ ಸಂಭ್ರಮಾಚರಣೆಯನ್ನು ಅತ್ಯಂತ ಯಶಸ್ವಿಯಾಗಿ ಆಚರಿಸಲಾಯಿತು.

ಈ ಕಾರ್ಯಕ್ರಮವು ಜ್ಯೋತಿ ಬೆಳಗುವುದರೊಂದಿಗೆ ಆರಂಭವಾಗಿ, ಪ್ರಾಸ್ತಾವಿಕ ಭಾಷಣವನ್ನು ಪ್ರಾಂಶುಪಾಲರಾದ ಶಿವಲಿಂಗೇಗೌಡರು ನಡೆಸಿದರು. ಬಳಿಕ ಶ್ರೀಶೈಲ ರಾಮ್ಮನವರ್ ಮತ್ತು ಡಾ. ಕಾಳಚನ್ನೇ ಗೌಡರು ವೇದಿಕೆಯನ್ನು ಉದ್ದೇಶಿಸಿ ಮಾತನಾಡಿದರು.

ವಿಶ್ವಮಾನವ ಕುವೆಂಪು ಲಯನ್ಸ್ ಸಂಸ್ಥೆ (ಮೈಸೂರು) ವತಿಯಿಂದ ಮುಖ್ಯ ಭಾಷಣಕಾರರಾಗಿ ಆಗಮಿಸಿದ್ದ ಡಾ. ಜಿ. ಪಾಂಡುರಂಗ ಮೂರ್ತಿಯವರು, ರಾಷ್ಟ್ರ ಕವಿ ಕುವೆಂಪು ರವರ ಕನ್ನಡ ಸಾಹಿತ್ಯ ದಲ್ಲಿ ವೈಜ್ಞಾನಿಕ ದೃಷ್ಟಿಕೋನ ಮತ್ತು ವಿಶ್ವಮಾನವ ಸಂದೇಶದ ಕುರಿತಾಗಿ ಸಮಗ್ರ ಪ್ರವಚನವನ್ನು ನಡೆಸಿಕೊಟ್ಟರು.

ತಮ್ಮ ವಿಶಿಷ್ಟ ಪ್ರಾಸ ಶೈಲಿಯಲ್ಲಿ ಕುವೆಂಪುರವರ ಬಾಲ್ಯ, ಶಿಕ್ಷಣ, ವೃತ್ತಿ ಜೀವನ, ಸಾಹಿತ್ಯ ಕೃಷಿ, ಮಹಾಕಾವ್ಯ ರಚನೆ, ನಾಟಕ ಸೇರಿದಂತೆ ಅವರ ಒಟ್ಟು ಕೊಡುಗೆಗಳು ಮತ್ತು ಪ್ರಶಸ್ತಿಗಳೂ ಸೇರಿದಂತೆ ಕುವೆಂಪುರವರ ಸಾಹಿತ್ಯದ ವೈಜ್ಞಾನಿಕ ದೃಷ್ಟಿಕೋನವನ್ನು ಹಾಗು ವಿಶ್ವ ಮಾನವ ಸಂದೇಶದೊಂದಿಗೆ ಮಂಡಿಸಿ ವಿದ್ಯಾರ್ಥಿಗಳನ್ನು ರಂಜಿಸಿದರು. ಅಂತಿಮವಾಗಿ, ನಾಡಗೀತೆಯೊಂದಿಗೆ ತಮ್ಮ ಪ್ರವಚನವನ್ನು ಪರಿಪೂರ್ಣಗೊಳಿಸಿದರು.

ಈ ಸುಸಂದರ್ಭದಲ್ಲಿ ರಾಷ್ಟ್ರ ಕವಿ ಕುವೆಂಪುರವರ ಕನ್ನಡ ಸಾಹಿತ್ಯ ದಲ್ಲಿ ವೈಜ್ಞಾನಿಕ ದೃಷ್ಟಿಕೋನ ಮತ್ತು ವಿಶ್ವಮಾನವ ಸಂದೇಶ ದ ಕುರಿತಾಗಿ ವಿಶಿಷ್ಟ ಪ್ರವಚನವನ್ನು ನೀಡಿದ ಲಯನ್ಸ್ ಸಂಸ್ಥೆಯ ನಿರ್ದೇಶಕರಾದ ಲಯನ್. ಡಾ. ಜಿ. ಪಾಂಡುರಂಗ ಮೂರ್ತಿ ಯವರನ್ನು ಗಣ್ಯರು ಸನ್ಮಾನಿಸಿದರು.

ವಿಶ್ವ ಮಾನವ ಕುವೆಂಪು ಲಯನ್ಸ್ ಸಂಸ್ಥೆಯ ಕಾರ್ಯದರ್ಶಿ ದಯಾನಂದ ಸಾಗರ್, ಖಜಾಂಚಿ ಶೇಷಾಚಲ ಮತ್ತು ನಿರ್ದೇಶಕರಾದ ಡಾ. ಜಿ. ಪಾಂಡುರಂಗ ಮೂರ್ತಿ, ವಿದ್ಯಾವರ್ಧಕ ಸಂಸ್ಥೆಯ ಶ್ರೀ ಗುಂಡಪ್ಪ, ವಿಶ್ವನಾಥ್, ಕೆ. ಪುಟ್ಟಸ್ವಾಮಿ ಪದವಿ ಕಾಲೇಜಿನ ಪ್ರಾಂಶುಪಾಲರಾದ ಶಿವಲಿಂಗೇ ಗೌಡರು, ಸಂಸ್ಥೆಯ ಖಜಾಂಚಿ ಶ್ರೀ ಶೈಲ ರಾಮಣ್ಣವರ, ಹಾಗು ಮಹಾರಾಜ ಕಾಲೇಜಿನ ನಿವೃತ್ತ ಪ್ರಾಂಶುಪಾಲರಾದ ಡಾ.ಕಾಳಚನ್ನೇ ಗೌಡರು ಮತ್ತು ಉಪನ್ಯಾಸಕ ವರ್ಗ ಮತ್ತು ಪದವಿ ವಿದ್ಯಾರ್ಥಿಗಳು ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.




## ಭಕ್ತಾಧಿಗಳಿಗೆ ಸಕಲ ಸೌಲಭ್ಯ ಕಲ್ಪಿಸಲು ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಸೂಚನೆ

# ಬಿಳಿಗಿರಿರಂಗನಾಥಸ್ವಾಮಿ ಸಂಕ್ರಾಂತಿ ರಥೋತ್ಸವ

**ಚಾಮರಾಜನಗರ:** ಜಿಲ್ಲೆಯ ಪ್ರಸಿದ್ದ ಯಾತ್ರಾಸ್ಥಳ ಬಿಳಿಗಿರಿರಂಗನಬೆಟ್ಟದಲ್ಲಿ ಜನವರಿ 16ರಂದು ನಡೆಯಲಿರುವ ಬಿಳಿಗಿರಿರಂಗನಾಥಸ್ವಾಮಿ ಸಂಕ್ರಾಂತಿ ರಥೋತ್ಸವಕ್ಕೆ ಬರುವ ಭಕ್ತಾಧಿಗಳಿಗೆ ಎಲ್ಲಾ ಅಗತ್ಯ ಸಿದ್ದತೆಗಳನ್ನು ಕೈಗೊಳ್ಳುವಂತೆ ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಅವರು ಸೂಚಿಸಿದರು.

ಬಿಳಿಗಿರಿರಂಗನ ಬೆಟ್ಟದ ಲೋಕೋಪಯೋಗಿ ಇಲಾಖೆಯ ಪ್ರವಾಸಿ ಮಂದಿರದ ಸಭಾಂಗಣದಲ್ಲಿಂದು ಬಿಳಿಗಿರಿರಂಗನಾಥಸ್ವಾಮಿ ಸಂಕ್ರಾಂತಿ ರಥೋತ್ಸವದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಬಿಳಿಗಿರಿರಂಗನಾಥಸ್ವಾಮಿ ಸಂಕ್ರಾಂತಿ ರಥೋತ್ಸವಕ್ಕೆ ಆಗಮಿಸುವ ಭಕ್ತಾದಿಗಳಿಗೆ ಕ್ಷೇತ್ರದಲ್ಲಿ ಸಕಲ ಮೂಲ ಸೌಕರ್ಯಗಳನ್ನು ಕಲ್ಪಿಸಬೇಕು. ಕುಡಿಯುವ ನೀರು ಸಮರ್ಪಕವಾಗಿ ಪೂರೈಸಬೇಕಿದೆ. ಪ್ರಸ್ತುತ ಇರುವ ಕೊಳವೆ ಬಾವಿಗಳನ್ನು ದುರಸ್ತಿಪಡಿಸಬೇಕು. ಪೈಪ್ ಲೈನ್ ಕಾರ್ಯಗಳನ್ನು ಪೂರ್ಣಗೊಳಿಸಬೇಕು. ವಾಟರ್ ಟ್ಯಾಂಕರ್‌ಗಳ ಮೂಲಕವು ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯಾಗಬೇಕೆಂದು ಶಾಸಕರು ತಿಳಿಸಿದರು.



ಭಕ್ತಾಧಿಗಳು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಬರುವ ಹಿನ್ನೆಲೆಯಲ್ಲಿ ಲೋಕೋಪಯೋಗಿ ಇಲಾಖೆ ರಸ್ತೆ ದುರಸ್ತಿಪಡಿಸುವ ಕಾರ್ಯ ಮಾಡಬೇಕು. ರಸ್ತೆಯ ಎರಡು ಭಾಗಗಳಲ್ಲಿರುವ ಹಳ್ಳಕೊಳ್ಳಗಳನ್ನು ಮುಚ್ಚಿಸಿ ವಾಹನಗಳ ಸುಗಮ ಸಂಚಾರಕ್ಕೆ ಸಜ್ಜು ಮಾಡಬೇಕು. ಜಾತ್ರಾ ಕರ್ತವ್ಯಕ್ಕೆ ನಿಯೋಜಿತರಾಗುವ ಅಧಿಕಾರಿ ಸಿಬ್ಬಂದಿಗೆ ಪ್ರವಾಸಿ ಮಂದಿರದ ಕೊಠಡಿಗಳನ್ನು ಕಾಯ್ದಿರಿಸಬೇಕು ಎಂದರು.

ಭಕ್ತಾಧಿಗಳ ಸೌಕರ್ಯಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಕೆ.ಎಸ್.ಆರ್.ಟಿ.ಸಿ ಬಸ್ಸುಗಳನ್ನು ನಿಯೋಜಿಸಬೇಕು. ಮಹಿಳಾ ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಬರುವ ನಿರೀಕ್ಷೆ ಇರುವುದರಿಂದ ಯಾವುದೇ ಕೊರತೆಯಾಗದಂತೆ ವಿವಿಧ ಕಡೆಯಿಂದ ಬಸ್ಸುಗಳ ವ್ಯವಸ್ಥೆಯಾಗಬೇಕು. ಬಸ್ಸುಗಳ ನಿಲುಗಡೆಗೆ ನಿಗದಿತ ಸ್ಥಳವನ್ನು ಗುರುತಿಸಬೇಕು. ಸಂಚಾರಕ್ಕೆ ಯಾವುದೇ ಅಡಚಣೆಯಾಗಬಾರದು ಎಂದು ಶಾಸಕರು ತಿಳಿಸಿದರು.

ಜಾತ್ರಾ ಸಂದರ್ಭದಲ್ಲಿ ನಿರಂತರ ವಿದ್ಯುತ್ ಪೂರೈಕೆ ಇರಬೇಕು. ವೈದ್ಯಕೀಯ ಸಿಬ್ಬಂದಿ, ಆಂಬ್ಯುಲೆನ್ಸ್, ಅಗ್ನಿಶಾಮಕ ವಾಹನಗಳು ಇರಬೇಕು. ವಿದ್ಯುತ್ ದೀಪಗಳ ವ್ಯವಸ್ಥೆ, ಚರಂಡಿ ಸ್ವಚ್ಛಗೊಳಿಸುವಿಕೆ, ಕ್ಷೇತ್ರದಲ್ಲಿ ನೈರ್ಮಲ್ಯ ಕಾಪಾಡಲು ಅಗತ್ಯ ವ್ಯವಸ್ಥೆ ಮಾಡಬೇಕು. ಜಾತ್ರಾ, ರಥೋತ್ಸವ ಸುಗಮವಾಗಿ ನಡೆಯಲು ಪೂರಕವಾಗಿರುವ ಎಲ್ಲಾ ಸಿದ್ದತೆಗಳನ್ನು ಸಮರ್ಪಕವಾಗಿ ಕೈಗೊಳ್ಳುವಂತೆ ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಅವರು ಸೂಚಿಸಿದರು.

ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಮಾತನಾಡಿ ಜಾತ್ರಾ ಸಿದ್ದತಾ ಕಾರ್ಯ ಒಂದುವಾರದ ಮುಂಚೆಯೇ ಪೂರ್ಣಗೊಳಿಸಲು ಅಧಿಕಾರಿಗಳು ನಿಗಾವಹಿಸಿ. ಸಮನ್ವಯದಿಂದ ಭಕ್ತಾಧಿಗಳಿಗೆ ಎಲ್ಲಾ ಸೌಕರ್ಯಗಳನ್ನು ಅಚ್ಚುಕಟ್ಟಾಗಿ ಕಲ್ಪಿಸಿ. ಶುದ್ಧ ಕುಡಿಯುವ ನೀರಿನ ಪೂರೈಕೆ, ಮೊಬೈಲ್ ಶೌಚಾಲಯಗಳ ವ್ಯವಸ್ಥೆ, ಸಾರಿಗೆ ವಾಹನಗಳ ನಿಯೋಜನೆ ಸೇರಿದಂತೆ ಎಲ್ಲಾ ವ್ಯವಸ್ಥೆಗಳನ್ನು ಅಗತ್ಯಕ್ಕೆ ಅನುಗುಣವಾಗಿ ಪೂರೈಸುವಂತೆ ನಿರ್ದೇಶನ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಉಪವಿಭಾಗಾಧಿಕಾರಿ ಮಹೇಶ್, ತಹಶೀಲ್ದಾರ್ ಜಯಪ್ರಕಾಶ್, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕಾಧಿಕಾರಿ ಶ್ರೀನಿವಾಸ್, ದೇವಾಲಯದ ಪ್ರಧಾನ ಆಗಮಿಕರಾದ ನಾಗೇಂದ್ರ ಭಟ್, ಅರ್ಚಕರಾದ ರವಿಕುಮಾರ್, ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಪ್ರದೀಪ್ ಕುಮಾರ್, ಉಪಾಧ್ಯಕ್ಷರಾದ ಕಮಲಮ್ಮ, ಸದಸ್ಯರಾದ ಸಾಕಮ್ಮ, ಮಾದಮ್ಮ, ರಂಗಮ್ಮ, ಬಸವಣ್ಣ, ಸಿರಿಮಹದೇವ, ಡಿವೈಎಸ್‌ಪಿ ಸೋಮಣ್ಣೇಗೌಡ, ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ಚಿದಂಬರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ‘ಸಿರಿಧಾನ್ಯ’ ಹಬ್ಬದ ಸಂಭ್ರಮ, ವಾಕಥಾನ್‌ನಲ್ಲಿ ವಿದ್ಯಾರ್ಥಿಗಳೊಂದಿಗೆ ಹೆಜ್ಜೆ ಹಾಕಿದ ಜಿಲ್ಲಾಧಿಕಾರಿ!

**ಕೋಲಾರ:** ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ಸಿರಿಧಾನ್ಯ ಕೃಷಿಗೆ ಪ್ರೋತ್ಸಾಹ ಹಾಗೂ ಆಹಾರ ಅರಿವು ಮೂಡಿಸಲು ಕೃಷಿ ಇಲಾಖೆಯು ಇಂದು ಆಯೋಜಿಸಿದ್ದ ಜಿಲ್ಲಾಮಟ್ಟದ ಸಿರಿಧಾನ್ಯ ವಾಕಥಾನ್ ‘ಸಿರಿಧಾನ್ಯ ನಡಿಗೆ’ಗೆ ಜಿಲ್ಲಾಧಿಕಾರಿ ಅಕ್ರಂ ಪ್ಷಾಅ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪದ್ಮ ಬಸವಂತಪ್ಪ, ಹೆಚ್ಚುವರಿ ಪೊಲೀಸ್ ವರಿ?ಾಧಿಕಾರಿ ಭಾಸ್ಕರ್ ಗಾಳಿ ಬುರುಡೆಗಳನ್ನು ಹಾರಿಬಿಟ್ಟು, ಹಸಿರು ನಿಶಾನೆ ಬೀಸಿ ಚಾಲನೆ ನೀಡಿದರು. ಗಣ್ಯರೊಂದಿಗೆ ಹೆಜ್ಜೆ ಹಾಕಿದ ವಿದ್ಯಾರ್ಥಿಗಳು ನಾಗರಿಕರು ‘ಸಮೃದ್ಧ ಸಿರಿಧಾನ್ಯ’ ಹಾಗೂ ಪೌಷ್ಟಿಕ ಆಹಾರದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಿದರು. ಇದಕ್ಕೂ ಮುನ್ನ ಜಿಲ್ಲಾಧಿಕಾರಿಗಳು ತಮ್ಮ ಎಂದಿನ ಬೆಳಗಿನ ವ್ಯಾಯಾಮವನ್ನು ವಿದ್ಯಾರ್ಥಿಗಳೊಂದಿಗೆ ಮಾಡಿದ್ದು ವಿಶೇಷವಾಗಿತ್ತು. ಇದೇ ಸಂದರ್ಭದಲ್ಲಿ ಸಿರಿಧಾನ್ಯ ಹಾಗೂ ಪೌಷ್ಟಿಕ ಆಹಾರದ ಬಗ್ಗೆ ಜಾಗೃತಿ ಪೋಸ್ಟರ‍್ಗಳನ್ನು ಬಿಡುಗಡೆ ಮಾಡಲಾಯಿತು. ಕಾರ್ಯಕ್ರಮ ದಲ್ಲಿ ಕೃಷಿ ಜಂಟಿ ನಿರ್ದೇಶಕರಾದ ಸುಮಾ, ಕೃಷಿ ಇಲಾಖೆಯ ಉಪನಿರ್ದೇಶಕರು ಭವ್ಯರಾಣಿ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯಡಾ ಡೀನ್ ಶಿವರಾಮ್, ತೋಟಗಾರಿಕೆ ಉಪನಿರ್ದೇಶಕರಾದ ಕುಮಾರಸ್ವಾಮಿ, ರೇಷ್ಮೆ ಇಲಾಖೆಯ ಉಪನಿರ್ದೇಶಕರಾದ ಎಸ್.ಎಂ ಶ್ರೀನಿವಾಸ್, ಕೃಷಿ ವಿಜ್ಞಾನ ಕೇಂದ್ರ ಮುಖ್ಯಸ್ಥರು ಶಿವನಂದ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಗೀತಾ, ಕೃಷಿ ಅಧೀಕ್ಷಕರು ಮಂಜುನಾಥ ಸೇರಿದಂತೆ ಹಲವು ಇಲಾಖೆಗಳ ಜಿಲ್ಲಾ ಮುಖ್ಯಸ್ಥರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ನಕಲಿ ಕಾರ್ಮಿಕ ಕಾರ್ಡ್ ಹಿಂದಿರುಗಿಸಿ

ಚಿಕ್ಕಬಳ್ಳಾಪುರ: ಜಿಲ್ಲೆಯಲ್ಲಿ ಕಟ್ಟಡ ನಿರ್ಮಾಣ ಕಾರ್ಮಿಕರಲ್ಲದವರು ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ನಕಲಿ ದಾಖಲೆಗಳನ್ನು ಸಲ್ಲಿಸಿ ನೋಂದಣಿಯಾಗಿದ್ದು, ಇಂತಹ ನಕಲಿ ಕಾರ್ಮಿಕರು ತಾವೇ ಖುದ್ದಾಗಿ ಆಯಾ ತಾಲ್ಲೂಕಿನ ಕಾರ್ಮಿಕ ನಿರೀಕ್ಷಕರ ಕಚೇರಿಗೆ ಬೇಟಿ ನೀಡಿ ಮೂಲ ಗುರುತಿನ ಚೀಟಿಯನ್ನು ಹಿಂದಿರುಗಿಸುವ ಮೂಲಕ ತಮ್ಮ ನೊಂದಣಿಯನ್ನು ರದ್ದುಪಡಿಸಿಕೊಳ್ಳಬೇಕೆಂದು ತಿಳಿಸಿದೆ. ಮಂಡಳಿ ವತಿಯಿಂದ ಇಂತಹ ನಕಲಿ ಅನರ್ಹ ಕಾರ್ಮಿಕರನ್ನು ಪತ್ತೆ ಹಚ್ಚಲು ಪರಿಶೀಲನೆಯನ್ನು ನಡೆಸಲಾಗುತ್ತಿದೆ. ಪರಿಶೀಲನೆಯ ಸಮಯದಲ್ಲಿ ಅನರ್ಹರು ನೋಂದಣಿಯಾಗಿರುವುದು ಕಂಡುಬಂದಲ್ಲಿ ಅವರ ನೋಂದಣಿಯನ್ನು ರದ್ದುಪಡಿಸಿ ಅವರು ಮಂಡಳಿಯಿಂದ ಇಲ್ಲಿಯವರೆಗೂ ಪಡೆದ ಎಲ್ಲಾ ಸೌಲಭ್ಯಗಳನ್ನು ದಂಡ ಸಹಿತ ಹಿಂಪಡೆಯಲು ಕ್ರಮವಹಿಸಲಾಗುವುದು ಹಾಗೂ ಅವರ ವಿರುದ್ಧ ಕಾನೂನು ರೀತ್ಯಾ ಕಠಿಣ ಕ್ರಮ ಜರುಗಿಸಲಾಗುವುದೆಂದು ಹಾಗೂ ಅರ್ಹ ನೋಂದಾಯಿತ ಕಟ್ಟಡ ಕಾರ್ಮಿಕರು ಮಾತ್ರ ಮಂಡಳಿಯ ಸೌಲಭ್ಯಗಳನ್ನು ಪಡೆದುಕೊಳ್ಳಬಹುದೆಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಆರ್. ವರಲಕ್ಷ್ಮೀ ರವರು ತಿಳಿಸಿರುತ್ತಾರೆ.

## ಗುಲಾಬಿ ಬೆಳೆಯ ಸಮಗ್ರ ಬೇಸಾಯ ಕುರಿತು ತರಬೇತಿ

**ಚಿಕ್ಕಬಳ್ಳಾಪುರ:** ಭಾರತೀಯ ತೋಟಗಾರಿಕೆ ಸಂಶೋಧನ ಸಂಸ್ಥೆ (ಖಖಊಖ), ಹೆಸರುಘಟ್ಟ ಹಾಗೂ ಜಿಲ್ಲಾ ಪಂಚಾಯತ್, ತೋಟಗಾರಿಕೆ ಇಲಾಖೆ, ಚಿಕ್ಕಬಳ್ಳಾಪುರ ರವರ ಸಂಯುಕ್ತಾಶ್ರಯದಲ್ಲಿ ಅಜ್ಜವಾರ ಗ್ರಾಮದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಆರ್ಕಾ ಸವಿ ಗುಲಾಬಿ ತಳಿ ಪರಿಚಯ ಹಾಗೂ ಗುಲಾಬಿ ಬೆಳೆಯ ಸಮಗ್ರ ಬೇಸಾಯ ಕ್ರಮಗಳ ಬಗ್ಗೆ ಒಂದು ದಿನದ ತರಬೇತಿ/ಪ್ರಾತ್ಯಕ್ಷತೆ ಕಾರ್ಯಕ್ರಮದಲ್ಲಿ ಹಿರಿಯ ವಿಜ್ಞಾನಿ ತೇಜಶ್ವಿನಿ ರವರು ಆರ್ಕಾ ಸವಿ ತಳಿಯಲ್ಲಿ ಅನುಸರಿಸಬೇಕಾದ ಸುದಾರಿತ ಬೇಸಾಯ ಕ್ರಮಗಳ ಬಗ್ಗೆ ಸಂಪೂರ್ಣ ಮಾಹಿತಿಯನ್ನು ರೈತರಿಗೆ ನೀಡಿದರು. ಇದೇ ವೇಳೆ ಹಿರಿಯ ವಿಜ್ಞಾನಿ ಸುಮಂಗಳ ರವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ರೈತರಿಗೆ ಭಾರತೀಯ ತೋಟಗಾರಿಕೆ ಸಂಶೋಧನ ಸಂಸ್ಥೆಯಲ್ಲಿ ಉತ್ಪಾದನೆ ಮಾಡುವ ವಿವಿದ ಪರಿಕರಗಳನ್ನು ವಿತರಣೆ ಮಾಡಿ ಸಮುದಾಯದ ಸಾರಥ್ಯವನ್ನು ಹೆಚ್ಚಿಸಲು ನೆರವು ನೀಡಿದರು. ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕಿ ಎ. ಗಾಯಿತ್ರಿ ರವರು ಇಲಾಖೆಯಲ್ಲಿ ಅನುಷ್ಟಾನಗೊಳಿಸುತ್ತಿರುವ ಯೋಜನೆಗಳ ಬಗ್ಗೆ ಸಂಕ್ಷಿಪ್ತ ವಿವರಣೆ ನೀಡಿದರು. ಈ ಕಾರ್ಯಕ್ರಮದಲ್ಲಿ ಸುಮಾರು 80 ರಿಂದ 100 ಜನ ಗುಲಾಬಿ ಬೆಳೆಗಾರರು, ಸಹಾಯಕ ನಿರ್ದೇಶಕ ನಿತಿನ್.ಡಿ.ವಿ, ತೋಟಗಾರಿಕೆ ಇಲಾಖೆಯ ಸಿಬ್ಬಂದಿ ಕಮಲ, ಲಕ್ಷ್ಮೀಪತಿ, ವೈಶಾಲ್ಯ ಮುಂತಾದವರು ಹಾಜರಿದ್ದರು.

## ಫಲಾನುಭವಿಗಳ ಆಯ್ಕೆ ಸಮಿತಿ ಸಭೆ

**ಕೋಲಾರ:** ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ ಸ್ವಾವಲಂಬಿ ಸಾರಥಿ ಯೋಜನೆಯಡಿಯಲ್ಲಿ ಫಲಾನಭವಿಗಳ ಆಯ್ಕೆ ದಿನಾಂಕ: 29.12.2023 ರಂದು ಮಾನ್ಯ ಜಿಲ್ಲಾಧಿಕಾರಿಗಳಾದ ಅಕ್ರಂ ಪಾಷರವರ ಅಧ್ಯಕ್ಷತೆಯಲ್ಲಿ ಜರುಗಿದ ಆಯ್ಕೆ ಸಮಿತಿಯಲ್ಲಿ ವಿವರವಾಗಿ ಚರ್ಚಿಸಿ ಫಲಾನುಭವಿಗಳನ್ನು ಲಾಟರಿ ಎತ್ತುವ ಮುಖಾಂತರ ನಿಗದಿತ ಗುರಿಯಂತೆ ಆಯ್ಕೆ ಮಾಡಲಾಯಿತು. 2023-2024 ನೇ ಸಾಲಿನ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಸ್ವಾವಲಂಬಿ ಸಾರಥಿ ಯೋಜನೆಯಲ್ಲಿ ಸೌಲಭ್ಯವನ್ನು ಪಡೆಯಲು 653 ಅರ್ಜಿಗಳು ಸ್ವೀಕೃತಗೊಂಡಿದ್ದು ಸರ್ಕಾರ ನಿಗಧಿಪಡಿಸಿದ ಅರ್ಥಿಕ ಗುರಿ ರೂ.18 ಲಕ್ಷಗಳನ್ನು ನಿಗಧಿಪಡಿಸಿದ್ದು, ಜಿಲ್ಲೆಯ ಎಲ್ಲಾ ವಿಧಾನ ಸಭಾ ಕ್ಷೇತ್ರಗಳನ್ನು ಒಳಗೊಂಡಂತೆ ಒಟ್ಟು 15 ಫಲಾನುಭವಿಗಳನ್ನು ಲಾಟರಿ ಎತ್ತುವ ಮುಖಾಂತರ ಆಯ್ಕೆ ಮಾಡಿ ಒಟ್ಟು ರೂ.18 ಲಕ್ಷಗಳ ಅರ್ಥಿಕ ಸೌಲಭ್ಯವನ್ನು ಮಂಜೂರು ಮಾಡಲು ಸಭೆಯಲ್ಲಿ ಅನುಮೋದಿಸಲಾಯಿತು. ಸಭೆಯಲ್ಲಿ ಮಾನ್ಯ ಜಿಲ್ಲಾಧಿಕಾರಿಗಳಾದ ಅಕ್ರಂ ಪಾಷ, ಜಿಲ್ಲಾ ಪಂಚಾಯಿತಿಯ ಮಾನ್ಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಾದ ಪದ್ಮ ಬಸವಂತಪ್ಪ, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಯಾದ ಮುರಳಿ, ಜಿಲ್ಲಾ ವ್ಯವಸ್ಥಾಪಕರು, ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಶೀರಿನ್ ತಾಜ್ ಇದ್ದರು.

**ನಗರಸಭಾ ಕಾರ್ಯಾಲಯ ಹೊಸಕೋಟೆ**
ಬೆಂಗಳೂರು ಗ್ರಾಮಾಂತರ ಜಿಲ್ಲೆ-562114
ದೂರವಾಣಿ ಸಂಖ್ಯೆ: 080-27931221 ಸಹಾಯವಾಣಿ: 080-27931759
ಇ-ಮೇಲ್: itstaff_ulb_hosakote@yahoo.com ವೆಬ್‌ಸೈಟ್: www.hosakotecity.mrc.gov.in

ಸಂಖ್ಯೆ: ನಸಹೊ/ತಾಂತ್ರಿಕ ಶಾಖೆ/ಟೆಂಡರ್/ಸಿ.ಆರ್/04/2023-24 ದಿನಾಂಕ: 27-12-2023

**ಟೆಂಡರ್ ಪ್ರಕಟಣೆ** (ಕೆ.ಪಿ.ಪಿ ಪೋರ್ಟಲ್ ಮೂಲಕ)

ಪೌರಾಯುಕ್ತರು ನಗರಸಭೆ ಹೊಸಕೋಟೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರಿಂದ 2023-24ನೇ ಸಾಲಿನ 15th Finance MPC Grant to NMPC ಯೋಜನೆಯಡಿ ಈ ಕೆಳಕಂಡ ಕಾಮಗಾರಿಗಳಿಗೆ ಕರ್ನಾಟಕ ಸ್ಟ್ಯಾಂಡರ್ಡ್ ಡಾಕ್ಯೂಮೆಂಟ್ ಪ್ರಕಾರ ಟೆಂಡರ್‌ನ್ನು ಏಕ ಲಕೋಟೆ ಪದ್ಧತಿಯಡಿ ಅರ್ಹ ದರ್ಜೆಯ ನೋಂದಾಯಿತ ಗುತ್ತಿಗೆದಾರರಿಂದ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಟೆಂಡರ್‌ನ್ನು ಕರೆಯಲಾಗಿದೆ.

| ಕ್ರಮ. ಸಂ. | ಇಂಡೆಂಟ್ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) | ಇ.ಎಂ.ಡಿ (ರೂ.ಗಳಲ್ಲಿ) |
|---|---|---|---|
| 1 | DMA/2023-24/WS/WORK_INDENT10827 | 7.00 | 17,500/- |
| 2 | DMA/2023-24/WS/WORK_INDENT10681 | 11.00 | 27,500/- |
| 3 | DMA/2023-24/WS/WORK_INDENT10677 | 32.50 | 65,000/- |

**ಟೆಂಡರ್ ಸಲ್ಲಿಸುವ ವಿವರಗಳು:-** (1) ಟೆಂಡರ್ ದಾಖಲೆಗಳನ್ನು ಕರ್ನಾಟಕ ಸರ್ಕಾರದ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ https://kppp.karnataka.gov.in ನಿಂದ ಡೌನ್‌ಲೋಡ್ ಮಾಡಿಕೊಳ್ಳುವುದು. (2) ಟೆಂಡರ್‌ನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ಸಮಯ: **11-01-2024 ರ ಸಂಜೆ 5.00 ಗಂಟೆಯವರೆಗೆ** ಹಾಗೂ ತಾಂತ್ರಿಕ ಬಿಡ್ ತೆರೆಯುವ ದಿನಾಂಕ ಮತ್ತು ಸಮಯ: **12-01-2024 ರ ಸಂಜೆ 5.30 ಗಂಟೆಗೆ** ಹಾಗೂ ಆರ್ಥಿಕ ಬಿಡ್ ತೆರೆಯುವ ದಿನಾಂಕ ಮತ್ತು ಸಮಯ: **16-01-2024 ರ ಬೆಳಗ್ಗೆ 11.00 ಗಂಟೆಗೆ** ನಿಗಧಿಪಡಿಸಲಾಗಿದೆ.

**ಹೆಚ್ಚಿನ ವಿವರಗಳನ್ನು ಕಛೇರಿಯ ತಾಂತ್ರಿಕ ಶಾಖೆಯಿಂದ ಅಥವಾ ಕೆ.ಪಿ.ಪಿ. ಪೋರ್ಟಲ್ https://kppp.karnataka.gov.in ನಲ್ಲಿ ಪಡೆದುಕೊಳ್ಳಬಹುದಾಗಿದೆ. ಹಾಗೂ ಯಾವುದೇ ತಿದ್ದುಪಡಿ ಮತ್ತು ಬದಲಾವಣೆಯಿದ್ದಲ್ಲಿ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಮಾತ್ರ ತಿಳಿಸಲಾಗುವುದು.**

ಸಹಿ/-
ಪೌರಾಯುಕ್ತರು,
ನಗರಸಭೆ, ಹೊಸಕೋಟೆ

ವಾಸಾಸಂಇ/ವಾಪ್ರಾ/2781/ಸ್ಪಾನ್/2023-24

## ರಾಷ್ಟ್ರ ಮಟ್ಟದ ಟೇಕ್ವಾಂಡೋ ಸ್ಪರ್ಧೆಯಲ್ಲಿ ರಾಮನಗರದ ಶಾನ್ವಿಗೆ ದ್ವಿತೀಯ ಸ್ಥಾನ

ರಾಮನಗರ: ಬೆಂಗಳೂರಿನ ಕೋರಮಂಗಲ ಒಳಾಂಗಣ ಕ್ರೀಡಾಂಗಣದಲ್ಲಿ ನಡೆದ 6 ರಿಂದ 8 ವರ್ಷದೊಳಗಿನ ರಾಷ್ಟ್ರ ಮಟ್ಟದ ಟೇಕ್ವಾಂಡೋ ಸ್ಪರ್ಧೆಯಲ್ಲಿ ರಾಮನಗರದ ಶಾನ್ವಿ ದ್ವಿತೀಯ ಸ್ಥಾನ ಪಡೆದು ಬೆಳ್ಳಿ ಪದಕ ಗಳಿಸಿದ್ದಾರೆ.

ರಾಷ್ಟ್ರ ಮಟ್ಟದ ಸ್ಪರ್ಧೆಯಲ್ಲಿ 22 ರಾಜ್ಯದ 2000 ಸ್ಪರ್ಧಿಗಳು ಭಾಗಿಯಾಗಿದ್ದರು. ಇದರಲ್ಲಿ ರಾಜ್ಯದ 300 ಮಂದಿ ಸ್ಪರ್ಧಿಗಳು ಇದ್ದರು. ಕೇರಳ, ಪಶ್ಚಿಮ ಬಂಗಳ, ದೆಹಲಿ ರಾಜ್ಯದ ಪ್ರತಿಸ್ಪರ್ಧಿಗಳ ವಿರುದ್ಧ ಜಯಗಳಿಸಿದ್ದ ಶಾನ್ವಿಗೆ ಅಂತಿಮ ಪಂದ್ಯದಲ್ಲಿ ಕರ್ನಾಟಕದವರೆ ಎದುರಾಳಿಯಾಗಿದ್ದರು. ಕೊನೆಯ ಪಂದ್ಯದ ಮೊದಲ ಮೂರು ಸುತ್ತು ಟೈ ಆಗಿತ್ತು. ಹಾಗಾಗಿ ಅಂಫೈರ್ ಗೋಲ್ಡನ್ ಪಾಯಿಂಟ್ ನೀಡಿದ್ದರು. ಈ ಸುತ್ತಿನಲ್ಲಿ ಶಾನ್ವಿ ಎರಡನೇ ಸ್ಥಾನ ಪಡೆದುಕೊಂಡರು.

ರಾಮನಗರ ನೇಟಸ್ ಇಂಟರ್‌ನ್ಯಾಷನಲ್ ಶಾಲೆಯಲ್ಲಿ ಶಾನ್ವಿ ಒಂದನೇ ತರಗತಿ ವ್ಯಾಸಂಗ ಮಾಡುತ್ತಿದ್ದು, ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಸತೀಶ್ ಅವರ ಪುತ್ರಿಯಾಗಿದ್ದಾರೆ.

ಬೆಳ್ಳಿ ಪದಕ ಗಳಿಸಿ ರಾಜ್ಯಕ್ಕೆ ಕೀರ್ತಿ ತಂದಿರುವ ಶಾನ್ವಿಗೆ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾ ಗೌರವಾಧ್ಯಕ್ಷ ಕಾಂತರಾಜು, ಕಾರ್ಯದರ್ಶಿ ಶಿವಸ್ವಾಮಿ, ಖಜಾಂಚಿ ರಾಜಶೇಖರ ಮೂರ್ತಿ, ಪ್ರಚಾರ ಸಮಿತಿ ಅಧ್ಯಕ್ಷ ಸತೀಶ್ ಅವರು ಅಭಿನಂದಿಸಿದ್ದಾರೆ.

## ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಂಡ್ಯ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ 2023-24ನೇ ಸಾಲಿನ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಗಾಗಿ ಅರ್ಹ ಸಂಸ್ಥೆ ಹಾಗೂ ಮಹಿಳೆಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರ ಕಛೇರಿಯಿಂದ ಪಡೆದು ಅಗತ್ಯ ದಾಖಲಾತಿಗಳೊಂದಿಗೆ ಜನವರಿ 12ರೊಳಗಾಗಿ ಸಲ್ಲಿಸಬಹುದಾಗಿದೆ.

ಮಹಿಳೆಯರ ಸರ್ವೋತೋಮುಖ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ಅರ್ಹ ಸಂಸ್ಥೆಗಳಿಗೆ ಮತ್ತು ವ್ಯಕ್ತಿಗಳನ್ನೊಳಗೊಂಡಂತೆ ಕಲೆ, ಕ್ರೀಡೆ, ಸಾಹಿತ್ಯ, ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ಮಹಿಳೆಯರು ಮತ್ತು ಕ್ಲಿಷ್ಟಕರ ಪರಿಸ್ಥಿತಿಯಲ್ಲಿ ಆತ್ಮಸ್ಥೈರ್ಯದಿಂದ ಹೋರಾಡಿ ಜೀವನೋಪಾಯದಿಂದ ಪಾರು ಮಾಡಿದಂತಹ ವೀರ ಮಹಿಳೆಯರಿಗೆ ಪ್ರಶಸ್ತಿ ನೀಡಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08232-221315ನ್ನು ಸಂಪರ್ಕಿಸಬಹುದಾಗಿದೆ.

## ಶುಲ್ಕ ಪಾವತಿಸಲು ದಿನಾಂಕ ನಿಗಧಿ

**ಬೆಂಗಳೂರು:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ 2022-23ನೇ ಶೈಕ್ಷಣಿಕ ಸಾಲಿನಲ್ಲಿ ದ್ವಿತೀಯ ವರ್ಷದ (ಜುಲೈ / ಜನವರಿ ಆವೃತ್ತಿ) ಸಿ.ಬಿ.ಸಿ.ಎಸ್. ಸ್ನಾತಕ/ಸ್ನಾತಕೋತ್ತರ ಪದವಿಗಳಾದ ಬಿ.ಬಿ.ಎ./ ಬಿ.ಸಿ.ಎ./ ಎಲ್ಲಾ ಬಿ.ಎಸ್ಸಿ./ ಎಂ.ಎ./ ಎಂ.ಕಾಂ./ ಎಂ.ಬಿ.ಎ./ ಎಲ್ಲಾ ಎಂ.ಎಸ್ಸಿ. ಕೋರ್ಸುಗಳಿಗೆ ಪ್ರವೇಶಾತಿ ಪಡೆದಿರುವ ವಿದ್ಯಾರ್ಥಿಗಳಿಗೆ ತೃತೀಯ ಸೆಮಿಸ್ಟರ್ನ ಪರೀಕ್ಷಾ ಶುಲ್ಕ ಪಾವತಿಸಲು ದಿನಾಂಕ ನಿಗಧಿಪಡಿಸಲಾಗಿದೆ.ಪರೀಕ್ಷಾ ಶುಲ್ಕ ಪಾವತಿಸಲು ದಂಡ ಶುಲ್ಕವಿಲ್ಲದೆ ಜನವರಿ 13 ಹಾಗೂ ರೂ. 200/- ದಂಡ ಶುಲ್ಕದೊಂದಿಗೆ ಜನವರಿ 23 ಕೊನೆಯ ದಿನಾಂಕವಾಗಿದ್ದು, ವಿದ್ಯಾರ್ಥಿಗಳು ವಿಶ್ವವಿದ್ಯಾನಿಲಯದ ಅಧಿಕೃತ ಜಾಲತಾಣ www.ksoumysuru.ac.in ಮೂಲಕ ಪರೀಕ್ಷಾ ಶುಲ್ಕವನ್ನು ಪಾವತಿಸಬಹುದು. ಹೆಚ್ಚಿನ ಮಾಹಿತಿಗಾಗಿ ಪ್ರಾದೇಶಿಕ ನಿರ್ದೇಶಕರು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮಹಿಳಾ ಪ್ರಾದೇಶಿಕ ಕೇಂದ್ರ, ಸರ್ಕಾರಿ ಪದವಿ ಪೂರ್ವ ಬಾಲಕಿಯರ ಕಾಲೇಜು, 4ನೇ ಮುಖ್ಯರಸ್ತೆ, 13ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-03, ದೂರವಾಣಿ ಸಂಖ್ಯೆ: 080-23448811, 9741197921, 9621395584, 7760848564 ನ್ನು ಸಂಪರ್ಕಿಸುವುದು ಎಂದು ಎಂದು ಪ್ರಾದೇಶಿಕ ನಿರ್ದೇಶಕರಾದ ಶ್ರೀಮತಿ ಶಶಿಕಲಾ.ಜೆ ತಿಳಿಸಿದ್ದಾರೆ.

## ನ್ಯಾಯ ಬೆಲೆ ಅಂಗಡಿ ತೆರೆಯಲು ಅರ್ಜಿ ಆಹ್ವಾನ

ಮಂಡ್ಯ: ನಾಗಮಂಗಲ ತಾಲ್ಲೂಕಿನಲ್ಲಿ ವಿವಿಧ ಕಾರಣಗಳಿಂದ ರದ್ದಾಗಿರುವ ನ್ಯಾಯಬೆಲೆ ಅಂಗಡಿಗಳಿಗೆ ಹಲವು ವರ್ಷಗಳಿಂದ ಪರ್ಯಾಯ ವ್ಯವಸ್ಥೆ ಮೂಲಕ ಪಡಿತರ ಧಾನ್ಯಗಳನ್ನು ವಿತರಣೆ ಮಾಡುತ್ತಿರುವ ಹಾಗೂ ಹೊಸದಾಗಿ ಅವಶ್ಯವಿರುವ ಗ್ರಾಮಗಳಿಗೆ ಹೊಸ ನ್ಯಾಯಬೆಲೆ ಅಂಗಡಿ ತೆರೆಯಲು ಅರ್ಜಿ ಆಹ್ವಾನಿಸಲಾಗಿದೆ. ಬಿಳಗುಂದ, ಹಳ್ಳದ ಹೊಸಹಳ್ಳಿ, ದಡಗ, ಅಳೀಸಂದ್ರ, ಗಂಗವಾಡಿ, ಕಾಂತಪುರ, ತಿರುಗನಹಳ್ಳಿ, ಬೆಟ್ಟದ ಮಲ್ಲೇನಹಳ್ಳಿ, ಲಾಳನಕೆರೆ, ಬಿದರಕೆರೆಯಲ್ಲಿ ನ್ಯಾಯಬೆಲೆ ಅಂಗಡಿ ತೆರೆಯಲು ಉದ್ದೇಶಿಸಿರುವ ಗ್ರಾಮಗಳಾಗಿವೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಅವಧಿ ವಿಸ್ತರಣೆ

**ಮಂಡ್ಯ:** ವೃತ್ತಿಪರ ಕೋರ್ಸ್ 2023-24 ನೇ ಸಾಲಿನಲ್ಲಿ ಮೊದಲನೇ ವರ್ಷದಲ್ಲಿ ಓದಿತ್ತಿರುವ ಮಾಜಿ ಸೈನಿಕರ ಮಕ್ಕಳಿಗೆ (ಸೈನ್ಯಾಧಿಕಾರಿಗಳ ಮಕ್ಕಳನ್ನು ಹೊರತುಪಡಿಸಿ) ಕೇಂದ್ರೀಯ ಸೈನಿಕ ಮಂಡಳಿಯಿಂದ ಪ್ರಧಾನ ಮಂತ್ರಿ ಶಿಷ್ಯವೇತನಕ್ಕಾಗಿ ಅರ್ಜಿ ಸಲ್ಲಿಸಲು ಅವಧಿ ವಿಸ್ತರಿಸಲಾಗಿದೆ. 2024 ರ ಜನವರಿ 5ರವರೆಗೆ ಅರ್ಜಿ ಸಲ್ಲಿಸಲು ಅವಕಾಶ ನೀಡಿದ್ದು, ಅರ್ಹ ವಿದ್ಯಾರ್ಥಿಗಳು ಅರ್ಜಿಯನ್ನು (www.ksb.gov.in) ನಲ್ಲಿ ಸಲ್ಲಿಸಬಹುದಾಗಿದೆ ಎಂದು ಮೈಸೂರಿನ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪ ನಿರ್ದೇಶಕರು ತಿಳಿಸಿದ್ದಾರೆ.

# ಓಟಿಗಾಗಿ ಡೇರಿ ಸಂಘ ರಚಿಸಿದರೇ ಅಧಿಕಾರಿಗಳೇ ನೇರ ಹೊಣೆ

**ಪಿರಿಯಾಪಟ್ಟಣ** : ರಾಜಕೀಯ ಉದ್ದೇಶಕ್ಕಾಗಿ ಹಾಲು ಉತ್ಪಾದಕರ ಸಹಕಾರ ಸಂಘಗಳನ್ನು ಸ್ಥಾಪಿಸುವ ಮೂಲಕ ಗ್ರಾಮಗಳಲ್ಲಿ ಓಟಿಗಾಗಿ ಎರಡೆರಡು ಸಂಘಗಳನ್ನು ರಚಿಸಿದರೆ ಸಂಬಂಧಪಟ್ಟ ಅಧಿಕಾರಿಗಳನ್ನೇ ಗುರಿಯಾಗಿಸಲಾಗುವುದೆಂದು ಪಶು ಸಂಗೋಪನ ಮತ್ತು ರೇಷ್ಮೆ ಸಚಿವ ಕೆ ವೆಂಕಟೇಶ್ ತಿಳಿಸಿದರು

ಪಿರಿಯಾಪಟ್ಟಣ ತಾಲೂಕಿನ ಈಚೂರು ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ನೂತನ ಕಟ್ಟಡ ಮತ್ತು ಬಿ ಎಂ ಸಿ ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದ ಅವರು ಸಣ್ಣ ರೈತರ ಪ್ರಗತಿಗೆ ಹೈನುಗಾರಿಕೆಯು ಪೂರಕವಾಗಿದೆ ಇದು ಆರ್ಥಿಕವಾಗಿ ಶಕ್ತಿ ತುಂಬುವ ಮೂಲಕ ಹೈನುಗಾರಿಕೆಯ ಬೆಳವಣಿಗೆಯು ಸಹಾಯವಾಗುತ್ತಿದೆ ಇದಕ್ಕಾಗಿ ಸರ್ಕಾರ ಪ್ರೋತ್ಸಾಹ ನೀಡುತ್ತಾ ಬಂದಿದೆ ಸಿದ್ದರಾಮಯ್ಯನವರ ಇಂದಿನ ಅವಧಿಯಲ್ಲಿ ಹೈನುಗಾರಿಕೆಯನ್ನು ಉತ್ತೇಜಿಸಲು ಸರಕಾರ ಒಂದು ಲೀಟರ್ ಹಾಲಿಗೆ ರೂ 5 ಪ್ರೋತ್ಸಾಹ ಧನ ನೀಡುತ್ತಿದೆ. ಕಾಂಗ್ರೆಸ್ ಸರ್ಕಾರ 5 ಗ್ಯಾರಂಟಿಗಳನ್ನು ಬಡವರ ಹೇಳಿಗೆಗಾಗಿ ಮಾಡಲಾಗಿದೆ ಜನಸಾಮಾನ್ಯರ ಬದುಕಿನ ಕಷ್ಟಸುಖಗಳನ್ನು ಕಡಿಮೆ ಮಾಡುವುದೇ ನಮ್ಮ ಸರ್ಕಾರದ ಮುಖ್ಯ ಉದ್ದೇಶವಾಗಿದೆ, ಬಡವರ ಬಗ್ಗೆ ಕಾಳಜಿ ಇರುವವರು ಮಾತ್ರ ಇಂತ ಕಾರ್ಯಕ್ರಮಗಳನ್ನು ಜಾರಿಗೆ ತರಲು ಸಾಧ್ಯ, ಬಿಜೆಪಿ ಸರ್ಕಾರಕ್ಕೆ ಜನಸಾಮಾನ್ಯರ ಬಗ್ಗೆ ಕಿಂಚಿತ್ತು



ಕಾಳಜಿ ಇಲ್ಲ ಕೇವಲ ಭಾಷಣಗಳಿಗೆ ಮಾತ್ರ ಸೀಮಿತವಾಗಿದೆ. ಕಾಂಗ್ರೆಸ್ ಸರ್ಕಾರ ರೈತರ ಅನುಕೂಲಕ್ಕಾಗಿ 3 ರೂಪಾಯಿ ಹಾಲಿನ ದರವನ್ನು ಹೆಚ್ಚಳ ಮಾಡಿದೆ ಆದರೆ ಮೈಸೂರು ಹಾಲು ಒಕ್ಕೂಟವು 1. 80 ಪೈಸೆ ಕಡಿಮೆ ಮಾಡುವುದರ ಮೂಲಕ ಉತ್ಪಾದಕರಿಗೆ ನಷ್ಟ ಮಾಡಿದೆ ಇಂತಹ ಅಶಿಸ್ತಿನ ಕೆಲಸಗಳನ್ನು ಕಡಿವಾಣ ಹಾಕಲು ಸರಕಾರದ ಮಟ್ಟದಲ್ಲಿ ಚರ್ಚೆ ನಡೆಯುತ್ತಿದೆ. ಒಕ್ಕೂಟವು ಸರ್ಕಾರದ ವ್ಯಾಪ್ತಿಯಲ್ಲಿ ಕೆಲಸ ನಿರ್ವಹಣೆ ಮಾಡಬೇಕಾಗುತ್ತದೆ ಅಧ್ಯಕ್ಷರೇ ಸಾರ್ವಭೌಮರಾಗಿದ್ದು ಇವರು ಏನು ಬೇಕಾದರೂ ಮಾಡುತ್ತಾರೆ ಇದಕ್ಕೆ ಸರ್ಕಾರ ಉತ್ತರ ಕೊಡಬೇಕಾಗಿದೆ ಹಾಲಿನ ದರ ಏರಿಕೆ ಅಥವಾ ಕಡಿಮೆ ಮಾಡುವುದು ಸರಕಾರದ ಗಮನಕ್ಕೆ ಬರಬೇಕು ಒಂದು ಬಾರಿ ಏರಿಸುವುದು ಇಳಿಸುವುದು ಇನ್ನು ಮುಂದೆ ಯಾವುದು ನಡೆಯುವುದಿಲ್ಲ. ಒಕ್ಕೂಟದಲ್ಲಿ ಶಿಸ್ತು ಮುಖ್ಯವಾಗಿದ್ದು ರಾಜಕಾರಣವನ್ನು ನ್ಯಾಯವಾಗಿ ಮಾಡಬೇಕು ಹೊರತು ಅನ್ಯಾಯದಿಂದಲ್ಲ ಇಂಥವುಗಳನ್ನು ತನಿಖೆ ಮಾಡಿಸಿದರೆ ನಾವು ದ್ವೇಷ ಮಾಡುತ್ತೇವೆ ಎನ್ನುತ್ತಾರೆ ಮೈಸೂರು ಹಾಲು ಒಕ್ಕೂಟದಲ್ಲಿಅನ್ಯಾಯ ನಡೆದಿಲ್ಲವೇ.ರೈತರಿಂದ ಹನ್ನೆರಡು ಲಕ್ಷ ರೂಗೆ ಖರೀದಿ ಮಾಡಿದ್ದ ಸತ್ಯಗಾಲದ ಜಮೀನನ್ನು ಒಕ್ಕೂಟವು 22 ಲಕ್ಷ ರೂಗಳನ್ನು ನೀಡಿ ಖರೀದಿಸಿದೆ ಇಂತಹ ಅವ್ಯವಹಾರಗಳನ್ನು ತನಿಖೆ ಮಾಡಿಸುವುದು ತಪ್ಪಾ. ಕಾರ್ಯದರ್ಶಿಗಳು ಯಾರ ಒತ್ತಡಕ್ಕೆ ಒಳಗಾಗದೆ ಕೆಲಸ ನಿರ್ವಹಣೆ ಮಾಡಬೇಕು ಆಗಮಾತ್ರ ಸಹಕಾರ ಸಂಘಗಳು ಯಶಸ್ವಿಗೊಳಿಸಲು ಸಾಧ್ಯವೆಂದು ತಿಳಿಸಿದರು.

ಮೈಮುಲ್ ವ್ಯವಸ್ಥಾಪಕ ನಿರ್ದೇಶಕ ಬಿ ಎನ್. ವಿಜಯ್ ಕುಮಾರ್ ಮಾತನಾಡಿ ಮೈಸೂರು ಜಿಲ್ಲೆಯಲ್ಲಿ ಪ್ರತಿನಿತ್ಯ ಹಾಲು ಶೇಖರಣೆ ಏರಿಕೆಯಾಗುತ್ತಿದ್ದು ರೈತರು ಹಾಲಿನ ಸಂಗ್ರಹಣೆಯಲ್ಲಿ ಹೆಚ್ಚಿನ ಆಸಕ್ತಿ ತೋರುತ್ತಿದ್ದಾರೆ ಹೈನುಗಾರಿಕೆಯಲ್ಲಿ ತೊಡಗಿರುವ ರೈತರಿಗೆ ಕಡಿಮೆ ಬಡ್ಡಿಯಲ್ಲಿ 70000 ರೂಗಳ ಸಾಲ ನೀಡಲಾಗುತ್ತಿದ್ದು ಹೆಚ್ಚಿನ ರೈತರು ಹೈನುಗಾರಿಕೆಯತ್ತಾ ಮುಖ ಮಾಡುತ್ತಿದ್ದಾರೆ ಇದರಿಂದ ಹಾಲು ಉತ್ಪಾದಕರ ಸಹಕಾರ ಸಂಘಗಳು ಮತ್ತು ಸದಸ್ಯರು ಆರ್ಥಿಕವಾಗಿ ಸದೃಢವಾಗಲು ಸಹಾಯಕವಾಗಿದೆ. ಉತ್ಪಾದಕರು ಹಾಲಿನ ಶೇಖರಣೆ ಮತ್ತು ಗುಣಮಟ್ಟಕ್ಕೆ ಆದ್ಯತೆ ನೀಡುವದರ ಜೊತೆಗೆ ಶುದ್ಧ ಹಾಲಿಗೆ ಆದ್ಯತೆ ನೀಡಬೇಕು ಇದರಿಂದ ದೇಶ ವಿದೇಶಗಳಲ್ಲಿ ಮೈಮುಲ್ ಹಾಲಿಗೆ ಹೆಚ್ಚು ಬೇಡಿಕೆ ಬರುತ್ತದೆ ಈ ನಿಟ್ಟಿನಲ್ಲಿ ಶುದ್ಧವಾದ ಗುಣಮಟ್ಟದ ಹಾಲಿನ ಉತ್ಪಾದನೆಗೆ ಸಂಘದ ಸದಸ್ಯರು ಗಮನವರಿಸಬೇಕು ಎಂದರು

ಈ ಸಂದರ್ಭದಲ್ಲಿ ತಾ. ಪಂ.ಇ. ಒ ಸುನೀಲ್ ಕುಮಾರ್, ತಹಸಿಲ್ದಾರ್ ಕುಂಜಿ ಅಹಮದ್, ಮೈಮುಲ್ ನಿರ್ದೇಶಕಾರದ ಎಚ್. ಡಿ.ರಾಜೇಂದ್ರ ,ಶ್ರೀಮತಿ ದಾಕ್ಷಾಯಿಣಿ ಬಸವರಾಜಪ್ಪ ,ಮೈಮುಲ್ ಉಪ ವ್ಯವಸ್ಥಾಪಕ ಜಿ. ಎನ್ ಸಂತೋಷ್, ಸಹಾಯಕ ವ್ಯವಸ್ಥಾಪಕ ಡಾಕ್ಟರ್ ಸತೀಶ್, ಸಹಕಾರ ಅಭಿವೃದ್ಧಿ ಅಧಿಕಾರಿ ಹಿತೇಂದ್ರ, ಪಿಎಸಿಸಿಎಸ್ ಈಚೂರು ಅಧ್ಯಕ್ಷ ಈ.ಪಿ. ಲೋಕೇಶ್, ಭುವನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ದೇವರಾಜ್ ಈಚೂರು ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಚಂದ್ರಮ್ಮ, ಉಪಾಧ್ಯಕ್ಷೆ ಈರಮ್ಮ, ನಿರ್ದೇಶಕರುಗಳಾದ ಪುಷ್ಪಲತಾ, ಶೈಲಾ, ಸುನಂದ, ರತ್ನಮ್ಮ, ಕಮಲಮ್ಮ, ಮಣಿ ,ಹೊನ್ನಮ್ಮ, ಶಿವಮ್ಮ ,ಜನತ್, ಜಯಮ್ಮ ಮುಖ್ಯ ಕಾರ್ಯನಿರ್ವಣಧಿಕಾರಿ ಶ್ರೀಮತಿ ಎಪಿ ಜ್ಯೋತಿ, ಹಾಲು ಪರೀಕ್ಷಕ ನಾರಾಯಣಸ್ವಾಮಿ , ಸಹಾಯಕಿ ಲಕ್ಷ್ಮಮ್ಮ ಸೇರಿದಂತೆ ವಿವಿಧ ತಾಲೂಕಿನ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು

### ಶಾಸಕ ಸಿ. ಪುಟ್ಟರಂಗಶೆಟ್ಟಿ ಬಣ್ಣನೆ

# ಯುಗದ ಕವಿ ಕುವೆಂಪು

**ಚಾಮರಾಜನಗರ:** ಇಡೀ ಜಗತ್ತಿಗೆ ವಿಶ್ವಮಾನವ ಸಂದೇಶ ಸಾರಿದ ರಾಷ್ಟ್ರಕವಿ ಕುವೆಂಪು ಅವರು ಜಗದ ಕವಿ, ಯುಗದ ಕವಿಯಾಗಿದ್ದಾರೆ ಎಂದು ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಅಭಿಮತ ವ್ಯಕ್ತಪಡಿಸಿದರು.



ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿರುವ ವರನಟ ಡಾ. ರಾಜ್ ಕುಮಾರ್ ಜಿಲ್ಲಾ ರಂಗಮಂದಿರದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ ವಿಶ್ವಮಾನವ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಕುವೆಂಪು ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಅವರು ಮಾತನಾಡಿದರು.

ರವಿ ಕಾಣದ್ದನ್ನು ಕವಿ ಕಂಡ ಎಂಬಂತೆ ಕುವೆಂಪುರವರು ರಚಿಸಿರುವ ಎಲ್ಲಾ ಪ್ರಕಾರಗಳ ಕಾವ್ಯಗಳಲ್ಲಿ ಮಾನವೀಯತೆಯ ಸಂದೇಶವಿದೆ. ಅವರ ಸಂದೇಶಗಳನ್ನು ನಾವೆಲ್ಲರೂ ಅರಿಯಬೇಕು. ಭಾರತಮಾತೆಯ ಮಗನಾಗಿ ಹುಟ್ಟಿ ಇಡೀ ಮನುಕುಲಕ್ಕೆ ವಿಶ್ವಮಾನವ ಸಂದೇಶಗಳನ್ನು ಸಾರಿದ ಕುವೆಂಪು ಅವರ ಸ್ಮರಣೆ ಇಂದಿಗೂ ಪ್ರಸ್ತುತವಾಗಿವೆ ಎಂದು ಪುಟ್ಟರಂಗಶೆಟ್ಟಿ ಅವರು ತಿಳಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಮಾತನಾಡಿ ಕನ್ನಡಕ್ಕೆ ಮೊಟ್ಟ ಮೊದಲ ಜ್ಞಾನಪೀಠ ಪ್ರಶಸ್ತಿ ತಂದುಕೊಟ್ಟ ಹೆಗ್ಗಳಿಕೆ ಕುವೆಂಪು ಅವರದ್ದು. ನವ್ಯ ಸಾಹಿತ್ಯದಲ್ಲಿ ಕಾವ್ಯ ರಚಿಸಿದ ಕುವೆಂಪು ಅವರು ನಮಗೆ ಸ್ಪೂರ್ತಿಯ ಚಿಲುಮೆಯಾಗಿದ್ದಾರೆ. ಕುವೆಂಪುರವರ ಸಾಹಿತ್ಯ ಎಂದೆಂದಿಗೂ ಅನಂತ, ಅನಂತವಾಗಿರಲಿದೆ. ಸಮಾನತೆಯಡಿ ವಿಶ್ವವನ್ನೇ ಒಂದು ಕುಟುಂಬವಾಗಿ ನೋಡಿದ ಕುವೆಂಪು ಚಿರಸ್ಮರಣೀಯರಾಗಿದ್ದಾರೆ ಎಂದರು.

ಮುಖ್ಯ ಭಾಷಣ ಮಾಡಿದ ಸಾಹಿತಿ ಹಾಗೂ ಅಂಕಣಕಾರರಾದ ಬನ್ನೂರು ಕೆ. ರಾಜು ಅವರು ಮಾತನಾಡಿ 10ನೇ ಶತಮಾನದಲ್ಲಿ ಕನ್ನಡದ ಆದಿಕವಿ ಪಂಪನ ಮನುಷ್ಯ ಜಾತಿ ತಾನೊಂದೇ ವಲಂ? ತತ್ವದ ಆಧಾರದಲ್ಲಿ ವಿಶ್ವಮಾನವ ಸಂದೇಶ ನೀಡಿದರು. ಮನುಷ್ಯತ್ವನಮ್ಮೊಳಗಿದ್ದರೆ ಮಾತ್ರ ಎಲ್ಲರೂ ಮನುಷ್ಯರಾಗಲು ಸಾಧ್ಯ. ಪಂಪ ಹಾಗೂ ಕುವೆಂಪು ಮಾನವತೆಯ ಎರಡು ಮುಖಗಳಾಗಿದ್ದಾರೆ. ಕುವೆಂಪು ಅವರು ಬುದ್ಧ, ಬಸವ, ಅಂಬೇಡ್ಕರ್, ಮಹಾವೀರ ಅವರ ಆದರ್ಶಗಳನ್ನು ಮೈಗೂಡಿಸಿಕೊಂಡು ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದವರಾಗಿದ್ದಾರೆ ಎಂದರು.

ಕುವೆಂಪು ಅವರು ವಿದ್ಯಾರ್ಥಿದೆಸೆಯಲ್ಲಿ ಆಂಗ್ಲಭಾಷೆಯ ಸಾಕಷ್ಟು ಕವಿತೆಗಳನ್ನು ಮನನ ಮಾಡಿಕೊಂಡು ಸಾಹಿತ್ಯ ರಚನೆಯನ್ನು ಇಂಗ್ಲೀಷ್‌ನಲ್ಲಿ ಆರಂಭಿಸಿದ್ದರು. ಆ ಸಂದರ್ಭದಲ್ಲಿ ಕುವೆಂಪು ಗುರುಗಳಾದ ಐರಿಸ್ ಕವಿ ಜೇಮ್ಸ್ ಕಸಿನ್ ಅವರು ತಾಯಿ ಭಾಷೆಗೆ ಅಗಾಧ ಶಕ್ತಿ ಇದೆ. ಮಾತೃಭಾಷೆ ಕನ್ನಡದಲ್ಲಿಯೇ ಕಾವ್ಯ ರಚಿಸುವಂತೆ ಸಲಹೆ ಮಾಡಿದರು. ಅಂದಿನಿಂದ ಕುವೆಂಪು ಬರೆದ ಸಾಹಿತ್ಯವೆಲ್ಲಾ ಅಮೃತವೇ. ಅಮೃತ ಎಂದರೇ ಸಾವಿಲ್ಲದ್ದು ಎಂದರ್ಥ. ಜನರಲ್ಲಿದ್ದ ಮೌಢ್ಯಗಳನ್ನು ಹೋಗಲಾಡಿಸಲು ಅಕ್ಷರಗಳ ಮೂಲಕ ಮಾನವೀಯ ಸಮಾಜ ಕಟ್ಟಿದ ಕುವೆಂಪು ವೈಚಾರಿಕಾ, ವೈಜ್ಞಾನಿಕ ಪ್ರಜ್ಞೆಯನ್ನು ಜಾಗೃತಗೊಳಿಸಿದರು ಎಂದು ತಿಳಿಸಿದರು.

ಪ್ರತಿಯೊಬ್ಬರು ಮಗುವಿನ ರೂಪದಲ್ಲಿ ವಿಶ್ವಮಾನವರಾಗಿ ಹುಟ್ಟುತ್ತಾರೆ. ಬೆಳೆಯುತ್ತ ಅಲ್ಪ ಮಾನವರಾಗುತ್ತಾರೆ. ಅವರನ್ನು ನೈತಿಕತೆ ಮತ್ತು ಮಾದರಿ ವ್ಯಕ್ತಿತ್ವದ ಮೂಲಕ ಮತ್ತೆ ವಿಶ್ವಮಾನವತ್ವದೆಡೆಗೆ ಕೊಂಡೊಯ್ಯುವ ಅಗತ್ಯವಿದೆ. ವಿದ್ವತ್ತಿನ ಗುಪ್ತಗಾಮಿನಿಯಾಗಿದ್ದ ಕುವೆಂಪುರವರು ಪ್ರಕೃತಿಪ್ರೇಮಿಯೂ ಆಗಿದ್ದರು. ಮಹಾನ್ ಸ್ವಾಭಿಮಾನಿ ಕುವೆಂಪು ಅವರು ತಾತ್ವಿಕ ಹಾಗೂ ಸೈದ್ಧಾಂತಿಕ ನೆಲೆಗಟ್ಟಿನಲ್ಲಿ ಸಾಹಿತ್ಯ ರಚಿಸಿದ ಸಾಹಿತ್ಯ ಕೃತಿಗಳಲ್ಲಿ ಪ್ರಕೃತಿ ಆರಾಧನೆಯನ್ನು ಕಾಣಬಹುದಾಗಿದೆ. ಕುವೆಂಪು ಕವಿ ಮಾತ್ರವಲ್ಲದೆ ಸ್ವಾತಂತ್ರ್ಯ ಹೋರಾಟಗಾರರು ಹೌದು. ಹಲವಾರು ಹೋರಾಟ ಗೀತೆಗಳನ್ನು ರಚಿಸಿ ಜನರಲ್ಲಿ ಸ್ವಾತಂತ್ರ್ಯ ಕಿಚ್ಚು ತುಂಬಿದರು. ರೈತರನ್ನು ನೇಗಿಲ ಯೋಗಿಯಾಗಿ ಕಂಡು ಸರ್ವಜನಾಂಗದ ಶಾಂತಿಯ ತೋಟದಲ್ಲಿ ಸಾಹಿತ್ಯದ ಮೂಲಕ ಕೃಷಿ ಮಾಡಿದರು ಎಂದು ಬನ್ನೂರು ಕೆ. ರಾಜು ಅಭಿಪ್ರಾಯಪಟ್ಟರು.

ನಗರಸಭಾ ಸದಸ್ಯರಾದ ಎಚ್.ಎಸ್. ಮಮತ ಅವರು ಕಾರ್ಯಕ್ರಮದಲ್ಲಿ ಕುವೆಂಪು ಅವರ ಜನ್ಮ ದಿನದ ಶುಭಾಷಯಗಳನ್ನು ತಿಳಿಸಿ ಅವರ ವಿಶ್ವಮಾನವ ಸಂದೇಶಗಳನ್ನು ನಾವೆಲ್ಲರೂ ಅಳವಡಿಸಿಕೊಳ್ಳಬೇಕು. ಅವರ ಹಾದಿಯಲ್ಲಿ ಮುನ್ನಡೆಯಬೇಕು ಎಂದರು.

ಇದೇ ವೇಳೆ ರಾಷ್ಟ್ರಕವಿ ಕುವೆಂಪು ಜಯಂತಿ ಅಂಗವಾಗಿ ಪ್ರೌಢಶಾಲಾ ಹಾಗೂ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳಿಗೆ ಏರ್ಪಡಿಸಲಾಗಿದ್ದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಸ್ಮರಣಿಕೆ ಹಾಗೂ ಪ್ರಮಾಣಪತ್ರಗಳನ್ನು ವಿತರಿಸಲಾಯಿತು.

ತಹಶೀಲ್ದಾರ್ ಬಸವರಾಜು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಗುರುಲಿಂಗಯ್ಯ, ಕನ್ನಡ ಪರ ಸಂಘಟನೆಯ ಮುಖಂಡರಾದ ಶ್ರೀನಿವಾಸಗೌಡ, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಗಂಗವಾರ ಚೌಡಪ್ಪನಹಳ್ಳಿ ಗ್ರಾಪಂ ಸರ್ವತೋಮುಖ ಅಭಿವೃದ್ಧಿಗೆ ಬದ್ಧ

**ದೇವನಹಳ್ಳಿ:** ತಾಲ್ಲೂಕು ಗಂಗವಾರ ಚೌಡಪ್ಪನಹಳ್ಳಿ ಗ್ರಾಮ ಪಂಚಾಯಿತಿಯಿಂದ ವಾರ್ಡ್ ಸಭೆ ಚೌಡಪ್ಪನ ಹಳ್ಳಿ ಗ್ರಾಮದ ವೇಣುಗೋಪಾಲಸ್ವಾಮಿ ದೇವಸ್ಥಾನ ದಲ್ಲಿ ನಡೆಯಿತು.

ಪಂಚಾಯಿತಿ ಅಧ್ಯಕ್ಷ ಕಮಲೇಶ್ ಮಾತನಾಡಿ, ನಮ್ಮ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಮಸ್ಯೆಗಳ ಸರಮಾಲೆಗಳು ಹೆಚ್ಚಿವೆ ಹಾಗಾಗಿ ಜನವರಿ 3 ರಂದು ನಡೆಯುವ ಗ್ರಾಮಸಭೆಗೆ ತಾಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ಹಾಜರಿದ್ದರೆ, ಸುತ್ತಮುತ್ತಲಿನ ಗ್ರಾಮಸ್ಥರ ಸಮಸ್ಯೆ ಇತ್ಯರ್ಥವಾಗಲಿದೆ.

ಗ್ರಾಮಸ್ಥರು ಕೂಡ ತಮ್ಮ ಗ್ರಾಮದಲ್ಲಿ ಹಿಂದುಳಿದ ಕೆಲಸಗಳ ಬಗ್ಗೆ ಹಾಗೂ ತಮ್ಮ ವೈಯಕ್ತಿಕ ಅಭಿವೃದ್ಧಿಯ ವಿಚಾರಗಳನ್ನು ಮುಕ್ತವಾಗಿ ಹಂಚಿಕೊಳ್ಳುವ ಸಭೆಯೇ ವಾರ್ಡ್ ಸಭೆಗಳಾ ಗಿವೆ. ವಾರ್ಡ್ ಸಭೆಗಳಲ್ಲಿ ಮಾಡಿದ ಪಟ್ಟಿಯನ್ನೇ ಗ್ರಾಮ ಸಭೆಯ ವೇದಿಕೆಯಲ್ಲಿ ಅನುಮೋ ದನೆ ಪಡೆದು ಸರ್ಕಾರಕ್ಕೆ ಶಿಫಾರಸಿನ ನಂತರ ಅಗತ್ಯ ಅನುದಾನಗಳು ನಮ್ಮ ಪಂಚಾ ಯಿತಿಗೆ ಬರಲು ಸಾಧ್ಯ. ಅಭಿವೃದ್ಧಿಯ ವಿಚಾರದಲ್ಲಿ ಪಕ್ಷ ಭೇದ ಮರೆತು ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ಶ್ರಮಿ ಸಲು ಎಲ್ಲರೂ ಸಹಕರಿಸಬೇಕು.

ಚೌಡಪ್ಪನಹಳ್ಳಿ ಗ್ರಾಮದಲ್ಲಿ ಕಳೆದ 25 ವರ್ಷದಿಂದ ವಾಸವಿ ರುವ 50 ಗ್ರಾಮಸ್ಥರಿಂದ ಹಕ್ಕುಪತ್ರಗಳ ಕೊಡಿಸುವ ಬೇಡಿಕೆ, ಆಟದ ಮೈಧಾನ, ಕಾಂಕ್ರೀಟ್ ರಸ್ತೆ, ಶಾಲೆಯ ಸಂಪು ರಿಪೇರಿ, ನಿರುಪಯುಕ್ತ ಬೋರ್ ವೆಲುಗಳನ್ನು ಪುನರ್ ನವೀಕರಣ, ಚರಂಡಿಗಳ ದುರಸ್ತಿ ಹೈಮಾಸ್, ಸೋಲಾರ್ ಲೈಟ್ ಅಳವಡಿಕೆ, ಉದ್ಯೋಗ ಖಾತ್ರಿ ಯೋಜನೆಯ ಜಾಬ್ ಕಾರ್ಡ್ ಸೇರಿದಂತೆ ಹಲವಾರು ಬೇಡಿಕೆಗಳನ್ನು ಮುಂಬರುವ ಗ್ರಾಮಸಬೆ ಯಲ್ಲಿ ಅನುಮೋದನೆ ಪಡೆದು ಜಾರಿಗೆ ತರಲು ಶ್ರಮಿಸುತ್ತೇನೆಂದರು.

ಚೌಡಪ್ಪನಹಳ್ಳಿ ಗ್ರಾಮದ ಎಂಪಿಸಿಎಸ್ ಅಧ್ಯಕ್ಷ ಮುರಳಿ ಮೋಹನ್ ಮಾತನಾಡಿ, ಗ್ರಾಮಸ್ಥರು ಹಸಿ ಕಸ ಒಣ-ಕಸವನ್ನು ಬೇರ್ಪಡಿಸಿ ಗ್ರಾಮ ಪಂಚಾಯಿತಿಯ ವಾಹನಕ್ಕೆ ನೀಡಬೇಕು ಯಾರು ಕೂಡ ಚರಂಡಿಗೆ ಎಸೆಯಬಾರದು ಮತ್ತು ಸರಗವಾಗಿ ಕೊಳಚೆ ನೀರು ಹರಿದು ಹೋಗಲು ಅವಕಾಶ ಕಲ್ಪಿಸಿಕೊಡಲು ಸಹಕರಿಸಬೇಕು ರಾಜ್ಯದಲ್ಲಿ ಕೋವಿಡ್ 3ಅಲೆ ಬಹಳ ಎಚ್ಚರಿಕೆಯಿಂದ ಎದುರಿಸಲು ಪ್ರತಿಯೊಬ್ಬರ ಮನೆಯ ಸುತ್ತಮುತ್ತ ಸ್ವಚ್ಛತೆ ಕಾಪಾಡ ಬೇಕೆಂದು ಗ್ರಾಮಸ್ಥರಲ್ಲಿ ಮನವಿಮಾಡಿಸದರು. ಗಂಗವಾರ ಚೌಡಪ್ಪನಹಳ್ಳಿ ಪಂಚಾಯಿತಿ ಸದಸ್ಯೆ, ಗೌರಮ್ಮ, ಜೆಡಿಎಸ್ ಮುಖಂಡ ಮನೋಹರ್, ಶಂಕರ್, ಕಾಂಗ್ರೆಸ್ ಮುಖಂಡ ಶಂಕಪ್ಪ, ಗ್ರಾಮಸ್ಥರಾದ ಮಂಜುನಾಥ್, ವೆಂಕಟೇಶ್ ಸೇರಿದಂತೆ ಸುತ್ತ- ಮುತ್ತಲಿನ ಗ್ರಾಮಸ್ಥರಿದ್ದರು.

## ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಮಹಿಳೆಯರನ್ನು ಸಮಾಜದ ಮುಖ್ಯವಾಹಿನಿಯಲ್ಲಿ ಪ್ರತಿ ಬಿಂಬಿಸಲು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಅವರ ಸಾಧನೆಯನ್ನು ಗುರುತಿಸಿ ಪ್ರೋತ್ಸಾಹಿಸಲು ಅಂತರ ರಾಷ್ಟ್ರೀಯ ಮಹಿಳಾ ದಿನಾಚರಣೆಯಂದು ಇಲಾಖಾ ವತಿಯಿಂದ ಪ್ರತಿ ವರ್ಷ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ ನೀಡಲಾಗುತ್ತಿದೆ. ಈ ವಿವಿಧ ಕ್ಷೇತ್ರಗಳಲ್ಲದೇ, ಕ್ಲಿಷ್ಟಕರ ಪರಿಸ್ಥಿತಿಯಲ್ಲಿ ಆತ್ಮಸ್ಥೈರ್ಯದಿಂದ ಹೋರಾಡಿ ಜೀವನೋಪಾಯದಿಂದ ಪಾರು ಮಾಡಿದಂತಹ ಮಹಿಳೆಯರಿಗೆ ವೀರ ಮಹಿಳೆ ಎಂದು ಗುರುತಿಸಿ ಪ್ರಶಸ್ತಿಯನ್ನು ಸಹ ನೀಡಲಾಗುತ್ತಿದೆ. ಆದ್ದರಿಂದ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕಳೆದ 5 ವರ್ಷಗಳಿಂದ ಮಹಿಳಾ ಅಭಿವೃದ್ಧಿ ಕ್ಷೇತ್ರದಲ್ಲಿ ತಮ್ಮನ್ನು ತಾವು ಗುರುತಿಸಿಕೊಂಡಿರುವಂತಹ ಹಾಗೂ ಮಾಧ್ಯಮ ಮತ್ತು ಪತ್ರಿಕೆಗಳಲ್ಲಿ ಪ್ರಕಟಗೊಂಡಂತಹ ಮತ್ತು ಮಹಿಳಾ ಅಭಿವೃದ್ಧಿ ಕ್ಷೇತ್ರದಲ್ಲಿ ಅವಿರತವಾಗಿ ಸೇವೆ ಸಲ್ಲಿಸುತ್ತಿರುವ ಅರ್ಹ ಸ್ವಯಂಸೇವಾ ಸಂಸ್ಥೆಗಳು ಹಾಗೂ ಇತರೆ 5 ಕ್ಷೇತ್ರಗಳಾದ ಕ್ರೀಡೆ, ಕಲೆ, ಸಾಹಿತ್ಯ ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಅತ್ಯುತ್ತಮ ಸೇವೆ ಸಲ್ಲಿಸುತ್ತಿರುವ ಹಾಗೂ ವೀರ ಮಹಿಳೆ ಪ್ರಶಸ್ತಿಗೆ ಅರ್ಹರಿರುವ ಮಹಿಳೆಯರಿಂದ ಪ್ರಸ್ತಾವನೆಗಳನ್ನು ಹಾಗೂ ಜಿಲ್ಲೆಯಲ್ಲಿ ಇಲಾಖೆಯಿಂದ ರಚನೆಯಾಗಿರುವ ಸ್ತ್ರೀಶಕ್ತಿ ಗುಂಪು/ ಒಕ್ಕೂಟಗಳಲ್ಲಿ ಉತ್ತಮ ಸ್ತ್ರೀಶಕ್ತಿ ಸಂಘ/ಒಕ್ಕೂಟ ಪ್ರಶಸ್ತಿಗೆ ಪ್ರಸ್ತಾವನೆಗಳನ್ನು ನಿಗಧಿತ ನಮೂನೆಯಲ್ಲಿ ದಿನಾಂಕ:10.01.2024ರ ಸಂಜೆ 5.30ರೊಳಗಾಗಿ ಆಯಾ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಮುಖಾಂತರ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕಚೇರಿ, ಚಿಕ್ಕಬಳ್ಳಾಪುರ ಇಲ್ಲಿಗೆ ಸಲ್ಲಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ:08156-277111 ನ್ನು ಸಂಪರ್ಕಿಸಬಹುದೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

## ಕೋರ್ಟ್‌ನಲ್ಲಿ ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

**ಬೆಂಗಳೂರು:** ರಾಮನಗರ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಘಟಕದ ಅಧೀನ ನ್ಯಾಯಾಲಯಗಳಲ್ಲಿ ಖಾಲಿ ಇರುವ ಶೀಘ್ರಲಿಪಿಕಾರರು ಗ್ರೇಡ್- III, ಬೆರಳಚ್ಚುಗಾರರು ಮತ್ತು ಬೆರಳಚ್ಚು - ನಕಲುಗಾರರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ. ಶೀಘ್ರಲಿಪಿಕಾರರು ಗ್ರೇಡ್- III, ಹುದ್ದೆಗಳಿಗೆ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು. ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆ ಅಥವಾ ಕರ್ನಾಟಕ ಸೆಕೆಂಡರಿ ಪ್ರೌಢ ಶಿಕ್ಷಣ ಪರೀಕ್ಷೆಗಳ ಮಂಡಳಿ ವತಿಯಿಂದ ನಡೆಸುವ ಕನ್ನಡ ಹಾಗೂ ಆಂಗ್ಲ ಬೆರಳಚ್ಚು ಪ್ರೌಢ ದರ್ಜೆ ಹಾಗೂ ಕನ್ನಡ ಹಾಗೂ ಆಂಗ್ಲ ಲಿಪಿ ಪ್ರೌಢ ದರ್ಜೆ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರಬೇಕು. ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟ್ರಿಯಲ್ ಪ್ರಾಕ್ಟೀಸ್ ಪತ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಹಾಗೂ ಆಂಗ್ಲ ಭಾಷೆಗಳ ಬೆರಳಚ್ಚು ಪ್ರೌಢ ದರ್ಜೆ ಹಾಗೂ ಶೀಘ್ರಲಿಪಿ ಪ್ರೌಢ ದರ್ಜೆ ವಿಷಯಗಳನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರಬೇಕು. ಬೆರಳಚ್ಚುಗಾರರು, ಹುದ್ದೆಗಳಿಗೆ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು. ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆ ಅಥವಾ ಕರ್ನಾಟಕ ಸೆಕೆಂಡರಿ ಪ್ರೌಢ ಶಿಕ್ಷಣ ಪರೀಕ್ಷೆಗಳ ಮಂಡಳಿ ವತಿಯಿಂದ ನಡೆಸುವ ಕನ್ನಡ ಹಾಗೂ ಆಂಗ್ಲ ಬೆರಳಚ್ಚು ಪ್ರೌಢ ದರ್ಜೆ ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರಬೇಕು. ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟ್ರಿಯಲ್ ಪ್ರಾಕ್ಟೀಸ್ ಪತ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಹಾಗೂ ಆಂಗ್ಲ ಭಾಷೆಗಳ ಬೆರಳಚ್ಚು ಪ್ರೌಢ ದರ್ಜೆ ವಿಷಯಗಳನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರಬೇಕು. ಬೆರಳಚ್ಚು-ನಕಲುಗಾರರ, ಹುದ್ದೆಗಳಿಗೆ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು. ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆ ಅಥವಾ ಕರ್ನಾಟಕ ಸೆಕೆಂಡರಿ ಪ್ರೌಢ ಶಿಕ್ಷಣ ಪರೀಕ್ಷೆಗಳ ಮಂಡಳಿ ವತಿಯಿಂದ ನಡೆಸುವ ಕನ್ನಡ ಹಾಗೂ ಆಂಗ್ಲ ಬೆರಳಚ್ಚು ಕಿರಿಯ ದರ್ಜೆ ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರಬೇಕು. ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟ್ರಿಯಲ್ ಪ್ರಾಕ್ಟೀಸ್ ಪತ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಹಾಗೂ ಆಂಗ್ಲ ಭಾಷೆಗಳ ಬೆರಳಚ್ಚು ಕಿರಿಯ ದರ್ಜೆ ವಿಷಯಗಳನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರಬೇಕು.ನಿಗದಿತ ಅರ್ಜಿ ಶುಲ್ಕ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ರೂ.200/-, ಪ್ರವರ್ಗ -2ಎ, 2ಬಿ, 3ಎ, ಮತ್ತು 3 ಬಿಗೆ ಸೇರಿದ ಅಭ್ಯರ್ಥಿಗಳಿಗೆ ರೂ. 100/- ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕದಲ್ಲಿ ವಿನಾಯಿತಿ ನೀಡಲಾಗಿದೆ. ಅರ್ಜಿ ಸಲ್ಲಿಸಲು ಜನವರಿ 22 ಕೊನೆಯ ದಿನಾಂಕವಾಗಿದ್ದು, ಆನ್‌ಲೈನ್‌ನಲ್ಲಿ ಶುಲ್ಕ ಪಾವತಿಸಲು ಜನವರಿ 23 ಕೊನೆಯ ದಿನಾಂಕವಾಗಿದೆ. ಹೆಚ್ಚಿನ ಮಾಹಿತಿಗಾಗಿ ನ್ಯಾಯಾಲಯದ ಅಧಿಕೃತ ಜಾಲತಾಣ https://ramanagara.dcorts.gov.in/online-recruitment/ ಗೆ ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ವಿವಿಧ ಕಾಮಗಾರಿ ಪರಿಶೀಲಿಸಿದ ಜಿಪಂ ಸಿಇಒ

**ಮಂಡ್ಯ:** ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶೇಖ್ ತನ್ವೀರ್ ಆಸೀಫ್ ಅವರು ಡಿಸೆಂಬರ್ 27 ರಂದು ಪಾಂಡವಪುರ ತಾಲ್ಲೂಕಿನಲ್ಲಿ ನಡೆಯುತ್ತಿರುವ ವಿವಿಧ ಕಾಮಗಾರಿಗಳನ್ನು ಪರಿಶೀಲನೆ ನಡೆಸಿದರು.

ಪಾಂಡವಪುರ ತಾಲೂಕಿನ ಲಕ್ಷ್ಮಿ ಸಾಗರ ಗ್ರಾಮ ಪಂಚಾಯಿತಿಯ ಲಕ್ಷ್ಮಿಸಾಗರ ಪ್ರೌಢಶಾಲೆಗೆ ಭೇಟಿ ನೀಡಿ ನರೇಗಾ ಯೋಜನೆಯಡಿ ನಿರ್ಮಾಣಗೊಂಡಿರುವ ಕಾಂಪೌಂಡ್, ಆಟದ ಮೈದಾನವನ್ನು ಪರಿಶೀಲಿಸಿ ಕಾಂಪೌಂಡ್ ಮೇಲೆ ಮಕ್ಕಳಿಗೆ ಅನುಕೂಲವಾಗುವ ಚಿತ್ರಗಳನ್ನು ಬಿಡಿಸುವಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗೆ ಸೂಚಿಸಿದರು. ಮಕ್ಕಳೊಂದಿಗೆ ಸಂವಾದ ನಡೆಸಿ ಮಕ್ಕಳಿಗೆ ಚೆನ್ನಾಗಿ ಓದುವಂತೆ ಸಲಹೆ ನೀಡಿ ಎಲ್ಲಾ ಶಿಕ್ಷಕರಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವಂತೆ ತಿಳಿಸಿದರು. ಮಾಣಿಕ್ಯದಹಳ್ಳಿ ಗ್ರಾಮ ಪಂಚಾಯಿತಿಯ ಬಳ್ಳಾಳೆ ಪ್ರೌಢಶಾಲೆಗೆ ಭೇಟಿ ನೀಡಿ ಹೊಸದಾಗಿ ನಿರ್ಮಾಣಗೊಂಡಿರುವ ಶೌಚಾಲಯ ಕಾಮಗಾರಿಯನ್ನು ಪರಿಶೀಲಿಸಿ ಉತ್ತಮವಾಗಿ ನಿರ್ವಹಣೆ ಮಾಡುವಂತೆ ತಿಳಿಸಿದರು. ಬಳ್ಳಾಳೆ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯಕ್ಕೆ ಭೇಟಿ ನೀಡಿ ತಾಲೂಕು ಪಂಚಾಯಿತಿ ಅನುದಾನ ಕಾಮಗಾರಿಯನ್ನು ಪರಿಶೀಲಿಸಿದರು.

ಮೇಲುಕೋಟೆ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಆಸ್ಪತ್ರೆಯಲ್ಲಿ ಎಲ್ಲಾ ವಿಭಾಗಗಳನ್ನು ಪರಿಶೀಲಿಸಿ ರೋಗಿಗಳಿಗೆ ಸೂಕ್ತ ರೀತಿಯ ಚಿಕಿತ್ಸೆ ನೀಡುವಂತೆ ಆರೋಗ್ಯ ಅಧಿಕಾರಿಗಳಿಗೆ ತಿಳಿಸಿದರು. ಜಕ್ಕನಹಳ್ಳಿ ಗ್ರಾಮ ಪಂಚಾಯಿತಿಯ ಕದಲಗೆರೆ ಕೆರೆ ಅಭಿವೃದ್ಧಿ ಕಾಮಗಾರಿಯನ್ನು ಪರಿಶೀಲಿಸಿದರು. ಇದೇ ಸಂದರ್ಭದಲ್ಲಿ ಪಾಂಡವಪುರ ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ಕಾರ್ಯಪಾಲಕ ಅಭಿಯಂತರರು ಪಿ ಆರ್ ಇ ಡಿ ಪಾಂಡವಪುರ, ಸಹಾಯಕ ನಿರ್ದೇಶಕರು ( ಗ್ರಾ, ಉ), ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ತಾಂತ್ರಿಕ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಪ್ರತಿಯೊಬ್ಬರಿಗೂ ಗ್ರಾಹಕ ಹಕ್ಕುಗಳ ಜಾಗೃತಿ ಅಗತ್ಯ

**ಚಾಮರಾಜನಗರ:** ಇತ್ತೀಚಿನ ದಿನಗಳಲ್ಲಿ ಮಕ್ಕಳೇ ಹೆಚ್ಚು ಗ್ರಾಹಕರಾಗಿದ್ದು, ಅವಶ್ಯಕ ವಸ್ತುಗಳನ್ನು ಆನ್‌ಲೈನ್ ಹಾಗೂ ಆಫ್‌ಲೈನ್‌ನಲ್ಲಿ ಖರೀದಿಸುತ್ತಿದ್ದಾರೆ. ಹೀಗಾಗಿ ಮಕ್ಕಳು, ಪೋಷಕರು ಗ್ರಾಹಕರ ಕಾಯ್ದೆಗಳ ಬಗ್ಗೆ ಅರಿವು ಹೊಂದಿದಾಗ ಖರೀದಿಯಲ್ಲಿ ಮೋಸ ಹೋಗದಂತೆ ಎಚ್ಚರ ವಹಿಸಬಹುದು ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದಲ್ಲಿರುವ ಹಳೆ ಕೆ.ಡಿ.ಪಿ ಸಭಾಂಗಣದಲ್ಲಿಂದು ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನ ಶಾಸ್ತ್ರ ಇಲಾಖೆ ಹಾಗೂ ಜಿಲ್ಲಾ ಗ್ರಾಹಕರ ಮಾಹಿತಿ ಕೇಂದರಿವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಗ್ರಾಹಕ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಹಕರು ಸರಕು ಮತ್ತು ಸೇವೆಗಳಲ್ಲಿ ಮೋಸ ಹೋಗದಂತೆ ಜಾಗರೂಕರಾಗಬೇಕು. ವಸ್ತುಗಳಲ್ಲಿ ಯಾವುದೇ ಲೋಪದೋಷಗಳು ಕಂಡುಬರದಂತೆ ಸೇವೆಯನ್ನು ಪಡೆಯಬೇಕು. ಗ್ರಾಹಕರು ವಸ್ತುಗಳನ್ನು ಖರೀದಿಸುವಾಗ ವಸ್ತುಗಳ ಬೆಲೆ, ಅದರ ಗುಣಮಟ್ಟ ಹಾಗೂ ಅದರ ನಿರ್ದಿಷ್ಠ ಅವಧಿ ಎಲ್ಲವನ್ನು ಸರಿಯಾಗಿ ನೋಡಬೇಕು. ಗ್ರಾಹಕರ ಕಾನೂನುಗಳ ಹೆಚ್ಚಿನ ಜಾಗೃತಿ ವಹಿಸಬೇಕು ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು. ಆಹಾರ ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರ ಇಲಾಖೆಯ ಉಪನಿರ್ದೇಶಕರಾದ ಯೋಗಾನಂದ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಪ್ರತಿಒಯೊಬ್ಬರು ಗ್ರಾಹಕರೆ. ರಾಷ್ಟ್ರೀಯ ಗ್ರಾಹಕರ ದಿನದ ಅಂಗವಾಗಿ ಎಲ್ಲರೂ ಗ್ರಾಹಕರ ಕಾನೂನಿನ ಬಗ್ಗೆ ತಿಳಿದುಕೊಳ್ಳಬೇಕು. ಗ್ರಾಹಕಗಳ ಹಕ್ಕುಗಳ ರಕ್ಷಣೆಯ ಜವಾಬ್ದಾರಿಯು ಎಲ್ಲರ ಹೊಣೆಯಾಗಿದೆ. ಗ್ರಾಹಕರು ಪ್ರತಿಯೊಂದು ವಸ್ತುಗಳ ಬಗ್ಗೆ ಸರಿಯಾದ ಕಾಳಜಿ ವಹಿಸಬೇಕು. ಸರಕು ಮತ್ತು ಸೇವೆಗಳ ಸಂಪೂರ್ಣ ಮಾಹಿತಿ ಪಡೆದುಕೊಳ್ಳಬೇಕು ಎಂದರು. ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಎಂ.ವಿ. ಭಾರತಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ಗ್ರಾಹಕರು ಸರಕು ಮತ್ತು ಸೇವೆಗಳಲ್ಲಿ ಮೋಸ ಹೋದಾಗ ಜಿಲ್ಲಾ



ಗ್ರಾಹಕರ ವ್ಯಾಜ್ಯಗಳ ಪರಿಹಾರ ಕೇಂದ್ರದಲ್ಲಿ ದಾವೆ ಹೂಡಬಹುದು. ಗ್ರಾಹಕರು ವಸ್ತುಗಳ ಕೊಂಡುಕೊಳ್ಳುವಾಗ ವಸ್ತುಗಳ ಪೂರ್ಣ ಮಾಹಿತಿ ತಿಳಿದುಕೊಂಡಿರಬೇಕು. ಇ-ಕಾರ್ಮಸ್‌ನಡಿ ವ್ಯಾಪಾರ ವ್ಯವಹಾರ ನಡೆಸುವಾಗ ಷರತ್ತುಗಳ ಬಗ್ಗೆ ಸಂಪೂರ್ಣವಾಗಿ ತಿಳಿದುಕೊಳ್ಳಬೇಕು ಎಂದರು.

ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯರಾದ ರಾಜು ಕೆ.ಎಸ್. ಅವರು ಮಾತನಾಡಿ ಗ್ರಾಹಕರು ಮೋಸಕ್ಕೆ ಒಳಗಾದಾಗ ಜಿಲ್ಲಾ ಗ್ರಾಹಕರ ಪರಿಹಾರ ಆಯೋಗದಲ್ಲಿ ಯಾವ ಕಾನೂನಿನಡಿ ದಾವೆ ಹೂಡಬಹುದು. ಯಾವ ರೀತಿಯಲ್ಲಿ ಗ್ರಾಹಕರು ಪರಿಹಾರ ಕಂಡುಕೊಳ್ಳಬಹುದು ಎಂಬುದರ ಸಂಪೂರ್ಣ ಮಾಹಿತಿ ನೀಡಿದರು. ಪ್ರೊಫೆಶನರಿ ತಹಶೀಲ್ದಾರ್ ರಂಜಿತ್, ಜಿಲ್ಲಾ ಗ್ರಾಹಕ ಮಾಹಿತಿ ಕೇಂದ್ರದ ಸಂಯೋಜಕರಾದ ಶಿವರಾಜಮ್ಮ, ಕಾನೂನು ಮಾಪನ ಶಾಸ್ತ್ರ ಇಲಾಖೆಯ ಸಹಾಯಕ ನಿಯಂತ್ರಕರಾದ ರಾಜೀವ್ ಬಿ.ಎನ್ ಇತರರು ಉಪಸ್ಥಿತರಿದ್ದರು. ಕಾರ್ಯಕ್ರಮಕ್ಕೂ ಮೊದಲು ಶಾಟ್‌ಪುಟ್‌ನಲ್ಲಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾದ ಜಿಲ್ಲೆಯ ಅಂಧ ವಿದ್ಯಾರ್ಥಿ ಪವನ್ ಅವರನ್ನು ಜಿಲ್ಲಾಧಿಕಾರಿ ಹಾಗೂ ಗಣ್ಯರು ಸನ್ಮಾನಿಸಿದರು.

## ಹಸಿಸುಳ್ಳುಗಾರ, ವಚನಭ್ರಷ್ಟ ಸಿಎಂ ಸಿದ್ದರಾಮಯ್ಯ

**ಚಾಮರಾಜನಗರ:** ಹಸಿಸುಳ್ಳುಗಾರ, ವಚನಭ್ರಷ್ಠ ಮುಖ್ಯಮಂತ್ರಿ ಸಿದ್ದರಾಮಯ್ಯ ಎಂದು ಬಿಜೆಪಿ ನೂತನ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ವಾಗ್ದಾಳಿ ನಡೆಸಿದರು.

ನಗರದ ಕುಲುಮೆ ರಸ್ತೆಯಲ್ಲಿರುವ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚುನಾವಣಾ ಪೂರ್ವದಲ್ಲಿ 5 ಗ್ಯಾರಂಟಿಗಳನ್ನು ಘೋಷಿಸಿ ಮನೆಮನೆಗೆ ಗ್ಯಾರಂಟಿ ಕಾರ್ಡ್ ತಲುಪಿಸಿ ಮಂಕ ಮಾಡಿ 130 ಸ್ಥಾನಗನ್ನು ಗೆದ್ದು. ಅಧಿಕಾರಕ್ಕೆ ಬಂದ 3 ತಿಂಗಳಲ್ಲಿ ನುಡಿದಂತೆ ನಡೆದಿದ್ದೇವೆ ಎಂದು ಜಾಹೀರಾತು ಫಲಕಗಳಲ್ಲಿ ಹಾಕಿಸಿಕೊಂಡರು. ಆದರೆ 5 ಗ್ಯಾರಂಟಿಗಳನ್ನು ಸಮರ್ಪಕವಾಗಿ ಈಡೇರಿಸದೇ ಹಸಿಸುಳ್ಳುಗಾರ, ವಚನಭ್ರಷ್ಠ ಮುಖ್ಯಮಂತ್ರಿಯಾಗಿದ್ದಾರೆ ಎಂದು ಹರಿಹಾಯ್ದರು.

ನನಗೂ 200 ಯೂನಿಟ್, ನಿನಗೂ 200 ಯೂನಿಟ್ ಉಚಿತ ಎಂದರಲ್ಲ ಸಿದ್ದರಾಮಯ್ಯ. ಇವರು ಖಾಖಾ ಪಾಟೀಲ್, ಎಚ್.ಸಿ.ಮಹದೇವಪ್ಪ 200 ಯೂನಿಟ್ ಉಚಿತ ಕರೆಂಟ್ ಪಡೆಯಲು ಅರ್ಹರೆ ಎಂದು ಖಾರವಾಗಿ ಪ್ರಶ್ನಿಸಿದರು.

ನನ್ನನ್ನು ರಾಜ್ಯದ ಉಪಾಧ್ಯಕ್ಷರನ್ನಾಗಿ ನೇಮಕ ಮಾಡುವುದಕ್ಕೆ ರಾಜ್ಯದ ಎಲ್ಲ ಮುಖಂಡರು, ರಾಷ್ಟ್ರೀಯ ನಾಯಕರುಗಳು ಒಪ್ಪಿಗೆಕೊಟ್ಟಿದ್ದಾರೆ. ನಾನು ಅಲ್ಲದೆ 10 ಮಂದಿ ಉಪಾಧ್ಯಕ್ಷರನ್ನು ಅಳೆದು ತೂಗಿ ಪ್ರಾದೇಶಿಕ ಸಮಾನತೆ ಕೊಡಬೇಕು ಸಾಮಾಜಿಕ ಸಮಾನತೆ ಕೊಡಬೇಕು ಎಂದು ಹೇಳಿ ತುಂಬಾ ಲೆಕ್ಕಾಚಾರ ಈ ಟೀಂ ಆಯ್ಕೆ ಮಾಡಿದ್ದಾರೆ. ಯಾವುದೇ ಟೀಂ ಮಾಡುವಾಗ ಅಸಮಾಧಾನ ಇದ್ದೆ ಇರುತ್ತದೆ. ತುಂಬಾ ಕಷ್ಟ ಇದೆ. ಈ ಟೀಂ ರಾಜ್ಯದ, ಕೇಂದ್ರ, ವರಿಷ್ಠರು ಬೆಂಬಲ ಕೊಟ್ಟಿದ್ದಾರೆ. ಇದಕ್ಕೆ ನಿಮ್ಮೆಲ್ಲರ ಬೆಂಬಲ ಸಹಕಾರ ಅಗತ್ಯವಾಗಿದೆ. ನಾನು ಬಿಜೆಪಿಯಲ್ಲಿರುವುದು ನನ್ನ ಸೌಭಾಗ್ಯ, ಎಂದರು.

ಮುಂಬರುವ ಲೋಕಸಭಾ ಚುನಾವಣೆಯಲ್ಲಿ ರಾಜ್ಯದ 28 ಸ್ಥಾನಕ್ಕೆ 28 ಸ್ಥಾನವನ್ನು ಗೆಲ್ಲುವುದಾಗಿ ರಾಜ್ಯಾಧ್ಯಕ್ಷರಾದ ವಿಜಯೇಂದ್ರ, ಘೋಷಣೆ



ಮಾಡಿದ್ದಾರೆ. ಅದರಂತೆ ನಾವೆಲ್ಲರೂ ಸಂಘಟಿತರಾಗಿ ಲೋಕಸಭಾ ಚುನಾವಣೆಯನ್ನು ಸಮರ್ಥವಾಗಿ ಎದುರಿಸಿ ಚಾಮರಾಜನಗರ ಲೋಕಸಭಾ ಕ್ಷೇತ್ರ ಸೇರಿದಂತೆ ರಾಜ್ಯದ 28 ಕ್ಷೇತ್ರಗಳಲ್ಲಿ ಕಮಲವನ್ನು ಗೆಲ್ಲಿಸಲು ಸಂಕಲ್ಪ ಮಾಡೋಣ ಎಂದರು.

ಬಿಜೆಪಿ, ಜೆಡಿಎಸ್ ಮೈತ್ರಿಯಾಗಿದ್ದು, ಎರಡು ಪಕ್ಷಗಳು ಹೋರಾಟ ಮಾಡಿ 28 ಸ್ಥಾನಗಳನ್ನು ಗೆಲ್ಲುತ್ತೇವೆ ಇದು ನಮ್ಮ ಜವಾಬ್ದಾರಿ, ನಾವು ಕೈಗೊಂಡಿರುವ ಸಂಕಲ್ಪ ಮಾಡಿದ್ದೇನೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಬಿಜೆಪಿ ಅಧ್ಯಕ್ಷ ನಾರಾಯಣಪ್ರಸಾದ್, ಮಾಜಿ ಶಾಸಕರಾದ ಎಸ್.ಬಾಲರಾಜ್, ನಿರಂಜನ್‌ಕುಮಾರ್, ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ, ಚಾಮುಲ್ ಅಧ್ಯಕ್ಷ ನಾಗೇಂದ್ರ, ಮಾಜಿ ಅಧ್ಯಕ್ಷ ಆರ್ .ಸುಂದರ್, ಜಿಲ್ಲಾವಕ್ತಾರ ಅಯ್ಯನಪುರ ಶಿವಕುಮಾರ್, ಪ್ರಧಾನ ಕಾರ್ಯದರ್ಶಿಗಳಾದ ಮಂಗಲಶಿವಕುಮಾರ್, ನಾಗಶ್ರೀಪ್ರತಾಪ್, ಮಹದೇವಸ್ವಾಮಿ, ಮುಖಂಡರಾದ ನೂರೊಂದುಶೆಟ್ಟಿ, ಡಾ.ಎ.ಆರ್ .ಬಾಬು, ಎಸ್‌ಸಿ ಮೋರ್ಚಾದ ಜಿಲ್ಲಾಧ್ಯಕ್ಷ ಮೂಡ್ನಾಕೂಡಪ್ರಕಾಶ್, ಎಸ್‌ಟಿ ಮೋರ್ಚಾದ ಜಿಲ್ಲಾಧ್ಯಕ್ಷ ಜಯಸುಂದರ್, ನಗರ ಮಂಡಲ ಅಧ್ಯಕ್ಷ ರಾಜು, ಪ್ರಧಾನ ಕಾರ್ಯದರ್ಶಿ ಶಿವು ರಾಮಸಮುದ್ರ, ಇತರರು ಹಾಜರಿದ್ದರು.

# ಕುಂದು ಕೊರತೆ ಸಭೆಯಲ್ಲಿ ಅನಾವರಗೊಂಡ ಸಮಸ್ಯೆಗಳು

**ಚನ್ನಪಟ್ಟಣ:** ಪರಿಶಿಷ್ಟ ಜಾತಿ.ಪರಿಶಿಷ್ಟ ಪಂಗಡದ ಕುಂದು ಕೊರತೆಗಳ ಸಭೆ ಹಿತರಕ್ಷಣಾ ಸಮಿತಿ ಅಧ್ಯಕ್ಷ,ತಾಲೂಕು ದಂಡಾಧಿಕಾರಿ ಮಹೇಂದ್ರ ಕುಮಾರ್ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ನಗರದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಅಸ್ಪೃಶ್ಯತೆ ಆಚರಣೆ ಮತ್ತು ಸ್ಮಶಾನದ ಬಗ್ಗೆ ಹಾಗೂ ಹತ್ತು ಹಲವು ಸಮಸ್ಯೆಗಳ ಬಗ್ಗೆ ಚರ್ಚೆ ಮಾಡಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಅಧಿಕಾರಿಗಳು ಕಾನೂನು ಕ್ರಮದ ಮೂಲಕ ಮುಂದಾಗಬೇಕು ಎಂದು ದಲಿತ ಮುಖಂಡರು ಮನವಿ ಮಾಡಿದರು. ಸಮಾಜ ಕಲ್ಯಾಣ ಇಲಾಖೆ.ಪೊಲೀಸ್ ಇಲಾಖೆ ಹಾಗೂ ಸಂಭಂದಿಸಿದ ಇಲಾಖೆ ಅಧಿಕಾರಿಗಳು ಕರೆಯುವ ಸಭೆ ಕಾಟಾಚಾರದ ಸಭೆಯೇ ಹೊರತು ಇದುವರೆಗೂ ಯಾವ ಅಧಿಕಾರಿಗಳಾಗಲಿ,ಶಾಸಕರಾಗಲಿ ದಲಿತರ ಸಮಸ್ಯೆಗಳ ಬಗ್ಗೆ ಸ್ಪಂದಿಸುತ್ತಿಲ್ಲ.ಗ್ರಾಮಗಳಲ್ಲಿ. ನಗರಗಳಲ್ಲಿ ದಲಿತರಿಗೆ ನಿವೇಶನಗಳು ಇಲ್ಲದೆ.ಶೇವಿಂಗ್ ಷಾಪ್ ಗಳಲ್ಲಿ ಶೇವಿಂಗ್ ಮಾಡಿಸಲು ಆಗದೆ ನಾವು ನಮ್ಮ ಮುಖ ಮುಚ್ಚಿಕೊಂಡೆ ಓಡಾಡುವಂತೆ ಆಗಿದೆ ಇದಕ್ಕೆ ಅಧಿಕಾರಿಗಳು ಮತ್ತು ಶಾಸಕರು ಯಾವ ಕಾನೂನು ಕ್ರಮ ತೆಗೆದು ಕೊಂಡಿದ್ದಾರೆ ಎಂಬ ಪ್ರಶ್ನೆಗಳ ಮೇಲೆ ಪ್ರಶ್ನೆಗಳು ಹಾಕಿದರು ಸಹ ವೇದಿಕೆಯಲ್ಲಿದ್ದ ಅಧಿಕಾರಿಗಳು ಉತ್ತರ ನೀಡದೆ ಮೌನವಹಿಸಿದ್ದರು. ದಲಿತ ಮುಖಂಡರು ತಾಲೂಕಿನಲ್ಲಿ



ಕಾಡುತ್ತಿರುವ ಸಮಸ್ಯೆಗಳ ಬಗ್ಗೆ ಮಾಹಿತಿ ನೀಡುವ ಮೂಲಕ ಇಂದು ಗ್ರಾಮಗಳಲ್ಲಿ ಹಾಗೂ ನಗರದಲ್ಲಿ ನಿವೇಶನಗಳ ಕೊರತೆ. ಜಮೀನು. ಖಾತೆಗಳ ವಿಚಾರದಲ್ಲಿ ಇಲಾಖೆಯ ಅಧಿಕಾರಿಗಳ ಬಳಿ ಅರ್ಜಿ ಸಲ್ಲಿಸಿ ಮನವಿ ಮಾಡಿದರು ಸಹ ಯಾರು ಸ್ಪಂದಿಸದೆ ವರ್ಷಗಟ್ಟಲೆ ಅಲೆದಾಡುವಂತಗಿದೆ. ನಗರಸಭೆಗೆ ಜನರು ಪ್ರತಿ ನಿತ್ಯ ಅಲೆದಾಡುವಂತಾಗುತ್ತಿದೆ.ಇದರ ಬಗ್ಗೆ ಯಾರನ್ನು ಕೇಳಬೇಕು.ಅಂಬೇಡ್ಕರ್ ಅವರು ನೀಡಿರುವ ಸಂವಿಧಾನದಿಂದ ಹುದ್ದೆ ಪಡೆದುಕೊಂಡಿರುವ ಅಧಿಕಾರಿಗಳೇ ಈ ರೀತಿ ಆಡಳಿತ ನೆಡೆಸಿದರೆ ನ್ಯಾಯ ಎಲ್ಲಿ ಸಿಗುತ್ತದೆ ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡು ಮೊದಲು ಕಾನೂನು ಪ್ರಕಾರ ಅಧಿಕಾರ ನೆಲೆಸಬೇಕು ಎಂದು ಮನವಿ ಮಾಡಿದರು. ದಲಿತ ಮುಖಂಡರು ಅಹವಾಲುಗಳನ್ನು ಸಲ್ಲಿಸಿ ತಾಲೂಕಿನಲ್ಲಿ ಆಗುತ್ತಿರುವ ದಬ್ಬಾಳಿಕೆ. ಅಧಿಕಾರಿಗಳ ಅಧಿಕಾರದ ದುರ್ಬಳಿಕೆ. ನ್ಯಾಯಯುತವಾಗಿ ಸಿಗದ ಸಕಲ ಸೌಕರ್ಯ,ಅನುದಾನಗಳ ಬಿಡುಗಡೆ. ನಿವೇಶನಗಳ ಹಂಚಿಕೆ. ಖಾತೆಗಳಲ್ಲಿ ಆಗುತ್ತಿರುವ ಬದಲಾವಣೆ. ಸೇರಿದಂತೆ ಹತ್ತು ಹಲವು ಸಮಸ್ಯೆಗಳ ಬಗ್ಗೆ ನೀಡಿದ ಮಾಹಿತಿಗಳಿಗೆ ಉತ್ತರ ನೀಡಿದ ತಾಲೂಕು ದಂಡಾಧಿಕಾರಿ ಕೂಡಲೆ ಸಮಸ್ಯೆಗಳನ್ನು ಕುರಿತು ಕಾನೂನು ಪ್ರಕಾರ. ಹಾಗೂ ಎದುರುತ್ತಿರುವ ಸಮಸ್ಯೆಗಳ ಬಗ್ಗೆ ಮಾಹಿತಿ ಪಡೆದು ಕೂಡಲೆ ನ್ಯಾಯದೊರಕಿಸಲು ಪ್ರಮಾಣಿಕವಾಗಿ ಕಾರ್ಯನಿರ್ವಹಿಸುತ್ತೇನೆ ಎಂದು ಭರವಸೆ ನೀಡಿದರು. ನಗರಸಭೆಯಲ್ಲಿ ನೆಡೆಯುತ್ತಿರುವ ದುರಾಡಳಿತ ಎಸ್‌ಸಿಪಿ ಅನುದಾನದ ದುರ್ಬಳಿಕೆ. ಶೇ 22.5 ಮೀಸಲು ಹಣದ ಬಗ್ಗೆ ವಿವರವಾಗಿ ತಿಳಿಸಿದ ದಲಿತ ಮುಖಂಡರು ನಗರಸಭೆಯ ಪೌರಯುಕ್ತರು ಇದರ ಬಗ್ಗೆ ಚರ್ಚೆ ಅಗುತ್ತೇ ಎಂಬ ಕಾರಣದಿಂದ ಈ ಸಭೆಗೆ ಹಾಜರಾಗಲಿಲ್ಲ ಅವರನ್ನು ಕೂಡಲೆ ಸಭೆಗೆ ಕರೆಯಿರಿ ಎಂದು ನೇರವಾಗಿ ಹೇಳಿದ ಮುಖಂಡರು ಎಸ್‌ಸಿಪಿ ಅನುದಾನ 5ಕೋಟಿ ರೂ ಅದರಲ್ಲೂ ದಲಿತ ಸಮುದಾಯಕ್ಕೆ ಸಿಗಬೇಕಾದ ಸಹಾಯಧನವನ್ನು ಬೇರೆ ಬೇರೆ ಕೆಲಸ ಕಾಮಗಾರಿಗೆ ದುರ್ಬಳಿಕೆ ಮಾಡಿಕೊಳ್ಳುತ್ತಿದ್ದು ದಲಿತ ಸಮುದಾಯದ ಮಕ್ಕಳ ವಿದ್ಯಾಭ್ಯಾಸಕ್ಕೆ ಸಿಗಬೇಕಾದ ಸಹಾಯಧನ ಒಂದು ರೂಪಾಯಿ ಸಿಗಲಿಲ್ಲ ಎಂದು ನಗರಸಭೆಯಲ್ಲಿ ನೆಡೆಯುತ್ತಿರುವ ಆಡಳಿತ. ದಬದಬಾಳಿಕೆ. ಹಣದ ದುರ್ಬಳಿಕೆಯ ಬಗ್ಗೆ ನೇರ ಅರೋಪ ಮಾಡಿದ ಮುಖಂಡರು ಕೂಡಲೆ ಅದರ ಬಗ್ಗೆ ತನಿಖೆ ಆಗಲಿ ಎಂದು ಒತ್ತಾಯ ಮಾಡಿದರು. ಜಿ.ಪಂ.ಕಾರ್ಯನಿರ್ವಾಹಕ ಎಂಎಲ್ ಶಂಕ್ರಪ್ಪ. ತಾಲೂಕುಪಂಚಾಯತಿ ಬಿ.ಎಸ್.ಸತೀಶ್.ಸಮಾಜಕಲ್ಯಾಣ ಇಲಾಖೆಯ ಸಹಯಾಕ ನಿರ್ದೇಶಕಿ ಸರೋಜಮ್ಮ,ತಾಲೂಕು ವೈದ್ಯಾಧಿಕಾರಿ ಡಾ.ರಾಜು.ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳು ವೇದಿಕೆಯಲ್ಲಿ ಉಪಸ್ಥಿತರಿದ್ದರು. ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಮತ್ತೀಕೆರೆ ಹನುಮಂತಯ್ಯ.ಕೋಟೆ ಸಿದ್ಧರಾಮಯ್ಯ.ವಕೀಲ ದೇವರಾಜ್. ಮಂಗಳವಾರಪೇಟೆ. ಡಿಎಸ್‌ಎಸ್ ವೆಂಕಟೇಶ (ಶೇರು.),ಕೂಡ್ಲೂರು ಸಿದ್ದರಾಮು. ಕೆಂಗಲ್ ಮೂರ್ತಿ. ಜಿ.ಕಿರಣ ಕುಮಾರ್. ಅಪ್ಪಗೆರೆ ಶ್ರೀನಿವಾಸ್ ಮೂರ್ತಿ. ಮಲ್ಲುಂಗೆರೆ ಮಹಾದೇವ್,ಶೆಟ್ಟಿಹಳ್ಳಿ ಪ್ರಕಾಶ್, ಬ್ಯಾಡರಹಳ್ಳಿ ಶಿವು ಅಹವಾಲು ಸಲ್ಲಿಸಿದರು.

## ಜಮೀನುಗಳಲ್ಲಿ ವ್ಯವಸಾಯ ಮಾಡಲು ಅವಕಾಶ ಕಲ್ಪಿಸಿಕೊಡುವಂತೆ ಸಾಗುವಳಿದಾರರಿಂದ ಮನವಿ

**ಚಾಮರಾಜನಗರ:** ಹೆಚ್.ಡಿ.ಫಾರೆಸ್ಟ್ ಮತ್ತು ಪುಣಜನೂರು ಸ್ಟೇಟ್ ಫಾರೆಸ್ಟ್ ಸರ್ವೆ ನಂಬರ್ 1 ಮತ್ತು 3, 5 ರಲ್ಲಿ ನೀಡಿರುವ ಜಮೀನುಗಳನ್ನು ಸ್ವಚ್ಛಮಾಡಿಸಿಕೊಂಡು ಉಳುಮೆ ಮಾಡಲು ಅರಣ್ಯ ಇಲಾಖೆಯವರು ತೊಂದರೆ ನೀಡುತ್ತಿದ್ದಾರೆ. ನಮ್ಮ ಜಮೀನುಗಳಲ್ಲಿ ವ್ಯವಸಾಯ ಮಾಡಲು ಅವಕಾಶ ಮಾಡಿಕೊಡಬೇಕು ಎಂದು ಎಸ್ ಸಿ, ಎಸ್ ಟಿ ಸಾಗುವಳಿದಾರರು ದಲಿತ ಮಹಾಸಭಾ ರಾಜ್ಯ ಉಪಾಧ್ಯಕ್ಷ ವೆಂಕಟರಮಣಸ್ವಾಮಿ(ಪಾಪು) ಅವರ ನೇತೃತ್ವದಲ್ಲಿ ಮೈಸೂರಿನಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಚಿವರಾದ ಹೆಚ್.ಸಿ.ಮಹದೇವಪ್ಪ ಅವರಿಗೆ ಮನವಿ ಸಲ್ಲಿಸಿದ್ದಾರೆ.

ಮಾಜಿ ರಾಜ್ಯಪಾಲರಾದ ಬಿ.ರಾಚಯ್ಯನವರು ಸುಮಾರು 50 ವರ್ಷಗಳ ಹಿಂದೆ 150 ಫಲಾನುಭವಿಗಳಿಗೆ ತಲಾ 2.5 ಎಕರೆ ಜಮೀನುಗೆ ಸಾಗುವಳಿ ಚೀಟಿ ವಿತರಿಸಿದ್ದು, ಅದರಂತೆ ಫಲಾನುಭವಿಗಳು ಅನುಭವದಲ್ಲಿದ್ದಾರೆ. ಅಲ್ಲಿ ವ್ಯವಸಾಯ ಮಾಡಲು ಹೋದರೆ ಅರಣ್ಯ ಇಲಾಖೆಯವರು ತೊಂದರೆ ಕೊಡುತ್ತಿದ್ದಾರೆ. ಸಾಗುವಳಿದಾರರ ಜಮೀನಿನಲ್ಲಿ ವ್ಯವಸಾಯ ಮಾಡಲು ಅವಕಾಶ ಮಾಡಿಕೊಡಬೇಕು ಎಂದು ಪಾಪು ಸಚಿವರಲ್ಲಿ ಮನವಿ ಮಾಡಿದರು. ಆಗ ಜಿಲ್ಲಾಧಿಕಾರಿ ಶಿಲ್ಪಾನಾಗ್ ಅವರಿಗೆ ಫೋನ್ ಕರೆ ಮಾಡಿ ಇದರ ಬಗ್ಗೆ ಪರಿಶೀಲಿಸಿ ಸಾಗುವಳಿದಾರರಿಗೆ ವ್ಯವಸಾಯ ಮಾಡಲು ಅವಕಾಶ ಮಾಡಿಕೊಡುವಂತೆ ಆದೇಶ ಮಾಡಿದರು. ಈ ಸಂದರ್ಭದಲ್ಲಿ ವಕೀಲರಾದ ದಲಿತ್ ರಾಜ್ ದಲಿತ ಸಂಘರ್ಷ ಸಮಿತಿಯ ಜಿಲ್ಲಾ ಸಂಯೋಜಕರಾದ ಸಿ.ಎಂ. ಶಿವಣ್ಣ, ಯಜಮಾನ ಮಹದೇವಯ್ಯ, ದಲಿತ ಮುಖಂಡರು ಹಾಜರಿದ್ದರು.



### ಮಾಜಿ ಸಚಿವ, ಶಾಸಕ ಸಿ. ಪುಟ್ಟರಂಗಶೆಟ್ಟಿ ಹೇಳಿಕೆ

## ಸ್ವಾತಂತ್ರ್ಯ ತಂದುಕೊಟ್ಟದ್ದು ಕೈ

**ಚಾಮರಾಜನಗರ:** ದೇಶದ ಸ್ವಾತಂತ್ರ್ಯ ಕ್ಕಾಗಿ ಉದಯವಾದ ಕಾಂಗ್ರೆಸ್ ಪಕ್ಷ ಅನೇಕರ ತ್ಯಾಗ ಬಲಿದಾನದಿಂದ ತನ್ನದೇ ಅದ ತತ್ವಸಿದ್ದಾಂತಗಳೊಂದಿಗೆ ದೇಶಕ್ಕೆ ಸ್ವಾತಂತ್ರ್ಯ ವನ್ನು ತಂದುಕೊಟ್ಟಿದೆ ಎಂದು ಮಾಜಿ ಸಚಿವ ಹಾಗೂ ಶಾಸಕ ಸಿ. ಪುಟ್ಟರಂಗಶೆಟ್ಟಿ ತಿಳಿಸಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನಡೆದ 138ನೇ ಕಾಂಗ್ರೆಸ್ ಸಂಸ್ಥಾಪನಾ ದಿನಾಚರಣೆ ಕರ?ಯಕ್ರಮದಲ್ಲಿ ಹಿರಿಯ 10 ಮಂದಿ ಕಾಂಗ್ರೆಸ್ ಮುಖಂಡರನ್ನು ಸನ್ಮಾನಿಸಿ ಅವರು ಮಾತನಾಡಿದರು.

1885 ರಲ್ಲಿ ಕಾಂಗ್ರೆಸ್ ಪಕ್ಷ ಸ್ಥಾಪನೆಯಾಯಿತು. ಬ್ರಿಟಿಷರ ದಾಸ್ಯದಲ್ಲಿದ್ದ ಭಾರತವನ್ನು ಮುಕ್ತಿಗೊಳಿಸುವ ಹೋರಾಟದಲ್ಲಿ ಪಾಲ್ಗೊಂಡಿರುವ ಪಕ್ಷ ನಮ್ಮದು. ಅಧಿಕಾರ ಅಸೆಗೆ ಹುಟ್ಟಿಕೊಂಡಿರುವ ಪಕ್ಷಗಳಿಂದ ದೇಶ ಪ್ರೇಮದ ಪಾಠವನ್ನು ನಾವು ಕೇಳಬೇಕಾಗಿಲ್ಲ, ಅನೇಕ ಮಹನೀಯರು ಪಕ್ಷ ಕಟ್ಟಿ, ಬೆಳೆಸಿ, ವಿಶಿಷ್ಟವಾದ ಕೊಡುಗೆಯನ್ನು ನೀಡಿ ಹೋಗಿದ್ದಾರೆ ಎಂದರು.

ಕಳೆದ 138 ವರ್ಷಗಳಿಂದ ಕಾಂಗ್ರೆಸ್ ಪಕ್ಷದ ತತ್ವ ಸಿದ್ದಾಂತಕ್ಕೆ ಬದ್ದವಾಗಿ ಸಮೃದ್ದ ಭಾರತ ನಿರ್ಮಾಣಮ ಜಾತ್ಯತೀತಭಾರತವನ್ನು ನಿರ್ಮಾಣ ಮಾಡಲು ಶ್ರಮಿಸುತ್ತಿದೆ. ಇಂಥ ಪಕ್ಷದ ಕಾರ್ಯಕರ್ತರಾಗಿರುವುದೇ ನಮ್ಮೆಲ್ಲರಿಗೂ ಹೆಮ್ಮೆ ಎಂದು ಅವರ ಮಾರ್ಗದರ್ಶನ ಮತ್ತು ತತ್ವ ಸಿದ್ದಾಂತದಲ್ಲಿ ನಂಬಿಕೆ ಇಟ್ಟುಕೊಂಡು ಪಕ್ಷವನ್ನು ಮುನ್ನಡೆಸೋಣ. ಕಾಂಗ್ರೆಸ್ ಪಕ್ಷ ಎಲ್ಲಾ ವರ್ಗದವರು ಹಾಗು ಜಾತಿಯವರನ್ನು ಒಗ್ಗೂಡಿಸಿಕೊಂಡು ಸಾಮಾಜಿಕ ನ್ಯಾಯಕ್ಕೆ ಹೆಚ್ಚಿನ ಅದ್ಯತೆ ನೀಡುತ್ತಾ ಸಾಗಿದೆ. ಸಾಮಾನ್ಯ ಕಾರ್ಯಕರ್ತನಿಗೂ ಇಲ್ಲಿ ಅಧಿಕಾರ ದೊರೆಯುತ್ತದೆ ಎಂದರು. ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ. ಮರಿಸ್ವಾಮಿ ಕಾಂಗ್ರೆಸ್ ಧ್ವಜಾರೋಹಣ ಮಾಡಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಕೇವಲ ಕಾಂಗ್ರೆಸ್ ಪಕ್ಷ ಚುನಾವಣೆಗೆ ಮೀಸಲಾದ ಪಕ್ಷವಲ್ಲ, ಇದೊಂದು ಚಳವಳಿ ಹಾಗೂ ಆಂದೋಲನವಾಗಿದೆ. ನಿಷ್ಠಾವಂತ



ಕಾಂಗ್ರೆಸ್ಸಿಗರಿಗೆ ಮಾನ್ಯತೆ ದೊರೆಯುತ್ತದೆ ಎಂಬುವುದಕ್ಕೆ ಇಲ್ಲಿ ಅಭಿನಂದಿಸ್ಪಡುತ್ತಿರುವವರು ಸಾಕ್ಷಿ. ನಾನು ಸಹ ಪಕ್ಷದ ಸಕ್ರಿಯ ಕಾರ್ಯಕರ್ತನಾಗಿದ್ದು, ಎಂದೂ ಸಹ ಪಕ್ಷಕ್ಕೆ ದ್ರೋಹ ಬಗೆದಿಲ್ಲ, ನಮ್ಮ ಗ್ರಾಮದಲ್ಲಿ ನಮ್ಮನ್ನು ಈಗಲು ಸಹ ಕಾಂಗ್ರೆಸ್ ಪಕ್ಷದವರ ಮನೆ ಎಂದು ಗುರುತಿಸಲಾಗುತ್ತಿದೆ. ನಮ್ಮ ತಂದೆ, ತಾತ ಅವರ ಕಾಲದಿಂದಲು ನಾವು ಕಾಂಗ್ರೆಸ್, ನನ್ನ ಉಸಿರು ಕಾಂಗ್ರೆಸ್. ಎಂಥಾ ಕ್ಲಿಷ್ಟಕರ ಪರಿಸ್ಥಿತಿ ಬಂದಾಗಲು ಸಹ ಕಾಂಗ್ರೆಸ್ ಪಕ್ಷ ಬಿಟ್ಟು ಬೇರೆ ಪಕ್ಷದ ಕಡೆ ಮುಖ ಮಾಡಲಿಲ್ಲ ಎಂದು ಮರಿಸ್ವಾಮಿ ಪ್ರತಿಪಾದಿಸಿದರು.

ಪ್ರತಿ ಹಳ್ಳಿ ಹಳ್ಳಿಯಲ್ಲಿಯೂ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಹಾಗೂ ಸೇನಾನಿಗಳು ಇದ್ದಾರೆ. ಇವರನ್ನು ಸ್ಮರಣೆ ಮಾಡಿಕೊಳ್ಳುವ ಜೊತೆಗೆ ಪಕ್ಷದ ತತ್ವ ಸಿದ್ದಾಂತಗಳನ್ನು ಒಪ್ಪಿ ಯುವಕರು ಕಾಂಗ್ರೆಸ್ ಸರ?ಪಡೆಕೊಂಡು ಜಾತ್ಯತೀತ ನಿಲುವು ಹಾಗು ಸಾಮಾಜಿಕ ನ್ಯಾಯಪರವಾದ ನಮ್ಮ ಪಕ್ಷ ಸಂಘಟನೆ ಮಾಡಲು ಮುಂದಾಗಬೇಕು ಎಂದರು.

ಹಿರಿಯ ಕಾಂಗ್ರೆಸ್ ಮುಖಂಡರಾದ ಕೇತಹಳ್ಳಿ ಶಿವಪಾದಪ್ಪ, ಕರಿನಂಜನಪುರ ಮಹದೇವಯ್ಯ, ಚಾ.ನಗರ ಪರಶುರಾಮು, ಮಹಮದ್ ಅತೀಕ್, ಮಾದಾಪುರ ಸಿದ್ದರಾಮು, ನಗರಸಭಾ ಮಾಜಿ ಅಧ್ಯಕ್ಷೆ ಚಿನ್ನಮ್ಮ, ಜಿಲ್ಲಾ ಕರ?ಯರ?ಶಿ ಪದ್ಮ ಪುರುಷೋತ್ತಮ್, ಸಿದ್ದಯ್ಯನಪುರ ಲಕ್ಷ್ಮಿ ನಾರಾಯಣ, ಸಾಗಡೆ ನಂಜುಂಡನಾಯಕ, ಉತ್ತುವಳ್ಳಿ ಮಹದೇವಯ್ಯ ಅವರನ್ನು ಶಾಲು ಹೊದಿಸಿ, ಫಲತಾಂಬುಲ ನೀಡಿ ಅಭಿನಂದಿಸಲಾಯಿತು.

ಕರ?ಯಕ್ರಮದಲ್ಲಿ ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ. ಕೆ.ರವಿಕುಮಾರ್, ಪ್ರಧಾನ ಕರ?ಯರ?ಶಿಗಳಾದ ಚಿಕ್ಕಮಹದೇವ್, ಆರ್. ಮಹದೇವ್, ಬ್ಲಾಕ್ ಅಧ್ಯಕ್ಷರಾದ ಎ.ಎಸ್. ಗುರುಸ್ವಾಮಿ, ಮಹಮದ್ ಅಸ್ಗರ್, ಜಿಲ್ಲಾ ವಕ್ತಾರ ಕೆರೆಹಳ್ಳಿ ನವೀನ್, ಸೈಯದ್ ರಫಿ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಲತಾರಾಜಶೇಖರ್ ಜತ್ತಿ, ಜಿಲ್ಲಾ ಮಹಿಳಾ ಅಧ್ಯಕ್ಷೆ ಲತಾ ರಾಜಶೇಖರ್ ಜತ್ತಿ, ಅಲ್ಪಸಂಖ್ಯಾತರ ವಿಭಾಗದ ಅಧ್ಯಕ್ಷ ಅಪ್ಸಲ್ ಷರೀಫ್, ಮುಖಂಡರಾದ ಸಿ.ಎ. ಮಹದೇವಶೆಟ್ಟಿ, ಅರಕಲವಾಡಿ ಸೋಮನಾಯಕ, ಕಾಗಲವಾಡಿ ಚಂದ್ರು, ಕಾಗಲವಾಡಿ ಶಿವಸ್ವಾಮಿ, ಗೋವಿಂದರಾಜು, ನಾಗವಳ್ಳಿ ನಾಗಯ್ಯ, ಶೇಖರಪ್ಪ, ವೈ.ಪಿ.ರಾಜೇಂದ್ರ, ಎಚ್‌ಎನ್ ಖಾನ್, ಉಮ್ಮತ್ತೂರು ಭಾಗ್ಯ, ನಾಗಶ್ರೀ, ಇತರರು ಇದ್ದರು.

## ಡೇರಿಗೆ ಗುಣಮಟ್ಟದ ಹಾಲು ಪೂರೈಸಿ ಸಂಘದ ಪ್ರಗತಿಗೆ ಶ್ರಮಿಸಿ



**ಚಾಮರಾಜನಗರ:** ಜಿಲ್ಲಾ ಹಾಲು ಒಕ್ಕೂಟದಿಂದ 2024ರ ನೂತನ ದಿನದರ್ಶಿಕೆ ಹಾಗೂ ಡೈರಿಯನ್ನು ಚಾಮುಲ್ ಅಧ್ಯಕ್ಷ ವೈ.ಸಿ.ನಾಗೇಂದ್ರ ಬಿಡುಗಡೆ ಮಾಡಿದರು.

ಕುದೇರಿನಲ್ಲಿ ಚಾಮುಲ್ ಕಚೇರಿ ಸಭಾಂಗಣದಲ್ಲಿ ನೂತನ ದಿನದರ್ಶಿಕೆ ಹಾಗೂ ಡೇರಿಯನ್ನು ಬಿಡುಗಡೆಗೊಳಿಸಿ ಮಾತನಾಡಿದ ಅವರು, ಜಿಲ್ಲೆಯ ಅಭಿವೃದ್ಧಿ ಹಾಗೂ ಹೈನುಗಾರರ ಪ್ರಗತಿಗೆ ಜಿಲ್ಲಾ ಹಾಲು ಒಕ್ಕೂಟ ಶ್ರಮಿಸುತ್ತಿದೆ. ಜಿಲ್ಲೆಯ ವ್ಯಾಪ್ತಿಯಲ್ಲಿರುವ ಹೈನುಗಾರರು ಗುಣಮಟ್ಟದ ಹಾಲು ಪೂರೈಕೆ ಮಾಡುವ ಪ್ರಗತಿಗೆ ಮುಂದಾಗಬೇಕು ಎಂದರು.

ನೂತನ 2024ರ ವರ್ಷವು ರೈತಾಪಿ ವರ್ಗಕ್ಕೆ ಒಳ್ಳೆಯದನ್ನು ಮಾಡಲು. ಮಳೆ, ಬೆಳೆ ಸಮೃದ್ದಿಯಾಗಿ ಒಕ್ಕೂಟಕ್ಕೆ ಇನ್ನು ಹೆಚ್ಚಿನ ಹಾಲು ಶೇಖರಣೆ ಮಾಡಿ, ಗ್ರಾಹಕರಿಗೆ ಗುಣಮಟ್ಟದ ತಾಜಾ ನಂದಿನಿ ಹಾಲು ಉತ್ಪನ್ನಗಳನ್ನು ನೀಡಲಿ ಎಂದು ಶುಬಖ ಕೋರಿದರು.

ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ರಾಜಕುಮಾರ್ ಮಾತನಾಡಿ, ಪ್ರತಿ ವರ್ಷದಂತೆ ಈ ಬಾರಿಯು ನೂತನ ಕ್ಯಾಲೆಂಡರ್ ಹಾಗೂ ಡೈರಿಯನ್ನು ಪ್ರಕಟಸಿ, ಹೊರ ತರಲಾಗುತ್ತಿದೆ. ನಂದಿನಿ ಮಾರಾಟಗಾರರು ಹಾಗೂ ಸಂಘಗಳ ಅಧ್ಯಕ್ಷರು ಪದಾಧಿಕಾರಿಗಳು ಡೇರಿ ಹಾಗೂ ಕ್ಯಾಲೆಂಡರ್ ಅವನ್ನು ಪಡೆದುಕೊಂಡು ಒಕ್ಕುಟಕ್ಕೆ ಹೆಚ್ಚಿನ ಬೆಂಬಲ ನೀಡಬೇಕು ಎಂದರು.

ಕಾರ್ಯಕ್ರಮದಲ್ಲಿ ಚಾಮುಲ್ ನಿರ್ದೇಶಕರಾದ ಎಚ್.ಎಸ್. ಬಸವರಾಜು, ಎಚ್.ಎಸ್. ನಂಜುಂಡಪ್ರಸಾದ್, ಸದಾಶಿವಮೂರ್ತಿ, ಉದ್ದನೂರು ಪ್ರಸಾದ್, ಎಂ.ಪಿ. ಸುನೀಲ್, ಶಾಹುಲ್ ಅಹಮದ್, ಒಕ್ಕೂಟದ ಅಧಿಕಾರಿಗಳಾದ ಶ್ರೀಕಾಂತ್, ಶಿವಪ್ರಸಾದ್, ಪ್ರಸಾದ್, ಸೋಮಶೇಖರ್, ಗೋವಿಂದರಾಜು ಇತರರು ಇದ್ದರು.

## ವಿಶ್ವಮಾನವ ಜಯಂತಿ ಆಚರಣೆ

**ಹನೂರು:** ಪಟ್ಟಣದಲ್ಲಿ ಒಕ್ಕಲಿಗರ ಸಂಘದ ವತಿಯಿಂದ ವಿಶ್ವಮಾನವ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಣೆ ಮಾಡಲಾಯಿತು.

ಹನೂರು ಪಟ್ಟಣದ ಆಟೋನಿಲ್ದಾಣದ ಬಳಿ ಶುಕ್ರವಾರದಂದು ವಿಶ್ವಮಾನವ ದಿನಾಚರಣೆಯ ಹಿನ್ನಲೆ ಕುವೆಂಪುರವರ ನಾಮಫಲಕಕ್ಕೆ ಪುಷ್ಪನಮನವನ್ನ ಸಲ್ಲಿಸಿ ಗೌರವ ಸಲ್ಲಿಸಲಾಯಿತು. ಈ ವೇಳೆ ಪಟ್ಟಣ ಪಂಚಾಯತಿ ಸದಸ್ಯರಾದ ಗಿರೀಶ್ ಕುವೆಂಪುರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ನಂತರಮಾತನಾಡಿ ಕುವೆಂಪುರವರ ಕನ್ನಡ ಪ್ರೇಮ ನಮ್ಮೆಲ್ಲರಿಗೂ ಮಾದರಿಯಾಗಬೇಕು ದೂರ ದೃಷ್ಟಿಯುಳ್ಳ ಮಹಾನ್ ವ್ಯಕ್ತಿ ವಿಶ್ವಮಾನವರಾಗಿ ಗುರುತಿಸಿಕೊಂಡಿರುವ ಅವರ ಸಂದೇಶ ಆದರ್ಶವಾಗಿದೆ ಎಂದರು. ಪಪಂ ಸದಸ್ಯ ಹರೀಶ್ ಮಾತನಾಡಿ ಕುವೆಂಪುರವರು ಇಪ್ಪತ್ತನೆಯ ಶತಮಾನ ಕಂಡ ದೈತ್ಯ ಪ್ರತಿಭೆ. ವರಕವಿ ಬೇಂದ್ರೆ ಅವರಿಂದ ಯುಗದ ಕವಿ ಜಗದ ಕವಿ ಎನಿಸಿಕೊಂಡು ವಿಶ್ವಮಾನವ ಸಂದೇಶ ನೀಡಿದ ಮಹಾಕವಿ ಕುವೆಂಪು. ಅವರ ಮನುಜ ಮತ, ವಿಶ್ವಪಥ, ವಿಶ್ವ ಮಾನವ ಸಂದೇಶ, ಕೊಳಲು, ಪಾಂಚಜನ್ಯ, ಜಲಗಾರ ಮೊದಲಾದ ಕೃತಿಗಳು ಮೇರು ಬರಹಗಳಾಗಿವೆ ಕನ್ನಡ ಸಾಹಿತ್ಯ ಲೋಕಕ್ಕೆ ಅಪಾರ ಕೊಡುಗೆ ನೀಡಿದ ಕುವೆಂಪು ಅವರ ಸಾಹಿತ್ಯವನ್ನು ಪ್ರತಿಯೊಬ್ಬರೂ ಓದಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಅಖಿಲ ಕರ್ನಾಟಕ ಒಕ್ಕಲಿಗರ ಸಂಘದ ಚಾಮರಾಜನಗರ ಜಿಲ್ಲಾದ್ಯಕ್ಷ ನಾಗೇಂದ್ರ, ಹನೂರು ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಕಾರ್ಯದರ್ಶಿ ಅಭಿಲಾಷ್, ಒಕ್ಕಲಿಗ ಯುವ ಸಮತಿ ಅದ್ಯಕ್ಷ ಸಂತೋಷ್, ಕೊಳ್ಳೇಗಾಲ ತಾಲ್ಲೂಕು ಒಕ್ಕಲಿಗರ ಸಂಘದ ಮಾಜಿ ನಿರ್ದೇಶಕ ಗೋವಿಂದೇಗೌಡ, ಮಲೆಮಹದೇಶ್ವರ ಸ್ವಾಮಿ ಪಾದಯಾತ್ರೆಗಳ ಸೇವಾ ಸಮಿತಿ ಕಾರ್ಯದರ್ಶಿ ಶಶಿ, ಮುಖಂಡರಾದ ಸಿದ್ದರಾಜು, ದೇಸಿಗೌಡ, ನಟರಾಜು ಸುರೇಶ್,ಸಿಪಾಯಿ , ನಾರಾಯಣ್ ಹಾಗೂ ಮಂಜು, ನಂಧೀಶ್ ವೆಂಕಟೇಶ್ ,ಮಾದೇಶ್ ಹಾಜರಿದ್ದರು.



## ವಿಶ್ವಮಾನವ ವಿಚಾರಧಾರೆಗಳು ಮನಃ ಕ್ಲೇಶ ತೊಳೆಯುವಲ್ಲಿ ಸಹಕಾರಿ

**ಕೋಲಾರ:** ವಿಶ್ವಮಾನವ ಕುವೆಂಪು ವಿಚಾರಧಾರೆಗಳು ಮನುಷ್ಯರ ಮನಸ್ಸಿನಲ್ಲಿರುವ ಕ್ಲೇಶಗಳನ್ನು ತೊಳೆಯುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸುನಿಲ್ ಎಸ್ ಹೊಸಮನಿ ಅವರು ಅಭಿಪ್ರಾಯಪಟ್ಟರು. ನಗರದ ಟಿ.ಚನ್ನಯ್ಯ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಯೋಜಿಸಿದ್ದ, ರಾಷ್ಟ್ರಕವಿ ಕುವೆಂಪು ಅವರ ಜನ್ಮ ದಿನಾಚರಣೆಯಲ್ಲಿ ಕುವೆಂಪು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು. ಕುವೆಂಪು ಯಾವುದೇ ಜಾತಿಗೆ ಸೇರಿದವರಲ್ಲದವರು. ವೈಚಾರಿಕ ಪ್ರಜ್ಞೆಯೊಂದಿಗೆ ಪೂರ್ಣ ಅರಳಿದ ಬದುಕು ಅವರದಾಗಿತ್ತು. ಅನುಭವದ ಆಳಕ್ಕೆ ಇಳಿದು ಕವಿಯಾಗಿ ಜಗತ್ತಿಗೆ ವಿಚಾರಧಾರೆಗಳನ್ನು ಹಂಚುವ ಮೂಲಕ ವಿಶ್ವಕ್ಕೆ ಉತ್ತಮ ಸಂದೇಶಗಳನ್ನು ನೀಡಿ ಮನುಕುಲದಲ್ಲಿ ಅಜರಾಮರಾಗಿ ಉಳಿದದರು ವಿಶ್ವಮಾನವನಾಗಿ ಎಲ್ಲರ ಮನೆ ಮನದಲ್ಲಿ ಉಳಿದುಕೊಂಡಿರುವ ಇಂತಹ ಮಹಾನ್ ಸಂತನನ್ನು ನೆನೆಯುವುದೇ ನಮ್ಮೆಲ್ಲರ ಭಾಗ್ಯ ಎಂದು ಸ್ಮರಿಸಿದರು ಯಾವ ವ್ಯಕ್ತಿ ಎಲ್ಲಿ ಹೋದರೂ,ದೈವತ್ವದ ದೃಷ್ಟಿಯಿರಿಸಿಕೊಂಡಿರುತ್ತಾನೋ ಆತ ಮಾತ್ರ ವಿಶ್ವಮಾನವನಾಗಲು ಸಾಧ್ಯ ಅಂತಹ ವ್ಯಕ್ತಿತ್ವ ಕುವೆಂಪು ಅವರಲ್ಲಿ ಇತ್ತು ಎಂದು ಹೇಳಿದರು. ಸಮಾರಂಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಭಾಸ್ಕರ್, ಸಹಾಯಕ ಕಮಿಷನರ್ ವೆಂಕಟಲಕ್ಷ್ಮಿ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಿವಕುಮಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಗೀತಾ, ಒಕ್ಕಲಿಗರ ಸಂಘದ ಅಧ್ಯಕ್ಷರಾದ ಕೆ. ವಿ. ಶಂಕರಪ್ಪ ವಕೀಲರ ಸಂಘದ ಅಧ್ಯಕ್ಷರಾದ ಮುನೇಗೌಡ , ಸಮಾಜ ಸೇವಕರಾದ ಸಿಎಂಆರ್ ಶ್ರೀನಾಥ್, ಉಪನ್ಯಾಸಕರಾದ ನಾಗಾನಂದ್, ಚುಟುಕು ಸಾಹಿತ್ಯ ಸಂಘದ ಅಧ್ಯಕ್ಷರು ಉಪಸ್ಥಿತರಿದ್ದರು.

## ಜ.4ರಂದು ಜಿಲ್ಲಾ ಮಟ್ಟದ ಜನತಾ ದರ್ಶನ

**ಕೋಲಾರ:** ಸರ್ಕಾರದ ನಿರ್ದೇಶನದಂತೆ ಜಿಲ್ಲಾ ಮಟ್ಟದ ಜನತಾ ದರ್ಶನವನ್ನು ಮಾಲೂರು ತಹಶೀಲ್ದಾರ ಕಚೇರಿಯಲ್ಲಿ ಜನವರಿ 4 ರಂದು ಬೆಳಿಗ್ಗೆ 9 ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಈ ಕುರಿತು ಪ್ರಕಟಣೆ ನೀಡಿರುವ ಜಿಲ್ಲಾಧಿಕಾರಿಗಳು, ಮಾಲೂರು ತಾಲೂಕಿನ ಸಾರ್ವಜನಿಕರು ತಮ್ಮ ಅಹವಾಲು, ಮನವಿ, ಸಮಸ್ಯೆಗಳಿದಲ್ಲಿ ಜನವರಿ 4 ರಂದು ಬೆಳಿಗ್ಗೆ 9.00 ಗಂಟೆಗೆ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಆಯೋಜಿಸಿರುವ ಜನತಾ ದರ್ಶನದಲ್ಲಿ ಭಾಗವಹಿಸಿ, ತಮ್ಮ ಅಹವಾಲುಗಳನ್ನು ಸಲ್ಲಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮತದಾರರ ಅಂತಿಮ ಪಟ್ಟಿ ಪ್ರಕಟ

**ಮಾಲೂರು :** ಭಾರತಚುನಾವಣಾಆಯೋಗ ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆಯ ವೇಳಾಪಟ್ಟಿ ಪರಿಷ್ಕರಿಸಿದೆ. ತಿದ್ದುಪಡಿ, ವಿಳಾಸ ಬದಲಾವಣೆ, ವಿವಿಧ ನಮೂನೆಯಅರ್ಜಿ ಫಾರಂ ಸಲ್ಲಿಸಲು ಅವಕಾಶ ನೀಡಲಾಗಿದೆಎಂದು ತಹಸಿಲ್ದಾರ್ ಕೆ ರಮೇಶ್ ತಿಳಿಸಿದ್ದಾರೆ. 2024ರ ಜ.1ಕ್ಕೆ 18 ವರ್ಷ ಪೂರ್ಣಗೊಂಡಎಲ್ಲ ಅರ್ಹ ಮತದಾರರು ನಮೂನೆ-6 ಅರ್ಜಿ ಸಲ್ಲಿಸಬಹುದು. ಹೆಸರು, ವಿಳಾಸ, ಭಾವಚಿತ್ರತಿದ್ದುಪಡಿಗಾಗಿ ನಮೂನೆ-8 ಅರ್ಜಿ ಸಲ್ಲಿಸಬಹುದು ಹಾಗೂ ಮತದಾರರ ಪಟ್ಟಿಯಿಂದ ಹೆಸರುತೆಗೆದುಹಾಕಲು (ಮರಣ ಹೊಂದಿದ ಮನೆಯ ಸಂಬಂಧಿಕರು) ನಮೂನೆ-7 ಅರ್ಜಿಯನ್ನು ಸಲ್ಲಿಸಬಹುದು. ಅಂತಿಮ ಮತದಾರರ ಪಟ್ಟಿ ಜ.22ರಂದು ಪ್ರಕಟವಾಗಲಿದೆಎಂದರು.

## ಡೇರಿ ಸಂಘಕ್ಕೆ ಅವಿರೋಧ ಆಯ್ಕೆ

**ರಾಮನಗರ:** ತಾಲ್ಲೂಕಿನ ಕುಂಭಾರದೊಡ್ಡಿ ಹಾಲು ಉತ್ಪಾದಕರ ಸಂಘಕ್ಕೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಪುಟ್ಟರೇವಣ್ಣ ಉಪಾಧ್ಯಕ್ಷರಾಗಿ ಸರೋಜಮ್ಮ ಅವಿರೋಧವಾಗಿ ಆಯ್ಕೆಯಾದರು. ಸಂಘಕ್ಕೆ ಶನಿವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ತಲಾ ಒಬ್ಬರೇ ನಾಮಪತ್ರ ಸಲ್ಲಿಸಿದ ಕಾರಣ ಅವಿರೋಧವಾಗಿ ಆಯ್ಕೆಯಾದರು. ಚುನಾವಣಾಧಿಕಾರಿ ಉಮೇಶ್ ಕರ್ತವ್ಯ ನಿರ್ವಹಿಸಿದರು. ನೂತನವಾಗಿ ಅವಿರೋಧ ಆಯ್ಕೆಯಾದ ಅಧ್ಯಕ್ಷ ಮತ್ತು ಉಪಾಧ್ಯಕ್ಷರನ್ನು ಸಂಘಧ ನಿರ್ದೇಶಕರು, ಗ್ರಾಮಸ್ಥರು, ಮುಖಂಡರು, ಹಾಲು ಉತ್ಪಾದಕರು ಸಂಘದ ಆವರಣದಲ್ಲಿ ಅಭಿನಂದಿಸಿದರು. ನೂತನ ಅಧ್ಯಕ್ಷ ಪುಟ್ಟರೇವಣ್ಣ ಮಾತನಾಡಿ ಹಾಲು ಉತ್ಪಾದಕರ ಶ್ರಮದಿಂದ ಸಂಘ ಉತ್ತಮ ಪ್ರಗತಿಯಲ್ಲಿದೆ. ಪ್ರತೀ ವರ್ಷ ರೈತರಿಗೆ ಒಕ್ಕೂಟದಿಂದ ದೊರೆಯುವ ಪ್ರಯೋಜನ ಸಂಘದಿಂದ ಸಿಗುವ ಸವಲತ್ತುಗಳನ್ನು ರೈತರಿಗೆ ತಲುಪಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಸಂಘದ ಆಡಳಿತ ಮಂಡಳಿ ಸದಸ್ಯರ ಉತ್ತಮ ಸಹಕಾರ ಪಡೆದು ಸಂಘವನ್ನು ಮತ್ತಷ್ಟು ಅಭಿವೃದ್ಧಿ ಪಡಿಸಲಾಗುತ್ತದೆ. ರೈತರು ಸಂಘಕ್ಕೆ ಶುದ್ಧ ಹಾಲು, ಹೆಚ್ಚು ಹಾಲು ಸರಬರಾಜು ಮಾಡಿ ಸಂಘದಿಂದ ಮತ್ತಷ್ಟು ಸವಲತ್ತು ಪಡೆಯಲು ಮುಂದಾಗಬೇಕು ಜೊತೆಗೆ ಸಂಘದ ಅಭಿವೃದ್ಧಿಗೆ ಉತ್ತಮ ಸಹಕಾರ ನೀಡಬೇಕು ಎಂದರು. ಸಂಘದ ಉಪಾಧ್ಯಕ್ಷೆ ಸರೋಜಮ್ಮ, ನಿರ್ದೇಶಕರಾದ ಕೆ.ಎಸ್. ಉಮೇಶ್, ಶ್ರೀನಿವಾಸ್, ರುದ್ರಪ್ಪ, ಕೆ.ಟಿ. ದೇವರಾಜು, ಕೆ. ರಮೇಶ್, ಕೆ.ಟಿ. ಪುಟ್ಟೇಗೌಡ, ಕೆ.ಆರ್. ಶೇಖರ್, ಸವಿತ, ಜಯಮ್ಮ,ಮುಖ್ಯಕಾರ್ಯನಿರ್ವಾಹಕ ಡಿ.ಲೋಕೇಶ್, ಹಾಲು ಪರೀಕ್ಷಕ ಬಸವರಾಜು ಉಪಸ್ಥಿತರಿದ್ದರು



## ಹಾರ್ಡ್ವಿಕ್ ಶಾಲೆಯಲ್ಲಿ ಅರಳಿದ ಕುವೆಂಪು ಸಾಹಿತ್ಯ

**ಮೈಸೂರು:** ರಸ ಋಷಿ, ವಿಶ್ವ ಕವಿ ಕುವೆಂಪು ಅವರು ಪ್ರತಿಷ್ಠಿತ ಮೈಸೂರಿನ ಹಾರ್ಡ್ವಿಕ್ ಪ್ರೌಢ ಶಾಲೆಯಲ್ಲಿ ವಿದ್ಯಾರ್ಥಿಯಾಗಿದ್ದ ಸಂದರ್ಭದಲ್ಲೇ ಅವರೊಳಗಿನ ಕಾವ್ಯ ಪ್ರತಿಭೆ ಆಗಲೇ ಅರಳಲು ಪ್ರಾರಂಭಿಸಿ ಮಹಾ ಕವಿಯ ಮಹಾ ಕಾವ್ಯ ಭವಿಷ್ಯಕ್ಕೆ ಮುನ್ನುಡಿ ಬರೆದಿದ್ದು ಈ ದಿಶೆಯಲ್ಲಿ ಹಾರ್ಡ್ವಿಕ್ ಶಿಕ್ಷಣ ಸಂಸ್ಥೆಗೊಂದು ಚಾರಿತ್ರಿಕ ಮಹತ್ವವಿದೆಯೆಂದು ಪತ್ರಕರ್ತರೂ ಆದ ಸಾಹಿತಿ ಬನ್ನೂರು ಕೆ.ರಾಜು ತಿಳಿಸಿದರು.

ನಗರದ ಝಾನ್ಸಿರಾಣಿ ಲಕ್ಷ್ಮೀ ಬಾಯಿ ರಸ್ತೆಯಲ್ಲಿರುವ ಹಾರ್ಡ್ವಿಕ್ ಪ್ರೌಢಶಾಲೆ ಮತ್ತು ಹಿರಣ್ಮಯಿ ಪ್ರತಿಷ್ಠಾನ ಹಾಗೂ ಕಾವೇರಿ ಬಳಗ ಸಂಯುಕ್ತವಾಗಿ ಶಾಲಾ ಆವರಣದಲ್ಲಿ ವಿಶ್ವಕವಿ ಕುವೆಂಪು ಜಯಂತಿಯ ಅಂಗವಾಗಿ ಏರ್ಪಡಿಸಿದ್ದ 'ವಿಶ್ವಮಾನವ ದಿನಾಚರಣೆ' ಕಾರ್ಯಕ್ರಮವನ್ನು ಕುವೆಂಪು ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಉದ್ಘಾಟಿಸಿ ಮಾತನಾಡುತ್ತಿದ್ದ ಅವರು, ಕನ್ನಡ ಮಂತ್ರ ಕಣಾ, ಶಕ್ತಿ ಕಣಾ... ಎನ್ನುತ್ತಲೇ ಕನ್ನಡ ಡಿಂಡಿಮ ಬಾರಿಸುತ್ತಾ ತಮ್ಮ ಲೇಖನಿ ಮಾತ್ರದಿಂದಲೇ ಕನ್ನಡವನ್ನು ವಿಶ್ವದೆತ್ತರಕ್ಕೂ ಕೊಂಡೊಯ್ದ ಸಾಹಿತ್ಯಲೋಕದ ಮೇರುಶಿಖರ ಕುವೆಂಪು ಅವರೆಂದರು.

ನಮ್ಮ ಕನ್ನಡದ ಆದಿಕವಿ ಪಂಪನ 'ಮನುಷ್ಯ ಜಾತಿ ತಾನೊಂದೇವಲಂ' ಎಂಬುದನ್ನು ಕುವೆಂಪು ಅವರು ತಮ್ಮ ಬದುಕು ಮತ್ತು ಬರಹದ ಧ್ಯೇಯ ವಾಕ್ಯ ಮಾಡಿಕೊಂಡು ಕನ್ನಡವನ್ನು ಕಟ್ಟಿದವರು. ಅಷ್ಟು ಮಾತ್ರವಲ್ಲ, ಎಲ್ಲಾ ದೇಶಗಳಲ್ಲಿ ಮತ್ತು ಎಲ್ಲಾ ಮತಗಳಲ್ಲಿರುವ ಜಾತಿ ಪದ್ಧತಿಯನ್ನು ಸಂಪೂರ್ಣವಾಗಿ ನಿರಾಕರಿಸಿ ವಿನಾಶಗೊಳಿಸಬೇಕು. ಮತ ಮನುಜ ಮತವಾಗಬೇಕು ಪಥ ವಿಶ್ವಪಥವಾಗಬೇಕು ಎಂದು ಜಗತ್ತಿಗೆ ವಿಶ್ವಮಾನವ ಸಂದೇಶ ನೀಡಿದ ಪ್ರಪಂಚದ ಪ್ರಪ್ರಥಮ ಮಹಾಕವಿ ಕುವೆಂಪು ಎಂದ ಅವರು,ಇಂತಹ ಜಗದ ಕವಿಯ, ಯುಗದ ಕವಿಯ ಜನ್ಮದಿನವನ್ನು ವಿಶ್ವಮಾನವ ದಿನಾಚರಣೆಯನ್ನಾಗಿ ನಾಡು ಆಚರಿಸುತ್ತಿರುವುದು ಇಡೀ ಜಗತ್ತೇ ಮೆಚ್ಚುವಂಥದ್ದೆಂದು ಹೇಳಿದರು. ಸಾರ್ವಜನಿಕ ಶಿಕ್ಷಣ ಇಲಾಖೆಯ ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಹಾಗು ಸಾಹಿತಿ ಡಾ.ಬಿ.ಸಿ. ವಿಜಯ ಕುಮಾರ್ ಮಾತನಾಡಿ, ಇವತ್ತೇನಾದರು ನಮ್ಮ ಕನ್ನಡ ಅಂತಾರಾಷ್ಟ್ರೀಯ ಮಟ್ಟದಲ್ಲಿ ಇಷ್ಟೊಂದು ಸಾಧನೆ ಮಾಡಿ ಜಾಗತಿಕವಾಗಿ ಗಮನ ಸೆಳೆದಿದೆ ಎಂದರೆ ಕನ್ನಡ ನಾಡಿನ ಇಬ್ಬರು ಮಹಾತ್ಮರು ಪ್ರಮುಖ ಕಾರಣರು. ಅವರಲ್ಲಿ ಒಬ್ಬರು ಚಲನ ಚಿತ್ರ ಜಗತ್ತಿನ ಮೇರು ನಟ ಡಾ.ರಾಜ್ ಕುಮಾರ್ ಮತ್ತೊಬ್ಬರು ರಾಷ್ಟ್ರ ಕವಿ ಕುವೆಂಪು ಅವರೆಂದು ಹೇಳಿ ಅವರ ಬದುಕ-ಬರಹ, ಸಾಧನೆ-ಸಿದ್ಧಿಯ ಬಗ್ಗೆ ಸವಿವರವಾಗಿ ತಿಳಿಸಿಕೊಟ್ಟರು. ಪ್ರತಿಷ್ಠಾನದ ಅಧ್ಯಕ್ಷರಾದ ವಿಶ್ರಾಂತ ಶಿಕ್ಷಕ ಎ. ಸಂಗಪ್ಪ ಅವರು, ಪ್ರಾಸ್ತಾವಿಕ ನುಡಿಗಳ ನ್ನಾಡಿ ಎಲ್ಲರನ್ನೂ ಸ್ವಾಗತಿಸಿದರಲ್ಲದೆ ಕಾರ್ಯಕ್ರಮ ದ ಸದುದ್ದೇಶದ ಬಗ್ಗೆ ತಿಳಿಸಿ ಕೊಟ್ಟರು. ಕುವೆಂಪು ಸ್ಮರಣೆಯಲ್ಲಿ ಮಕ್ಕಳ ಶಿಕ್ಷಣಕ್ಕೆ ಪೂರಕವಾದ ವಿವಿಧ ಸ್ಪರ್ಧೆಗಳನ್ನು ನಡೆಸಿ ವಿಜೇತ ವಿದ್ಯಾರ್ಥಿಗಳಾದ ಭಾಷಣ ಸ್ಪರ್ಧೆಯಲ್ಲಿ 10ನೇ ತರಗತಿಯ ಹರ್ಷ (ಪ್ರ), ಬಿಂದುಶ್ರೀ(ದ್ವಿ) ಮತ್ತು ಗೀತ ಗಾಯನ ಸ್ಪರ್ಧೆಯಲ್ಲಿ ಸುರೇಶ್ ರಾವ್ (ಪ್ರ),ಕುಸುಮಾ(ದ್ವಿ) ಹಾಗೂ ಗೀತ ಗಾಯನ ಸ್ಪರ್ಧೆಯಲ್ಲಿ 9ನೇ ತರಗತಿಯ ರಕ್ಷಾ(ಪ್ರ), ಶಿವರಾಜ್ (ದ್ವಿ) ಅವರುಗಳಿಗೆ ಕಲಾವಿದೆ ಹಾಗೂ ಲೇಖಕಿ ಡಾ.ಜಮುನಾರಾಣಿ ಮಿರ್ಲೆ ಅವರು ಬಹುಮಾನ ನೀಡಿ ಅಭಿನಂದಿಸಿದರು. ಕವಯಿತ್ರಿ ಮತ್ತು ಗಾಯಕಿ ರೋಹಿಣಿ ಶೇಖರ್ ಅವರು ಕುವೆಂಪು ರಚಿತ ಕನ್ನಡ ಗೀತಾಗಾಯನ ಕಾರ್ಯಕ್ರಮ ನಡೆಸಿಕೊಟ್ಟರು. ಮುಖ್ಯ ಅತಿಥಿಗಳಾಗಿ ಜಮುನಾರಾಣಿ ಮಿರ್ಲೆ,ಮುಕ್ತಕ ಕವಿ ಎಂ.ಮುತ್ತುಸ್ವಾಮಿ ವಿಶ್ವೇಶ್ವರಯ್ಯ ನಲ್ಲಿ ಮತ್ತು ಒಳಚರಂಡಿ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ನಿರ್ದೇಶಕ ಚಂದ್ರೇಗೌಡ ಶಿಕ್ಷಕರಾದ ಸಿ.ಷಣ್ಮುಖ, ಕೃಷ್ಣನಾಯಕ್, ರಮ್ಯಾ, ಪುಷ್ಪಲತಾ, ಅಕ್ಕಮಹಾದೇವಿ ಅವರು ಮುಖ್ಯ ಅತಿಥಿಗಳಾಗಿ ಉಪಸ್ಥಿತರಿದ್ದರು.ಹಿರಿಯ ಶಿಕ್ಷಕಿ ಜೆ.ಸಬೀನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರವ 'ಏದ ನಂತರ ಎಲ್ಲರಿಗೂ ಸಿಹಿ ವಿತರಿಸಿ ವಿಶ್ವಮಾನವ ದಿನಾಚಣೆಯ ಶುಭಾಶಯ ಕೋರಲಾಯಿತು.

### ಅನುಮತಿ ಇಲ್ಲದೆ ವಂಶವೃಕ್ಷ ಕೃತಿ ಅನುವಾದ

## 5 ಲಕ್ಷ ಪರಿಹಾರಕ್ಕೆ ಕೋರ್ಟ್ ತೀರ್ಪು

**ಮೈಸೂರು:** ಖ್ಯಾತ ಕಾದಂಬರಿಕಾರ ಎಸ್.ಎಲ್. ಭೈರಪ್ಪ ಅವರ ವಂಶವೃಕ್ಷ ಕೃತಿಯನ್ನು ಅನಧಿಕೃತವಾಗಿ ತೆಲುಗು ಭಾಷೆಗೆ ಅನುವಾದ ಮಾಡಿ ಪ್ರಕಟಿಸಿ ಕಾಪಿರೈಟ್ ಉಲ್ಲಂಘಿಸಿದ್ದ ಹೈದರಾಬಾದ್‌ನ ಪ್ರಿಯದರ್ಶಿನಿ ಪ್ರಚುರಣಾಲು ಪ್ರಕಾಶನದ ವತ್ಸಲಾ ಅವರು 5.05 ಲಕ್ಷ ನಷ್ಟ ಪರಿಹಾರ ನೀಡುವಂತೆ ನಿರ್ದೇಶಿಸಿ ಇಲ್ಲಿನ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯವು ಡಿ.21ರಂದು ತೀರ್ಪು ನೀಡಿದೆ.

ಭೈರಪ್ಪ ಅವರು ವಂಶವೃಕ್ಷವನ್ನು ತೆಲುಗು ಭಾಷೆಗೆ ಅನುವಾದಿಸುವ ಹಕ್ಕನ್ನು ಸನಗರಂ ನಾಗಭೂಷಣಂ ಎಂಬವರಿಗೆ ನೀಡಿದ್ದರು. ಅವರು ವಂಶವೃಕ್ಷಂ ಎಂಬ ಹೆಸರಿನಲ್ಲಿ ತೆಲುಗಿಗೆ ಅನುವಾದಿಸಿದ್ದರು. ಕೆಲವು ವರ್ಷಗಳ ಹಿಂದೆ ನಿಧನರಾದರು. ಭೈರಪ್ಪ ಅವರು ತೆಲುಗಿಗೆ ಅನುವಾದಿಸಲು ನಾಗಭೂಷಣಂ ಬಿಟ್ಟು ಬೇರಾರಿಗೂ ಅನುಮತಿ ನೀಡಿರಲಿಲ್ಲ.

ಪ್ರಿಯದರ್ಶಿನಿ ಪ್ರಚುರಣಾಲು ಪ್ರಕಾಶನದ ಸಂಪಾದಕಿ ವತ್ಸಲಾ ಅವರು ವಂಶವೃಕ್ಷಂ ಅನುವಾದಿತ ಕೃತಿಯನ್ನು ಹೊಸದಾಗಿ ಪ್ರಕಟಿಸಿದ್ದಾರೆಂಬ ಮಾಹಿತಿಯು ಭೈರಪ್ಪ ಅವರಿಗೆ 2021ರ ನವೆಂಬರ್‌ನಲ್ಲಿ ತಿಳಿಯಿತು. ಆ ಕೃತಿ ಅವಲೋಕಿಸಿದಾಗ ?ಎಲ್ಲಾ ಹಕ್ಕುಗಳನ್ನು ಕಾಯ್ದಿರಿಸಲಾಗಿದೆ ಎಂಬ ಘೋಷಣೆಯೂ ಇರುವುದು ಗಮನಕ್ಕೆ ಬಂದಿತ್ತು. ತೆಲುಗಿಗೆ ಅನುವಾದಿಸಿ ಮರುಮುದ್ರಿಸುವ ಹಕ್ಕನ್ನು ವತ್ಸಲಾ ಅವರಿಗೆ ಭೈರಪ್ಪ ಅವರು ನೀಡಿರಲಿಲ್ಲ. ಈ ಮೂಲಕ, ವತ್ಸಲಾ ಕಾಪಿರೈಟ್ ಕಾಯ್ದೆ ಉಲ್ಲಂಘಿಸಿದ್ದರು. ಸಾವಿರ ಪ್ರತಿಯನ್ನು ಅನಧಿಕೃತವಾಗಿ ಮುದ್ರಿಸಿ, ಆ ಪುಸ್ತಕಕ್ಕೆ 360 ದರ ನಿಗದಿಪಡಿಸಿದ್ದರು.

ಈ ವಿಚಾರ ತಿಳಿದ ಭೈರಪ್ಪ 2021ರ ನ.15ರಂದು ತಮ್ಮ ವಕೀಲರ ಮೂಲಕ ನೋಟಿಸ್ ನೀಡಿ, ಅನಧಿಕೃತವಾಗಿ ಪ್ರಕಟಿಸಿದ ವಂಶವೃಕ್ಷಂ ಕಾದಂಬರಿಯ ಪ್ರತಿಗಳನ್ನು ಮಾರದಂತೆ ಹಾಗೂ ಮುದ್ರಿತ ಪ್ರತಿಗಳನ್ನು ತಮಗೆ ಒಪ್ಪಿಸುವಂತೆ



ವತ್ಸಲಾ ಅವರಿಗೆ ಸೂಚಿಸಿದ್ದರು. ಕಾನೂನುಬಾಹಿರ ಕೃತ್ಯ ಎಸಗಿದ್ದಕ್ಕಾಗಿ 5 ಲಕ್ಷ ನೀಡುವಂತೆಯೂ ತಿಳಿಸಿದ್ದರು. ಇದಕ್ಕೆ ವತ್ಸಲಾ ಸ್ಪಂದಿಸಿರಲಿಲ್ಲ. ಆದ್ದರಿಂದ 5.05 ಲಕ್ಷ ನಷ್ಟ ಪರಿಹಾರ ಕೊಡಿಸುವಂತೆ ಕೋರಿ ಇಲ್ಲಿನ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ಮೊರೆ ಹೋಗಿದ್ದರು.

ಈ ಪ್ರಕರಣದಲ್ಲಿ ಕೋರ್ಟ್ ಕಮಿಷನರ್ ಪಿ.ಜೆ.ರಾಘವೇಂದ್ರ ಅವರು ಭೈರಪ್ಪ ಮನೆಗೆ ಡಿ.6ರಂದು ತೆರಳಿ ಸಾಕ್ಷ್ಯ ವಿಚಾರಣೆ ನಡೆಸಿ ನ್ಯಾಯಾಲಯಕ್ಕೆ ವರದಿ ನೀಡಿದ್ದರು. ವಿಚಾರಣೆ ನಡೆಸಿದ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಪ್ರಭಾವತಿ ಎಂ. ಹಿರೇಮಠ್ ಅವರು, ತೀರ್ಪು ನೀಡಿದ್ದಾರೆ.

ಭೈರಪ್ಪ ಪರವಾಗಿ ವಕೀಲ ಓ.ಶ್ಯಾಮ್ ಭಟ್ ವಕಾಲತ್ತು ವಹಿಸಿದ್ದರು.

# ಸಂಜೆ ಟಿಪ್ಸ್




## ಬೆಂಗಳೂರಿನ ತಾಜ್‌ನಲ್ಲಿ ಹೊಟೆಲ್‌ನಲ್ಲಿ ಶುದ್ಧ ಹಿಟ್ಟಿನ ಅನಾವರಣ

ಯುರೋಪ್‌ನ ಶುದ್ಧ ಹಿಟ್ಟನ್ನು ಬೆಂಗಳೂರಿನಲ್ಲಿ ಇಟಲಿಯ ಜನರಲ್ ಕಾನ್ಸುಲ್ ಅಲ್ಫೊನ್ಸೊ ಟ್ಯಾಗ್ಲಿಯಾಫೆರಿ ಅವರು ಚೆಫ್ ರಿಕಾರ್ಡೊ ಸ್ಕೈಯೊಲಿ ಬ್ರಾಂಡ್ ಅಂಬಾಸಿಡರ್-ಅಗುಗಿಯಾರೊ ಮತ್ತು ಫಿಗ್ನಾ ಮತ್ತು ಬಾಣಸಿಗ ಡೇವಿಡ್ ಸಿವಿಟಿಯೆಲೊ ಬ್ರಾಂಡ್ ಅಂಬಾಸಿಡರ್-ಮೊಲಿನೊ ಕ್ಯಾಪುಟೊ ಅವರೊಂದಿಗೆ ಬೆಂಗಳೂರಿನಲ್ಲಿ ಅನಾವರಣಗೊಳಿಸಿದರು.

1958 ರಲ್ಲಿ ಸ್ಥಾಪನೆಯಾಯಿತು ಮತ್ತು ರೋಮ್ನಲ್ಲಿ ನೆಲೆಗೊಂಡಿದೆ, ಖಿಖಿಂಐಔಕಂ ಇಟಲಿಯಾದ್ಯಂತ 82 ಹಿಟ್ಟು ಮಿಲ್ಲಿಂಗ್ ಕಂಪನಿಗಳನ್ನು ಪ್ರತಿನಿಧಿಸುವ ಯುರೋಪಿಯನ್ ಒಕ್ಕೂಟದಲ್ಲಿ ಅತಿದೊಡ್ಡ ಕೈಗಾರಿಕಾ ಹಿಟ್ಟಿನ ಸಂಘವಾಗಿದೆ. ಯುರೋಪಿಯನ್ ಮಿಲ್ಲಿಂಗ್ ಉದ್ಯಮವು ಉತ್ತಮ-ಗುಣಮಟ್ಟದ ಹಿಟ್ಟುಗಳ ಉತ್ಪಾದನೆಯನ್ನು ಖಾತ್ರಿಪಡಿಸುತ್ತದೆ, ಅತ್ಯುತ್ತಮ ಧಾನ್ಯಗಳ ಆಯ್ಕೆಯೊಂದಿಗೆ ಪ್ರಾರಂಭಿಸುತ್ತದೆ, ಸಂಪ್ರದಾಯದ ಕೌಶಲ್ಯಪೂರ್ಣ ಮಿಶ್ರಣವನ್ನು ಅತ್ಯಾಧುನಿಕ ತಂತ್ರಜ್ಞಾನದೊಂದಿಗೆ ಸಂಯೋಜಿಸಲಾಗಿದೆ, ಎಲ್ಲಾ ಕಟ್ಟುನಿಟ್ಟಾದ ಗುಣಮಟ್ಟದ ಮಾನದಂಡಗಳಿಗೆ ಬದ್ಧವಾಗಿದೆ.ಇಟಲಿಯಿಂದ ಮೃದುವಾದ ಗೋಧಿ ಹಿಟ್ಟಿನ ರಫ್ತು ಹೆಚ್ಚಿಸಲು ಭಾರತದಲ್ಲಿ ಉತ್ತಮ ಅವಕಾಶವನ್ನು ನಾವು ನೋಡುತ್ತೇವೆ.ಹಿಂದೆಂದಿಗಿಂತಲೂ ಹೆಚ್ಚು, ಹೋಮ್ ಕುಕ್ಸ್ ಮತ್ತು ಬಾಣಸಿಗರು ಆರೋಗ್ಯಕರ, ಪೌಷ್ಟಿಕ ಮತ್ತು ಸುರಕ್ಷಿತವಾದ ಪ್ರೀಮಿಯಂಪದಾರ್ಥಗಳನ್ನು ಬಯಸುತ್ತಿದ್ದಾರೆ, ಎಂದು ITALMOPAದ ಅಧ್ಯಕ್ಷರಾದ ಎಮಿಲಿಯೊ ಫೆರಾರಿ ಹೇಳುತ್ತಾರೆ.

## ರೆಡ್ ವೆಲ್ವೆಟ್ ಕೇಕ್

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಗೋಧಿ ಹಿಟ್ಟು - ಕಾಲು ಕಪ್, ಉಪ್ಪು - ಅರ್ಧ ಚಮಚ, ಸಕ್ಕರೆ - 1 ಕಪ್, ಎಣ್ಣೆ - 1 ಕಪ್, ಕಲರ್ ಪೌಡರ್ - ಅರ್ಧ ಚಮಚ, ಅಡುಗೆ ಸೋಡಾ - ಅರ್ಧ ಚಮಚ, ಕೋಕೋ ಪೌಡರ್ - 1 ಚಮಚ, ಮೊಟ್ಟೆ - 1, ಮಜ್ಜಿಗೆ - ಅರ್ಧ ಕಪ್, ವೆನಿಲ್ಲಾ ಸಾರಾ - 1 ಚಮಚ, ಕ್ರೀಮ್ ಚೀಸ್ - ಅರ್ಧ ಕಪ್, ಸಣ್ಣದಾಗಿ ಹೆಚ್ಚಿದ ಬಾದಾಮಿ - 1 ಚಮಚ, ಬೆಣ್ಣೆ - ಕಾಲು ಕಪ್, ಹೆಚ್ಚಿದ ಗೋಡಂಬಿ - 1 ಚಮಚ

### ಮಾಡುವ ವಿಧಾನ

ಮೊದಲಿಗೆ ಒಂದು ಬೌಲ್ನಲ್ಲಿ ಗೋಧಿ ಹಿಟ್ಟು, ಅಡುಗೆ ಸೋಡಾ, ಕೋಕೋ ಪೌಡರ್ ಮತ್ತು ಉಪ್ಪನ್ನು ಹಾಕಿಕೊಂಡು ಚನ್ನಾಗಿ ಮಿಕ್ಸ್ ಮಾಡಿಕೊಳ್ಳಿ.ಬಳಿಕ ಅದಕ್ಕೆ ಸಕ್ಕರೆ ಮತ್ತು ಮೊಟ್ಟೆಯನ್ನು ಹಾಕಿಕೊಂಡು ಸ್ವಲ್ಪ ಎಣ್ಣೆಯನ್ನು ಹಾಕಿಕೊಂಡು ಮತ್ತೊಮ್ಮೆ ಚನ್ನಾಗಿ ಮಿಕ್ಸ್ ಮಾಡಿಕೊಳ್ಳಿ. ಈಗ ಈ ಮಿಶ್ರಣಕ್ಕೆ ಮಜ್ಜಿಗೆ, ವೆನಿಲ್ಲಾ ಸಾರಾ ಮತ್ತು ರೆಡ್ ಕಲರ್ ಪೌಡರ್ ಸೇರಿಸಿಕೊಂಡು ಮತ್ತೊಂದು ಬಾರಿ ಮಿಕ್ಸ್ ಮಾಡಿಕೊಳ್ಳಿ. ಬಳಿಕ ಇದನ್ನು ಕೇಕ್ ಪ್ಯಾನ್ಗೆ ಹಾಕಿಕೊಂಡು 30ರಿಂದ 40 ನಿಮಿಷಗಳ ಕಾಲ ಓವನ್ನಲ್ಲಿ ಬೇಯಿಸಿಕೊಳ್ಳಿ. ನಂತರ ಕೇಕ್ ತಣ್ಣಗಾಗಲು ಬಿಡಿ. ಬಳಿಕ ಕೇಕ್ ಮೇಲೆ ಕ್ರೀಮ್ ಚೀಸ್ ಮತ್ತು ಬೆಣ್ಣೆಯನ್ನು ಹರಡಿಕೊಂಡು ಅದರ ಮೇಲೆ ಹೆಚ್ಚಿದ ಗೋಡಂಬಿ ಹಾಗೂ ಬಾದಾಮಿಯನ್ನು ಹಾಕಿಕೊಳ್ಳಿ.



## ಕ್ಯಾಪ್ಟನ್ ಮಿಲ್ಲರ್ ಬಿಡುಗಡೆಗೆ ಸಜ್ಜು

ರಜನೀಕಾಂತ್ ನಟನೆಯ 'ಜೈಲರ್' ಸಿನಿಮಾದಲ್ಲಿ ಶಿವರಾಜ್ ಕುಮಾರ್ ನಿರ್ವಹಿಸಿದ್ದ ಅತಿಥಿ ಪಾತ್ರ ಯಾವ ಮಟ್ಟಿಗೆ ಮೋಡಿ ಮಾಡಿದೆಯೆಂದರೆ ಶಿವಣ್ಣನಿಗೆ ತಮಿಳುನಾಡಿನಲ್ಲಿ ದೊಡ್ಡ ಅಭಿಮಾನಿ ವರ್ಗವೇ ಸೃಷ್ಟಿಯಾಗಿಬಿಟ್ಟಿದೆ. ಅದೇ ಸಿನಿಮಾದಲ್ಲಿ ಮೋಹನ್ಲಾಲ್, ಜಾಕಿ ಶ್ರಾಫ್ ಅವರುಗಳು ಸಹ ಅತಿಥಿ ಪಾತ್ರ ಮಾಡಿದ್ದರಾದರೂ ಶಿವಣ್ಣನ ಅತಿಥಿ ಪಾತ್ರ ದೊಡ್ಡ ಮಟ್ಟದ ಕ್ರೇಜ್ ಹುಟ್ಟು ಹಾಕಿತ್ತು.

ಆ ಸಿನಿಮಾದ ಶೂಟಿಂಗ್ ಸಂದರ್ಭದಲ್ಲಿ ಶಿವಣ್ಣ ಮತ್ತೊಂದು ತಮಿಳು ಸಿನಿಮಾದಲ್ಲಿ ನಟಿಸಿದ್ದು ಆ ಸಿನಿಮಾದ ಬಿಡುಗಡೆ ದಿನಾಂಕ ಘೋಷಣೆ ಆಗಿದೆ.

ಹೌದು ಧನುಶ್ ಮುಖ್ಯ ಪಾತ್ರದಲ್ಲಿ ನಟಿಸಿರುವ 'ಕ್ಯಾಪ್ಟನ್ ಮಿಲ್ಲರ್' ಸಿನಿಮಾದಲ್ಲಿ ಶಿವರಾಜ್ ಕುಮಾರ್ ಸಹ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಸಿನಿಮಾವು ಪಕ್ಕಾ ಆಕ್ಷನ್ ಕತೆಯುಳ್ಳದ್ದಾಗಿದ್ದು ಸಿನಿಮಾದ ಕೆಲವು ಪೋಸ್ಟರ್ಗಳು ಮಾತ್ರವೇ ಈ ವರೆಗೆ ಬಿಡುಗಡೆ ಆಗಿದ್ದವು. ಪೋಸ್ಟರ್ಗಳಲ್ಲಿ ಬಂದೂಕು ಹಿಡಿದು ಖಡಕ್ ಲುಕ್ನಲ್ಲಿ ಶಿವರಾಜ್ ಕುಮಾರ್ ಕಾಣಿಸಿಕೊಂಡಿದ್ದು, ಸಿನಿಮಾದ ಬಗ್ಗೆ ಭಾರಿ ನಿರೀಕ್ಷೆ ಹುಟ್ಟಿಸಿದೆ.

ಇನ್ನು ಡಿಸೆಂಬರ್ ತಿಂಗಳಲ್ಲಿ ಬಿಡುಗಡೆ ಆಗುತ್ತದೆ ಎಂದು ನಿರೀಕ್ಷಿಸಲಾಗಿದ್ದ 'ಕ್ಯಾಪ್ಟನ್ ಮಿಲ್ಲರ್' ಸಿನಿಮಾವನ್ನು 2024ರ ಸಂಕ್ರಾಂತಿಗೆ ಬಿಡುಗಡೆ ಮಾಡಲಾಗುತ್ತಿದೆ. ಅಂದರೆ ಜನವರಿ 12ಕ್ಕೆ ಸಿನಿಮಾ ಬಿಡುಗಡೆ ಆಗಲಿದೆ. ಸಿನಿಮಾದ ಬಿಡುಗಡೆ ದಿನಾಂಕವನ್ನು ನಿರ್ಮಾಣ ಸಂಸ್ಥೆಯಾದ ಸತ್ಯಜ್ಯೋತಿ ಫಿಲಮ್ಸ್ ಘೋಷಣೆ ಮಾಡಿದೆ. ಸಿನಿಮಾವನ್ನು ಅರುಣ್ ಮತ್ತೇಶ್ವರನ್ ನಿರ್ದೇಶನ ಮಾಡಿದ್ದಾರೆ.

ಸಿನಿಮಾದಲ್ಲಿ ಧನುಶ್, ಶಿವರಾಜ್ ಕುಮಾರ್ ಜೊತೆಗೆ ಪ್ರಿಯಾಂಕಾ ಅರುಲ್ ಮೋಹನ್, ಜಾನ್ ಕೊಕ್ಕೆನ್, ನಾಸರ್ ಇನ್ನೂ ಕೆಲವು ಉತ್ತಮ ನಟರಿದ್ದಾರೆ. 'ಜೈಲರ್' ಸಿನಿಮಾದಿಂದ ತಮಿಳಿನಲ್ಲಿ ಅಭಿಮಾನಿ ವರ್ಗ ಸೃಷ್ಟಿಸಿಕೊಂಡಿರುವ ಶಿವಣ್ಣನಿಗೆ, 'ಕ್ಯಾಪ್ಟನ್ ಮಿಲ್ಲರ್' ಸಿನಿಮಾ ಮೂಲಕ ಇನ್ನಷ್ಟು ತಮಿಳು ಅಭಿಮಾನಿಗಳು ಲಭ್ಯವಾಗುವ ಸಾಧ್ಯತೆ ದಟ್ಟವಾಗಿದೆ. ಈಗಾಗಲೇ ತಮಿಳಿನ ಕೆಲವು ನಿರ್ಮಾಪಕರು ಹಾಗೂ ನಿರ್ದೇಶಕರು ಶಿವಣ್ಣನನ್ನು ತಮಿಳಿನಲ್ಲಿ ಪೂರ್ಣಪ್ರಮಾಣದ ಸಿನಿಮಾ ಮಾಡಲು ಸಂಪರ್ಕ ಮಾಡಿದ್ದು, ಶಿವಣ್ಣ ಸಹ ಕತೆಗಳನ್ನು ಕೇಳುತ್ತಿದ್ದಾರೆ.



## ಬೆಲ್ಲಿ ಅಂದ ಹೆಚ್ಚಿಸಬೇಕೇ?

### ಹೆಲ್ತ್ ಟಿಪ್ಸ್



ಬೊಜ್ಜು ಈಗ ಎಲ್ಲರನ್ನೂ ಕಾಡುವ ಸಮಸ್ಯೆ. ಅದರಲ್ಲೂ ಬೆಲ್ಲಿ ಫ್ಯಾಟ್ ಕರಗಿಸೋದಂತೂ ಬಹುದೊಡ್ಡ ಸವಾಲು. ಹೊಟ್ಟೆ ಭಾಗದಲ್ಲಿ ಬೊಜ್ಜು ಜಾಸ್ತಿಯಾದ್ರೆ ನಿಮಗಿಷ್ಟವಾದ ಡ್ರೆಸ್ ಹಾಕುವಂತಿಲ್ಲ. ಟೈಟ್ ಫಿಟಿಂಗ್ ಬಟ್ಟೆಗಳಿಂದ ದೂರವೇ ಇರಬೇಕು. ಡೋಂಟ್ ವರಿ, ಈ ಟಮ್ಮಿಯನ್ನು ಕೂಡ ನೀವು ಈಸಿಯಾಗಿ ಕರಗಿಸಬಹುದು.

**ಡಯಟ್ ಸೋಡಾ ಕುಡಿಯುವುದನ್ನು ಬಿಟ್ಟುಬಿಡಿ:** ಡಯಟ್ ಸೋಡಾ ಆರೋಗ್ಯಕ್ಕೆ ಒಳ್ಳೆಯದಲ್ಲ. ಅದರಲ್ಲಿ ಕೃತಕ ಸ್ವೀಟ್ನರ್ ಇರುತ್ತದೆ. ಅದನ್ನು ಕುಡಿಯೋದ್ರಿಂದ ಬೊಜ್ಜು ಜಾಸ್ತಿಯಾಗುತ್ತದೆ. ಡಯಟ್ ಸೋಡಾ ಅಥವಾ ತಂಪು ಪಾನೀಯವನ್ನು ವಾರದಲ್ಲಿ ಎರಡಕ್ಕಿಂತ ಹೆಚ್ಚು ಬಾರಿ ಕುಡಿದ್ರೆ, ನಿಮ್ಮ ತೂಕ ಹೆಚ್ಚಾಗುತ್ತದೆ.

**ಗ್ರೀನ್ ಟೀ ಕುಡಿಯಿರಿ:** ದಿನಕ್ಕೆ ಮೂರು ಬಾರಿ ಗ್ರೀನ್ ಟೀ'ಕುಡಿಯೋದ್ರಿಂದ ಹೊಟ್ಟೆಯ ಭಾಗದ ಬೊಜ್ಜು ಕಡಿಮೆಯಾಗುತ್ತದೆ. ದಿಢೀರನೆ ಪರಿಣಾಮ ಗೊತ್ತಾಗದೇ ಇದ್ರೂ, ನಿರಂತರವಾಗಿ ಗ್ರೀನ್ ಟೀ ಕುಡಿಯುತ್ತಾ ಬಂದ್ರೆ ತೂಕ ಇಳಿಸಬಹುದು.

**ಪ್ರತಿದಿನ ಡ್ರೈ ಫ್ರೂಟ್ಸ್ ಸೇವನೆ:** ನಿಮ್ಮ ನಿತ್ಯದ ಡಯಟ್ ನಲ್ಲಿ ಬಾದಾಮಿ ಮತ್ತು ವಾಲ್ನಟ್ ಅನ್ನು ಸೇರ್ಪಡೆ ಮಾಡಿ. ಆದ್ರೆ ದಿನಕ್ಕೆ ಕೇವಲ 4 ಬಾದಾಮಿಯನ್ನು ಮಾತ್ರ ತಿನ್ನುವುದು ಉತ್ತಮ. ಪ್ರತಿನಿತ್ಯ ಡ್ರೈಫ್ರೂಟ್ಸ್ ಸೇವನೆಯಿಂದ ಬೊಜ್ಜು ಕರಗುತ್ತದೆ.

**ಅಡುಗೆಗೆ ತೆಂಗಿನ ಎಣ್ಣೆ ಬಳಸಿ:** ಅಡುಗೆಗೆ ತೆಂಗಿನೆಣ್ಣೆ ಬಳಸಲು ಎಲ್ಲರೂ ಇಷ್ಟಪಡೋದಿಲ್ಲ. ಅದರಲ್ಲಿ ಹೆಚ್ಚು ರುಚಿ ಇರೋದಿಲ್ಲ ಅನ್ನೋ ಭಾವನೆಯಿದೆ. ಆದ್ರೆ ತೂಕ ಇಳಿಸಬೇಕು ಅಂತಾದ್ರೆ, ಇವತ್ತಿನಿಂದ್ಲೇ ಅಡುಗೆಗೆ ತೆಂಗಿನೆಣ್ಣೆ ಬಳಸಲು ಆರಂಭಿಸಿ.

**ಕಾಳುಮೆಣಸಿನ ಪುಡಿ ಬಳಸಿ:** ನಿಮ್ಮ ಸಲಾಡ್ ಅಥವಾ ಇತರ ತಿನಿಸುಗಳ ಮೇಲೆ ಕಾಳುಮೆಣಸಿನ ಪುಡಿ ಉದುರಿಸಿ. ಯಾಕಂದ್ರೆ ಫ್ಯಾಟ್ ಬರ್ನ್ ಮಾಡಲು ಬೆಸ್ಟ್ ಉಪಾಯ ಇದು. ಬೆಲ್ಲಿ ಫ್ಯಾಟ್ ಕಡಿಮೆ ಮಾಡೋದು ಮಾತ್ರವಲ್ಲ, ಇತರ ಉದರ ಸಂಬಂಧಿ ಸಮಸ್ಯೆಗಳಿಗೂ ಪರಿಹಾರ ಸಿಗುತ್ತದೆ. ಕಾಳುಮೆಣಸು ಚಯಾಪಚಯ ಕ್ರಿಯೆಯನ್ನು ಹೆಚ್ಚಿಸುವುದರಿಂದ ತೂಕ ಕಡಿಮೆಯಾಗುತ್ತದೆ.

## ಮಕ್ಕಳ ಉಚಿತ ಮೂಳೆ ವೈದ್ಯಕೀಯ ಶಿಬಿರ




ರೈನ್ಬೋ ಮಕ್ಕಳ ಆಸ್ಪತ್ರೆಯು ತನ್ನ ಪರಿಣಾಮಕಾರಿ ಕಾರ್ಯಕ್ರಮ ಮಿಷನ್ ಪ್ರಗತಿಎಂಬ ಮಕ್ಕಳ ಉಚಿತ ಮೂಳೆ ವೈದ್ಯಕೀಯ ಶಿಬಿರದ ಎರಡನೇ ಆವೃತ್ತಿಯನ್ನು ಘೋಷಿಸಿದೆ. ಖ್ಯಾತ ತಜ್ಞರಾದ ಡಾ. ಜಯಂತ್ ಸಂಪತ್, ಡಾ. ಗಿರೀಶ್ ಕುಮಾರ್ ಮತ್ತು ಡಾ. ಅಭಿಲಾಶ್ ಶ್ರೀವಾತ್ಸವ್ ನೇತೃತ್ವದ ಶಿಬಿರವು 2024ರ ಜನವರಿ 4 ರಿಂದ 6 ರವರೆಗೆ ನಡೆಯಲಿದೆ. ಮಿಷನ್ ಪ್ರಗತಿ ಎಂಬುದು ಮೂಳೆ ಸವಾಲುಗಳನ್ನು ಎದುರಿಸುತ್ತಿರುವ ಆರ್ಥಿಕವಾಗಿ ದುರ್ಬಲ ವರ್ಗದ ಮಕ್ಕಳ ಜೀವನವನ್ನು ಸುಧಾರಿಸುವ ಗುರಿಯನ್ನು ಹೊಂದಿರುವ ಪರಿವರ್ತಕ ಪ್ರಯತ್ನವಾಗಿದೆ. ಶಿಬಿರವು ಉಚಿತ ಸಲಹೆಗಳು, ಶಸ್ತ್ರಚಿಕಿತ್ಸೆಗಳು ಮತ್ತು ಸಮಗ್ರ ಆರೈಕೆಯನ್ನು ಒದಗಿಸುತ್ತದೆ, ಇದು ಸಹಾನುಭೂತಿ ಆರೋಗ್ಯ ರಕ್ಷಣೆಯ ಆಳವಾದ ಪರಿಣಾಮವನ್ನು ಸಂಕೇತಿಸುತ್ತದೆ.

ಮಾರತ್ತಹಳ್ಳಿ ಶಾಖೆಯ ರೈನ್ಬೋ ಮಕ್ಕಳ ಆಸ್ಪತ್ರೆಯಲ್ಲಿ ಉಚಿತ ತಪಾಸಣೆ ಮತ್ತು ಸಮಾಲೋಚನೆ ನಡೆಯಲಿದೆ.ಕಾರ್ಯಕ್ರಮದ ಪ್ರಾಮುಖ್ಯತೆಯನ್ನು ವಿವರಿಸಿದ ಸೀನಿಯರ್ ಕನ್ಸಲ್ಟೆಂಟ್ ಪೀಡಿಯಾಟ್ರಿಕ್ ಆರ್ಥೋಪೆಡಿಕ್ಸರ್ಜನ್ ಡಾ. ಜಯಂತ್ ಸಂಪತ್, ''ವಿಶೇಷ ಆರೋಗ್ಯ ಆರೈಕೆ ಪಡೆಯುವುದು ಒಂದು ವಿಶೇಷ ಸವಲತ್ತು ಎಂದುಪರಿಗಣಿತವಾಗಿರುವ ಜಗತ್ತಿನಲ್ಲಿ ಈ ರೀತಿಯ ಕಾರ್ಯಕ್ರಮಗಳು ನೈತಿಕವಾಗಿ ಅತ್ಯಗತ್ಯವಾಗಿವೆ. ಆರ್ಥಿಕಪರಿಸ್ಥಿತಿಗಳಿಗಾಗಿ ಯಾವುದೇ ಮಗುವಿಗೆ ಆರೋಗ್ಯಕರ ಜೀವನ ನಡೆಸುವ ಅವಕಾಶವನ್ನು ನಿರಾಕರಿಸಬಾರದು.ಈ ಕಾರ್ಯಕ್ರಮಗಳು ಸವಲತ್ತು ಮತ್ತು ಅಗತ್ಯದ ನಡುವಿನ ಅಂತರವನ್ನು ಕಡಿಮೆ ಮಾಡುತ್ತವೆ. ಪ್ರತಿ ಮಗುವಿಗೆಮಿತಿಗಳಿಲ್ಲದೆ ಬೆಳೆಯಲು, ಆಟವಾಡಲು ಮತ್ತು ಕನಸು ಕಾಣಲು ಇರುವ ಮೂಲಭೂತ ಹಕ್ಕನ್ನುದೃಢೀಕರಿಸುತ್ತದೆ ಎಂದರು.ರೈನ್ಬೋ ಮಕ್ಕಳ ಆಸ್ಪತ್ರೆಗಳಲ್ಲಿ, ಮಕ್ಕಳ ಮೂಳೆಚಿಕಿತ್ಸೆಯ ಬಗ್ಗೆ ನಮಗಿರುವ ಬದ್ಧತೆಯೇ ಈ ನಮ್ಮ ಧ್ಯೇಯಕ್ಕೆಭದ್ರ ಬುನಾದಿ. ವಿಶೇಷ ಮೂಲಸೌಕರ್ಯ, ಅತ್ಯಾಧುನಿಕ ಸೌಲಭ್ಯಗಳು ಮತ್ತು ಮಕ್ಕಳ ಯೋಗಕ್ಷೇಮಕ್ಕೆಅಚಲವಾದ ಬದ್ಧತೆಯನ್ನು ಹೊಂದಿರುವ ನಾವು ಪರಿವರ್ತನೆಗೆ ಅಗತ್ಯ ಆರೈಕೆಯನ್ನು ಒದಗಿಸಲು ಸಿದ್ಧರಾಗಿದ್ದೇವೆ.ಮಿಷನ್ ಪ್ರಗತಿಯ ಎರಡನೇ ಆವೃತ್ತಿಯು ಪ್ರತಿ ಮಗುವೂ ವೈದ್ಯಕೀಯ ಆರೈಕೆಯನ್ನು ಪಡೆಯುವುದನ್ನುಖಾತ್ರಿಪಡಿಸಿಕೊಳ್ಳುವ ನಮ್ಮ ಸಂಕಲ್ಪವನ್ನು ಒತ್ತಿಹೇಳುತ್ತದೆ, ಜೊತೆಗೆ ಇದು ಭವಿಷ್ಯದ ಸಾಧ್ಯತೆಗಳ ಕಡೆಯೂಗಮನಹರಿಸಿದೆಎಂದು ಬೆಂಗಳೂರಿನ ರೈನ್ಬೋ ಮಕ್ಕಳ ಆಸ್ಪತ್ರೆಯ ಉಪಾಧ್ಯಕ್ಷ ನಿತ್ಯಾನಂದ ಪಿ ಹೇಳಿದರು.



## ಚಳಿಗಾಲದಲ್ಲಿಯೂ ಸುಂದರ ಕಾಲು ಪಡೆಯಲು ಟಿಪ್ಸ್

### ಬ್ಯೂಟಿ ಟಿಪ್ಸ್



ಶೀತಗಾಳಿ ಚರ್ಮ ಒಣಗಲು ಕಾರಣವಾಗುತ್ತದೆ. ಕೈ, ಕಾಲುಗಳ ಬಿರುಕು, ಉರಿ ಒಣ ಚರ್ಮದವರಿಗೆ ಮತ್ತಷ್ಟು ಸಮಸ್ಯೆಯುಂಟು ಮಾಡುತ್ತದೆ. ಬಿರುಕು ಬಿಟ್ಟ ಹಿಮ್ಮಡಿ ದೊಡ್ಡ ಸಮಸ್ಯೆ. ಕೆಲವರ ಹಿಮ್ಮಡಿ ಬಿರುಕು ಬಿಟ್ಟು ರಕ್ತ ಬರುವುದುಂಟು. ಇದ್ರ ಉರಿಗೆ ರಾತ್ರಿ ಸರಿಯಾಗಿ ನಿದ್ರೆ ಬರುವುದಿಲ್ಲ. ಬಿರುಕು ಬಿಟ್ಟ ಹಿಮ್ಮಡಿಯನ್ನು ಮುಚ್ಚಿಕೊಂಡು ಓಡಾಡುವ ಬದಲು ಮನೆ ಮದ್ದಿನಿಂದ ಕೆಲವೇ ದಿನಗಳಲ್ಲಿ ಒಡೆದ ಹಿಮ್ಮಡಿಗೆ ಗುಡ್ ಬಾಯ್ ಹೇಳಿ. ಚಳಿಗಾಲದಲ್ಲಿಯೂ ಸುಂದರ ಕಾಲುಗಳನ್ನು ನಿಮ್ಮದಾಗಿಸಿಕೊಳ್ಳಿ. ಚಳಿಗಾಲದಲ್ಲಿ ಹಿಮ್ಮಡಿ ಒಡಕಿಗೆ ಇಲ್ಲಿದೆ ಸರಳ ಉಪಾಯ. ಬೆಳ್ಳಿಗ್ಗೆ ಸ್ನಾನಕ್ಕಿಂತ ಐದು ನಿಮಿಷ ಮೊದಲು ಹಿಮ್ಮಡಿಗೆ ಫುಟ್ ಕ್ರೀಂ ಅಥವಾ ಎಣ್ಣೆಯನ್ನು ಹಚ್ಚಿ. ಸ್ನಾನವಾದ ನಂತ್ರ ಮಾಯಿಶ್ಚರೈಸರ್ ಕ್ರೀಮ್ ಹಚ್ಚಿ. ಇದ್ರಿಂದ ಹಿಮ್ಮಡಿ ತೇವಾಂಶಯುಕ್ತವಾಗಿದ್ದು ಒಣ ಚರ್ಮದ ಸಮಸ್ಯೆ ಕಾಡುವುದಿಲ್ಲ.ಸ್ನಾನ ಮಾಡುವ ವೇಳೆ ಬಾತ್ ಸ್ಟಾಲ್ ಅಥವಾ ಬಾತ್ ಆಯಿಲ್ ನೀರಿಗೆ ಹಾಕಿ ಸ್ನಾನ ಮಾಡಿ. ಪ್ರತಿದಿನ ಹಿಮ್ಮಡಿಗೆ ಎಣ್ಣೆ ಹಾಗೂ ಮಾಯಿಶ್ಚರೈಸರ್ ಕ್ರೀಂ ಬಳಸುವ ಜೊತೆಗೆ ವಾರಕ್ಕೊಮ್ಮೆ ಪಾದಗಳ ಆರೈಕೆ ಮಾಡಿ. ಪಾದಗಳನ್ನು ಸ್ಕಬ್ಬಿಂಗ್ ಮಾಡಿ.

ಮಾರುಕಟ್ಟೆಯಲ್ಲಿ ಸಿಗುವ ಸ್ಕಬ್ಬಿಂಗ್ ಬಗ್ಗೆ ನಿಮಗೆ ವಿಶ್ವಾಸವಿಲ್ಲವೆಂದಾದ್ರೆ ನಿಂಬೆ ಹಣ್ಣಿನಿಂದ ಸ್ಕಬ್ ಮಾಡಿಕೊಳ್ಳಿ. ನಂತ್ರ ಬಿಸಿ ನೀರಿಗೆ ಉಪ್ಪು ಹಾಗೂ ನಿಂಬೆ ರಸವನ್ನು ಹಾಕಿ ಅದ್ರಲ್ಲಿ ಕಾಲಿಟ್ಟುಕೊಳ್ಳಿ.ಪ್ರತಿ ರಾತ್ರಿ ಮಲಗುವ ಮೊದಲು ಕಾಲನ್ನು ಸ್ವಚ್ಛವಾಗಿ ತೊಳೆದುಕೊಳ್ಳಿ. ನಂತ್ರ ಫುಟ್ ಕ್ರೀಮ್ ಹಚ್ಚಿಕೊಂಡು ಐದು ನಿಮಿಷ ಮಸಾಜ್ ಮಾಡಿಕೊಳ್ಳಿ. ಇದ್ರಿಂದ ದಣಿವು, ಕಾಲಿನ ನೋವು ಕಡಿಮೆಯಾಗುತ್ತದೆ. ಹಿಮ್ಮಡಿ ಕೂಡ ಕೋಮಲವಾಗುತ್ತದೆ.ಉಗುರಿಗೆ ತುಂಬಾ ಸಮಯ ನೇಲ್ ಪಾಲಿಶ್ ಹಚ್ಚಬೇಡಿ. ಆಗಾಗ ನೇಲ್ ಪಾಲಿಶ್ ತೆಗೆದು ಉಗುರನ್ನು ಕತ್ತರಿಸುತ್ತಿರಿ. ವಿಟಮಿನ್ ಎ ಹಾಗೂ ಮಿಟಮಿನ್ ಡಿ ಕೊರತೆಯಿಂದಾಗಿ ಹಿಮ್ಮಡಿ, ಪಾದ, ಕಾಲು ಒಡೆಯುತ್ತದೆ. ಹಾಗಾಗಿ ನಿಮ್ಮ ಆಹಾರದಲ್ಲಿ ವಿಟಮಿನ್ ಎ ಮತ್ತು ಡಿ ಇರುವಂತೆ ನೋಡಿಕೊಳ್ಳಿ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಬಂಧುಗಳಿಂದ ತೊಂದರೆ, ಪೆಟ್ಟು ಸಂಭವ, ಫ್ಯಾಶನ್ ಡಿಸೈನಿಂಗ್‌ನವರಿಗೆ ಶುಭ.

**ವೃಷಭ:** ಪ್ರಯಾಣದಲ್ಲಿ ಎಚ್ಚರಿಕೆ, ತಂದೆ ಆರೋಗ್ಯದಲ್ಲಿ ಸಮಸ್ಯೆ, ಉದ್ಯೋಗಸ್ಥ ಮಹಿಳೆಯರಿಗೆ ಶುಭ.

**ಮಿಥುನ:** ಕುಟುಂಬದಲ್ಲಿ ಕಲಹ, ಮೋಜು ಮಸ್ತಿಗಳಿಂದ ತೊಂದರೆ, ಧಾರ್ಮಿಕ ಕಾರ್ಯಗಳಿಂದ ಶುಭ.

**ಕರ್ಕಾಟಕ:** ಪುಸ್ತಕ ಪ್ರಕಾಶಕರಿಗೆ ಬೇಡಿಕೆ, ಕೃಷಿಕರು ಮೋಸ ಹೋಗುವ ಸಂಭವ, ಉಸಿರಾಟದ ಸಮಸ್ಯೆ ಇರುವವರು ಎಚ್ಚರ.

**ಸಿಂಹ:** ಸಾಂಪ್ರದಾಯಿಕ ಕೃಷಿಕರಿಗೆ ಶುಭ, ಸ್ವಂತ ಉದ್ಯಮದಲ್ಲಿ ನಷ್ಟ, ಆಹಾರ ವ್ಯತ್ಯಾಸದಿಂದ ಸಮಸ್ಯೆ.

**ಕನ್ಯಾ:** ಕಲಾವಿದರಿಗೆ ಅವಕಾಶಗಳು ಲಭ್ಯ, ಉದ್ಯೋಗ ಸ್ಥಳದಲ್ಲಿ ಆತಂಕ, ಮಕ್ಕಳ ಜೀವನದಲ್ಲಿ ಏರುಪೇರು.

**ತುಲಾ:** ಭಾಷಣಕಾರರಿಗೆ ಗೌರವ ದೊರೆಯುತ್ತದೆ, ಅಧಿಕಾರಿಗಳಿಂದ ನೋವು ಮತ್ತು ನಿರಾಸೆ, ಖರ್ಚು.

**ವೃಶ್ಚಿಕ:** ಮನಸ್ಸಿನ ಒತ್ತಡ ಮತ್ತು ಆತಂಕದಿಂದ ನಿದ್ರಾಭಂಗ, ಬಂಧು ಬಾಂಧವರೊಂದಿಗೆ ಶತ್ರುತ್ವ, ವಾಣಿಜ್ಯ ರಂಗದಲ್ಲಿರುವವರಿಗೆ ಆದಾಯ.

**ಧನಸ್ಸು:** ವಿದ್ಯಾರ್ಥಿಗಳಿಗೆ ಅಧ್ಯಯನದಲ್ಲಿ ಹಿನ್ನಡೆ, ಬಟ್ಟೆ ಉದ್ಯಮದವರಿಗೆ ಶುಭ, ಗೃಹ ನಿರ್ಮಾಣಕ್ಕೆ ಯೋಚಿಸಿ ಮುನ್ನಡೆಯಿರಿ.

**ಮಕರ:** ಕೋರ್ಟ್ ಕಚೇರಿ ವ್ಯವಹಾರಗಳಲ್ಲಿ ಮುನ್ನಡೆ, ಮಕ್ಕಳಿಗಾಗಿ ಹಣವ್ಯಯ, ಸಾಕು ಪ್ರಾಣಿಗಳಿಂದ ತೊಂದರೆ.

**ಕುಂಭ:** ದಕ್ಷತೆಯಿಂದ ಕೆಲಸಗಳಲ್ಲಿ ಶುಭ, ಅತಿಯಾದ ಮಾತಿನಿಂದ ಅವಮಾನ, ಆಭರಣ ವ್ಯಾಪಾರಿಗಳಿಗೆ ಶುಭ.

**ಮೀನ:** ಸಿವಿಲ್ ಕಾಂಟ್ರಾಕ್ಟರ್ಗಳಿಗೆ ಶುಭ, ಉದ್ಯೋಗದಲ್ಲಿ ನಿರಾಸಕ್ತಿ, ಮಿತ್ರರಿಂದ ಹಿನ್ನಡೆ.

## ವಿಶ್ವ ಶಾಂತಿ ಧ್ಯಾನ ದಿನ




ಇಡೀ ಪ್ರಪಂಚವು ಹೊಸ ವರ್ಷದ ಆರಂಭವನ್ನು ಆಲೋಚಿಸುತ್ತಿರುವಾಗ ಪ್ರತಿ ವರ್ಷ ಡಿಸೆಂಬರ್ 31 ರಂದು ವಿಶ್ವ ಶಾಂತಿ ಧ್ಯಾನ ದಿನವನ್ನು ಆಚರಿಸಲಾಗುತ್ತದೆ. ಜನರು ಸ್ವಯಂ ನಿಯಂತ್ರಣ ಮತ್ತು ವೈಯಕ್ತಿಕ ಅಭಿವೃದ್ಧಿಯಂತಹ ಪರಿಕಲ್ಪನೆಗಳ ಬಗ್ಗೆ ಹೆಚ್ಚು ಗಮನಹರಿಸುವ ಮೂಲಕ ಜಗತ್ತಿನಲ್ಲಿ ಶಾಂತಿಯುತ ಸಂಬಂಧಗಳ ಹೊಸ ಯುಗವನ್ನು ಪ್ರಾರಂಭಿಸುವ ಭರವಸೆಯನ್ನು ಇದು ಹೊಂದಿದೆ. ಜನರು ತಮ್ಮೊಂದಿಗೆ ಶಾಂತಿಯಿಂದಿರುವಾಗ, ಅವರು ತಮ್ಮ ಸಮುದಾಯ ಮತ್ತು ದೇಶದಲ್ಲಿ ಶಾಂತಿಯುತ ಸಂಬಂಧಗಳನ್ನು ಹುಡುಕುವ ಮತ್ತು ನಿರ್ಮಿಸುವ ಸಾಧ್ಯತೆಯಿದೆ ಎಂದು ಸಾಮಾನ್ಯವಾಗಿ ತಿಳಿದಿದೆ. ಯುದ್ಧದಿಂದ ಪ್ರಭಾವಿತವಾಗಿರುವ ಪ್ರಪಂಚದ ಭಾಗಗಳಲ್ಲಿಯೂ ಸಹ, ಧ್ಯಾನವು ಹಿಂಸೆಯಿಂದ ಪ್ರಭಾವಿತರಾದವರಿಗೆ ತಮ್ಮ ನಷ್ಟವನ್ನು ಜಯಿಸಲು ಸಹಾಯ ಮಾಡುತ್ತದೆ ಮತ್ತು ಅವರ ಸುತ್ತ ನಡೆಯುತ್ತಿರುವ ಘಟನೆಗಳಿಂದ ಋಣಾತ್ಮಕ ಪರಿಣಾಮ ಬೀರುವುದನ್ನು ತಪ್ಪಿಸಲು ಸಹಾಯ ಮಾಡುತ್ತದೆ.

ವಿಶ್ವ ಶಾಂತಿ ಧ್ಯಾನ ದಿನದ ಉದ್ದೇಶವು ವಿವಿಧ ಜನಾಂಗಗಳು ಮತ್ತು ಹಿನ್ನೆಲೆಯ ಜನರನ್ನು ಜಾಗತಿಕ ವೇದಿಕೆಯಲ್ಲಿ ಒಂದುಗೂಡಿಸುವುದು. ವಿಶ್ವ ಶಾಂತಿ ಧ್ಯಾನ ದಿನವು ವಿವಿಧ ಧರ್ಮಗಳ ಜನರೊಂದಿಗೆ ಧ್ಯಾನ ಮತ್ತು ಸಹಯೋಗದ ಮೂಲಕ ವೈವಿಧ್ಯತೆ ಮತ್ತು ಶಾಂತಿಯನ್ನು ಉತ್ತೇಜಿಸುತ್ತದೆ.

ವರ್ಷಗಳಲ್ಲಿ, ಸಂಶೋಧಕರು ಮತ್ತು ಸಾಮಾಜಿಕ ವಿಜ್ಞಾನಿಗಳು ತಡೆಗಟ್ಟುವ ಕ್ರಮಗಳನ್ನು ಅಭಿವೃದ್ಧಿಪಡಿಸಲು ಯುದ್ಧದ ಕಾರಣಗಳನ್ನು ನಿರ್ಧರಿಸಲು ವಿವಿಧ ಅಧ್ಯಯನಗಳು ಮತ್ತು ಪ್ರಯೋಗಗಳನ್ನು ನಡೆಸಿದ್ದಾರೆ. 1980 ರ ದಶಕದಲ್ಲಿ, ಧ್ಯಾನವನ್ನು ಅಭ್ಯಾಸ ಮಾಡುವುದರಿಂದ ಶಾಂತಿಯನ್ನು ಉತ್ತೇಜಿಸಬಹುದೇ ಎಂದು ಪರಿಶೀಲಿಸಲು ಜೆರುಸಲೆಮ್ನಲ್ಲಿ ಸಾಮಾಜಿಕ ಪ್ರಯೋಗವನ್ನು ನಡೆಸಲಾಯಿತು. ಸಾವಿರಕ್ಕೂ ಹೆಚ್ಚು ಮಂದಿ ಈ ಪ್ರಯೋಗದಲ್ಲಿ ಪಾಲ್ಗೊಂಡಿದ್ದು, ಭಾಗವಹಿಸಿದವರಿಗೆ ಗುಂಪುಗಳಲ್ಲಿ ಧ್ಯಾನ ಮಾಡುವಂತೆ ತಿಳಿಸಲಾಯಿತು. ಪ್ರಯೋಗ ಯಶಸ್ವಿಯಾಯಿತು. ಪ್ರಯೋಗದ ಸಮಯದಲ್ಲಿ, ಲೆಬನಾನ್ನ ಎಲ್ಲಾ ಪ್ರಮುಖ ನಗರಗಳಲ್ಲಿ ಕಡಿಮೆ ಪ್ರಮಾಣದ ಬೀದಿ ಅಪರಾಧ ಮತ್ತು ಹಿಂಸಾಚಾರದೊಂದಿಗೆ ಶಾಂತಿ ಮತ್ತು ಸಹಿಷ್ಣುತೆ ಸ್ಪಷ್ಟವಾಗಿ ಕಂಡುಬಂದಿದೆ. ಅಂತೆಯೇ, ಧ್ಯಾನವನ್ನು ಅಭ್ಯಾಸ ಮಾಡುವ ಜನರ ಗುಂಪುಗಳು ಶಾಂತವಾಗಿ ಮತ್ತು ವಿಶ್ರಾಂತಿ ಪಡೆಯುವುದನ್ನು ಸಂಶೋಧಕರು ಗಮನಿಸಿದರು. ದೇಶದಲ್ಲಿ ಯುದ್ಧದ ಪ್ರತಿಕೂಲ ಪರಿಣಾಮಗಳಿಂದ ಅವರು ಪ್ರಭಾವಿತರಾಗುವ ಸಾಧ್ಯತೆ ಕಡಿಮೆ. ವಿಶ್ವ ಶಾಂತಿ ಧ್ಯಾನ ದಿನವನ್ನು ವಿವಿಧ ರಾಷ್ಟ್ರಗಳು ವಿಭಿನ್ನ ಹೆಸರುಗಳೊಂದಿಗೆ ಆಚರಿಸುತ್ತವೆ. ಕೆಲವರು ಇದನ್ನು ವಿಶ್ವ ಹೀಲಿಂಗ್ ಡೇ ಎಂದು ಕರೆಯುತ್ತಾರೆ ಆದರೆ ಕೆಲವರು ಇದನ್ನು ಸಾರ್ವತ್ರಿಕ ಶಾಂತಿಯ ಗಂಟೆ ಎಂದು ಆಚರಿಸುತ್ತಾರೆ.

# ರಾಮಮಂದಿರ ಉದ್ಘಾಟನೆಯಂದು ದೀಪ ಬೆಳಗಿಸಿ

**ಅಯೋಧ್ಯೆ (ಉತ್ತರ ಪ್ರದೇಶ):** ರಾಮಮಂದಿರ ಉದ್ಘಾಟನೆ ದಿನ (ಜನವರಿ 22) ದೇಶದ ಪ್ರತಿಯೊಬ್ಬ ಭಾರತೀಯರು ತಮ್ಮ ಮನೆಯಲ್ಲಿದೀಪ ಬೆಳಗಿಸಿ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. ಅಯೋಧ್ಯೆಯಲ್ಲಿ ಹಲವು ಕಾರ್ಯಕ್ರಮಗಳನ್ನು ಉದ್ಘಾಟಿಸಿ ಮಾತನಾಡಿದ ಅವರು, ಈ ಐತಿಹಾಸಿಕ ಕ್ಷಣವು ನಮ್ಮೆಲ್ಲರ ಜೀವನದಲ್ಲಿ ಅದೃಷ್ಟವಶಾತ್ ಬಂದಿದೆ. ನಾವು ದೇಶಕ್ಕಾಗಿ ಹೊಸ ಸಂಕಲ್ಪವನ್ನು ತೆಗೆದುಕೊಳ್ಳಬೇಕು. ನಮಗೆ ಹೊಸ ಶಕ್ತಿಯನ್ನು ತುಂಬಬೇಕು. ಇದಕ್ಕಾಗಿ ಎಲ್ಲಾ 140 ಕೋಟಿ ದೇಶವಾಸಿಗಳು ಜನವರಿ 22 ರಂದು ತಮ್ಮ ಮನೆಗಳಲ್ಲಿ ರಾಮಜ್ಯೋತಿ ಬೆಳಗಿ. ಆ ಮೂಲಕ ದೀಪಾವಳಿ ಆಚರಿಸಿ ಎಂದು ತಿಳಿಸಿದ್ದಾರೆ. ಜನವರಿ 22 ರಂದು ನಡೆಯುವ ಕಾರ್ಯಕ್ರಮದ ಭಾಗವಾಗಲು ಪ್ರತಿಯೊಬ್ಬರೂ ಅಯೋಧ್ಯೆಗೆ ಬರಲು ಬಯಸುತ್ತಾರೆ. ಆದರೆ ಎಲ್ಲರೂ ಬರಲು ಸಾಧ್ಯವಿಲ್ಲ ಎಂದು ನಿಮಗೆ ತಿಳಿದಿದೆ. ಆದ್ದರಿಂದ ಜನವರಿ 22 ರಂದು ಔಪಚಾರಿಕ ಕಾರ್ಯಕ್ರಮವನ್ನು ಪೂರ್ಣಗೊಳಿಸಿದ ನಂತರ, ಜನರು ತಮಗೆ ಅನುಕೂಲ ಮಾಡಿಕೊಂಡು ಅಯೋಧ್ಯೆಗೆ ಬರಬೇಕು. ಜನವರಿ 22 ರಂದೇ ಅಯೋಧ್ಯೆಗೆ ಬರಲು ಮನಸ್ಸು ಮಾಡಬೇಡಿ ಎಂದು ನಾನು ಎಲ್ಲ ರಾಮಭಕ್ತರಲ್ಲಿ ವಿನಂತಿಸುತ್ತೇನೆ ಎಂದಿದ್ದಾರೆ.

ರಾಮನ ಭವ್ಯ ಮಂದಿರ ನಿರ್ಮಾಣವಾದ ನಂತರ ಇಲ್ಲಿಗೆ ಬರುವವರ ಸಂಖ್ಯೆಯಲ್ಲಿ ಭಾರಿ ಏರಿಕೆಯಾಗಲಿದೆ. ಇದನ್ನು ಗಮನದಲ್ಲಿಟ್ಟುಕೊಂಡು ನಮ್ಮ ಸರ್ಕಾರ ಅಯೋಧ್ಯೆಯಲ್ಲಿ ಸಾವಿರಾರು ಕೋಟಿ ರೂ.ಗಳ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡು ಅಯೋಧ್ಯೆಯನ್ನು ಸ್ಮಾರ್ಟ್ ಮಾಡುತ್ತಿದೆ. ಇಂದು ನಾನು ಅಯೋಧ್ಯಾ ಧಾಮ್ ವಿಮಾನ ನಿಲ್ದಾಣ ಮತ್ತು ರೈಲು ನಿಲ್ದಾಣವನ್ನು ಉದ್ಘಾಟಿಸುವ ಸೌಭಾಗ್ಯವನ್ನು ಹೊಂದಿದ್ದೇನೆ. ಅಯೋಧ್ಯೆ ವಿಮಾನ ನಿಲ್ದಾಣಕ್ಕೆ ಮಹರ್ಷಿ ವಾಲ್ಮೀಕಿ ಹೆಸರಿಟ್ಟಿರುವುದು ಸಂತಸ ತಂದಿದೆ ಎಂದು ಹೇಳಿದ್ದಾರೆ. ಮಹರ್ಷಿ ವಾಲ್ಮೀಕಿ ರಾಮಾಯಣದ ಮೂಲಕ ಶ್ರೀರಾಮನ ಕೃತಿಗಳನ್ನು ನಮಗೆ ಪರಿಚಯಿಸಿದರು. ಆಧುನಿಕ ಭಾರತದಲ್ಲಿ, ಮಹರ್ಷಿ ವಾಲ್ಮೀಕಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ, ಅಯೋಧ್ಯಾ ಧಾಮ್, ದೈವಿಕ-ಹೊಸ-ಹೊಸ ರಾಮಮಂದಿರದೊಂದಿಗೆ ನಮ್ಮನ್ನು ಸಂಪರ್ಕಿಸುತ್ತದೆ. ಪ್ರಸ್ತುತ ಅಯೋಧ್ಯಾ ಧಾಮ್ ರೈಲು ನಿಲ್ದಾಣವು 10-15 ಸಾವಿರ ಜನರಿಗೆ ಸೇವೆ ಸಲ್ಲಿಸುವ ಸಾಮರ್ಥ್ಯವನ್ನು ಹೊಂದಿದೆ. ನಿಲ್ದಾಣದ ಸಂಪೂರ್ಣ ಅಭಿವೃದ್ಧಿಯ ನಂತರ, ಪ್ರತಿದಿನ 60 ಸಾವಿರ ಜನರು ಅಯೋಧ್ಯಾ ಧಾಮ್ ರೈಲು ನಿಲ್ದಾಣಕ್ಕೆ ಪ್ರಯಾಣಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದ್ದಾರೆ. ಇಂದು ವಂದೇ ಭಾರತ್ ರೈಲುಗಳು ಮತ್ತು ನಮೋ ಭಾರತ್ ರೈಲುಗಳ ನಂತರ ದೇಶಕ್ಕೆ ಹೊಸ ಸರಣಿ ರೈಲುಗಳು ಸಿಕ್ಕಿವೆ. ಇದಕ್ಕೆ ಅಮೃತ್ ಭಾರತ್ ರೈಲುಗಳು ಎಂದು ಹೆಸರಿಸಲಾಗಿದೆ. ಈ ಮೂರು ರೈಲುಗಳ ಶಕ್ತಿಯು ಭಾರತೀಯ ರೈಲ್ವೆಯ ಅಭಿವೃದ್ಧಿಗೆ ಸಹಾಯ ಮಾಡುತ್ತದೆ ಎಂದು ಆಶಯ ವ್ಯಕ್ತಪಡಿಸಿದ್ದಾರೆ.



## ಗಾಝಾದಲ್ಲಿ ಸಾಂಕ್ರಾಮಿಕ ರೋಗ ಹರಡುವ ಭೀತಿ

**ಜಿನೆವಾ:** ಗಾಝಾಪಟ್ಟಿಯಲ್ಲಿಸಾಂಕ್ರಾಮಿಕರೋಗಹರಡುವಅಪಾಯಹೆಚ್ಚಿದ್ದುಆರೋಗ್ಯವ್ಯವಸ್ಥೆಯನ್ನುಕ್ಷಿಪ್ರವಾಗಿಮರುಸ್ಥಾಪಿಸದಿದ್ದರೆಭೀಕರಮಾನವೀಯದುರಂತಕ್ಕೆಕಾರಣವಾಗಬಹುದುಎಂದುವಿಶ್ವಆರೋಗ್ಯಸಂಸ್ಥೆಶುಕ್ರವಾರಕಳವಳವ್ಯಕ್ತಪಯಿಡಿಸಿದೆ. ದಕ್ಷಿಣಗಾಝಾದ್ಯಂತ ಜನರ ಬೃಹತ್ ಸ್ಥಳಾಂತರ ಪ್ರಕ್ರಿಯೆ ಮುಂದುವರಿದಿದೆ . ಕೆಲವು ಕುಟುಂಬಗಳನ್ನು ಹಲವು ಬಾರಿ ಬಲವಂತದಿಂದ ಸ್ಥಳಾಂತರಿಸಲಾಗಿದೆ. ಸಾಮರ್ಥ್ಯಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ಕಿಕ್ಕಿರಿದು ತುಂಬಿರುವ ಆರೋಗ್ಯ ಕೇಂದ್ರಗಳಲ್ಲಿ ಜನರು ಆಶ್ರಯ ಪಡೆಯುವಂತಾಗಿದೆ . ಇದು ಸಾಂಕ್ರಾಮಿಕ ರೋಗ ಹರಡುವ ಅಪಾಯವನ್ನು ಹೆಚ್ಚಿಸಿದೆ ಎಂದು ವಿಶ್ವ ಆರೋಗ್ಯ ಸಂಸ್ಥೆಯ ಮುಖ್ಯಸ್ಥ ಟೆಡ್ರೋಸ್ ಅಧನಮ್ ಘೆಬ್ರಯೇಸಸ್ ಹೇಳಿದ್ದಾರೆ. ತಾತ್ಕಾಲಿಕ ಶಿಬಿರಗಳಲ್ಲಿ ನೆಲೆಸಿರುವ ಜನರು ಅಕ್ಟೋಬರ್ ಮಧ್ಯಭಾಗದಿಂದ ಡಿಸೆಂಬರ್‌ಮಧ್ಯದವರೆಗೆ ಹೆಚ್ಚಿನ ಪ್ರಮಾಣದಲ್ಲಿ ಅನಾರೋಗ್ಯಕ್ಕೆ ಒಳಗಾಗಿದ್ದಾರೆ. ಸುಮಾರು 1,80,000 ಜನರುಉಸಿರಾಟದಸೋಂಕುಗಳಿಂದಬಳಲುತ್ತಿದ್ದಾರೆ. ಸುಮಾರು 1,36,400 ಅತಿಸಾರಪ್ರಕರಣ ವರದಿಯಾಗಿದ್ದುಇದರಲ್ಲಿ 50%ದಷ್ಟುಪ್ರಕರಣ 5 ವರ್ಷದಕೆಳಗಿನ ಮಕ್ಕಳಲ್ಲಿ ದಾಖಲಾಗಿದೆ. 55,400 ಚರ್ಮರೋಗದಪ್ರಕರಣ, 5,330 ಸಿಡುಬಿನಪ್ರಕರಣ, 42,700 ಚರ್ಮದದದ್ದುಮತ್ತು ಅಲರ್ಜಿ ಪ್ರಕರಣವರದಿಯಾಗಿದೆ.



## ನಗರಸಭೆ ಸದಸ್ಯರ ತಳ್ಳಾಟ ಕುರಿತ ವಿಡಿಯೋ ವೈರಲ್



**ಲಕ್ನೋ:** ನಾವು ಸಾಮಾನ್ಯವಾಗಿ ವಿಧಾನಸಭೆ ಕಲಾಪಗಳಲ್ಲಿ ಅಶಿಸ್ತಿನ ವರ್ತನೆ ವಿಡಿಯೋಗಳನ್ನು ನೋಡುತ್ತಿರುತ್ತೇವೆ. ಆದರೆ ಉತ್ತರಪ್ರದೇಶದಲ್ಲಿ ನಗರಸಭೆಯ ಸದಸ್ಯರುಗಳ ನಡುವೆ ಭಾರೀ ಗುದ್ದಾಟ-ತಳ್ಳಾಟ ನಡೆದಿದೆ. ಸದ್ಯ ಘಟನೆಯ ವೀಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಸಖತ್ ವೈರಲ್ ಆಗುತ್ತಿದೆ.

ಶಾಮ್ಲಿ ಪುರಸಭೆಯ ಆಡಳಿತ ಮಂಡಳಿ ಸಭೆಯಲ್ಲಿ ಪುರಸಭೆ ಅಧ್ಯಕ್ಷ ಅರವಿಂದ ಸಂಗಲ್ ಮತ್ತು ಶಾಸಕ ಪ್ರಸನ್ನ ಚೌಧರಿ ಉಪಸ್ಥಿತರಿದ್ದರು. ಸಭೆಯಲ್ಲಿ 4 ಕೋಟಿ ವೆಚ್ಚದ ಅಭಿವೃದ್ಧಿ ಯೋಜನೆಗಳ ಕುರಿತು ಚರ್ಚೆ ಆರಂಭವಾಯಿತು. ಈ ವೇಳೆ ಅರವಿಂದ ಸಂಗಲ್ ಮತ್ತು ಪ್ರಸನ್ನ ಚೌಧರಿ ನಡುವೆ ತೀವ್ರ ವಾಗ್ವಾದ ನಡೆಯಿತು. ಮಾತಿನ ಚಕಮಕಿಯಿಂದ ಪ್ರಾರಂಭವಾದ ಜಗಳ ಪರಸ್ಪರ ಹೊಡೆದಾಡಿಕೊಳ್ಳುವ ಮಟ್ಟಕ್ಕೆ ತಿರುಗಿತು. ಇಬ್ಬರು ಸದಸ್ಯರು ಪರಸ್ಪರ ಗುದ್ದಾಟ ನಡೆಸುವುದರೊಂದಿಗೆ ನಗರ ಪಾಲಿಕೆ ಆಡಳಿತ ಮಂಡಳಿ ಸಭೆಯು ಸಂಪೂರ್ಣ ಕುಸ್ತಿ ಅಖಾಡವಾಯಿತು. ಪೊಲೀಸರು ಮತ್ತು ಹಿರಿಯ ಮುಖಂಡರ ಎದುರೇ ಇಡೀ ಘಟನೆ ನಡೆದಿದೆ. ಇನ್ನು ಇದರ ವೀಡಿಯೋವನ್ನು ಸಭೆಯಲ್ಲಿದ್ದವರು ತಮ್ಮ ಮೊಬೈಲ್‌ನಲ್ಲಿ ಸೆರೆ ಹಿಡಿದಿದ್ದು, ಸದ್ಯ ಈ ವೀಡಿಯೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿದೆ. ಇತ್ತ ವೈರಲ್ ವೀಡಿಯೋವನ್ನು ಗಮನಿಸಿದ ಸಮಾಜವಾದಿ ಪಕ್ಷದ ಮುಖ್ಯಸ್ಥ ಮತ್ತು ಉತ್ತರ ಪ್ರದೇಶದ ಮಾಜಿ ಮುಖ್ಯಮಂತ್ರಿ ಅಖಿಲೇಶ್ ಯಾದವ್ ಅವರು ಬಿಜೆಪಿಯನ್ನು (ಃಎಕ) ತೀವ್ರ ತರಾಟೆಗೆ ತೆಗೆದುಕೊಂಡರು.

## ಮಾಜಿ ಪ್ರಧಾನಿ ಇಮ್ರಾನ್ ಖಾನ್ ನಾಮಪತ್ರ ತಿರಸ್ಕೃತ

**ಇಸ್ಲಾಮಾಬಾದ್:** 2024ರ ರಾಷ್ಟ್ರೀಯ ಚುನಾವಣೆಯಲ್ಲಿ ಎರಡು ಕ್ಷೇತ್ರಗಳಲ್ಲಿ ಸ್ಪರ್ಧಿಸಲು ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಅವರ ನಾಮಪತ್ರವನ್ನ ಪಾಕಿಸ್ತಾನದ ಚುನಾವಣಾ ಆಯೋಗ ತಿರಸ್ಕರಿಸಿದೆ ಎಂದು ಅಧಿಕಾರಿಗಳು ಮತ್ತು ಅವರ ಪಕ್ಷದ ಮಾಧ್ಯಮ ತಂಡ ಶನಿವಾರ ತಿಳಿಸಿದೆ. 71 ವರ್ಷದ ಮಾಜಿ ಕ್ರಿಕೆಟ್ ತಾರೆ ಏಪ್ರಿಲ್ 2022ರಲ್ಲಿ ಪ್ರಧಾನಿ ಹುದ್ದೆಯಿಂದ ಪದಚ್ಯುತರಾದಾಗಿನಿಂದ ರಾಜಕೀಯ ಮತ್ತು ಕಾನೂನು ಹೋರಾಟಗಳಲ್ಲಿ ಸಿಲುಕಿದ್ದಾರೆ. 2018 ರಿಂದ 2022 ರವರೆಗೆ ಅಧಿಕಾರದಲ್ಲಿದ್ದಾಗ ಸರ್ಕಾರಿ ಉಡುಗೊರೆಗಳನ್ನ ಕಾನೂನುಬಾಹಿರವಾಗಿ ಮಾರಾಟ ಮಾಡಿದ ಆರೋಪದ ಮೇಲೆ ಆಗಸ್ಟ್‌ನಲ್ಲಿ ಮೂರು ವರ್ಷಗಳ ಜೈಲು ಶಿಕ್ಷೆಗೊಳಗಾದ ನಂತರ ಅವರು ಸಾರ್ವಜನಿಕವಾಗಿ ಕಾಣಿಸಿಕೊಂಡಿಲ್ಲ. ಭ್ರಷ್ಟಾಚಾರದ ಆರೋಪದ ಮೇಲೆ ಫೆಬ್ರವರಿ 8ರಂದು ನಿಗದಿಯಾಗಿರುವ ರಾಷ್ಟ್ರೀಯ ಚುನಾವಣೆಯಲ್ಲಿ ಸ್ಪರ್ಧಿಸಲು ಖಾನ್ ಅವರನ್ನ ಅನರ್ಹಗೊಳಿಸಲಾಗಿದೆ. ಆದ್ರೆ, ಅವರು ಶುಕ್ರವಾರ ಚುನಾವಣೆಗೆ ನಾಮಪತ್ರ ಸಲ್ಲಿಸಿದ್ದಾರೆ ಎಂದು ಅವರ ಮಾಧ್ಯಮ ತಂಡ ತಿಳಿಸಿದೆ.



## ಅಮೇರಿಕದಲ್ಲಿ ಶ್ರೀರಾಮಲಲ್ಲಾ ಪ್ರತಿಷ್ಠಾಪನೆ ಮಹೋತ್ಸವದ ಆಚರಣೆ



**ವಾಷಿಂಗ್ಟನ್:** ಜನವರಿ 22, 2024 ರಂದು ಅಯೋಧ್ಯೆಯಲ್ಲಿ ನಡೆಯಲಿರುವ ಶ್ರೀರಾಮಲಲ್ಲಾನ ಪ್ರಾಣಪ್ರತಿಷ್ಠಾಪನೆ ಸಮಾರಂಭವನ್ನು ಅಮೆರಿಕದ ಹಿಂದೂ ಸಮುದಾಯವು ತುಂಬಾ ಎದುರು ನೋಡುತ್ತಿದೆ. ಇಲ್ಲಿನ ಹಿಂದೂ ಅಮೆರಿಕನ್ ಪ್ರಜೆಗಳು ಈ ಹಬ್ಬವನ್ನು ಆಚರಿಸಲು ಹಲವು ಯೋಜನೆಗಳನ್ನು ಮಾಡಿದ್ದಾರೆ.

ಈ ಐತಿಹಾಸಿಕ ಘಟನೆಯನ್ನು ಅಮೆರಿಕದಾದ್ಯಂತ ಒಂದು ವಾರದವರೆಗೆ ದೇವಾಲಯಗಳಲ್ಲಿ ಆಚರಿಸಲಾಗುತ್ತದೆ. ಇತ್ತೀಚಿಗೆ, ರಾಮ ಮಂದಿರದ ಉದ್ಘಾಟನೆಯನ್ನು ಆಚರಿಸಲು ಹಿಂದೂ ಸಮುದಾಯವು ಡಿಸೆಂಬರ್ 16 ರಂದು ವಾಷಿಂಗ್ಟನ್ ಡಿಸಿಯ ಉಪನಗರಗಳಲ್ಲಿ ವಾಹನ ಜಾಥಾವನ್ನು ಕೈಗೊಂಡಿತು. ವಿಶ್ವ ಹಿಂದೂ ಪರಿಷತ್ತಿನ ಅಮೇರಿಕಾದ ಶಾಖೆಯು ಸಮಾರಂಭದ ನೇತೃತ್ವ ವಹಿಸುತ್ತಿದೆ.

'ಹಿಂದೂ ಟೆಂಪಲ್ ಎಂಪಾವರಮೆಂಟ್ ಕೌನ್ಸಿಲ್'ನ ತೇಜಲ ಶಾ ಇವರು ಮಾತನಾಡಿ, ನಾವು ಈ ಐತಿಹಾಸಿಕ ಘಟನೆಯ ಭಾಗವಾಗಿದ್ದೇವೆ, ಇದು ನಮ್ಮ ಭಾಗ್ಯ ಮತ್ತು ಶ್ರೀರಾಮನ ಆಶೀರ್ವಾದವಾಗಿದೆ. ಶತಮಾನಗಳಿದ ಕಾಯುತ್ತಿದ್ದ ಮತ್ತು ಹೋರಾಟದ ನಂತರ ನಮ್ಮ ಕನಸು ನನಸಾಗುತ್ತಿದೆ. ಅಮೆರಿಕ ಮತ್ತು ಕೆನಡಾದಲ್ಲಿರುವ ಪ್ರತಿಯೊಬ್ಬ ಹಿಂದುವೂ ಭಾವಪರವಶರಾಗಿದ್ದಾರೆ. ಪ್ರತಿಯೊಬ್ಬರ ಮನಸ್ಸಿನಲ್ಲಿ ಗೌರವದ ಭಾವನೆಗಳು ಇದೆ ಮತ್ತು ಭಗವಾನ್ ಶ್ರೀ ರಾಮಲಾಲ್ಲಾನ ಪ್ರಾಣಪ್ರತಿಷ್ಠಾಪನಾ ಸಮಾರಂಭವನ್ನು ಎದುರು ನೋಡುತ್ತಿದ್ದಾರೆ. ಎಂದು ಹೇಳಿದರು.

### ರಾಮಮಂದಿರಕ್ಕಾಗಿ ಶ್ರಮಿಸಿದವರಿಗೆ ಫಾರೂಕ್ ಅಬ್ದುಲ್ಲಾ ಅಭಿನಂದನೆ

**ಜಮ್ಮು-ಕಾಶ್ಮೀರ:** ಅಯೋಧ್ಯೆ ರಾಮ ಮಂದಿರವು ಉದ್ಘಾಟನೆಗೆ ಕ್ಷಣಗಣನೆ ಆರಂಭವಾಗಿದೆ. ಮಂದಿರಕ್ಕಾಗಿ ಶ್ರಮಿಸಿದ ಪ್ರತಿಯೊಬ್ಬರಿಗೂ ನಾನು ಅಭಿನಂದನೆಗಳನ್ನು ಸಲ್ಲಿಸುತ್ತೇನೆ ಎಂದು ಜಮ್ಮು ಮತ್ತು ಕಾಶ್ಮೀರದ ಮಾಜಿ ಮುಖ್ಯಮಂತ್ರಿ ಮತ್ತು ನ್ಯಾಷನಲ್ ಕಾನ್ಫರೆನ್ಸ್ ನಾಯಕ ಫಾರೂಕ್ ಅಬ್ದುಲ್ಲಾ ಹೇಳಿದ್ದಾರೆ.



ಅಯೋಧ್ಯೆ ಕುರಿತು ಮಾಧ್ಯಮಗಾರರೊಂದಿಗೆ ಮಾತನಾಡಿದ ಅವರು, ಎಲ್ಲರ ಕಠಿಣ ಪರಿಶ್ರಮದಿಂದ ಇಂದು ರಾಮಮಂದಿರ ಆಗಿದೆ. ಭಗವಾನ್ ರಾಮನು ಹಿಂದೂಗಳಿಗೆ ಮಾತ್ರ ಸೇರಿದವರಲ್ಲ, ಅವರು ಪ್ರಪಂಚದ ಎಲ್ಲರಿಗೂ ಸೇರಿದವರು. ಪುಸ್ತಕಗಳಲ್ಲಿಯೂ ಇದನ್ನೇ ಬರೆಯಲಾಗಿದೆ ಎಂದು ತಿಳಿಸಿದರು. ಭಗವಾನ್ ರಾಮ ಸಹೋದರತ್ವ, ಪ್ರೀತಿ ಮತ್ತು ಏಕತೆಯ ಬಗ್ಗೆ ತಿಳಿಸಿದ್ದಾರೆ. ಅವರು ಯಾವತ್ತೂ ಭಾಷೆ ಹಾಗೂ ಧರ್ಮದ ಬಗ್ಗೆ ಪ್ರಸ್ತಾಪ ಮಾಡಲಿಲ್ಲ ಎಂದು ಫಾರೂಕ್ ಅಬ್ದುಲ್ಲಾ ಹೇಳಿದರು.



## ಮಂಗಳೂರು-ಗೋವಾ ವಂದೇ ಭಾರತ್ ರೈಲಿಗೆ ಚಾಲನೆ

**ದೆಹಲಿ:** ಒಂದೇ ದಿನ ಕರ್ನಾಟಕದಲ್ಲಿ ಎರಡು ವಂದೇ ಭಾರತ್ ರೈಲುಗಳಿಗೆ ಪ್ರಧಾನಿ ನರೇಂದ್ರ ಮೋದಿ ಅವರು 2 ಹೊಸ ಅಮೃತ್ ಭಾರತ್ ರೈಲುಗಳು ಮತ್ತು ಆರು ಹೊಸ ವಂದೇ ಭಾರತ್ ರೈಲುಗಳನ್ನು ಉದ್ಘಾಟನೆ ಮಾಡಿದ್ದಾರೆ.8 ಟ್ರೈನ್‌ಗಳ ಪೈಕಿ ರಾಜ್ಯಕ್ಕೆ ಎರಡು ಟ್ರೈನ್‌ಗಳನ್ನು ನೀಡಲಾಗಿದೆ. ಮಂಗಳೂರು-ಮಡಗಾವ್ ವಂದೇ ಭಾರತ್ ರೈಲು ಹಾಗೂ ಕೊಯಮತ್ತೂರು-ಬೆಂಗಳೂರು ವಂದೇ ಭಾರತ್‌ಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಚಾಲನೆ ನಿಡಲಾಗಿದೆ. ಬೆಳಗ್ಗೆ 5 ಗಂಟೆಗೆ ಕೊಯಮತ್ತೂರಿನಿಂದ ಹೊರಟ ರೈಲು 11.30ಕ್ಕೆ ಬೆಂಗಳೂರು ತಲುಪಲಿದೆ. ಮಧ್ಯಾಹ್ನ 1.40ಕ್ಕೆ ಬೆಂಗಳೂರಿನಿಂದ ಹೊರಟು ರಾತ್ರಿ 8 ಗಂಟೆಗೆ ಕೊಯಮತ್ತೂರು ತಲುಪಿದೆ. ಅಂತಾರಾಜ್ಯಗಳ ನಡುವೆ ಸಂಚರಿಸುವ ನಾಲ್ಕನೇ ವಂದೇ ಭಾರತ್ ರೈಲು ಇದಾಗಿದೆ.



## ಪ್ಯಾಲೆಸ್ತೀನ್ ನಿರಾಶ್ರಿತರಿಗೆ ಭಾರತ ನೆರವು



**ಜೆರುಸಲೇಂ:** ಭಾರತವು ಬಿಡುಗಡೆ ಮಾಡಿರುವ ಎರಡನೇ ಕಂತಿನ ಸುಮಾರು 20.80 ಕೋಟಿ ದೇಣಿಗೆ ಮೊತ್ತವು ಪ್ಯಾಲೆಸ್ಟೀನ್ ನಿರಾಶ್ರಿತರ ಜೀವ ರಕ್ಷಣೆ ಕೆಲಸಗಳನ್ನು ಮುಂದುವರಿಸಲು ನೆರವಾಗಲಿದೆ ಎಂದು ಪ್ಯಾಲೆಸ್ಟೀನ್ ನಿರಾಶ್ರಿತರಿಗಾಗಿ ಇರುವ ವಿಶ್ವಸಂಸ್ಥೆಯ ಪರಿಹಾರ ಕಾರ್ಯದ ಏಜೆನ್ಸಿ (ಯುಎನ್‌ಆರ್ಡಬ್ಲ್ಯುಎ) ಶುಕ್ರವಾರ ಹೇಳಿದೆ. ಭಾರತವು ನೆರವಿನ ಮೊತ್ತ ಬಿಡುಗಡೆ ಮಾಡಿದ ಮರು ದಿನವೇ ವಿಶ್ವಸಂಸ್ಥೆಯ ಈ ಏಜೆನ್ಸಿಯು ಭಾರತದ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದೆ. 1950ರಿಂದ ಯುಎನ್ ಆರ್ಡಬ್ಲ್ಯು, ನೋಂದಾಯಿತ ಪ್ಯಾಲೆಸ್ಟೀನ್ ನಿರಾಶ್ರಿತರಿಗೆ ನೇರವಾಗಿ ಪರಿಹಾರ ಒದಗಿಸುವ ಕಾರ್ಯ ನಿರ್ವಹಿಸುತ್ತಿದೆ. 'ನಾವು ಈ ಪ್ರದೇಶದಲ್ಲಿ ಅತ್ಯಂತ ಕಷ್ಟಕರವಾದ ಪರಿಸ್ಥಿತಿ ಎದುರಿಸುತ್ತಿದ್ದು, ಪ್ಯಾಲೆಸ್ಟೀನ್ ನಿರಾಶ್ರಿತರ ಪರ ಬೆಂಬಲ ನೀಡುವ ಪಾಲುದಾರ ರಾಷ್ಟ್ರಗಳಿಗೆ ಏಜೆನ್ಸಿಯು ಕೃತಜ್ಞವಾಗಿರಲಿದೆ. ಭಾರತದ ಇತ್ತೀಚಿನ ಉದಾರ ನೆರವು ಪ್ಯಾಲೆಸ್ಟೀನ್ ನಿರಾಶ್ರಿತರ ಕಡೆಗೆ ತನ್ನ ಜೀವರಕ್ಷಕ ಸೇವೆಗಳನ್ನು ಮುಂದುವರಿಸಲು ಏಜೆನ್ಸಿಗೆ ಅನುಕೂಲ ಮಾಡಿಕೊಡಲಿದೆ' ಎಂದು ವಕ್ತಾರ ತಮಾರಾ ಅಲ್ರಿಫೈ ಹೇಳಿದ್ದಾರೆ.

## ಇಸ್ರೇಲ್ ಪರ ಬೇಹುಗಾರಿಕೆ: ನಾಲ್ವರಿಗೆ ಗಲ್ಲು ಶಿಕ್ಷೆ ವಿಧಿಸಿದ ಇರಾನ್

**ಇರಾನ್:** ಇಸ್ರೇಲ್ ಗುಪ್ತಚರ ಸಂಸ್ಥೆ ಮೊಸ್ಸಾದ್ ಗಾಗಿ ಕೆಲಸ ಮಾಡುತ್ತಿದ್ದ ಆರೋಪದ ಮೇಲೆ ಮಹಿಳೆ ಸೇರಿದಂತೆ ನಾಲ್ವರಿಗೆ ಇರಾನ್ ಗಲ್ಲು ಶಿಕ್ಷೆ ವಿಧಿಸಿದೆ.

ಈ ನಾಲ್ವರು ಇಸ್ರೇಲ್ ಗುಪ್ತಚರ ಸಂಸ್ಥೆ ಮೊಸ್ಸಾದ್ಗಾಗಿ ಬೇಹುಗಾರಿಕೆ ನಡೆಸುತ್ತಿದ್ದಾರೆ ಎಂದು ಇರಾನ್ ಹೇಳಿಕೊಂಡಿದೆ.

ನಾಲ್ವರನ್ನು ಡಿಸೆಂಬರ್ 29 ರ ಬೆಳಿಗ್ಗೆ ಗಲ್ಲಿಗೇರಿಸಲಾಯಿತು. ಇವರಲ್ಲಿ ಮೂವರು ಪುರುಷರು ಮತ್ತು ಒಬ್ಬ ಮಹಿಳೆ ಸೇರಿದ್ದಾರೆ. ಬಂಧಿತರನ್ನು ವಫಾ ಹನರೇಹ್, ಅರಾಮ್ ಒಮರಿ ಮತ್ತು ರೆಹಮಾನ್ ಪರ್ಹಾಜೋ ಎಂದು ಗುರುತಿಸಲಾಗಿದೆ. ಇದಲ್ಲದೆ, ಮಹಿಳಾ ಆರೋಪಿಯನ್ನು ನಸೀಮ್ ನಮಾಜಿ ಎಂದು ಗುರುತಿಸಲಾಗಿದೆ.



ಇರಾನ್ ನ ಅಜೆರ್ಬೈಜಾನ್ ನ್ಯಾಯಾಂಗಕ್ಕೆ ಸಂಬಂಧಿಸಿದ ಸುದ್ದಿ ಸಂಸ್ಥೆ ಮಿಜಾನ್ ಈ ಘಟನೆಯ ಬಗ್ಗೆ ಮಾಹಿತಿ ನೀಡಿದೆ. ಅವರು ಇಸ್ರೇಲ್ ನ ಮೊಸ್ಸಾದ್ ಗಾಗಿ ಇರಾನಿನ ಗುಪ್ತಚರ ಮಾಹಿತಿಯನ್ನು ಸಂಗ್ರಹಿಸುತ್ತಿದ್ದರು ಎಂದು ಆರೋಪಿಸಲಾಗಿದೆ. ಅವರು ಮೊಸ್ಸಾದ್ ಅವರೊಂದಿಗೆ ಇರಾನ್ ಬಗ್ಗೆ ಮಾಹಿತಿಯನ್ನು ಹಂಚಿಕೊಳ್ಳುತ್ತಿದ್ದರು.

ಆರೋಪಿಗಳ ಮೇಲೆ ಇರಾನಿನ ಭದ್ರತಾ ಪಡೆಗಳನ್ನು ಅಪಹರಿಸಿದ ಆರೋಪವೂ ಇದೆ. ಅವರನ್ನು ಅಪಹರಿಸಿ ಅವರಿಂದ ಮಾಹಿತಿ ಪಡೆದ ಮತ್ತು ಕೆಲವು ಏಜೆಂಟರ ಕಾರುಗಳು ಮತ್ತು ಅಪಾರ್ಟ್ಮೆಂಟ್ಗಳಿಗೆ ಬೆಂಕಿ ಹಚ್ಚಿದ ಆರೋಪ ಅವರ ಮೇಲಿದೆ. ಈ ಗುಂಪಿನೊಂದಿಗೆ ಕೆಲಸ ಮಾಡುವ ಹೆಚ್ಚಿನ ಜನರನ್ನು ಬಂಧಿಸಲಾಗಿದೆ. ಅವರೆಲ್ಲರಿಗೂ ಸುಮಾರು 10 ವರ್ಷಗಳ ಜೈಲು ಶಿಕ್ಷೆ ವಿಧಿಸಲಾಗಿದೆ.

## ದೆಹಲಿಯಲ್ಲಿ ದಟ್ಟವಾದ ಮಂಜು



**ನವದೆಹಲಿ:** ರಾಜಧಾನಿ ದೆಹಲಿಯಲ್ಲಿ ದಟ್ಟವಾದ ಮಂಜಿವಿನಿಂದ 80ಕ್ಕೂ ಹೆಚ್ಚು ವಿಮಾನಗಳು ಹಾಗೂ ಹಲವಾರು ರೈಲುಗಳ ಸಂಚಾರ ವಿಳಂಬವಾಗಿವೆ. ಉತ್ತರ ಭಾರತದಲ್ಲಿ ದಟ್ಟವಾದ ಮಂಜು ಇರುವ ಕಾರಣ ಭಾರತೀಯ ಹವಾಮಾನ ಇಲಾಖೆ ರೆಡ್ ಅಲರ್ಟ್ ಘೋಷಿಸಿದೆ. ಹವಾಮಾನ ವೈಪರೀತ್ಯದಿಂದಾಗಿ ದೆಹಲಿಯ ಇಂದಿರಾ ಗಾಂಧಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಇಂದು ಬೆಳಗ್ಗೆ 8.30 ರವರೆಗೆ 80 ಕ್ಕೂ ಹೆಚ್ಚು ವಿಮಾನಗಳು ವ್ಯತ್ಯಯವಾಗಿದೆ ಕಡಿಮೆ ಗೋಚರತೆಯಿಂದಾಗಿ ಮತ್ತೆ ವಿಮಾನಗಳು ಮತ್ತು ರೈಲು ಪ್ರಯಾಣದಲ್ಲಿ ವಿಳಂಬವಾಗಿದೆ.

ದಟ್ಟ ಮಂಜಿನ ವಾತಾವರಣದಿಂದಾಗಿ ರಾಷ್ಟ್ರ ರಾಜಧಾನಿಗೆ ಪ್ರಯಾಣಿಸುವ ಮತ್ತು ಬರುವ ಪ್ರಯಾಣಿಕರಿಗೆ ತೊಂದರೆಯಾಗಿದೆ.

## ಅಮೆರಿಕದಲ್ಲಿ ಐಷಾರಾಮಿ ಬಂಗಲೆಯಲ್ಲಿ ಮೂವರು ಭಾರತೀಯರ ಶವಪತ್ತೆ

**ನ್ಯೂಯಾರ್ಕ್:** ನಿನ್ನೆಯಷ್ಟೆ ಚಿತ್ರದುರ್ಗದಲ್ಲಿ ಐವರ ಅಸ್ಥಿಪಂಜರ ದೊರೆತಿದ್ದು ಬಹುದೊಡ್ಡ ಸುದ್ದಿಯಾಗಿತ್ತು. ಇದೀಗ ದೂರದ ಅಮೆರಿಕದ ಮ್ಯಾಸಚೂಸೆಟ್ಸ್‌ನಲ್ಲಿರುವ ತಮ್ಮ ಐಷಾರಾಮಿ ಮನೆಯಲ್ಲಿ ಭಾರತೀಯ ಮೂಲದ ದಂಪತಿಗಳು ಮತ್ತು ಅವರ ಹದಿಹರೆಯದ ಮಗಳು ಶವವಾಗಿ ಪತ್ತೆಯಾಗಿದ್ದಾರೆ.







ರಾಕೇಶ್ ಕಮಲ್ (57), ಅವರ ಪತ್ನಿ ಟೀನಾ (54) ಮತ್ತು ಅವರ ಮಗಳು ಅರಿಯಾನಾ (18) ಅವರ ಶವಗಳು ಡೋವರ್‌ನಲ್ಲಿರುವ ಅವರ ನಿವಾಸದಲ್ಲಿ ರಾತ್ರಿ 7.30 ರ ಸುಮಾರಿಗೆ ಪತ್ತೆಯಾಗಿವೆ ಎಂದು ನಾರ್ಫೋಕ್ ಜಿಲ್ಲಾ ಅಟಾರ್ನಿ (ಡಿಎ) ಮೈಕೆಲ್ ಮೊರಿಸ್ಸೆ ತಿಳಿಸಿದ್ದಾರೆ. ಡೋವರ್ ಮ್ಯಾಸಚೂಸೆಟ್ಸ್‌ ರಾಜಧಾನಿ ಬೋಸ್ಟನ್ನಿಂದ ನೈಋತ್ಯಕ್ಕೆ 32 ಕಿಲೋಮೀಟರ್ ದೂರದಲ್ಲಿದೆ.

ಟೀನಾ ಮತ್ತು ಅವರ ಪತಿ ಮೊದಲು ಶಿಕ್ಷಣ ಕ್ಷೇತ್ರಕ್ಕೆ ಸಂಬಂಧಿಸಿದ ಎಡುನೋವಾ ಎಂಬ ಕಂಪನಿಯನ್ನು ನಡೆಸುತ್ತಿದ್ದರು ಅದನ್ನು ನಂತರ ಮುಚ್ಚಲಾಯಿತು ಎನ್ನಲಾಗಿದ್ದು. ಈ ಘಟನೆಯನ್ನು 'ಕೌಟುಂಬಿಕ ಹಿಂಸಾಚಾರ' ಎಂದು ಬಣ್ಣಿಸಿದ ಜಿಲ್ಲಾಧಿಕಾರಿ, ಕಮಲ್ ಶವದ ಬಳಿ ಬಂದೂಕು ಪತ್ತೆಯಾಗಿದೆ. ನ್ಯೂಯಾರ್ಕ್ ಪೋಸ್ಟ್ ವರದಿಯ ಪ್ರಕಾರ, ಮೂವರು ಕುಟುಂಬ ಸದಸ್ಯರನ್ನು ಗುಂಡಿಕ್ಕಿ ಕೊಲ್ಲಲಾಗಿದೆ ಎಂದು ವರದಿ ಮಾಡಿದೆ. ಆದರೆ ಇದು ಕೊಲೆಯೋ ಅಥವಾ ಆತ್ಮಹತ್ಯೆಯೇ ಎಂಬುದರ ಕುರಿತು ಪ್ರತಿಕ್ರಿಯಿಸುವ ಮೊದಲು ವೈದ್ಯಕೀಯ ಪರೀಕ್ಷೆಯ ಫಲಿತಾಂಶಕ್ಕಾಗಿ ಕಾಯಲಾಗುತ್ತಿದೆ ಈ ನಡುವೆ ದಂಪತಿಗಳು ಇತ್ತೀಚಿನ ವರ್ಷಗಳಲ್ಲಿ ಆರ್ಥಿಕ ಸಮಸ್ಯೆಗಳನ್ನು ಎದುರಿಸುತ್ತಿದ್ದರು ಎಂಬ ಅಂಶ ಬೆಳಕಿಗೆ ಬಂದಿದೆ.

## ವೀಸಾ ಶುಲ್ಕ ಶೇ. 12 ಹೆಚ್ಚಳ

**ವಾಷಿಂಗ್ಟನ್:** ಹೆಚ್-1ಬಿ ಸೇರಿದಂತೆ ಕೆಲವು ವೀಸಾಗಳ ಸಂಸ್ಕರಣೆ ಶುಲ್ಕಗಳನ್ನು ಅಮೆರಿಕದ ಪೌರತ್ವ ಮತ್ತು ವಲಸೆ ಸೇವೆಗಳ ಇಲಾಖೆ ಏರಿಕೆ ಮಾಡಿದೆ. ಸಂಸ್ಕರಣೆ ಶುಲ್ಕ ಮಾರ್ಚ್ ನಿಂದ ಹೆಚ್-1ಬಿ ವೀಸಾಗಳಿಗೆ ಸಲ್ಲಿಸಲಾಗುವ ಅರ್ಜಿಗಳ ಇ- ನೋಂದಣಿಯನ್ನು ಒಳಗೊಂಡಿರುತ್ತದೆ. ವಲಸೆಯೇತರ ಕಾರ್ಮಿಕರಿಗೆ ಬಳಸುವ ಹೆಚ್1 ಬಿ ಅಥವಾ ಎಲ್ 1 ವೀಸಾಗಳ ಅರ್ಜಿ ನಮೂನೆ ಐ-129ರ ಸಂಸ್ಕರಣೆ ಶುಲ್ಕವನ್ನು ಶೇಕಡ 12ರಷ್ಟು ಹೆಚ್ಚಳ ಮಾಡಲಾಗಿದ್ದು, 2805 ಡಾಲರ್ ಆಗಲಿದೆ. 2024ರ ಫೆಬ್ರವರಿ 26 ರಿಂದ ಹೊಸ ಶುಲ್ಕ ಜಾರಿಗೆ ಬರಲಿದೆ. US ಪೌರತ್ವ ಮತ್ತು ವಲಸೆ ಸೇವೆಗಳು H-1B ಅಪ್ಲಿಕೇಶನ್‌ಗಳು ಸೇರಿದಂತೆ ಕೆಲವು ವಿಭಾಗಗಳಲ್ಲಿ ಪ್ರೀಮಿಯಂ ಪ್ರಕ್ರಿಯೆ ಶುಲ್ಕವನ್ನು ಹೆಚ್ಚಿಸುವ ಅಂತಿಮ ನಿಯಮವನ್ನು ಪ್ರಕಟಿಸಿದೆ. ಶುಲ್ಕ ಬದಲಾವಣೆಯು ಫೆಬ್ರವರಿ 26, 2024 ರಿಂದ ಜಾರಿಗೆ ಬರಲಿದೆ. ಫಾರ್ಮ್ I-129 ರ ಪ್ರೀಮಿಯಂ ಪ್ರಕ್ರಿಯೆಗೆ ಶುಲ್ಕಗಳು(ಇದು H-1Bವೀಸಾ ಅಥವಾ L1 ಇಂಟರ್‌ಕಂಪನಿ ವರ್ಗಾವಣೆ ವೀಸಾಗಳಂತಹ ವಲಸೆ-ಅಲ್ಲದ ಕೆಲಸಗಾರರಿಗೆ ಅರ್ಜಿಯಾಗಿದೆ) USD 2,805 ಗೆ ಅಂದರೆ 12% ಹೆಚ್ಚಾಗಿದೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಸಂಜು ವೆಡ್ಸ್ ಗೀತಾ 2: ಸ್ವಿಟ್ಜರ್ ಲ್ಯಾಂಡ್ ಅನುಭವ ಬಿಚ್ಚಿಟ್ಟ ಟೀಮ್



ನಾಲ್ಕು ತಿಂಗಳ ಹಿಂದೆ ಪ್ರಾರಂಭವಾಗಿದ್ದ ನಾಗಶೇಖರ್ ಅವರ ನಿರ್ದೇಶನದ 'ಸಂಜು ವೆಡ್ಸ್ ಗೀತಾ 2 ಚಿತ್ರದ ಚಿತ್ರೀಕರಣ ಪ್ರಮುಖ ಘಟ್ಟಕ್ಕೆ ಬಂದಿದೆ. ಇದೇ ತಿಂಗಳು ಚಿತ್ರತಂಡ ಸ್ವಿಟ್ಜರ್ ಲ್ಯಾಂಡ್‌ಗೆ ಹೋಗಿ 2 ಹಾಡುಗಳನ್ನು ಚಿತ್ರೀಕರಿಸಿಕೊಂಡು ಬಂದಿದೆ. ಈವರೆಗೆ ನಡೆಸಿದ ಚಿತ್ರೀಕರಣದ ಅನುಭವಗಳನ್ನು ಹಂಚಿಕೊಳ್ಳಲೆಂದು ನಿರ್ದೇಶಕ ನಾಗಶೇಖರ್ ಹಾಗೂ ತಂಡ ಮಾಧ್ಯಮಗಳ ಮುಂದೆ ಬಂದಿತ್ತು. ಅಶೋಕ ಹೋಟೆಲ್ ನಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಸ್ವಿಟ್ಜರ್ ಲ್ಯಾಂಡ್ ಶೂಟಿಂಗ್ ದೃಶ್ಯಗಳ ಪ್ರದರ್ಶನದ ನಂತರ ಮಾತನಾಡಿದ ನಿರ್ದೇಶಕ ನಾಗಶೇಖರ್ ಹಿಂದೆ ಸಂಜು ವೆಡ್ಸ್ ಗೀತಾ ಸಿನಿಮಾ ಮಾಡುವಾಗ ಆದ ಅನುಭವಗಳನ್ನು ಮೆಲುಕು ಹಾಕಿದರು. ಅಲ್ಲದೆ ಈ ಚಿತ್ರ ಅದಕ್ಕಿಂತ ಚೆನ್ನಾಗಿ, ವೈಭವಯುತವಾಗಿ ಮೂಡಿಬರುತ್ತಿದೆ. ಇತ್ತೀಚೆಗಷ್ಟೇ ಸ್ವಿಟ್ಜರ್ ಲ್ಯಾಂಡ್ ನಲ್ಲಿ ಹಾಡುಗಳ ಶೂಟಿಂಗ್ ಮಾಡಿಕೊಂಡು ಬಂದಿದ್ದೇವೆ. ನಂತರ ಮುಂಬಯಿ, ಹೈದರಾಬಾದ್ ಶೂಟಿಂಗ್ ಮಾಡಿ, 2024ರ ಏಪ್ರಿಲ್ 1ರಂದು ಚಿತ್ರವನ್ನು ರಿಲೀಸ್ ಮಾಡುವ ಯೋಜನೆಯಿದೆ.

ಸಂಜು ವೆಡ್ಸ್ ಗೀತಾ ಚಿತ್ರಕ್ಕೆ ಸಿಕ್ಕ ಯಶಸ್ಸಿನಿಂದಲೇ ಭಾಗ ಎರಡು ಇಷ್ಟು ಅದ್ದೂರಿಯಾಗಿ ಮೂಡಿಬರುತ್ತಿದೆ. ರಂಗಾಯಣ ರಘು, ಸಾಧು ಕೋಕಿಲ ವಿಶೇಷ ಪಾತ್ರಗಳಲ್ಲಿದ್ದಾರೆ. ನನ್ನ ಈ ಕನಸಿಗೆ ಎಂಜಿನಿಯರಿಂಗ್ ಕ್ಲಾಸ್ ಮೇಟ್ ಕುಮಾರ್ ಕೈಜೋಡಿಸಿದ್ದಾರೆ. ಶ್ರೀಧರ್ ವಿ. ಸಂಭ್ರಮ್ ಅದ್ಭುತವಾದ ಟ್ಯೂನ್ ಗಳನ್ನು ಮಾಡಿ ಕೊಟ್ಟಿದ್ದಾರೆ. ಪ್ರಮುಖ ಪಾತ್ರಗಳಲ್ಲಿ ರಚಿತಾ ರಾಮ್, ಶ್ರೀನಗರ ಕಿಟ್ಟಿ ಇಬ್ಬರೂ ಅದ್ಭುತ ಅಭಿನಯ ನೀಡಿದ್ದಾರೆ.

2024ರ ಬ್ಲಾಕ್ ಬಸ್ಟರ್ ಚಿತ್ರವಾಗಿ ಸಂಜು ವೆಡ್ಸ್ ಗೀತಾ ಮೂಡಿಬರಲಿದೆ. ಇಂಥ ಒಳ್ಳೆ ನಿರ್ಮಾಪಕರು ನಮ್ಮ ಚಿತ್ರಕ್ಕೆ ಸಿಕ್ಕಿದ್ದಾರೆ. ಯಾವುದಕ್ಕೂ ಹಿಂದೇಟು ಹಾಕಲ್ಲ ಎಂದರು. ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಹಿರಿಯ ನಿರ್ದೇಶಕ ಎಸ್.ಮಹೇಂದರ್, ನಟ ಶರಣ್ ಆಗಮಿಸಿ ನಾಗಶೇಖರ್ ಹಾಗೂ ಚಿತ್ರದ ಬಗ್ಗೆ ಮಾತನಾಡಿದರು. ನಾಯಕ ಶ್ರೀನಗರ ಕಿಟ್ಟಿ ಮಾತನಾಡಿ ಅಲ್ಲಿ ಕೊರೆಯುವ ಛಳಿ ಇತ್ತು. ಹಾಡುಗಳು ತುಂಬಾ ಚೆನ್ನಾಗಿ ಬಂದಿವೆ ಎಂದು ಹೇಳಿದರು.

ನಾಯಕಿ ರಚಿತಾ ರಾಮ್ ಮಾತನಾಡಿ ತುಂಬಾ ಶೇಡ್ಸ್ ಇರುವಂಥ ಗೀತಾ ಪಾತ್ರ ನನ್ನದು. ಸಿನಿಮಾ ಅಂದ್ರೆ ಖುಷಿ, ಕಷ್ಟ ಎರಡೂ ಇರುತ್ತೆ. ನಾವಿ ಹೋಗಿದ್ದೇ ಡಿಸೆಂಬರ್ ಛಳಿಯಲ್ಲಿ. ನಾಗಶೇಖರ್ ಏನಾ ಮಾಡಿದರೂ ಪ್ಲಾನ್ಡ್ ಆಗಿ ಮಾಡ್ತಾರೆ. ನಮಗೆ ನೇಚರ್ ಕೂಡ ತುಂಬಾ ಸಪೋರ್ಟ್ ಮಾಡಿತು. ಅಲ್ಲಿ ಮಾಡಿದ ಎರಡು ಹಾಡುಗಳೂ ತುಂಬಾ ಚೆನ್ನಾಗಿ ಬಂದಿವೆ. ಲೊಕೇಶನ್ ಅದ್ಭುತ. ಸತ್ಯ ಹೆಗಡೆ ಸರ್ ಬೇರೆ ಬೇರೆ ಆಂಗಲ್ ನಲ್ಲಿ ಶೂಟ್ ಮಾಡಿದ್ದಾರೆ. ಎಮೋಷನಲ್ ಸೀನ್ಸ್ ಇನ್ಟೆನ್ಸ್ ಆಗಿ ಬಂದಿದೆ ಎಂದರು.

ಸಂಗೀತ ನಿರ್ದೇಶಕ ಶ್ರೀಧರ ವಿ. ಸಂಭ್ರಮ ಚಿತ್ರದಲ್ಲಿ 5 ಸುಂದರ ಹಾಡುಗಳಿಗೆ ಸಂಗೀತ ನೀಡಿದ್ದು, ಕವಿರಾಜ ಸಾಹಿತ್ಯ ಸಾಹಿತ್ಯ ಬರೆದಿದ್ದಾರೆ. ನಿರ್ಮಾಪಕ ಚಲವಾದಿ ಕುಮಾರ್ ಮಾತನಾಡಿ, ನಾಗಶೇಖರ್ ನಾನು ಇಂಜಿನಿಯರಿಂಗ್ ಕ್ಲಾಸ್ ಮೇಟ್ಸ್. ಸ್ಕ್ರಿಪ್ಟ್ ನಲ್ಲೂ ನಾನು ಜೊತೆ ಕುಳಿತಿದ್ದೆ. ಸಿನಿಮಾ ತುಂಬಾ ಚೆನ್ನಾಗಿ ಬರುತ್ತಿದೆ ಎಂದರು. ನಾಗಶೇಖರ್ ಮೂವೀಸ್ ಹಾಗೂ ಪವಿತರ ಇಂಟರ್ ನ್ಯಾಷನಲ್ ಮೂವೀಮೇಕರ್ಸ್ ಸಹಯೋಗದೊಂದಿಗೆ ಮಹಾನಂದಿ ಕ್ರಿಯೇಶನ್ಸ್ ನಿರ್ಮಿಸುತ್ತಿರುವ ಈ ಚಿತ್ರಕ್ಕೆ ನಾಗಶೇಖರ್ ಅವರೇ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ.

# 'ಬೇಬಿ' ಹುಡುಗಿಗೆ ಬಂಪರ್ ಆಫರ್



ಬೇಬಿ ಸಿನಿಮಾದ ಮೂಲಕ ಚಿತ್ರ ಜಗತ್ತಿನ ಡಾರ್ಲಿಂಗ್ ಆಗಿರುವ ವೈಷ್ಣವಿ ಇದೀಗ ಏಕಕಾಲಕ್ಕೆ ಮೂರು ಚಿತ್ರಗಳಿಗೆ ಸಹಿ ಮಾಡಿದ್ದಾರೆ ಎಂದು ಹೇಳಲಾಗುತ್ತಿದೆ. ತೆಲುಗು ಚಿತ್ರೋದ್ಯಮದಲ್ಲಿ ಇದು ಚರ್ಚೆಗೂ ಕಾರಣವಾಗಿದೆ. ದಿಲ್ ರಾಜು ನಿರ್ಮಾಣದಲ್ಲಿ ಮೂಡಿ ಬರಲಿರುವ ಮೂರು ಚಿತ್ರಗಳಿಗೆ ವೈಷ್ಣವಿ ನಾಯಕಿ ಎಂದು ಹೇಳಲಾಗುತ್ತಿದೆ.

ಬೇಬಿ ಸಿನಿಮಾದ ಯಶಸ್ಸಿನ ನಂತರ ಇವರಿಗೆ ಸಾಕಷ್ಟು ಆಫರ್ಸ್ ಬಂದವು. ಆದರೆ, ಅವರು ಯಾವ ಸಿನಿಮಾವನ್ನು ಆಯ್ಕೆ ಮಾಡಿಕೊಳ್ಳುತ್ತಾರೆ ಎನ್ನುವುದೇ ಕುತೂಹಲವಾಗಿತ್ತು. ಈಗ ಕುತೂಹಲಕ್ಕೆ ತೆರೆ ಎಳೆಯುವ ಕೆಲಸ ಮಾಡುತ್ತಿದ್ದಾರೆ ವೈಷ್ಣವಿ. ಬೇಬಿ ನಂತರ ಲವ್ ಮಿ ಚಿತ್ರಕ್ಕೆ ಅವರು ಸಹಿ ಮಾಡಿದ್ದಾರೆ ಎಂದು ಹೇಳಲಾಗುತ್ತಿದೆ.

ದಿಲ್ ರಾಜು ಸೋದರಳಿಯ ಆಶಿಶ್ ರೆಡ್ಡಿ ಈ ಸಿನಿಮಾದ ನಾಯಕನಾಗಿದ್ದು, ನಾಯಕಿಯಾಗಿ ವೈಷ್ಣವಿ ಅವರನ್ನು ಆಯ್ಕೆ ಮಾಡಿಕೊಳ್ಳಲಾಗಿದೆ ಎನ್ನುವುದು ಸದ್ಯಕ್ಕಿರುವ ಮಾಹಿತಿ. ಇದೊಂದು ಹಾರಾರ್ ಮತ್ತು ಕಾಮಿಡಿ ಸಿನಿಮಾವಾಗಿದೆಯಂತೆ. ಈ ಚಿತ್ರದ ನಂತರ ದಿಲ್ ರಾಜು ಅವರು ಇನ್ನೂ ಎರಡು ಚಿತ್ರಗಳಿಗೆ ವೈಷ್ಣವಿ ನಾಯಕಿ ಎನ್ನಲಾಗುತ್ತಿದೆ.

# 'ಸೆಲೆಬ್ರಿಟಿಸ್'ಗೆ ಧನ್ಯವಾದ ತಿಳಿಸಿದ ದರ್ಶನ್





ರಾಜ್ಯಾದ್ಯಂತ ಕಾಟೇರ ಸಿನಿಮಾದ ಅಬ್ಬರ ಜೋರಾಗಿದೆ. ಸಿನಿಮಾ, ನಟನೆ, ಸಂಭಾಷಣೆ, ನಿರ್ದೇಶನ ಹೀಗೆ ಎಲ್ಲದರಲ್ಲೂ ಸಿನಿಮಾ ಪಾಸ್ ಅನಿಸಿಕೊಂಡಿದೆ. ಅದರಲ್ಲೂ ದರ್ಶನ್ ಅಭಿಮಾನಿಗಳು ಚಿತ್ರವನ್ನು ತಲೆಮೇಲೆ ಹೊತ್ತುಕೊಂಡು ಮೆರೆಸುತ್ತಿದ್ದಾರೆ. ಹಾಗಾಗಿ ತಮ್ಮ ಅಭಿಮಾನಿಗಳನ್ನು ಸೆಲೆಬ್ರಿಟಿಸ್ ಎಂದು ಕರೆಯುವ ದರ್ಶನ್ ಸೋಷಿಯಲ್ ಮೀಡಿಯಾ ಮೂಲಕ ಧನ್ಯವಾದಗಳನ್ನು ಅರ್ಪಿಸಿದ್ದಾರೆ.

ಏನೆಂದು ನಾ ಹೇಳಲಿ, ನಿಮ್ಮಯ ಪ್ರೀತಿ ಆಶೀರ್ವಾದಕ್ಕೆ ಕೊನೆಯೆಲ್ಲಿ. ಧನೋಸ್ಮಿ ಸೆಲೆಬ್ರಿಟಿಸ್. ಹೃದಯಪೂರ್ವಕ ಧನ್ಯವಾದಗಳು ಕರ್ನಾಟಕ ಎಂದು ದರ್ಶನ್ ಬರೆದುಕೊಂಡಿದ್ದಾರೆ. ಜೊತೆಗೆ ಸಿನಿಮಾದ ಜೀವಾಳದಂತಿರುವ ಅವರ ಮತ್ತೊಂದು ಗೆಟಪ್ ಫೋಟೋವನ್ನು ಹಂಚಿಕೊಂಡಿದ್ದಾರೆ.

**ಕೋಟಿ ಕೋಟಿ ಗಳಿಕೆ**

ಕಾಟೇರ ಸಿನಿಮಾ ರಿಲೀಸ್ ಆಗಿ ಒಂದೇ ದಿನಕ್ಕೆ ಕೋಟಿ ಕೋಟಿ ರೂಪಾಯಿ ಬಾಕ್ಸ್ ಆಫೀಸಿಗೆ ಹರಿದು ಬಂದಿದೆ. ಕಾಟೇರ ಸಿನಿಮಾದ ಮೊದಲ ದಿನದ ಗಳಿಕೆ ಅಂದಾಜು 19.79 ಕೋಟಿ ರೂಪಾಯಿ ಎಂದು ಹೇಳಲಾಗುತ್ತಿದೆ. ಹಾಗಾಗಿ ಸಹಜವಾಗಿಯೇ ಚಿತ್ರತಂಡ ಮತ್ತು ಅಭಿಮಾನಿಗಳು ಸಂಭ್ರಮಿಸುತ್ತಿದ್ದಾರೆ.

ದರ್ಶನ್ ಅಭಿನಯದ ಬಹುನಿರೀಕ್ಷಿತ ಕಾಟೇರ ಸಿನಿಮಾ ರಾಜ್ಯಾದ್ಯಂತ ರಿಲೀಸ್ ಆಗಿದ್ದು, ಚಕ್ರವರ್ತಿಯ ಅಬ್ಬರ ಜೋರಾಗಿದೆ. ನಿನ್ನೆಯಿಂದ ಸಿನಿಮಾ ಥಿಯೇಟರ್, ಮಾಲ್‌ಗಳ ಮುಂದೆ ಕಿಕ್ಕಿರಿದು ನಿಂತಿರುವ ಅಭಿಮಾನಿಗಳು ದರ್ಶನ್ ಕಟೌಟ್‌ಗೆ ಹಾರ ಹಾಕಿ, ಪಟಾಕಿ ಸಿಡಿಸಿ ಸಂಭ್ರಮಿಸುತ್ತಿದ್ದಾರೆ. ಡಿಬಾಸ್ ಡಿಬಾಸ್ ಎಂದು ಜಯಘೋಷ ಹಾಕುತ್ತಾ ಹುಚ್ಚೆದ್ದು ಕುಣಿಯುತ್ತಿದ್ದಾರೆ.

ಬೆಂಗಳೂರಿನ ಜೆ.ಪಿ.ನಗರದ ಸಿದ್ದೇಶ್ವರ ಚಿತ್ರಮಂದಿರದಲ್ಲಿ ಅಭಿಮಾನಿಗಳಿಗಾಗಿ ಫ್ಯಾನ್ಸ್ ಶೋ ಆಯೋಜನೆ ಮಾಡಲಾಗಿತ್ತು. ಸಿನಿಮಾ ನೋಡಿ ಹೊರ ಬಂದ ಅಭಿಮಾನಿಗಳು ಸಾರಥಿಗೆ ಜೈಕಾರ ಕೂಗತೊಡಗಿದ್ದಾರೆ. ಈ ನಡುವೆ ಕಾಟೇರಮ್ಮನ ಗುಡಿ ಮಾಡಿ ದೇವಿ ಪ್ರತಿಮೆ ಸ್ಥಾಪಿಸಿರುವ ದೃಶ್ಯಗಳು ಕಂಡುಬಂದಿವೆ.

ದರ್ಶನ್ ಅಭಿಮಾನಿಗಳಲ್ಲಿ ಭಾರೀ ಕುತೂಹಲ ಮೂಡಿಸಿದ್ದ ಕಾಟೇರ ದರ್ಬಾರ್ ನಿನ್ನೆ ಮಧ್ಯರಾತ್ರಿಯಿಂದಲೇ ಶುರುವಾಗಿದೆ. ಮೊದಲ ದಿನ ರಾಜ್ಯದ 21 ಕಡೆ ಮಧ್ಯರಾತ್ರಿ 12 ಗಂಟೆಯಿಂದಲೇ ಶೋ ಆರಂಭಿಸಲಾಗಿತ್ತು. 43 ಥಿಯೇಟರ್‌ಗಳಲ್ಲಿ ಮುಂಜಾನೆ 3 ಗಂಟೆಯಿಂದ, 77 ಥಿಯೇಟರ್‌ಗಳಲ್ಲಿ ಬೆಳಗಿನ ಜಾವ 4 ಗಂಟೆಯಿಂದ ಶೋ ಆರಂಭವಾಗಿತ್ತು. ಸೂರ್ಯೋದಯವಾಗುವುದಕ್ಕೂ ಮುನ್ನವೇ ಕಾಟೇರ 335 ಶೋಗಳಲ್ಲಿ ಅಬ್ಬರಿಸಿದ್ದು, ಅಭಿಮಾನಿಗಳ ಮನಗೆದ್ದಿದೆ. ಮೊದಲ ದಿನ 1,600 ಶೋಗಳ ಪ್ರದರ್ಶನಕ್ಕೆ ಸಜ್ಜಾಗಿತ್ತು.

'ಕಾಟೇರ' ಸಿನಿಮಾದ ಕಥೆ ನಡೆಯುವುದು 1974ರ ಕಾಲಘಟ್ಟದಲ್ಲಿ. ಭೀಮನಹಳ್ಳಿ ಎಂಬ ಊರಿನಲ್ಲಿ ಕುಲುಮೆ ಕೆಲಸ ಮಾಡುತ್ತಿರುವ ಯುವಕ ಕಾಟೇರ (ದರ್ಶನ್). ದುಡಿಮೆನೇ ದೇವ್ರು ಅಂತ ನಂಬಿರುವ ವ್ಯಕ್ತಿ. ಆದರೆ ಇದೇ ಊರಿನಲ್ಲಿ ಜಮಿನ್ದಾರನ ದಬ್ಬಾಳಿಕೆ ಇರುತ್ತದೆ, ಗೇಣಿದಾರರಿಗೆ ಅನ್ಯಾಯವಾಗುತ್ತಿರುತ್ತದೆ, ಭತ್ತ ಬೆಳೆಯುವ ರೈತನಿಗೆ ಬದುಕೋದೇ ಕಷ್ಟವಾಗಿರುತ್ತದೆ. ಅಷ್ಟಕ್ಕೂ ಆ ಊರಿನಲ್ಲಿ ಅಂಥದ್ದು ಏನಾಗುತ್ತಿರುತ್ತದೆ? ತನ್ನವರ ಮೇಲಿನ ದಬ್ಬಾಳಿಕೆಗೆ ಕಾಟೇರ ಯಾವ ರೀತಿ ಉತ್ತರ ಕೊಡುತ್ತಾನೆ ಎಂಬ ಕುತೂಹಲದೊಂದಿಗೆ ಸಿನಿಮಾ ಸಾಗುತ್ತದೆ.

# ಆರ್‌ಸಿಬಿ ತಂಡವನ್ನು ನಂಬಿ ಕೆಟ್ಟ ಯುವ ಸ್ಫೋಟಕ ಬ್ಯಾಟರ್..!




ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-17 ರ ಆಕ್ಷನ್‌ನಲ್ಲಿ ಒಟ್ಟು 72 ಆಟಗಾರರು ಹರಾಜಾಗಿದ್ದರು. ಅತ್ತ ಹರಾಜಾಗದೇ ಉಳಿದ ಆಟಗಾರರ ಸಂಖ್ಯೆ 261. ಹೀಗೆ ಅನ್‌ಸೋಲ್ಡ್ ಪ್ಲೇಯರ್ಸ್ ಪಟ್ಟಿಯಲ್ಲಿರುವ ಆಟಗಾರರಲ್ಲಿ ಫಿನ್ ಅಲೆನ್ ಕೂಡ ಒಬ್ಬರು.

ನ್ಯೂಝಿಲೆಂಡ್ ತಂಡದ ಯುವ ಆರಂಭಿಕ ಆಟಗಾರ ಫಿನ್ ಅಲೆನ್ ಈ ಬಾರಿಯ ಹರಾಜಿನಲ್ಲಿ ಕೇವಲ 75 ಲಕ್ಷ ರೂ. ಮೂಲ ಬೆಲೆಯೊಂದಿಗೆ ಕಾಣಿಸಿಕೊಂಡಿದ್ದರು. ಆದರೆ ಅವರ ಖರೀದಿಗೆ ಯಾವುದೇ ಫ್ರಾಂಚೈಸಿ ಮುಂದೆ ಬಂದಿರಲಿಲ್ಲ. ಅದರಲ್ಲೂ ಯುವ ಆಟಗಾರನನ್ನು ಬೇಸ್ ಪ್ರೈಸ್‌ಗೆ ಖರೀದಿಸಲು ಆರ್‌ಸಿಬಿ ಕೂಡ ಹಿಂದೇಟು ಹಾಕಿದ್ದು ಅಚ್ಚರಿ. ನ್ಯೂಝಿಲೆಂಡ್ ತಂಡದ ಯುವ ಆರಂಭಿಕ ಆಟಗಾರ ಫಿನ್ ಅಲೆನ್ ಈ ಬಾರಿಯ ಹರಾಜಿನಲ್ಲಿ ಕೇವಲ 75 ಲಕ್ಷ ರೂ. ಮೂಲ ಬೆಲೆಯೊಂದಿಗೆ ಕಾಣಿಸಿಕೊಂಡಿದ್ದರು. ಆದರೆ ಅವರ ಖರೀದಿಗೆ ಯಾವುದೇ ಫ್ರಾಂಚೈಸಿ ಮುಂದೆ ಬಂದಿರಲಿಲ್ಲ. ಅದರಲ್ಲೂ ಯುವ ಆಟಗಾರನನ್ನು ಬೇಸ್ ಪ್ರೈಸ್‌ಗೆ ಖರೀದಿಸಲು ಆರ್‌ಸಿಬಿ ಕೂಡ ಹಿಂದೇಟು ಹಾಕಿದ್ದು ಅಚ್ಚರಿ.

ಏಕೆಂದರೆ ಫಿನ್ ಅಲೆನ್ ಕಳೆದ ಮೂರು ಸೀಸನ್ ಗಳಿಂದ ಆರ್‌ಸಿಬಿ ತಂಡದ ಸದಸ್ಯರಾಗಿದ್ದರು. ಈ ಮೂರು ವರ್ಷಗಳಲ್ಲಿ ಆರ್‌ಸಿಬಿ ಒಟ್ಟು 45 ಪಂದ್ಯಗಳನ್ನಾಡಿದೆ. ಈ ವೇಳೆ ಒಮ್ಮೆಯೂ ಅಲೆನ್ ಅವರನ್ನು ಕಣಕ್ಕಿಳಿಸಿಲ್ಲ. ಅಂದರೆ ಮೂರು ವರ್ಷಗಳಿಂದ ಫಿನ್ ಅಲೆನ್ ಆರ್‌ಸಿಬಿ ಪರ ಬೆಂಚ್ ಕಾದಿದ್ದರು. ಪ್ರತಿ ಸೀಸನ್‌ನಲ್ಲೂ ಆರ್‌ಸಿಬಿ ಪರ ಕಣಕ್ಕಿಳಿಯುವ ನಿರೀಕ್ಷೆಯೊಂದಿಗೆ ತಂಡದಲ್ಲಿ ಕಾಣಿಸಿಕೊಳ್ಳುತ್ತಿದ್ದ ಫಿನ್ ಅಲೆನ್ ಅವರನ್ನು ಈ ಬಾರಿಯ ಹರಾಜಿಗೂ ಮುನ್ನ ಕೈ ಬಿಡಲಾಗಿತ್ತು. ಅತ್ತ ಮೂರು ವರ್ಷಗಳಿಂದ ಐಪಿಎಲ್ ಆಟಗಾರ ಎಂದು ಗುರುತಿಸಿಕೊಂಡಿದ್ದರೂ ಅಲೆನ್ ಖಾತೆಯಲ್ಲಿ ಒಂದೇ ಒಂದು ರನ್ ಕೂಡ ಇರಲಿಲ್ಲ.

ಹೀಗಾಗಿಯೇ ವಿಕೆಟ್ ಕೀಪರ್-ಬ್ಯಾಟ್ಸ್‌ಮನ್ ಆಗಿದ್ದರೂ ಫಿನ್ ಅಲೆನ್ ಈ ಬಾರಿ ಹರಾಜಾಗದೇ ಉಳಿದಿದ್ದಾರೆ ಎನ್ನಬಹುದು. ಏಕೆಂದರೆ ನ್ಯೂಝಿಲೆಂಡ್ ಪರ ಯುವ ದಾಂಡಿಗ ಸ್ಫೋಟಕ ಬ್ಯಾಟರ್ ಆಗಿ ಗುರುತಿಸಿಕೊಂಡಿದ್ದರು. ಆದರೆ ಐಪಿಎಲ್‌ನಲ್ಲಿ ತನ್ನ ಸಾಮರ್ಥ್ಯವನ್ನು ತೆರೆದಿಡಲು ಆರ್‌ಸಿಬಿ ಅವಕಾಶವೇ ನೀಡಲಿಲ್ಲ. ಪರಿಣಾಮ ಮೂರು ವರ್ಷಗಳ ಕಾಲ ಆರ್‌ಸಿಬಿಯನ್ನೇ ನಂಬಿ ಕೂತಿದ್ದ ಫಿನ್ ಅಲೆನ್ ಇದೀಗ ಸೀಸನ್-17 ರಿಂದ ಹೊರಬಿದ್ದಿದ್ದಾರೆ. ಅದು ಕೂಡ ಐಪಿಎಲ್‌ಗೆ ಪಾದಾರ್ಪಣೆ ಮಾಡದೇ ಎಂಬುದೇ ವಿಶೇಷ.

ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ: ಫಾಫ್ ಡು ಪ್ಲೆಸಿಸ್, ಗ್ಲೆನ್ ಮ್ಯಾಕ್ಸ್‌ವೆಲ್, ವಿರಾಟ್ ಕೊಹ್ಲಿ, ರಜತ್ ಪಾಟಿದಾರ್, ಅನುಜ್ ರಾವತ್, ದಿನೇಶ್ ಕಾರ್ತಿಕ್, ಸುಯಶ್ ಪ್ರಭುದೇಸಾಯಿ, ವಿಲ್ ಜಾಕ್ಸ್, ಮಹಿಪಾಲ್ ಲೊಮ್ರೋರ್, ಕರ್ಣ್ ಶರ್ಮಾ, ಮನೋಜ್ ಭಾಂಡಗೆ, ಮಯಾಂಕ್ ದಾಗರ್ , ವಿಜಯ್‌ಕುಮಾರ್ ವೈಶಾಕ್, ಆಕಾಶ್ ದೀಪ್, ಮೊಹಮ್ಮದ್ ಸಿರಾಜ್, ಮೊಹಮ್ಮದ್ ಸಿರಾಜ್, ರೀಸ್ ಟೋಪ್ಲಿ, ಹಿಮಾಂಶು ಶರ್ಮಾ, ರಾಜನ್ ಕುಮಾರ್, ಕ್ಯಾಮರೋನ್ ಗ್ರೀನ್, ಅಲ್ಜಾರಿ ಜೋಸೆಫ್, ಯಶ್ ದಯಾಳ್, ಟಾಮ್ ಕರನ್, ಲಾಕಿ ಫರ್ಗುಸನ್, ಸ್ವಪ್ನಿಲ್ ಸಿಂಗ್, ಸೌರವ್ ಚೌಹಾಣ್.

# ಸರ್ಕಾರ ಅಲ್ಪಸಂಖ್ಯಾತರಿಗೆ ಕಾಣಿಕೆ ಮೇಲೆ ಕಾಣಿಕೆ ನೀಡುತ್ತಿದೆ



**ಬೆಂಗಳೂರು:** ಕರ್ನಾಟಕದಲ್ಲಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಲ್ಪಸಂಖ್ಯಾತರಿಗೆ ಕಾಣಿಕೆ ಮೇಲೆ ಕಾಣಿಕೆ ನೀಡ್ತಿದೆ. ಆದರೆ ಬರಗಾಲದಿಂದ ರೈತರು ಸಂಕಷ್ಟದಲ್ಲಿದ್ದಾರೆ, ಇನ್ನೂ ಪರಿಹಾರ ನೀಡಿಲ್ಲ. ರಾಜ್ಯದಲ್ಲಿ 500ಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಇಷ್ಟೆಲ್ಲಾ ಇದ್ದರೂ ಕೂಡ ಕಣ್ಣುಕಾಣದ ರೀತಿ ಬಂಪರ್ ಮೇಲೆ ಬಂಪರ್ ನೀಡುತ್ತಿದೆ ಎಂದು ಬೆಂಗಳೂರಿನಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ವಿಪಕ್ಷ ನಾಯಕ ಆರ್. ಅಶೋಕ್ ಕಿಡಿಕಾರಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಆರ್. ಅಶೋಕ್ ಅವರು ಸಿಎಂ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಬರಗಾಲದಲ್ಲಿ ರೈತರು ಸಂಕಷ್ಟದಲ್ಲಿದ್ದಾರೆ. ಪರಿಹಾರ ನೀಡಿಲ್ಲ. 500ಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಇಷ್ಟೆಲ್ಲಾ ಇದ್ರೂ ಕೂಡ ಸಿದ್ದರಾಮಯ್ಯ ಅವರು ಕಣ್ಣು ಕಾಣದ ರೀತಿ ಬಂಪರ್ ಮೇಲೆ ಬಂಪರ್ ನೀಡ್ತಿದ್ದಾರೆ. ನಮ್ಮ ರಾಜ್ಯದಲ್ಲಿ ಅಭಿವೃದ್ಧಿಗೆ ಸಿಗೋದೇ 5000 ಕೋಟಿ. ಅದರಲ್ಲಿ ಅಲ್ಪಸಂಖ್ಯಾತರ ಕಾಲೋನಿಗೆ 1 ಸಾವಿರ ಕೋಟಿ ಅಭಿವೃದ್ಧಿಗೆ ಬಿಟ್ಟಿದ್ದಾರೆ. ಹಿಂದೂಗಳೇನು, ದಲಿತರೇನು ಮಾಡಬೇಕು? ಪಾರ್ಲಿಮೆಂಟ್ ಚುನಾವಣೆಗೆ ಓಲೈಕೆ ಮಾಡ್ತಿದ್ದಾರೆ. ಇವರಲ್ಲಿ ಟಿಪ್ಪು ಸಂಸ್ಕೃತಿ ಹೇರುವ ಕೆಲಸ ಸಿದ್ದರಾಮಯ್ಯ ಮಾಡ್ತಿದ್ದಾರೆ ಎಂದರು.

ಕಾಂಗ್ರೆಸ್‌ನ ಬಿ.ಆರ್ ಪಾಟೀಲ್ ಹೇಳುತ್ತಿದ್ದಾರೆ ಒಂದೇ ಒಂದು ಅಭಿವೃದ್ಧಿ ಕಲ್ಲು ಹಾಕಿಲ್ಲ ಅಂತ. ಈ ರೀತಿ ಓಲೈಕೆ ರಾಜಕಾರಣ ಮಾಡುತ್ತಿದ್ದಾರೆ. ಹಿಂದೂಗಳು ವಾಸ ಮಾಡುವ ಜಾಗದಲ್ಲಿ ಅಭಿವೃದ್ಧಿ ಯಾಕಿಲ್ಲ? PFI ಮೇಲಿನ ಕೇಸ್ ವಾಪಸ್ ಪಡೆದ್ರು. ಕೆ.ಜಿ ಹಳ್ಳಿ, ಡಿಜೆ ಹಳ್ಳಿ ಘಟನೆ ಕೇಸ್ ವಾಪಸ್ ಪಡೆಯುವಂತೆ ಮೈಸೂರು ಶಾಸಕ ಪತ್ರ ಬರೆದು ವಾಪಸ್ ಪಡೆಯಲು ಶಿಫಾರಸ್ಸು ಮಾಡ್ತಾರೆ. ಕುಕ್ಕರ್ ಬಾಂಬ್ ಬ್ಲಾಸ್ಟ್ ಮಾಡಿದವರನ್ನ ನಮ್ಮ ಬ್ರದರ್ಸ್ ಅಂತ ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ರು. ಸಿದ್ದರಾಮಯ್ಯ ಪ್ರಮಾಣವಚನ ಪಡೆಯುವಾಗ ಎಲ್ಲಾ ಧರ್ಮ ಸಮಾನ ಕಾಣ್ತೀನಿ ಅಂದ್ರು, ಆದರೆ ಅವರು ಕಾಣಲಿಲ್ಲ ಎಂದು ಆರ್, ಅಶೋಕ್ ಕಿಡಿಕಾರಿದ್ದಾರೆ.

ಒಬ್ಬ ರೈತರಿಗೆ 35 ಸಾವಿರ ಕೊಡಬೇಕು. ಬೆಳಗಾವಿ ಅಧಿವೇಶನದಲ್ಲಿ ಎರಡು ಸಾವಿರ ಘೋಷಣೆ ಮಾಡಿದ್ರು. ಒಂದು ವಾರದಲ್ಲಿ ಎರಡು ಸಾವಿರ ಕೊಡ್ತೀನಿ ಅಂದ್ರು. ಅಧಿವೇಶನ ಮುಗಿದು ಇಷ್ಟು ದಿನ ಆಯ್ತು ಇನ್ನೂ ಕೊಟ್ಟಿಲ್ಲ. ಆದರೆ ಅಲ್ಪಸಂಖ್ಯಾತರಿಗೆ 1 ಸಾವಿರ ಕೋಟಿ ಕೊಟ್ಟಿದ್ದಾರೆ. ಇವರು ಓಲೈಕೆ ಮಾಡ್ತಿದ್ದಾರೆ. ಹಿಂದೆ ಟಿಪ್ಪು ಹಿಂದೂ, ಮುಸ್ಲಿಂ ಹೇಗೆ ಪ್ರತ್ಯೇಕ ಮಾಡಿದನೋ, ಅದೇ ರೀತಿ ಮಾಡಲಾಗ್ತಿದೆ. ಹಿಂದೂ ಕಾಲೋನಿ, ಮುಸ್ಲಿಂ ಕಾಲೋನಿ ಅಂತ ಬೇದ ಮಾಡ್ತಿದ್ದಾರೆ ಎಂದು ಆಕ್ರೋಶ ಹೊರ ಹಾಕಿದ್ದಾರೆ.

# ಭಾರತ-ಆಸೀಸ್ ಏಕದಿನ ಪಂದ್ಯದಲ್ಲಿ ಭಾರೀ ಅವಘಡ



ಮುಂಬೈನ ವಾಂಖಡೆ ಸ್ಟೇಡಿಯಂನಲ್ಲಿ ಶನಿವಾರ ನಡೆದ ಆಸ್ಟ್ರೇಲಿಯಾ ವಿರುದ್ಧದ ಎರಡನೇ ಏಕದಿನ ಪಂದ್ಯದಲ್ಲೂ ಭಾರತ ಮಹಿಳಾ ಕ್ರಿಕೆಟ್ ತಂಡ ಸೋಲು ಕಂಡಿದೆ. ಕೊನೆಯ ಎಸೆತದ ವರೆಗೂ ನಡೆದ ರೋಚಕ ಪಂದ್ಯದಲ್ಲಿ ಆಸೀಸ್ 3 ರನ್‌ಗಳ ಗೆಲುವು ಸಾಧಿಸಿತು. ಸೋಲಿನ ಜೊತೆಗೆ ಟೀಮ್ ಇಂಡಿಯಾಕ್ಕೆ ಈ ಪಂದ್ಯದಲ್ಲಿ ಮತ್ತೊಂದು ಆಘಾತ ಉಂಟಾಯಿತು. ಭಾರತದ ಆಟಗಾರ್ತಿಯೊಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ. ಸ್ನೇಹ್ ರಾಣಾ ಫೀಲ್ಡಿಂಗ್ ಮಾಡುವಾಗ ಸಹ ಆಟಗಾರ್ತಿಗೆ ಡಿಕ್ಕಿ ಹೊಡೆದಿದ್ದಿ, ಕೆಲ ಸಮಯದ ಬಳಿಕ ಅವರಿಗೆ ತಲೆನೋವು ಕಾಣಿಸಿಕೊಂಡಿದೆ. ಇದನ್ನು ತಂಡದ ನಾಯಕಿ ಹರ್ಮನ್‌ಪ್ರಿತ್ ಕೌರ್ ಗೆ ಅವರು ತಿಳಿಸಿದ್ದಾರೆ.

ಸ್ನೇಹ್ ರಾಣಾ ಮೈದಾನ ತೊರೆಯುತ್ತಿದ್ದಂತೆ ಹರ್ಲೀನ್ ಡಿಯೋಲ್ ಅವರನ್ನು ಕನ್ಕ್ಯುಶನ್ ಆಟಗಾರ್ತಿಯಾಗಿ ಮೈದಾನಕ್ಕೆ ಕಳುಹಿಸಲಾಯಿತು. ತಕ್ಷಣವೇ ರಾಣಾ ಅವರನ್ನು ಸ್ಕ್ಯಾನಿಂಗ್‌ಗೆ ಕರೆದೊಯ್ಯಲಾಗಿದೆ. ಬಳಿಕ ಪಂದ್ಯದಲ್ಲಿ ಅವರು ಭಾಗವಹಿಸುವುದಿಲ್ಲ. ಬಿಸಿಸಿಐ ಟ್ವೀಟ್ ಮೂಲಕ ಈ ಮಾಹಿತಿ ನೀಡಿದೆ. ''ರಾಣಾ ಫೀಲ್ಡಿಂಗ್ ವೇಳೆ ಗಾಯಗೊಂಡು ಮೈದಾನದಿಂದ ಹೊರ ಹೋಗಿದ್ದಾರೆ. ಇಂಜುರಿಯಾಗಿ ಸ್ವಲ್ಪ ಸಮಯದ ನಂತರ ಮೈದಾನಕ್ಕೆ ಮರಳಿ ಬೌಲಿಂಗ್ ಮಾಡಿದರು. ಆದರೆ ನಂತರ ಅವರು ತಲೆನೋವಿನ ಬಗ್ಗೆ ದೂರು ನೀಡಿದ್ದಾರೆ,'' ಎಂದು ಬರೆದುಕೊಂಡಿದೆ.

ಆಸ್ಟ್ರೇಲಿಯ ಇನ್ನಿಂಗ್ಸ್‌ನ 25ನೇ ಓವರ್ ಅನ್ನು ಶ್ರೇಯಾಂಕ ಪಾಟೀಲ್ ಬೌಲಿಂಗ್ ಮಾಡುತ್ತಿದ್ದ ವೇಳೆ ಈ ಘಟನೆ ನಡೆದಿದೆ. ಬೆತ್ ಮೂನಿ ಬ್ಯಾಟಿಂಗ್ ಮಾಡುತ್ತಿದ್ದ ವೇಳೆ ಕ್ಯಾಚ್ ಅವಕಾಶವಿತ್ತು.ಪೂಜಾ ವಸ್ತ್ರಕರ್ ಮತ್ತು ಸ್ನೇಹ್ ರಾಣಾ ಕ್ಯಾಚ್ ತೆಗೆದುಕೊಳ್ಳಲು ಓಡಿದರು. ಕ್ಯಾಚ್ ಹಿಡಿಯಲು ಯತ್ನಿಸಿದಾಗ ಇಬ್ಬರೂ ಡಿಕ್ಕಿ ಹೊಡೆದಿದ್ದಾರೆ. ಆಗ ರಾಣಾ ತೀವ್ರವಾಗಿ ಗಾಯಗೊಂಡರು. ತಕ್ಷಣವೆ ಫಿಸಿಯೋ ಮೈದಾನಕ್ಕೆ ಆಗಮಿಸಿ ಅವರನ್ನು ಪರೀಕ್ಷಿಸಿ ಡ್ರೆಸ್ಸಿಂಗ್ ರೂಮ್?ಗೆ ಕರೆದುಕೊಂಡು ಹೋಗಿದ್ದಾರೆ. ಆದರೆ, ರಾಣಾ 33ನೇ ಓವರ್‌ನಲ್ಲಿ ಬೌಲಿಂಗ್ ಮೂಲಕ ಮರಳಿದರು. ತಮ್ಮ 10 ಓವರ್‌ಗಳ ಕೋಟಾದಲ್ಲಿ 59 ರನ್‌ಗಳಿಗೆ ಒಂದು ವಿಕೆಟ್ ಪಡೆದರು. ಬಳಿಕ ಇವರಿಗೆ ತಲೆನೋವು ಕಾಣಿಸಿಕೊಂಡಿದೆ.

ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಆಸ್ಟ್ರೇಲಿಯಾ ತಂಡ ಎಂಟು ವಿಕೆಟ್ ಕಳೆದುಕೊಂಡು 258 ರನ್ ಗಳಿಸಿತ್ತು. ಫೋಬೆ ಲಿಚ್‌ಫೀಲ್ಡ್ 63 ರನ್‌ಗಳ ಇನ್ನಿಂಗ್ಸ್ ಆಡಿದರು. ಅವರ ಹೊರತಾಗಿ, ಅಲಿಸ್ಸಾ ಪೆರ್ರಿ 47 ಎಸೆತಗಳಲ್ಲಿ 50 ರನ್ ಗಳಿಸಿದರು. ಕೆಳ ಕ್ರಮಾಂಕ ತಂಡವನ್ನು 250ರ ಗಡಿ ದಾಟಿಸುವಲ್ಲಿ ಪ್ರಮುಖ ಪಾತ್ರ ವಹಿಸಿತು. ಟಾರ್ಗೆಟ್ ಬೆನ್ನಟ್ಟಿದ ಭಾರತ ಪರ ರಿಚ್ಚಾ ಘೋಷ್ 96 ರನ್‌ಗಳ ಹೋರಾಟ ನಡೆಸಿದರು. ಜೆಮಿಮಾ 44 ರನ್ ಸಿಡಿಸಿದರು. ಆದರೆ, ಕೊನೆಯ ಹಂತದಲ್ಲಿ ಸತತವಾಗಿ ವಿಕೆಟ್ ಕಳೆದುಕೊಂಡ ಪರಿಣಾಮ ಭಾರತ 255 ರನ್ ಗಳಿಸಲಷ್ಟೆ ಶಕ್ತವಾಯಿತು.

# ಹಿಂದಿನ ಚುನಾವಣೆಯಲ್ಲಿ ಪುಲ್ವಾಮಾ, ಈಗ ರಾಮನ ಫೋಟೋ ಹಿಡಿದಿದ್ದಾರೆ



**ಚಿತ್ರದುರ್ಗ:** ಈ ಹಿಂದಿನ ಚುನಾವಣೆ ವೇಳೆ ಪುಲ್ವಾಮಾ ಘಟನೆ ತೋರಿಸಿದ್ದರು. ಈಗ ರಾಮನ ಫೋಟೋ ಹಿಡಿದಿದ್ದಾರೆ ಎಂದು ಸಾಂಖಿಕ ಸಚಿವ ಡಿ.ಸುಧಾಕರ್ ಅವರು ಕೇಂದ್ರ ಸರ್ಕಾರದ ವಿರುದ್ಧ ಕಿಡಿ ಕಾರಿದ್ದಾರೆ.

ಚಿತ್ರದುರ್ಗದ ಡಿಸಿಸಿ ಬ್ಯಾಂಕ್ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಮಮಂದಿರ ಉದ್ಘಾಟನೆ ಒಂದು ಸ್ಟಂಟ್. ಜನರು ದಡ್ಡರಿಲ್ಲ, ಎರಡು ಸಲ ಮೂರ್ಖರಾಗಿದ್ದೀವಿ. ಮತ್ತೆ ಮೂರನೇ ಸಲ ಮೂರ್ಖರಾಗಲ್ಲ ಆಗಲ್ಲ ಎಂಬ ಭರವಸೆಯಿದೆ ಎಂದರು.

ಲೋಕಸಭಾ ಚುನಾವಣೆಯ ಹಿನ್ನೆಲೆಯಲ್ಲಿ ರಾಮಮಂದಿರ ಉದ್ಘಾಟನೆ ಎಂಬುದು ಸತ್ಯ. ರಾಮಮಂದಿರಕ್ಕೆ ನಾನು, ಶಾಸಕ ರಘುಮೂರ್ತಿ ದುಡ್ಡು ಕೊಟ್ಟಿದ್ದೇವೆ. ಹಿಂದೆಲ್ಲಾ ಇಟ್ಟಿಗೆ ಸಹ ನಾವೆಲ್ಲಾ ನೀಡಿದ್ದೇವೆ. ರಾಮ ಎಲ್ಲರಿಗೂ ದೇವರು, ಚುನಾವಣೆ ವೇಳೆ ದೇಗುಲ ಉದ್ಘಾಟನೆ ಗಿಮಿಕ್ ಎಂದು ವಾಗ್ದಾಳಿ ನಡೆಸಿದರು.

ಭಾರತ ದೇಶದ ಧಾರ್ಮಿಕ ನಂಬಿಕೆ ಬಳಸಿ ಬಿಜೆಪಿಯಿಂದ ಮತ ಗಾಳ ಹಾಕಲಾಗುತ್ತಿದೆ. ಕಳೆದ ಚುನಾವಣೆಯಲ್ಲಿ ಎಲ್ಲಿತ್ತು ರಾಮ ಮಂದಿರ?, ಸುಮ್ಮ ಸುಮ್ಮನೆ ಯಾವುದೋ ಫೈಟ್ ತೋರಿಸಿದ್ದರು. ಪಾಪ ಜನ ದೇಶ ಕಾಪಾಡುತ್ತಾರೆಂದು ನಂಬಿದರು. ಪುಲ್ವಾಮಾ ಘಟನೆಯಲ್ಲಿ ಎಷ್ಟು ಜನರು ಸತ್ತರು?, ಪುಲ್ವಾಮಾ ಘಟನೆ ಕ್ರಿಯೇಟೆಡ್ ಎಂದು ಪೈಲೆಟ್ ಹೇಳಿಲ್ವಾ?, ಬಿಜೆಪಿ ಜೊತೆ ಜೆಡಿಎಸ್ ಮೈತ್ರಿ ಆಗಿದೆ, ಸೆಕ್ಯುಲರ್ ತತ್ವ ಎಲ್ಲಿ ಹೋಯಿತು ಎಂದು ಪ್ರಶ್ನಿಸುವ ಮೂಲಕ ಹೆಚ್‌ಡಿಕೆಗೆ ಸುಧಾಕರ್ ಟಾಂಗ್ ನೀಡಿದರು.

ಇದೇ ವೇಳೆ ಬಿಜೆಪಿ ಆಡಳಿತಲ್ಲಿ ಭ್ರಷ್ಟಾಚಾರ ಎಂದು ಶಾಸಕ ಯತ್ನಾಳ್ ಆರೋಪ ವಿಚಾರಕ್ಕೆ ಪ್ರತಿಕ್ರಿಯಿಸಿ, ಬಿಜೆಪಿ ಶಾಸಕ ಯತ್ನಾಳ್ ಎಲ್ಲಿವರೆಗೆ ನೋಡಿಕೊಂಡಿರುತ್ತಾರೆ. 40% ಸರ್ಕಾರ ಎಂದೇ ಕುಖ್ಯಾತಿ ಗಳಿಸಿದ್ದು ಸತ್ಯ. ಬೆಲೆ ಏರಿಕೆ, ಭ್ರಷ್ಟಾಚಾರ ನೋಡಿಯೇ ಜನ ಕಾಂಗ್ರೆಸ್ ಕೈ ಹಿಡಿದಿದ್ದಾರೆ ಎಂದರು.

ಶಾಲೆಯಲ್ಲಿ ಮಕ್ಕಳಿಂದ ಶೌಚಗುಂಡಿ ಕ್ಲೀನ್ ವಿಚಾರ ಸರ್ಕಾರದ ಬೇಜವಬ್ದಾರಿಯಿಂದ ಪ್ರಕರಣ ಎಂದ ಮಾಜಿ ಸಿಎಂ ಹೆಚ್‌ಡಿಕೆಗೆ ತಿರುಗೇಟು ನೀಡಿದರು. ನಾವು ಸಹ ಶಾಲಾ ವಿದ್ಯಾರ್ಥಿ ಆಗಿದ್ದಾಗ ಕಸ ಗುಡಿಸಿದ್ದೇವೆ. ಆದರೆ ಮಕ್ಕಳಿಂದ ಶೌಚಗುಂಡಿ ಕ್ಲೀನ್ ಮಾಡಿಸುವುದು ಸರಿಯಲ್ಲ, ಮಕ್ಕಳಿಂದ ಶೌಚಗುಂಡಿ ಕ್ಲೀನ್ ವಿಚಾರ ತಡೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com